23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 23 | ಸಂಚಿಕೆ 306 | ನವದೆಹಲಿ | ಬೆಲೆ ₹10 | ಮೇ 12 2026, ಮಂಗಳವಾರ

## ಒಳಪುಟಗಳಲ್ಲಿ

ಮೇ 15-20 ರಿಂದ ಪ್ರಧಾನಿ ಮೋದಿ ಯುಎಇ, ನೆದರ್ಲೆಂಡ್ಸ್ ಸ್ವೀಡನ್, ನಾರ್ವೆ, ಇಟಲಿಗೆ ಭೇಟಿ: ದ್ವಿಪಕ್ಷೀಯ ಚರ್ಚೆ - ಪು.4

ಮೋದಿ ಭೇಟಿ ವೇಳೆ ಭದ್ರತಾ ವೈಫಲ್ಯ: ಹಿರಿಯ ಪೊಲೀಸ್ ಅಧಿಕಾರಿಗಳ ತಲೆದಂಡ ಸಾಧ್ಯತೆ - ಪು.5

# ಪ್ರಧಾನಿ ಭೇಟಿ ವೇಳೆ ಜಿಲಿಟಿನ್ ಪತ್ತೆ ಪ್ರಕರಣ: ಎನ್‌ಐಎ ತನಿಖೆ ಆರಂಭ

**ಬೆಂಗಳೂರು, ಮೇ 11: ಪ್ರಧಾನಿ ನರೇಂದ್ರ ಮೋದಿ ಅವರು ನಗರಕ್ಕೆ ಆಗಮಿಸಿದ ವೇಳೆ ಜಿಲೆಟಿನ್ ಕಡ್ಡಿಗಳು ಪತ್ತೆಯಾದ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿರುವ ರಾಷ್ಟ್ರೀಯ ತನಿಖಾ ದಳ (ಎನ್‌ಐಎ) ತನಿಖೆ ಆರಂಭಿಸಿದೆ.**

ಬೆಂಗಳೂರು ದಕ್ಷಿಣ ಜಿಲ್ಲೆ ಕನಕಪುರದ ತಾತಗುಣಿ ಬಳಿ ಇರುವ ಒಡೆಯರಹಳ್ಳಿ ಗೇಟ್ ಬಳಿ ಎರಡು ಜಿಲೆಟಿನ್ ಕಡ್ಡಿ ಹಾಗೂ ಬೆಂಕಿಪೊಟ್ಟಣ ಪತ್ತೆಯಾಗಿತ್ತು. ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸರು ಶಂಕಿತ ವ್ಯಕ್ತಿಯೊಬ್ಬನನ್ನು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ.



ರಾಷ್ಟ್ರೀಯ ಮಟ್ಟದಲ್ಲಿ ಇದು ವ್ಯಾಪಕ ಸುದ್ದಿಯಾಗಿದ್ದು ಜಿಲೆಟಿನ್ ಕಡ್ಡಿ ಪತ್ತೆಯಾದ ಪ್ರಕರಣವನ್ನು ಎನ್‌ಐಎ ತನಿಖೆಗೆ ಕೈಗೆತ್ತಿಕೊಂಡಿದೆ. ಈಗಾಗಲೇ ಒಂದು ತಂಡ ಸ್ಥಳಕ್ಕೆ ಆಗಮಿಸಿ ಪರಿಶೀಲನೆ ನಡೆಸುತ್ತಿದೆ. ಬೆಂಗಳೂರು ದಕ್ಷಿಣ ಜಿಲ್ಲಾ ಎಸ್‌ಪಿ ಶ್ರೀನಿವಾಸಗೌಡ ಅವರಿಂದ ಮಾಹಿತಿ ಪಡೆದಿದ್ದಾರೆ.

ರಾಜ್ಯ ಗುಪ್ತದಳ ಮತ್ತು ಆಂತರಿಕ ಭದ್ರತಾ ವಿಭಾಗದ ಎಡಿಜಿಪಿ ಅವರು ಭೇಟಿಕೊಟ್ಟು ಪ್ರಕರಣ ಸಂಬಂಧ ಎನ್‌ಐಎ ಅಧಿಕಾರಿಗಳಿಗೆ ಮಾಹಿತಿಯನ್ನು ಒದಗಿಸಿದ್ದಾರೆ ಎಂದು ತಿಳಿದುಬಂದಿದೆ. ಘಟನೆಯು ಉದ್ದೇಶಪೂರ್ವಕವಾಗಿ ನಡೆದಿದೆಯೋ ಇಲ್ಲವೇ ಆಕಸ್ಮಿಕವಾಗಿ ನಡೆದಿದೆಯೋ ಎಂಬುದರ ಕುರಿತು ಇಂಚಿಂಚೂ ಮಾಹಿತಿಯನ್ನು ಕಲೆ ಹಾಕುತ್ತಿದೆ. ಮೂಲಗಳ ಪ್ರಕಾರ, ಎನ್‌ಐಎಗೆ ಎನ್‌ಎಸ್‌ಜಿ, ಆರ್‌ಎಡಬ್ಲ್ಯೂ, ಬೆಂಗಳೂರು ನಗರ ಹಾಗೂ ರಾಮನಗರ ಪೊಲೀಸರು ತನಿಖೆಗೆ ಕೈಜೋಡಿಸಿದ್ದಾರೆ.

**ವಾರದ ಮುಂಚೆಯೇ ಮಾಹಿತಿ:** ಮೋದಿಯವರು ಬೆಂಗಳೂರಿಗೆ ಬರುವುದು ಒಂದು ವಾರ ಮುಂಚಿತವಾಗಿಯೇ ಗೊತ್ತಿತ್ತು. ದೆಹಲಿಯಿಂದ ಹೊರಟು 9.35 ಕ್ಕೆ ಎಚ್‌ಎಎಲ್ ವಿಮಾನನಿಲ್ದಾಣದಲ್ಲಿ ಬಿಜೆಪಿ ಕಾರ್ಯಕರ್ತರ ಸಮಾವೇಶ 10.05 ಕ್ಕೆ ಅಲ್ಲಿಂದ ತೆರಳಿ ಕನಕಪುರ ರಸ್ತೆಯಲ್ಲಿರುವ ಆರ್ಟ್ ಆಫ್ ಲಿವಿಂಗ್ ಮಂದಿರಕ್ಕೆ ಆಗಮನ ಎಂಬುದು ಅವರ ಪ್ರವಾಸದ ಪಟ್ಟಿಯಲ್ಲೇ ಇತ್ತು. ಇಷ್ಟೆಲ್ಲಾ ಮಾಹಿತಿ ಇದ್ದರೂ ಅತ್ಯಂತ ಬಿಗಿ ಭದ್ರತೆ ಇರುವ ಸ್ಥಳದಲ್ಲೇ ಭದ್ರತಾ ಲೋಪ ಉಂಟಾಗಿರುವುದು ಪೊಲೀಸರಿಗೂ ಸವಾಲಾಗಿ ಪರಿಣಮಿಸಿದೆ. ಸಾಮಾನ್ಯವಾಗಿ ಈ ಹಿಂದೆ ಬೆಂಗಳೂರು ಸೇರಿದಂತೆ ಕರ್ನಾಟಕಕ್ಕೆ ಮೋದಿಯವರು ಅನೇಕ ಬಾರಿ ಬಂದಿದ್ದರು. ಆ ಸಂದರ್ಭದಲ್ಲಿ ಎಂದಿಗೂ ಇಂತಹ ಭದ್ರತಾ ವೈಫಲ್ಯ ಉಂಟಾಗಿರಲಿಲ್ಲ.

### ಸಿಎಂ, ಗೃಹ ಸಚಿವರ ಅಸಮಾಧಾನ

ಪ್ರಧಾನಿ ನರೇಂದ್ರಮೋದಿ ಅವರ ಭದ್ರತಾ ವೈಫಲ್ಯವಾಗಿರುವುದಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಗೃಹಸಚಿವ ಪರಮೇಶ್ವರ್ ಕೂಡ ಅಸಮಾಧಾನಗೊಂಡಿದ್ದಾರೆಂದು ತಿಳಿದುಬಂದಿದೆ. ಶಾಂತಿ ಸುವ್ಯವಸ್ಥೆಗೆ ಹೆಸರಾಗಿ ದೇಶಕ್ಕೆ ಮಾದರಿಯಾಗಿರುವ ಕರ್ನಾಟಕದಲ್ಲಿ ಪೊಲೀಸರ ಭದ್ರತಾ ವೈಫಲ್ಯಕ್ಕೆ ರಾಜ್ಯ ಸರ್ಕಾರಕ್ಕೆ ಕಪ್ಪುಚುಕ್ಕೆ ಎಂದು ಸಿಎಂ ಹಾಗೂ ಗೃಹಸಚಿವರು ಬೇಸರ ವ್ಯಕ್ತಪಡಿಸಿದ್ದಾರೆಂದು ಗೊತ್ತಾಗಿದೆ. ತಪ್ಪಿತಸ್ಥರು ಯಾರೇ ಇದ್ದರೂ ಅವರ ಮೇಲೆ ನಿರ್ದಾಕ್ಷಿಣ್ಯವಾಗಿ ಕ್ರಮ ತೆಗೆದುಕೊಳ್ಳಬೇಕು. ಅಲ್ಲದೆ ಕರ್ತವ್ಯಕ್ಕೆ ನಿಯೋಜನೆಗೊಂಡಿದ್ದ ಕೆಲವು ಹಿರಿಯ ಅಧಿಕಾರಿಗಳು ಬೇಜವಾಬ್ದಾರಿಯಿಂದ ವರ್ತಿಸಿರುವುದು ಸಾಬೀತಾದರೆ ಅವರ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕ್ರಮ ಕೈಗೊಳ್ಳಿ ಎಂದು ಸೂಚಿಸಿದ್ದಾರೆಂದು ತಿಳಿದುಬಂದಿದೆ.

### ಲೋಹಿತ್ ವಿಚಾರಣೆ: ವಿವಿಧ ಆಯಾಮಗಳಲ್ಲಿ ತನಿಖೆ

ಜಿಲೆಟಿನ್ ಕಡ್ಡಿಗಳು ಪತ್ತೆಯಾಗುವ ಮುನ್ನವೇ ಬೆದರಿಕೆ ಕರೆ ಮಾಡಿದ್ದ ಕೋರಮಂಗಲದ ಲೋಹಿತ್ ಎಂಬಾತನನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ಕರೆಮಾಡಿದ ಕೆಲವೇ ಗಂಟೆಗಳಲ್ಲಿ ಕೋರಮಂಗಲ ಪೊಲೀಸರು ಆತನನ್ನು ವಶಕ್ಕೆ ಪಡೆದಿದ್ದರು. ಪ್ರಕರಣದ ಗಂಭೀರತೆ ಪರಿಗಣಿಸಿ ಎನ್‌ಐಎ ತಂಡ ಲೋಹಿತ್‌ನನ್ನು ಭಾನುವಾರ ಬೆಳಗ್ಗೆ 11 ಗಂಟೆಯಿಂದ ತಡರಾತ್ರಿವರೆಗೆ ತೀವ್ರ ವಿಚಾರಣೆಗೊಳಪಡಿಸಿದೆ. ಬೆಂಗಳೂರು ದಕ್ಷಿಣ ವಿಭಾಗದ ಪೊಲೀಸರು ಕೂಡ ತನಿಖೆಗೆ ಸಾಥ್ ನೀಡಿದ್ದಾರೆ. ಆರೋಪಿ ಲೋಹಿತ್ ತಾನು ಇಸ್ರೋ ಮಾಜಿ ಸಿಬ್ಬಂದಿ ಮಗ ಎಂದು ಹೇಳಿಕೊಂಡಿದ್ದರಿಂದ, ಆತನ ಪೋಷಕರನ್ನು ವಿಚಾರಣೆಗೆ ಒಳಪಡಿಸಲಾಗಿದೆ. ವಿಚಾರಣೆಯ ವೇಳೆ ಲೋಹಿತ್‌ನ ಮಾನಸಿಕ ಸ್ಥಿತಿ ಸರಿಯಿಲ್ಲ ಎಂಬ ವಿಷಯ ಬೆಳಕಿಗೆ ಬಂದಿದೆ. ಅಲ್ಲದೆ, ವಿಚಾರಣೆ ಸಂದರ್ಭದಲ್ಲಿ ಆತ ದೇಶ ಹಾಳಾಗುತ್ತಿದೆ ಎಂದು ಪದೇಪದೇ ಹೇಳುತ್ತಿದ್ದ ಎನ್ನಲಾಗಿದೆ. ಜಿಲೆಟಿನ್ ಕಡ್ಡಿಗಳ ಪತ್ತೆಗೂ ಲೋಹಿತ್ ಮಾಡಿದ ಕರೆಗೂ ನೇರ ಸಂಬಂಧವಿದೆಯೇ ಅಥವಾ ಇದು ವ್ಯವಸ್ಥಿತ ಸಂಚಿನ ಭಾಗವೇ ಎಂಬ ಬಗ್ಗೆ ವಿವಿಧ ಆಯಾಮಗಳಲ್ಲಿ ತನಿಖೆ ಮುಂದುವರಿದಿದೆ.

## ಮಿತ ಬಳಕೆ: ಮೋದಿ ಕರೆ ಎಚ್.ಡಿ. ದೇವೇಗೌಡ ಸ್ವಾಗತ



ಬೆಂಗಳೂರು, ಮೇ 11: ಪೆಟ್ರೋಲ್, ಡೀಸೆಲ್ ಬಳಕೆ ಕಡಿಮೆ ಮಾಡಿ, ಅಡುಗೆ ಎಣ್ಣೆ, ರಸಗೊಬ್ಬರ ಬಳಕೆ ಮಿತಗೊಳಿಸಿ, ಚಿನ್ನ ಖರೀದಿ ನಿಲ್ಲಿಸುವಂತೆ ದೇಶದ ಜನತೆಗೆ ಪ್ರಧಾನಿ ನರೇಂದ್ರ ಮೋದಿ ಕರೆ ನೀಡಿರುವುದನ್ನು ದೇವೇಗೌಡ ಸ್ವಾಗತಿಸಿದ್ದಾರೆ. ನಗರದಲ್ಲಿ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ಅವರ ಮಿತ ಬಳಕೆ ಮನವಿಯನ್ನು ಎಲ್ಲರೂ ಸ್ವಾಗತ ಮಾಡಬೇಕು. ತೆಲಂಗಾಣದಲ್ಲಿ ಮಾತನಾಡುತ್ತಾ ಪ್ರಧಾನಿ ಮೋದಿ ಕೆಲವು ಸಲಹೆ ಕೊಟ್ಟಿದ್ದಾರೆ. ದೇಶದ 150 ಕೋಟಿ ಜನರಿಗೆ ಮೋದಿ ಮನವಿ ಮಾಡಿದ್ದಾರೆ. ಅಮೆರಿಕಾ–ಇಸ್ರೇಲ್–ಇರಾನ್ ನಡುವೆ ನಡೆಯುತ್ತಿರುವ ಯುದ್ಧದಿಂದಾಗಿ ಬಿಕ್ಕಟ್ಟು ಎದುರಾಗಿದೆ. ಹಾಗಾಗಿ ಇಂಧನ ಸೇರಿದಂತೆ ಎಲ್ಲವೂ ಮಿತ ವ್ಯಯ ಇರಲಿ ಎಂದು ಸಲಹೆ ನೀಡಿದ್ದಾರೆ. ಎಂದಿದ್ದಾರೆ.

## ಕಡೆಗೂ ನ್ಯಾಯ ಸಿಕ್ಕಿದೆ ಟಿ.ಡಿ. ರಾಜೇಗೌಡ

ಸುಪ್ರೀಂಕೋರ್ಟ್ ನಲ್ಲಿ ನನಗೆ ನ್ಯಾಯ ಸಿಕ್ಕಿದೆ, ಹೈಕೋರ್ಟ್ ಎಲ್ಲಾ ಪ್ರಕ್ರಿಯೆ ಗಳಿಗೂ ಸುಪ್ರೀಂಕೋರ್ಟ್ ತಡೆ ನೀಡಿದೆ. ಅಂಚೆ ಮತ ಎಣಿಕೆಯಲ್ಲಿ ಎರಡು ಮತಗಳು ನನ್ನ ಪರವಾಗಿ ಬಂದಿತ್ತು ನನ್ನ ಮತಗಳ ಪ್ರಮಾಣ ಹೆಚ್ಚಾಗುವ ಬದಲಿಗೆ ಕಡಿಮೆ ತೋರಿಸಲಾಗಿತ್ತು. ಈ ಹಂತದಲ್ಲಿ ಅಕ್ರಮವಾಗಿದೆ ಎಂದು ಅನುಮಾನ ಇತ್ತು. ಹೀಗಾಗಿ, ನಾನು ಸುಪ್ರೀಂಕೋರ್ಟ್‌ಗೆ ಮೇಲ್ಮನವಿ ಅರ್ಜಿ ಸಲ್ಲಿಸಿದ್ದೆ ಸುಪ್ರೀಂಕೋರ್ಟ್ ವಿಚಾರಣೆ ನಡೆಸಿ ಹೈಕೋರ್ಟ್ ಆದೇಶಕ್ಕೆ ತಡೆ ನೀಡಿದೆ ಇದರಿಂದ ನನಗೆ ನ್ಯಾಯ ಸಿಕ್ಕಂತಾಗಿದೆ. ಮುಂದಿನ ವಿಚಾರಣೆ 21 ರಂದು ನಡೆಯಲಿದೆ

# ಚಿನ್ನ ಖರೀದಿ ಬೇಡ, ತೈಲ ಬಳಕೆ ತಗ್ಗಿಸಿ ಎನ್ನುವುದು ಯಾವ ಅಭಿವೃದ್ಧಿ ಲಕ್ಷಣ: ಮೋದಿಗೆ ಸಿದ್ದರಾಮಯ್ಯ ಪ್ರಶ್ನೆ



**ಬೆಂಗಳೂರು, ಮೇ 11:** ಚಿನ್ನ ಖರೀದಿಸಬೇಡಿ, ಪೆಟ್ರೋಲ್ ಮತ್ತು ಖಾದ್ಯತೈಲ ಕಡಿಮೆ ಬಳಸಿ, ವಿದೇಶ ಪ್ರವಾಸ ಮಾಡಬೇಡಿ ಮತ್ತು ಗೊಬ್ಬರ ಬಳಕೆ ತಗ್ಗಿಸಿ ಎಂದು ಬೇಡಿಕೊಳ್ಳುತ್ತಿರುವುದು ಯಾವ ಅಭಿವೃದ್ಧಿಯ ಲಕ್ಷಣ ಎನ್ನುವುದನ್ನು ಪ್ರಧಾನಿ ನರೇಂದ್ರ ಮೋದಿ ಸ್ಪಷ್ಟಪಡಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಆಗ್ರಹಿಸಿದ್ದಾರೆ.

ಈ ಕುರಿತು ಹೇಳಿಕೆ ಬಿಡುಗಡೆ ಮಾಡಿರುವ ಸಿದ್ದರಾಮಯ್ಯ, ಪ್ರಧಾನಿ ನರೇಂದ್ರ ಮೋದಿ ಅವರು ಭಾನುವಾರ ಬೆಂಗಳೂರಿನಲ್ಲಿ ಮಾತನಾಡಿದ್ದು ದೇಶದ ಪ್ರಧಾನಿಯಾಗಿಯೋ, ಇಲ್ಲವೇ ರಾಜ್ಯ ಬಿಜೆಪಿ ಅಧ್ಯಕ್ಷರೋ, ಇಲ್ಲವೇ ರಾಜ್ಯದ ವಿರೋಧ ಪಕ್ಷದ ನಾಯಕರಾಗಿಯೋ ಎನ್ನುವುದನ್ನು ಸ್ಪಷ್ಟಪಡಿಸಿ ಜನರ ಗೊಂದಲ ಬಗೆಹರಿಸಬೇಕು. 2024–25ರಲ್ಲಿಯೇ ಭಾರತವನ್ನು 5 ಟ್ರಿಲಿಯನ್ ಡಾಲರ್ ಆರ್ಥಿಕತೆಯ ದೇಶ ಮಾಡುವೆ ಎಂದು ಕೊಚ್ಚಿಕೊಂಡಿದ್ದ, ಭಾರತದ ಅಭಿವೃದ್ಧಿ ರಥ ನಾಗಾಲೋಟದಿಂದ ಮುಂದೋಡುತ್ತಿದೆ ಎಂದು ಬೀಗಿದ್ದ ಮತ್ತು ದೇಶದ ಬಡತನವನ್ನು ನಿರ್ಮೂಲನೆ ಮಾಡಿ ಆಗಿದೆ ಎಂದು ಬೆನ್ನು ತಟ್ಟಿಕೊಂಡಿದ್ದ ಪ್ರಧಾನಿಯವರು ಈಗ ಉಪದೇಶ ಮಾಡುತ್ತಿರುವ ಗೂಡಾರ್ಥವೇನು ಎಂದು ಕೆಣಕಿದ್ದಾರೆ.

**ಎಡಬಿಡಂಗಿ ನೀತಿ:** ಪೆಟ್ರೋಲ್, ಡೀಸೆಲ್, ಅಡುಗೆ ಅನಿಲ, ಖಾದ್ಯತೈಲ ಎಲ್ಲವೂ ದುಬಾರಿಯಾಗಿ ದೇಶದ ಜನರ ನಿತ್ಯದ ಜೀವನ ನಿರ್ವಹಣೆಗಾಗಿ ಪರದಾಡುವಂತಹ ಪರಿಸ್ಥಿತಿ ನಿರ್ಮಾಣಕ್ಕೆ ದೇಶದ ಎಡಬಿಡಂಗಿ ವಿದೇಶಾಂಗ ನೀತಿ ಕಾರಣ ಎನ್ನುವುದನ್ನು ಅರಿತುಕೊಳ್ಳುವಷ್ಟು ಜನತೆ ಪ್ರಬುದ್ಧರಾಗಿದ್ದಾರೆ. ಮಧ್ಯಪ್ರಾಚ್ಯ ಯುದ್ಧದ ನಡುವೆ ಭಾರತ ಸಿಕ್ಕಿಹಾಕಿಕೊಂಡು ಒದ್ದಾಡುತ್ತಿದೆ. ಇಂತಹ ಸಂದರ್ಭದಲ್ಲಿ ಗಟ್ಟಿಯಾದ ನಿಲುವು ತೆಗೆದುಕೊಂಡಿದ್ದರೆ ಭಾರತ ಇಂದಿನ ದುಸ್ಥಿತಿಯನ್ನು ಎದುರಿಸುತ್ತಿರಲಿಲ್ಲ. ಮೋದಿಯವರೇ, ಈ ವೈಫಲ್ಯಕ್ಕೆ ಯಾರನ್ನು ದೂರುತ್ತೀರಿ, ಜವಾಹರಲಾಲ್ ನೆಹರೂ ಅವರನ್ನೇ ಕಾಂಗ್ರೆಸ್ ಪಕ್ಷವನ್ನೇ ಎಂದು ಉತ್ತರಿಸಿ ಎಂದು ಸಿದ್ದರಾಮಯ್ಯ ಪ್ರಶ್ನಿಸಿದ್ದಾರೆ.

**ಕರ್ನಾಟಕದ ಆರ್ಥಿಕ ಸ್ಥಿತಿ ಸುಭದ್ರ:** ಕಾಂಗ್ರೆಸ್ ಆಡಳಿತದಲ್ಲಿ ಕರ್ನಾಟಕದ ಆರ್ಥಿಕ ಪರಿಸ್ಥಿತಿ ಸುಭದ್ರವಾಗಿದೆ. ದೇಶದ ತಲಾವಾರು ಆದಾಯ ರೂ.2.11 ಲಕ್ಷ ರೂ.ಗಳಾಗಿದ್ದರೆ ಕರ್ನಾಟಕದ್ದು 4.33 ಲಕ್ಷ ರೂ.ಗಳು. ದೇಶದ ಜಿಡಿಪಿ ಬೆಳವಣಿಗೆಯ ದರ ಶೇ. 7.4 ಆಗಿದ್ದರೆ, ಕರ್ನಾಟಕದ್ದು ಶೇ. 8.1 ಆಗಿದೆ. ದೇಶದ ಜಿಡಿಪಿಯಲ್ಲಿ ಕರ್ನಾಟಕದ ಪಾಲು ಶೇ. 9.19 ಆಗಿದೆ. ಜಿಎಸ್‌ಟಿ ಸಂಗ್ರಹದಲ್ಲಿ ಮಹಾರಾಷ್ಟ್ರದ ನಂತರ ಕರ್ನಾಟಕದ್ದೇ ಅತ್ಯಧಿಕ ಪಾಲು. ಕರ್ನಾಟಕ ಅಭಿವೃದ್ಧಿಯ ಪಥದಲ್ಲಿ ವೇಗದಲ್ಲಿ ಸಾಗುತ್ತಿರುವುದಕ್ಕೆ ಇನ್ನೇನು ಪುರಾವೆ ಬೇಕು. ಮುಂದಿನ ಬಾರಿ ನಮ್ಮ ಸರ್ಕಾರದ ವಿರುದ್ಧ ಆರೋಪ ಮಾಡುವಾಗ ಸ್ವಲ್ಪ ಪೂರ್ವತಯಾರಿ ಮಾಡಿಕೊಂಡು ಬನ್ನಿ. ಪ್ರಧಾನಿಬಾಯಲ್ಲಿ ಸುಳ್ಳು ಹೇಳಿಕೆಗಳು ಶೋಭೆಯಲ್ಲ.

**ಚರಿತ್ರೆ ನೆನಪಿಸಿಕೊಳ್ಳಿ:** ಮೋದಿಯವರು ತಮ್ಮ ಪಕ್ಷದ ವಿಶ್ವಾಸದ್ರೋಹದ ಚರಿತ್ರೆಯನ್ನು ಒಮ್ಮೆ ನೆನಪು ಮಾಡಿಕೊಂಡಿದ್ದರೆ ಖಂಡಿತ ಕಾಂಗ್ರೆಸ್ ಮೇಲೆ ವಿಶ್ವಾಸದ್ರೋಹದ ಆರೋಪ ಮಾಡುತ್ತಿರಲಿಲ್ಲ. ಬಿಎಸ್‌ಪಿ, ಟಿಎಂಸಿ, ಡಿಎಂಕೆ, ಎಐಡಿಎಂಕೆ, ಪಿಡಿಪಿ, ಶಿವಸೇನೆ, ಅಕಾಲಿದಳ, ನ್ಯಾಷನಲ್ ಕಾನ್ಫರೆನ್ಸ್ ಸೇರಿ ಬಿಜೆಪಿ ಜೊತೆ ಮೈತ್ರಿ ಮಾಡಿಕೊಂಡು ವಿಶ್ವಾಸದ್ರೋಹಕ್ಕೊಳಗಾದ ಪ್ರಾದೇಶಿಕ ಪಕ್ಷಗಳ ಪಟ್ಟಿ ಬೆಳೆಯುತ್ತಲೇ ಇದೆ. ಇನ್ನೊಂದೆಡೆ ಕಾಂಗ್ರೆಸ್ ಮತ್ತು ಇತರ ಪಕ್ಷಗಳ ನಾಯಕರನ್ನು ಬೆದರಿಸಿ ಅವರು ತಮ್ಮ ಪಕ್ಷಗಳಿಗೆ ವಿಶ್ವಾಸದ್ರೋಹ ಎಸಗುವಂತೆ ಮಾಡಿ, ಜೊತೆಯಲ್ಲಿ ಸೇರಿಸಿಕೊಂಡ ವಿರೋಧ ಪಕ್ಷದ ನಾಯಕರ ಪಟ್ಟಿಯೂ ಬೆಳೆಯುತ್ತಿದೆ. ಇಂತಹ ವಿಶ್ವಾಸದ್ರೋಹಿ ಪಕ್ಷದ ನಾಯಕರಾದ ಮೋದಿ ಅವರ ವಿಶ್ವಾಸದ್ರೋಹದ ಆರೋಪಗಳನ್ನು ನೋಡಿ ಜನರೇ ಅಪಹಾಸ್ಯ ಮಾಡುತ್ತಿದ್ದಾರೆ ಎಂದು ಸಿದ್ದರಾಮಯ್ಯ ತಿರುಗೇಟು ನೀಡಿದ್ದಾರೆ.

### ರಾಜ್ಯ ಬಿಜೆಪಿ ಸ್ಥಿತಿ ಬುಟ್ಟಿಯಲ್ಲಿ ಹಿಡಿದಿಟ್ಟಿರುವ ಏಡಿಯಂತಿದೆ: ಮುಖ್ಯಮಂತ್ರಿ ವ್ಯಂಗ್ಯ

ಕರ್ನಾಟಕದ ಬಿಜೆಪಿಯ ಸ್ಥಿತಿ ಬುಟ್ಟಿಯಲ್ಲಿ ಕೂಡಿ ಹಾಕಿರುವ ಏಡಿಗಳಂತಾಗಿದೆ. ಒಬ್ಬರ ಕಾಲನ್ನು ಮತ್ತೊಬ್ಬರು ಎಳೆದುಕೊಂಡು ರಾಜಕೀಯ ಹರಾಕಿರಿ ನಡೆಸುತ್ತಿದ್ದಾರೆ. ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ ಮತ್ತು ಅವರ ಕುಟುಂಬಕ್ಕೆ ಎದುರಾಗಿ ಪಕ್ಷದೊಳಗೆ ಅರ್ಧ ಡಜನ್ ಗುಂಪುಗಳಿವೆ. ಈ ಗುಂಪುಗಳ ನಾಯಕರು ಯಡಿಯೂರಪ್ಪ ವಿರುದ್ಧ ನೂರಾರು ಆರೋಪಗಳನ್ನು ಮಾಡಿದ್ದರೂ ಅವರ ವಿರುದ್ಧ ಶಿಸ್ತಿನ ಕ್ರಮ ಕೈಗೊಳ್ಳುವವ ಧೈರ್ಯ 56 ಇಂಚಿನ ಎದೆಯಳತೆಯ ನಾಯಕರಲ್ಲಿ ಇಲ್ಲ. ರಾಜ್ಯ ಬಿಜೆಪಿ ಅಧ್ಯಕ್ಷರ ಮಾತಿಗೆ ಆ ಪಕ್ಷದಲ್ಲಿ ಕವಡೆಕಾಸಿನ ಕಿಮ್ಮತ್ತಿಲ್ಲ. ಪಕ್ಷವೇ ಅಮಾನತುಗೊಳಿಸಿದ್ದ ನಾಯಕರ ಕಾಲಿಗೆಬಿದ್ದು ಕರೆತಂದು ಚುನಾವಣಾ ಪ್ರಚಾರ ಮಾಡುವಷ್ಟರ ಮಟ್ಟಿಗೆ ರಾಜ್ಯದ ಬಿಜೆಪಿಯ ಸ್ಥಿತಿ ಕೆಟ್ಟುಹೋಗಿದೆ. ಇಂತಹವರು ಕಾಂಗ್ರೆಸ್ ಪಕ್ಷಕ್ಕೆ ಬುದ್ಧಿ ಹೇಳಲು ಹೊರಟಿದ್ದಾರೆ. ಪ್ರಧಾನಿಯವರೇ ಮೊದಲು ಕುಸಿದು ಬೀಳುತ್ತಿರುವ ನಿಮ್ಮ ಮನೆಯನ್ನು ಭದ್ರಮಾಡಿಕೊಳ್ಳಿ, ನಂತರ ನಮ್ಮ ಬಗ್ಗೆ ಮಾತನಾಡಿ ಎಂದು ಸಿದ್ದರಾಮಯ್ಯ ವಾಗ್ದಾಳಿ ನಡೆಸಿದ್ದಾರೆ.

# ಧರ್ಮೋಪದೇಶವಲ್ಲ, ಕೇಂದ್ರ ಸರ್ಕಾರದ ವೈಫಲ್ಯಕ್ಕೆ ಸಾಕ್ಷಿ

**ಬೆಂಗಳೂರು, ಮೇ 11:** ರಾಜಿ ಮಾಡಿಕೊಂಡ ಪ್ರಧಾನಿ ದೇಶ ನಡೆಸಲು ಸಮರ್ಥರಲ್ಲ ಎಂದು ಲೋಕಸಭೆ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಪ್ರಧಾನಿ ನರೇಂದ್ರ ಮೋದಿಯವರನ್ನು ಟೀಕಿಸಿದ್ದಾರೆ.

ಹೈದ್ರಾಬಾದ್‌ನಲ್ಲಿ ಭಾನುವಾರ ನಡೆದ ಸಮಾರಂಭಧಲ್ಲಿ ಇಂಧನ ಬಳಕೆ ಕಡಿಮೆ ಮಾಡುವಂತೆ ದೇಶದ ಜನರಿಗೆ ಮನವಿ ಮಾಡಿದ್ದಕ್ಕಾಗಿ ಆಕ್ರೋಶ ವ್ಯಕ್ತಪಡಿಸಿರುವ ರಾಹುಲ್ ಗಾಂಧಿ, ಪ್ರಧಾನಿಯವರ ಮಾತುಗಳು ಕೇಂದ್ರ ಸರ್ಕಾರದ ವೈಫಲ್ಯದ ಪುರಾವೆಯಾಗಿವೆ. ಮೋದಿ ಸಾರ್ವಜನಿಕರಿಗೆ ತ್ಯಾಗ ಮಾಡಲು ಕರೆ ನೀಡಿದ್ದಾರೆ, ಚಿನ್ನ ಖರೀದಿಸಬೇಡಿ, ವಿದೇಶ ಪ್ರವಾಸ ಮಾಡಬೇಡಿ, ಕಡಿಮೆ ಪೆಟ್ರೋಲ್ ಬಳಸಿ, ರಸಗೊಬ್ಬರ ಮತ್ತು ಅಡುಗೆ ಎಣ್ಣೆಯನ್ನು ಕಡಿಮೆ ಮಾಡಿ ಮೆಟ್ರೋದಲ್ಲಿ ಪ್ರಯಾಣಿಸಿ ಮತ್ತು ಮನೆಯಿಂದಲೇ ಕೆಲಸ ಮಾಡಿ ಎಂದಿರುವುದು ಧರ್ಮೋಪದೇಶಗಳಲ್ಲ, ಬದಲಿಗೆ ಇವು ವೈಫಲ್ಯಕ್ಕೆ ನೈಜ ಸಾಕ್ಷಿಯಾಗಿದೆ ಎಂದು ಕಿಡಿಕಾರಿದ್ದಾರೆ.



■ ದೇಶ ನಡೆಸಲು ಸಮರ್ಥರಲ್ಲ: ಪ್ರಧಾನಿ ಮೋದಿ ವಿರುದ್ಧ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಟೀಕೆ

**ಹೊಣೆಗಾರಿಕೆಯಿಂದ ತಪ್ಪಿಸಿಕೊಳ್ಳುವ ಯತ್ನ:** ಕಳೆದ 12 ವರ್ಷಗಳಲ್ಲಿ, ದೇಶವು ಎಂತಹ ಪರಿಸ್ಥಿತಿಗೆ ತಂದಿದೆ ಎಂದರೆ, ಈಗ ಸಾರ್ವಜನಿಕರಿಗೆ ಏನು ಖರೀದಿಸಬೇಕು ಮತ್ತು ಏನು ಖರೀದಿಸಬಾರದು, ಎಲ್ಲಿಗೆ ಹೋಗಬೇಕು ಮತ್ತು ಎಲ್ಲಿಗೆ ಹೋಗಬಾರದು ಎಂದು ಹೇಳಬೇಕಾಗಿದೆ. ಪ್ರತಿ ಬಾರಿಯೂ ಮೋದಿ ತಮ್ಮ ಜವಾಬ್ದಾರಿಯನ್ನು ಜನರ ಮೇಲೆ ಹೊರಿಸುತ್ತಾರೆ, ಇದರಿಂದಾಗಿ ಅವರು ಸ್ವತಃ ಹೊಣೆಗಾರಿಕೆಯಿಂದ ತಪ್ಪಿಸಿಕೊಳ್ಳಬಹುದು ಎಂದು ಟೀಕಾಪ್ರಹಾರ ನಡೆಸಿದ್ದಾರೆ. ಹೀಗಾದರೆ ದೇಶದ ಸ್ಥಿತಿ ಇನ್ನಷ್ಟು ಸಂಕಷ್ಟಕ್ಕೆ ತಲುಪಬಹುದು, ಈ ಕೂಡಲೇ ಸಂಸತ್ತಿನ ಅಧಿವೇಶನ ಕರೆಯಿರಿ ಎಂದು ರಾಹುಲ್ ಗಾಂಧಿ ತಮ್ಮ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಹಂಚಿಕೊಂಡು ಕೇಂದ್ರ ಸರ್ಕಾರವನ್ನು ಆಗ್ರಹಿಸಿದ್ದಾರೆ.



ಶೃಂಗೇರಿ ವಿಧಾನಸಭಾ ಕ್ಷೇತ್ರದ ಶಾಸಕ ಸ್ಥಾನಕ್ಕೆ ಸಂಬಂಧಿಸಿದ ಕಾನೂನು ಹೋರಾಟದಲ್ಲಿ ಟಿ.ಡಿ ರಾಜೇಗೌಡ ಅವರ ಶಾಸಕ ಸ್ಥಾನವನ್ನು ಸುಪ್ರೀಂ ಕೋರ್ಟ್ ಮರುಸ್ಥಾಪಿಸಿದೆ. ಈ ಹಿನ್ನೆಲೆಯಲ್ಲಿ ದೆಹಲಿಯ ಕರ್ನಾಟಕ ಭವನದಲ್ಲಿ ರಾಜೇಗೌಡ ಅವರಿಗೆ ಬೆಂಬಲಿಗರು ಸಂಭ್ರಮಾಚರಿಸಿದರು.

# ಪ್ರಜಾಪ್ರಭುತ್ವವನ್ನು ಹೈಜಾಕ್ ಮಾಡಲು ಬಿಡಲ್ಲ: ಸುಪ್ರೀಂಕೋರ್ಟ್

**ನವದೆಹಲಿ, ಮೇ 11:** ಶೃಂಗೇರಿ ವಿಧಾನಸಭಾ ಕ್ಷೇತ್ರದ ಶಾಸಕ ಸ್ಥಾನಕ್ಕೆ ಸಂಬಂಧಿಸಿದ ಕಾನೂನು ಹೋರಾಟದಲ್ಲಿ ಮಹತ್ವದ ತಿರುವು ಸಿಕ್ಕಿದೆ, ಸುಪ್ರೀಂ ಕೋರ್ಟ್ ಟಿ.ಡಿ ರಾಜೇಗೌಡ ಅವರ ಶಾಸಕ ಸ್ಥಾನವನ್ನು ಮರುಸ್ಥಾಪಿಸಿದೆ.

ಹೈಕೋರ್ಟ್ ಆದೇಶ ಪ್ರಶ್ನಿಸಿ ಸಲ್ಲಿಸಿದ್ದ ಮೇಲ್ಮನವಿ ಅರ್ಜಿ ವಿಚಾರಣೆ ನಡೆಸಿದ ನ್ಯಾ. ಸಂಜಯ್ ಕುಮಾರ್ ನೇತೃತ್ವದ ದ್ವಿಸದಸ್ಯ ಪೀಠ, ಪ್ರಜಾಪ್ರಭುತ್ವವನ್ನು ಹೈಜಾಕ್ ಮಾಡಲು ನಾವು ಬಿಡುವುದಿಲ್ಲ ಎಂದು ಅಭಿಪ್ರಾಯಪಟ್ಟು ಹೈಕೋರ್ಟ್ ಆದೇಶಕ್ಕೆ ತಡೆ ನೀಡಿತು.

ರಾಜೇಗೌಡ ಪರ ಹಿರಿಯ ವಕೀಲ ಕಪಿಲ್ ಸಿಬಲ್ ಹೈಕೋರ್ಟ್ ಆದೇಶದ ಮಾನ್ಯತೆಯನ್ನು ಪ್ರಶ್ನಿಸಿದರು.

ಇದಕ್ಕೆ ಪ್ರತಿಯಾಗಿ ಜೀವರಾಜ್ ಪರ ವಕೀಲರು, ತಮ್ಮ ಕಕ್ಷಿದಾರರು ಈಗಾಗಲೇ ವಿಧಾನಸಭಾ ಸದಸ್ಯರಾಗಿ ಪ್ರಮಾಣವಚನ ಸ್ವೀಕರಿಸಿದ್ದಾರೆ ಎಂದು ನ್ಯಾಯಾಲಯಕ್ಕೆ ತಿಳಿಸಿದರು. ಈ ವೇಳೆ ಸುಪ್ರೀಂಕೋರ್ಟ್, ಪ್ರಜಾಪ್ರಭುತ್ವವನ್ನು ಈ ರೀತಿಯಲ್ಲಿ ಹೈಜಾಕ್ ಮಾಡಲು ಸಾಧ್ಯವಿಲ್ಲ ಎಂದು ಕಟುವಾಗಿ ಅಭಿಪ್ರಾಯಪಟ್ಟಿತು.

### ಟಿ.ಡಿ ರಾಜೇಗೌಡ ಶಾಸಕ ಸ್ಥಾನವನ್ನು ಮರುಸ್ಥಾಪಿಸಿದ ಸರ್ವೋಚ್ಚ ನ್ಯಾಯಾಲಯ

ವಿಚಾರಣೆ ಬಳಿಕ ಕರ್ನಾಟಕ ಸರ್ಕಾರ, ಚುನಾವಣಾ ಆಯೋಗ ಸೇರಿದಂತೆ ಇತರ ಪ್ರತಿವಾದಿಗಳಿಗೆ ಸುಪ್ರೀಂ ಕೋರ್ಟ್ ನೋಟಿಸ್ ಜಾರಿಗೊಳಿಸಿದೆ. ಅಲ್ಲದೇ ಹೈಕೋರ್ಟ್ ಏ.6 ನೀಡಿದ್ದ ಆದೇಶದ ಆಧಾರದಲ್ಲಿ ಕೈಗೊಳ್ಳಲಾದ ಎಲ್ಲ ಕ್ರಮಗಳನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಿ ಯಥಾಸ್ಥಿತಿ ಕಾಯ್ದುಕೊಳ್ಳುವಂತೆ ಕೋರ್ಟ್ ಸೂಚಿಸಿತು.

2023ರ ವಿಧಾನಸಭಾ ಚುನಾವಣೆಯಲ್ಲಿ ಶೃಂಗೇರಿ ಕ್ಷೇತ್ರದಿಂದ ಸ್ಪರ್ಧಿಸಿದ್ದ ಟಿ.ಡಿ. ರಾಜೇಗೌಡ ಅವರು ಕೇವಲ 201 ಮತಗಳ ಅಂತರದಲ್ಲಿ ಡಿ.ಎನ್. ಜೀವರಾಜ್ ಅವರನ್ನು ಸೋಲಿಸಿದ್ದರು. ಆದರೆ ಚುನಾವಣಾ ಫಲಿತಾಂಶ ಪ್ರಶ್ನಿಸಿ ಜೀವರಾಜ್ ಸಲ್ಲಿಸಿದ್ದ ಅರ್ಜಿಯನ್ನು ವಿಚಾರಿಸಿದ್ದ ಕರ್ನಾಟಕ ಹೈಕೋರ್ಟ್, ಅಂಚೆ ಮತಪತ್ರಗಳ ಮರುಪರಿಶೀಲನೆ ಮತ್ತು ಮರು ಎಣಿಕೆಗೆ ಆದೇಶಿಸಿತ್ತು.

ಮರು ಎಣಿಕೆಯಲ್ಲಿ ಅಚ್ಚರಿಯ ರೀತಿಯಲ್ಲಿ ಫಲಿತಾಂಶ ಬದಲಾಗಿತ್ತು. ಜೀವರಾಜ್ ಅವರ ಅಂಚೆ ಮತಗಳು 692ರಿಂದ 690ಕ್ಕೆ ಇಳಿದಿದ್ದರೆ, ರಾಜೇಗೌಡ ಅವರ ಮತಗಳು 569ರಿಂದ 314ಕ್ಕೆ ಕುಸಿದಿದ್ದವು. ಇದರಿಂದ ರಾಜೇಗೌಡರಿಗೆ 255 ಮತಗಳ ನಷ್ಟ ಉಂಟಾಗಿ, ಅಂತಿಮವಾಗಿ ಜೀವರಾಜ್ ಅವರನ್ನು ವಿಜೇತರಾಗಿ ಘೋಷಿಸಲಾಗಿತ್ತು. ಪ್ರತಿನಿಧಿತ್ವ ಕಾಯ್ದೆ–1951ರ ಸೆಕ್ಷನ್ 66 ಅಡಿಯಲ್ಲಿ ರಿಟರ್ನಿಂಗ್ ಅಧಿಕಾರಿ ಜೀವರಾಜ್ ಅವರನ್ನು ಅಧಿಕೃತವಾಗಿ ವಿಜೇತರಾಗಿ ಘೋಷಿಸಿದ್ದರಿಂದ, 3 ವರ್ಷಗಳ ಬಳಿಕ ರಾಜೇಗೌಡ ಶಾಸಕ ಸ್ಥಾನ ಕಳೆದುಕೊಂಡಿದ್ದರು.

# 60 ದಿನಗಳ ಕಚ್ಚಾತೈಲ, ಅನಿಲ ದಾಸ್ತಾನಿದೆ, ಕಳವಳ ಪಡಬೇಕಾಗಿಲ್ಲ: ಕೇಂದ್ರ ಸರ್ಕಾರ ಅಭಯ

**ನವದೆಹಲಿ, ಮೇ 11:** ಪಶ್ಚಿಮ ಏಷ್ಯಾ ಸಂಘರ್ಷ ಹೆಚ್ಚುತ್ತಿರುವ ಬಗ್ಗೆ ಹೆಚ್ಚುತ್ತಿರುವ ಕಳವಳಗಳ ನಡುವೆ ನಾಗರಿಕರಿಗೆ ಧೈರ್ಯ ತುಂಬಲು ಕೇಂದ್ರ ಸರ್ಕಾರ ಇಂದು ಪ್ರಯತ್ನಿಸಿತು, ಭಾರತದಲ್ಲಿ ಪ್ರಮುಖ ಪೆಟ್ರೋಲಿಯಂ ಉತ್ಪನ್ನಗಳ ಸಾಕಷ್ಟು ಸಂಗ್ರಹವಿದೆ ಮತ್ತು ಭಯಭೀತ ಖರೀದಿ ಅಥವಾ ಕೊರತೆಯ ಭಯಕ್ಕೆ ಯಾವುದೇ ಕಾರಣವಿಲ್ಲ ಎಂದು ಪ್ರತಿಪಾದಿಸಿತು.

ರಾಷ್ಟ್ರ ರಾಜಧಾನಿಯ ಕರ್ತವ್ಯ ಭವನದಲ್ಲಿ ಪಶ್ಚಿಮ ಏಷ್ಯಾದ ಅನೌಪಚಾರಿಕ ಸಚಿವರ ಗುಂಪಿನ (ಐಜಿಒಎಂ) ಐದನೇ ಸಭೆಯ ಅಧ್ಯಕ್ಷತೆ ವಹಿಸಿದ್ದ ರಕ್ಷಣಾ ಸಚಿವ ರಾಜನಾಥ್ ಸಿಂಗ್, ವಿಕಸನಗೊಳ್ಳುತ್ತಿರುವ ಪ್ರಾದೇಶಿಕ ಪರಿಸ್ಥಿತಿಯನ್ನು ಪರಿಶೀಲಿಸಿದರು ಮತ್ತು ಜಾಗತಿಕ ಅಡೆತಡೆಗಳು ಭಾರತೀಯ ನಾಗರಿಕರ ಮೇಲೆ ಪರಿಣಾಮ ಬೀರದಂತೆ ನೋಡಿಕೊಳ್ಳಲು ಸಚಿವಾಲಯಗಳಿಗೆ ನಿರ್ದೇಶನ ನೀಡಿದರು. ಸಭೆಯಲ್ಲಿ ಜೆ.ಪಿ. ನಡ್ಡಾ, ಹರದೀಪ್ ಸಿಂಗ್ ಪುರಿ, ಅಶ್ವಿನಿ ವೈಷ್ಣವ್, ಕಿರಣ್ ರಿಜಿಜು, ಕಿಂಜರಪು ರಾಮಮೋಹನ್ ನಾಯ್ಡು, ಸರ್ಬಾನಂದ ಸೋನೋವಾಲ್ ಮತ್ತು ಜಿತೇಂದ್ರ ಸಿಂಗ್ ಸೇರಿದಂತೆ ಕೇಂದ್ರ ಸಚಿವರು ಭಾಗವಹಿಸಿದ್ದರು.

ಭಾರತವು ಪ್ರಸ್ತುತ 60 ದಿನಗಳ ಕಚ್ಚಾ ತೈಲ ನಿಕ್ಷೇಪಗಳು, 60 ದಿನಗಳ ನೈಸರ್ಗಿಕ ಅನಿಲ ನಿಕ್ಷೇಪಗಳು ಮತ್ತು 45 ದಿನಗಳ ಎಲ್‌ಪಿಜಿ ರೋಲಿಂಗ್ ಸ್ಟಾಕ್ ಅನ್ನು ಹೊಂದಿದೆ ಎಂದು ಅಧಿಕಾರಿಗಳು ಸಚಿವರಿಗೆ ಮಾಹಿತಿ ನೀಡಿದರು, ಇದು ಜಾಗತಿಕ ಇಂಧನ ಮಾರುಕಟ್ಟೆಗಳಲ್ಲಿನ ಪ್ರಕ್ಷುಬ್ಧತೆಯ ಹೊರತಾಗಿಯೂ ದೇಶೀಯ ಬೇಡಿಕೆಯನ್ನು ಸಂಪೂರ್ಣವಾಗಿ ಪೂರೈಸುವುದನ್ನು ಖಚಿತಪಡಿಸುತ್ತದೆ.

### ಜನರ ಪರಿಣಾಮ ಬೀರದಂತೆ ಕ್ರಮ ಕ್ರಮ ಕೈಗೊಳ್ಳಿ: ಸಚಿವಾಲಯಗಳಿಗೆ ರಕ್ಷಣಾ ಸಚಿವ ರಾಜನಾಥ್‌ಸಿಂಗ್ ನಿರ್ದೇಶನ

"ದೇಶ ಸುರಕ್ಷಿತವಾಗಿದೆ ಮತ್ತು ಯಾವುದೇ ಪೆಟ್ರೋಲಿಯಂ ಉತ್ಪನ್ನದ ಕೊರತೆಯಿಲ್ಲ" ಎಂದು ಅಧಿಕಾರಿಗಳು ಸಭೆಗೆ ತಿಳಿಸಿದರು, ಅನೇಕ ದೇಶಗಳು ತುರ್ತು ಬಳಕೆ ನಿಯಂತ್ರಣಗಳನ್ನು ಪರಿಚಯಿಸಿದ್ದರೂ ಸಹ ಭಾರತ ಸ್ಥಿರ ಇಂಧನ ಪೂರೈಕೆಯನ್ನು ಕಾಯ್ದುಕೊಳ್ಳುವುದನ್ನು ಮುಂದುವರೆಸಿದೆ ಎಂದು ಗಮನಿಸಿದರು. ಭಾರತವು ಪ್ರಸ್ತುತ 703 ಶತಕೋಟಿ ಡಾಲರ್ ವಿದೇಶಿ ವಿನಿಮಯ ನಿಕ್ಷೇಪ ಹೊಂದಿದೆ, ಆದರೆ ಅದರ ಸಂಸ್ಕರಣಾ ಸಾಮರ್ಥ್ಯವು ದೃಢವಾಗಿ ಉಳಿದಿದೆ. ಭಾರತವು ಈಗ ವಿಶ್ವದ ಮೂರನೇ ಅತಿದೊಡ್ಡ ತೈಲ ಸಂಸ್ಕರಣಾಗಾರ ಮತ್ತು ಪೆಟ್ರೋಲಿಯಂ ಉತ್ಪನ್ನಗಳ ನಾಲ್ಕನೇ ಅತಿದೊಡ್ಡ ರಫ್ತುದಾರನಾಗಿದ್ದು, 150 ಕ್ಕೂ ಹೆಚ್ಚು ದೇಶಗಳಿಗೆ ಇಂಧನವನ್ನು ಪೂರೈಸುತ್ತಿದೆ ಎಂದು ಅಧಿಕಾರಿಗಳು ಹೇಳಿದರು.



ಬಲವಾದ ಪೂರೈಕೆ ಸ್ಥಿತಿಯ ಹೊರತಾಗಿಯೂ, ಅಂತರರಾಷ್ಟ್ರೀಯ ಕಚ್ಚಾತೈಲ ಬೆಲೆಗಳು ಏರುತ್ತಿರುವುದರಿಂದ ಉಂಟಾದ ಆರ್ಥಿಕ ಒತ್ತಡವನ್ನು ಸರ್ಕಾರ ಒಪ್ಪಿಕೊಂಡಿದೆ.

ಸಾರ್ವಜನಿಕ ವಲಯದ ತೈಲ ಮಾರುಕಟ್ಟೆ ಕಂಪನಿಗಳು ಪ್ರಸ್ತುತ ದಿನಕ್ಕೆ ಸುಮಾರು 1,000 ಕೋಟಿ ರೂ.ಗಳ ನಷ್ಟವನ್ನು ಭರಿಸುತ್ತಿವೆ, ಆದರೆ 2026 ರ ಮೊದಲ ತ್ರೈಮಾಸಿಕದಲ್ಲಿ ಕಡಿಮೆ ಚೇತರಿಕೆ 2 ಲಕ್ಷ ಕೋಟಿ ರೂ.ಗಳನ್ನು ತಲುಪಿದೆ, ಈ ಹೊರೆಯನ್ನು ಗ್ರಾಹಕರಿಗೆ ವರ್ಗಾಯಿಸದಂತೆ ನೋಡಿಕೊಳ್ಳುತ್ತದೆ ಎಂದು ಅಧಿಕಾರಿಗಳು ಹೇಳಿದರು.

"ಆತಂಕಪಡುವ ಅಗತ್ಯವಿಲ್ಲ, ಮತ್ತು ಯಾವುದೇ ನಾಗರಿಕರು ಚಿಲ್ಲರೆ ಮಾರಾಟ ಮಳಿಗೆಗಳಿಗೆ ಧಾವಿಸುವ ಅಗತ್ಯವಿಲ್ಲ" ಎಂದು ಸಭೆಯಲ್ಲಿ ಅಧಿಕಾರಿಗಳು ಒತ್ತಿ ಹೇಳಿದರು. ಜವಾಬ್ದಾರಿಯುತ ಇಂಧನ ಬಳಕೆಗಾಗಿ ಪ್ರಧಾನಿ ನರೇಂದ್ರ ಮೋದಿಯವರ ಕರೆಯನ್ನು ಜಾರಿಗೆ ತರುವಂತೆ ರಾಜನಾಥ್ ಸಿಂಗ್ ಸಚಿವಾಲಯಗಳು ಮತ್ತು ರಾಜ್ಯ ಸರ್ಕಾರಗಳಿಗೆ ನಿರ್ದೇಶನ ನೀಡಿದರು.

"ಇಂಧನ ದಕ್ಷತೆ, ಸಾರ್ವಜನಿಕ ಜಾಗೃತಿ ಮತ್ತು ಜವಾಬ್ದಾರಿಯುತ ಬಳಕೆಯ ನಡವಳಿಕೆಯನ್ನು ಸಾಂಸ್ಥಿಕಗೊಳಿಸಲು ಸಚಿವಾಲಯಗಳು ಮತ್ತು ರಾಜ್ಯಗಳು ಸಂಘಟಿತ ರೀತಿಯಲ್ಲಿ ಕ್ರಮಗಳನ್ನು ಗುರುತಿಸಬೇಕು" ಎಂದು ಸಿಂಗ್ ಹೇಳಿದರು.

## ನಿತ್ಯ ಪಂಚಾಂಗ 12.05.2026 ಮಂಗಳವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ಉತ್ತರಾಯಣ-ವಸಂತ ಋತು, ಚಾಂದ್ರಮಾನ, ಚೈತ್ರ-ವೈಶಾಖ ಮಾಸ

ವೈಶಾಖ ಬಹುಳ, ದಶಮಿ, ಪೂರ್ವಾಭಾದ್ರಾ ನಕ್ಷತ್ರ, ಹುಲಿಗಿ ಬಾಳೆದಿಂಡಿ ಉತ್ಸವ. ಬೆಂಗಳೂರು ಚಿಕ್ಕಮಾವಳ್ಳಿ ಆಂಜನೇಯ ಜಯಂತಿ, ಗುಬ್ಬಿ ಚೇಳೂರು ಹನುಮಜಯಂತಿ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

# ತಮಿಳುನಾಡು ಸಿಎಂ ವಿಜಯ್‌ಗೆ ಸಿದ್ದರಾಮಯ್ಯ ಅಭಿನಂದನೆ

**ಬೆಂಗಳೂರು, ಮೇ 11:** ತಮಿಳುನಾಡು ನೂತನ ಮುಖ್ಯಮಂತ್ರಿ ಜೋಸೆಫ್ ವಿಜಯ್ ಅವರಿಗೆ ದೂರವಾಣಿ ಕರೆ ಮಾಡಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಭಿನಂದನೆ ಸಲ್ಲಿಸಿದ್ದು, ನೀವು ಇತಿಹಾಸ ನಿರ್ಮಿಸಿದ್ದೀರಿ ಎಂದು ಶ್ಲಾಘಿಸಿದ್ದಾರೆ. ಹಾಗೂ ಬೆಂಗಳೂರಿಗೆ ಯಾವಾಗ ಬರುತ್ತೀರಿ ಎಂದು ಆತ್ಮೀಯವಾಗಿ ಆಹ್ವಾನವನ್ನೂ ನೀಡಿದ್ದಾರೆ.

ಇದಲ್ಲದೆ, ಸಾಮಾಜಿಕ ಜಾಲತಾಣ ಎಕ್ಸ್ ಖಾತೆಯಲ್ಲೂ ಶುಭಕೋರಿರುವ ಸಿದ್ದರಾಮಯ್ಯ ಅವರು, ಕರ್ನಾಟಕ ಮತ್ತು ತಮಿಳುನಾಡು ರಾಜ್ಯಗಳು ಆಳವಾದ ನಾಗರಿಕ ಸಂಬಂಧಗಳು ಹಾಗೂ ಸಾಂಸ್ಕೃತಿಕ ಸಾಮ್ಯತೆಯನ್ನು ಹಂಚಿಕೊಂಡಿವೆ. ಎರಡು ರಾಜ್ಯಗಳು ಸಾಮಾಜಿಕ ನ್ಯಾಯ, ಒಳಗೊಳ್ಳುವ ಬೆಳವಣಿಗೆ ಮತ್ತು ಒಕ್ಕೂಟ ಸಹಕಾರಕ್ಕಾಗಿ ಸಮಾನ ಆಕಾಂಕ್ಷೆಗಳನ್ನು ಹೊಂದಿವೆ. ಉಭಯ ರಾಜ್ಯಗಳ ನಡುವಿನ ಪಾಲುದಾರಿಕೆಯನ್ನು ಬಲಪಡಿಸಲು ಮತ್ತು ಪಾರಂಪರಿಕ ಮೌಲ್ಯಗಳನ್ನು ಎತ್ತಿಹಿಡಿಯಲು ವಿಜಯ್ ಅವರೊಂದಿಗೆ ನಿಕಟವಾಗಿ ಕೆಲಸ ಮಾಡಲು ಎದುರು ನೋಡುತ್ತಿರುವುದಾಗಿ ಹೇಳಿದ್ದಾರೆ. ಜಾತ್ಯತೀತತೆ, ಸಾಂವಿಧಾನಿಕ ಮೌಲ್ಯಗಳನ್ನು ಮುನ್ನಡೆಸಲು ಹಾಗೂ ವಿಭಜಕ ಮತ್ತು ಫ್ಯಾಸಿಸ್ಟ್



ಶಕ್ತಿಗಳ ವಿರುದ್ಧದ ಸಾಮೂಹಿಕ ಹೋರಾಟಕ್ಕಾಗಿ ಸಿದ್ದರಾಮಯ್ಯ ಕರೆ ನೀಡಿದ್ದಾರೆ. ತಮಿಳುನಾಡಿನ ಜನರ ಸೇವೆಯಲ್ಲಿ ವಿಜಯ್ ಅವರ ಅಧಿಕಾರಾವಧಿಯು ಯಶಸ್ವಿ ಮತ್ತು ಪರಿವರ್ತನೆಯ ಹಾದಿಯಾಗಲಿ ಎಂದು ಶುಭ ಹಾರೈಸಿದ್ದಾರೆ.

ಈ ಸಂದೇಶದ ಮೂಲಕ ಸಿದ್ದರಾಮಯ್ಯ ಅವರು ನೆರೆಯ ರಾಜ್ಯದ ನೂತನ ನಾಯಕನೊಂದಿಗೆ ಸೌಹಾರ್ದಯುತ ಸಂಬಂಧವನ್ನು ವೃದ್ಧಿಸುವ ಮತ್ತು ಪ್ರಾದೇಶಿಕ ಹಿತಾಸಕ್ತಿಗಳಿಗಾಗಿ ಒಂದಾಗಿ ಶ್ರಮಿಸುವ ಇಚ್ಛೆಯನ್ನು ವ್ಯಕ್ತಪಡಿಸಿದ್ದಾರೆ.

# ಮಿತವ್ಯಯ: ಮೊದಲು ಕೇಂದ್ರ ಪಾಲಿಸಲಿ ಪ್ರಧಾನಿ ಮೋದಿಗೆ ಡಿಕೆಶಿ ತಿರುಗೇಟು

**ಬೆಂಗಳೂರು, ಮೇ 11:** ಸಂಯಮ ಕಾಯುವಂತೆ ಕರೆ ನೀಡಿರುವ ಪ್ರಧಾನಿ ಮೋದಿ ಮೊದಲು ಕೇಂದ್ರ ಅಧಿಕಾರಿಗಳಿಗೆ, ಅವರ ಮಂತ್ರಿಗಳಿಗೆ ತಾಕೀತು ಮಾಡಲಿ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಹೇಳಿದ್ದಾರೆ.

ನಗರದಲ್ಲಿಂದು ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಕೇಂದ್ರ ಸರ್ಕಾರದಲ್ಲಿರುವ ಎಲ್ಲ ಮಂತ್ರಿಗಳಿಗೆ ತಾಕೀತು ಮಾಡಲಿ. ನೀವು ಯಾರೂ ಇನ್ಮುಂದೆ ಪೆಟ್ರೋಲ್ ಗಾಡಿಯಲ್ಲಿ ಹೋಗಬೇಡಿ, ಸರ್ಕಾರಿ ಬಸ್‌ನಲ್ಲಿ ಹೋಗಿ, ಮೆಟ್ರೋ ಮತ್ತು ಟ್ರೈನ್‌ನಲ್ಲಿ ಹೋಗಿ ಅಂತ ಅವರಿಗೆಲ್ಲ ಹೇಳಲಿ. ಆದರೆ, ಚಿನ್ನದ ಬೆಲೆ ಯಾಕೆ ಜಾಸ್ತಿ ಆಯ್ತು ಅಂತ ಹೇಳುತ್ತಿಲ್ಲ. ಪೆಟ್ರೋಲ್ ಬಳಕೆ ಕಡಿಮೆ ಮಾಡಿ ಅಂತ ಮಾತ್ರ ಹೇಳ್ತಿದ್ದಾರೆ ಎಂದು ವಾಗ್ದಾಳಿ ನಡೆಸಿದರು.

ಮೊದಲು ನಿಮ್ಮಿಂದಲೇ ಮಿತವ್ಯಯದ ಮಾರ್ಗಗಳು ಶುರುವಾಗಲಿ ಎಂದು ನಾವು ಹೇಳ್ತಿರೋದು. ಮಂತ್ರಿಗಳಿಂದ, ಕೇಂದ್ರದ ಅಧಿಕಾರಿಗಳಿಂದ, ಅವರ ಸರ್ಕಾರ ಇರುವ ಎಲ್ಲ ರಾಜ್ಯ ಸರ್ಕಾರದಿಂದ ಶುರು ಮಾಡಲಿ. ಅವರ ಶಾಸಕರು, ಕಾರ್ಯಕರ್ತರು, ಮುಖಂಡರಿಂದ ತ್ಯಾಗ ಶುರು ಮಾಡಲಿ. ಆ ಮೇಲೆ ಬೇರೆ ಅವರು ತ್ಯಾಗ ಮಾಡಲಿ ಎಂದು ಕರೆ ನೀಡಿದರು.

ಜನರಿಗೆ ಯಾರಿಂದ ತೊಂದರೆ ಆಯ್ತು ಅಂತ ಮೋದಿ ಅವರೇ ವಿವರಣೆ ನೀಡಬೇಕು. ಮದುವೆ ಮಾಡೋರು, ಮುಂಜಿ ಮಾಡೋರು ಯಾರು ಚಿನ್ನ ತೆಗೆದುಕೊಳ್ಳಬೇಡಿ ಅಂತ ಹೇಳೋಕೆ ಆಗುತ್ತಾ. ನೀವು ಜನರಿಗೆ ಸಲಹೆ ಏನು ಬೇಕಿದ್ರು ಕೊಡ್ತೀರಾ. ಕೊರೊನಾ ಸಮಯದಲ್ಲಿ ದೀಪ ಹಚ್ಚಿ ಅಂದ್ರಿ, ದೀಪ ಹಚ್ಚಿದ್ವಿ. ಚಪ್ಪಾಳೆ ತಟ್ಟಿ ಅಂದ್ರಿ, ಚಪ್ಪಾಳೆ ತಟ್ಟಿದ್ವಿ. ಏನಾದ್ರೂ ನಿಂತುಕೊಳ್ತಾ. ಏನು ನಿಂತಿಲ್ಲ. ಪ್ರಾಕ್ಟಿಕಲ್ ಆಗಿ ಇರಬೇಕು. ಜೀವನದಲ್ಲಿ ಮದುವೆ ಆಗ್ತಾರೆ. ತಾಳಿ ಕಟ್ಟಿಕೊಳ್ಳೋರು, ಒಂದು ಸರ ಮಾಡಿಸಿಕೊಳ್ಳೋರನ್ನು ನಾವು ಬೇಡ ಅನ್ನೋಕೆ ಆಗುತ್ತಾ. ಅದೆಲ್ಲ ಮಾಡೋಕೆ ಆಗಲ್ಲ ಎಂದು ಶಿವಕುಮಾರ್ ಕಿಡಿ ಕಾರಿದರು.

ಅವರ ಬದುಕಿನಲ್ಲಿ ಕಷ್ಟನೋ, ಸುಖನೋ, ಸಾಲನೋ ಸೋಲನೋ ಮಾಡಿ ಅವರ ಜೀವನದಲ್ಲಿ ಮಾಡ್ತಾರೆ. ಓಡಾಟ ನಡೆಸೋರನ್ನೆಲ್ಲಾ ಸರ್ಕಾರಿ ಬಸ್‌ನಲ್ಲಿ ಓಡಾಡಿ ಅನ್ನೋಕಾಗಲ್ಲ. ಮೊದಲು ಆಫೀಸರ್‌ಗಳಿಗೆ ಹೇಳಲಿ. ಕೇಂದ್ರದ ಅಧಿಕಾರಿಗಳು ನೀವು ನಿಮ್ಮ ಗಾಡಿಗಳಲ್ಲಿ ಓಡಾಡಬೇಡಿ. ಮೆಟ್ರೋ ಅಥವಾ ಸರ್ಕಾರಿ ಬಸ್ನಲ್ಲಿ ಹೋಗಿ ಅಂತ ಹೇಳಿ. ಮೊದಲು ನಾವು ನಡೆದುಕೊಳ್ಳಬೇಕು. ಆಮೇಲೆ ಬೇರೆ ಸಾಮಾನ್ಯ ಜನರಿಗೆ ಹೇಳಬೇಕು. ನಾನು ಐಷಾರಾಮಿ ಕಾರು ಇಟ್ಟುಕೊಂಡು, ಅದೇ ಕಾರಲ್ಲಿ ಓಡಾಡೋದು. ಸಾಮಾನ್ಯ ಜನ ಮಾಮೂಲಿಯಾಗಿ ಓಡಾಡೋದು ಆಗದೇ ಇರುವ ಕಥೆ ಎಂದು ಡಿಕೆಶಿ ಹೇಳಿದರು.

# ಭಾಷಣ ಮಾಡದೆ ರಾಜ್ಯದ ಯೋಜನೆಗಳಿಗೆ ಅನುಮತಿ ನೀಡಿದರೆ ಸ್ವಾಗತ

**ಬೆಂಗಳೂರು, ಮೇ 11:** ರಾಜ್ಯಕ್ಕೆ ಭೇಟಿ ನೀಡಿದ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಭಾಷಣದ ಬೆನ್ನಲ್ಲೇ ಕೇಂದ್ರ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿರುವ ಸಾರಿಗೆ ಮತ್ತು ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ ಅವರು, ಕರ್ನಾಟಕದ ಬಗ್ಗೆ ಪ್ರಧಾನಿಗಳ ಉದ್ದೇಶ ಮತ್ತು ಕೇಂದ್ರದ ಮಲತಾಯಿ ಧೋರಣೆಯನ್ನು ಪ್ರಶ್ನಿಸಿದ್ದಾರೆ.

ಈ ಬಗ್ಗೆ ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಕರ್ನಾಟಕವು ಭಾರತದ ಆರ್ಥಿಕತೆಯ ಎಂಜಿನ್ ಆಗಿದೆ. 2025-26ರಲ್ಲಿ ಕರ್ನಾಟಕವು 4.5 ಲಕ್ಷ ಕೋಟಿ ರೂ. ತೆರಿಗೆ ಸಂಗ್ರಹಿಸಿದೆ (ಇದರಲ್ಲಿ 1.58 ಲಕ್ಷ ಕೋಟಿ ರೂ. ಜಿಎಸ್ಟಿ ಸೇರಿದೆ). ಆದರೆ, ಕೇಂದ್ರಕ್ಕೆ ರಾಜ್ಯ ನೀಡುವ ಪ್ರತಿ 100 ರೂ.ಗಳಲ್ಲಿ ರಾಜ್ಯಕ್ಕೆ ಮರಳಿ ಸಿಗುತ್ತಿರುವುದು ಕೇವಲ 13 ರೂ.ಗಿಂತ ಕಡಿಮೆ ಎಂದು ಅಂಕಿಅಂಶಗಳ ಸಮೇತ ದೂರಿದ್ದಾರೆ.



ರಾಜ್ಯದ ಜನತೆಯ ಜೀವನಾಡಿ ಯೋಜನೆಗಳಾದ ಮೇಕೆದಾಟು ಮತ್ತು ಮಹದಾಯಿ (ಕಳಸಾ-ಬಂಡೂರಿ) ಯೋಜನೆಗಳಿಗೆ ಪರಿಸರ ಅನುಮತಿ ನೀಡುವಲ್ಲಿ ಮತ್ತು ಗೆಜೆಟ್ ನೋಟಿಫಿಕೇಶನ್ ಹೊರಡಿಸುವಲ್ಲಿ ಕೇಂದ್ರ ಸರ್ಕಾರ ವಿನಾಕಾರಣ ವಿಳಂಬ ಮಾಡುತ್ತಿದೆ. ಕೇಂದ್ರ ಬಜೆಟ್‌ನಲ್ಲಿ ಭದ್ರಾ ಮೇಲ್ದಂಡೆ ಯೋಜನೆಯನ್ನು "ರಾಷ್ಟ್ರೀಯ ಯೋಜನೆ" ಎಂದು ಘೋಷಿಸಿ 5,300 ಕೋಟಿ ರೂ. ನೀಡುವುದಾಗಿ ಘೋಷಿಸಿದ್ದ ಕೇಂದ್ರ ಸರ್ಕಾರ ಇದುವರೆಗೂ ಒಂದು ರೂಪಾಯಿಯನ್ನೂ ಬಿಡುಗಡೆ ಮಾಡಿಲ್ಲ ಎಂದು ಟೀಕಿಸಿದ್ದಾರೆ.

ರಾಜ್ಯವು ಭೀಕರ ಬರಗಾಲ ಎದುರಿಸುತ್ತಿದ್ದಾಗ 18,000 ಕೋಟಿ ರೂ. ಪರಿಹಾರ ಕೋರಲಾಗಿತ್ತು. ಆದರೆ, ಸುಪ್ರೀಂ ಕೋರ್ಟ್ ಕೇಂದ್ರಕ್ಕೆ ಛೀಮಾರಿ ಹಾಕುವವರೆಗೂ ಪರಿಹಾರದ ಹಣ ಬಿಡುಗಡೆಯಾಗಲಿಲ್ಲ. ಇದು ರೈತರ ಬಗ್ಗೆ ಕೇಂದ್ರಕ್ಕಿರುವ ಕಾಳಜಿಯನ್ನು ತೋರಿಸುತ್ತದೆ. ಬಡವರಿಗೆ ಉಚಿತ ಅಕ್ಕಿ ನೀಡುವ 'ಅನ್ನಭಾಗ್ಯ' ಯೋಜನೆ ಜಾರಿಗೆ ತಂದಾಗ, ಎಫ್‌ಸಿಐ ಮೂಲಕ ರಾಜ್ಯಕ್ಕೆ ಅಕ್ಕಿ ಮಾರಾಟ ಮಾಡದಂತೆ ಕೇಂದ್ರ ಸರ್ಕಾರ ತಡೆಹಿಡಿಯಿತು. ಇದು ಬಡವರ ಹೊಟ್ಟೆ ಮೇಲೆ ಹೊಡೆಯುವ ತಂತ್ರವಾಗಿತ್ತು ಎಂದು ಕಿಡಿಕಾರಿದ್ದಾರೆ.

### ಸಚಿವರ ಸವಾಲು

**ರಾಯಚೂರಿನಲ್ಲಿ ಘೋಷಣೆಯಾದ ಏಮ್ಸ್ ಆಸ್ಪತ್ರೆ ಕಾಗದದ ಮೇಲೆಯೇ ಉಳಿದಿದೆ. ರಾಜ್ಯ ಸರ್ಕಾರ 1,100 ಎಕರೆ ಭೂಮಿ ನೀಡಿದರೂ ರೈಲ್ವೆ ಕೋಚ್ ಕಾರ್ಖಾನೆ ಯೋಜನೆ ಆರಂಭವಾಗಿಲ್ಲ. ಬೆಂಗಳೂರಿನ ಸಂಚಾರದಟ್ಟಣೆ ನಿವಾರಿಸುವ ಸಬ್ ಅರ್ಬನ್ ರೈಲು ಯೋಜನೆಗೆ ಅನುದಾನದ ಕೊರತೆ ಎದುರಾಗಿದೆ. ಪ್ರಧಾನಿಗಳು ಕೇವಲ "ಕುರ್ಚಿ" ರಾಜಕಾರಣ ಅಥವಾ ಆಂತರಿಕ ಪ್ರಜಾಪ್ರಭುತ್ವದ ಬಗ್ಗೆ ಮಾತನಾಡುವ ಬದಲು, ಕಳೆದ 12 ವರ್ಷಗಳಲ್ಲಿ ಕನ್ನಡಿಗರಿಗೆ ಆಗಿರುವ ಅನ್ಯಾಯದ ಬಗ್ಗೆ ಮಾತನಾಡಬೇಕಿತ್ತು. ಕೇವಲ ಭಾಷಣ ಮಾಡಲು ಬೆಂಗಳೂರಿಗೆ ಬಂದರೆ ಉಪಯೋಗವಿಲ್ಲ; ರಾಜ್ಯಕ್ಕೆ ಬರಬೇಕಾದ ನ್ಯಾಯಯುತವಾದ ಅನುದಾನ ಮತ್ತು ಬಾಕಿ ಇರುವ ಯೋಜನೆಗಳಿಗೆ ಅನುಮತಿಯೊಂದಿಗೆ ಬಂದರೆ ಸ್ವಾಗತಿಸುತ್ತೇವೆ" ಎಂದು ಸಚಿವ ರಾಮಲಿಂಗಾರೆಡ್ಡಿ ಸವಾಲು ಹಾಕಿದ್ದಾರೆ.**



ಕೇಂದ್ರ ಸಚಿವ ವಿ.ಸೋಮಣ್ಣ ಅವರು ಪತ್ನಿ ಶೈಲಜಾ ಹಾಗೂ ಕುಟುಂಬ ಸದಸ್ಯರ ಜತೆ ಕನಕಪುರ ರಸ್ತೆಯ ಆರ್ಟ್ ಆಫ್ ಲೀವಿಂಗ್ ಕೇಂದ್ರಕ್ಕೆ ಭೇಟಿ ನೀಡಿ ಆಶ್ರಮದ ಸಂಸ್ಥಾಪಕ ಹಾಗೂ ಮಾರ್ಗದರ್ಶಕ ರವಿಶಂಕರ್ ಗುರೂಜಿ ಅವರ ಆಶೀರ್ವಾದ ಪಡೆದರು.

# ಪಂಚಾಯಿತಿ ಸದಸ್ಯನ ರೀತಿ ರಾಜಕಾರಣ ಬಿಡಿ ಮೋದಿ ವಿರುದ್ಧ ಹರಿಪ್ರಸಾದ್ ವಾಗ್ದಾಳಿ

**ಬೆಂಗಳೂರು, ಮೇ11:** ಪ್ರಧಾನಿ ನರೇಂದ್ರ ಮೋದಿಯವರು ತಮ್ಮ ಕುರ್ಚಿ ಗಟ್ಟಿಯಾಗಿದೆಯೇ ನೋಡಿಕೊಳ್ಳಲಿ ಎಂದು ಹಿರಿಯ ಕಾಂಗ್ರೆಸ್ ಮುಖಂಡ ಹಾಗೂ ವಿಧಾನಪರಿಷತ್ ಸದಸ್ಯ ಬಿ.ಕೆ ಹರಿಪ್ರಸಾದ್ ವಾಗ್ದಾಳಿ ನಡೆಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪಿಎಂ ಎಂದರೆ ನಾವು ಪ್ರಧಾನಮಂತ್ರಿ ಎಂದು ತಿಳಿದುಕೊಂಡಿದ್ದೇವೆ. ಇವರು ಪಂಚಾಯತಿ ಸದಸ್ಯರ ರೀತಿ ರಾಜಕಾರಣ ಮಾಡುಯವುದನ್ನು ಬಿಡಬೇಕು. ಕರ್ನಾಟಕದ ರಾಜಕಾರಣದ ಬಗ್ಗೆ ಕಡಿಮೆ ಮಾತಾಡೋದು ಒಳ್ಳೆಯದು. ನರೇಂದ್ರ ಮೋದಿಯವರನ್ನು ನಾನು ಯಾವಾಗ ಬೇಕಾದರೂ ಇಳಿಸಬಹುದು ಎಂದು ಅಮೆರಿಕ ಅಧ್ಯಕ್ಷ ಟ್ರಂಪ್ ಹೇಳಿದ್ದಾರೆ. ಕರ್ನಾಟಕ ಸಿಎಂ ಕುರ್ಚಿ ಬಗ್ಗೆ ಮಾತಾಡುವ ಮೊದಲು, ಅವರ ಕುರ್ಚಿ ಗಟ್ಟಿಯಾಗಿದೆಯೇ ಎಂದು ನೋಡಿಕೊಳ್ಳಲಿ ಎಂದಿದ್ದಾರೆ.

ಎಪ್‌ಸ್ಟೀನ್ ಫೈಲ್ಸ್‌ನಲ್ಲಿ ಇವರ ಲೀಲೆಗಳು ಹೊರಗಡೆ ಬರುತ್ತವೆ. ಆ ಕುರ್ಚಿ ಹೇಗೆ ಉಳಿಸಿಕೊಳ್ಳುತ್ತಾರೆ ಎಂದು ಜನರಿಗೆ ಹೇಳಿದರೆ ಒಳ್ಳೆಯದು. ಮೊದಲು ಅದಕ್ಕೆ ಉತ್ತರ ಕೊಡಲಿ. ಈಗ ಗುಜರಾತ್ ಮಾದರಿ ಮರೆತು ಬಿಟ್ಟಿದ್ದಾರೆ. 12 ವರ್ಷಗಳ ಅರಾಜಕತೆ ಸೃಷ್ಟಿ ಮಾಡಿದವರು ಇವರು. ಬಿಹಾರದಲ್ಲಿ ನಿತೀಶ್ ಕುಮಾರ್, ಮಹಾರಾಷ್ಟ್ರದಲ್ಲಿ ಉದ್ಧವ್ ಠಾಕ್ರೆ, ಪ್ರಕಾಶ್ ಸಿಂಗ್ ಬಾದಲ್, ಎನ್‌ಸಿಪಿ ಯಾವ ರೀತಿ ಮುಗಿಸಿದರು. ಇದಕ್ಕೆಲ್ಲ ಕಾರಣ ಭಸ್ಮಾಸುರ ಆಗಿರುವ ನರೇಂದ್ರ ಮೋದಿ. ಅವರು ಪ್ರಜಾಪ್ರಭುತ್ವ, ಸಂವಿಧಾನದ ಮೇಲೆ ಕೈಇಡದಿದ್ದರೆ ಸಾಕು ಎಂದು ಕುಟುಕಿದ್ದಾರೆ.

ರಾಷ್ಟ್ರ ಅಧೋಗತಿಗೆ ಬಂದಿದೆ ಅನ್ನೋದು



ಯಾರಿಗೂ ಕೂಡ ಗೊತ್ತಾಗ್ತಿಲ್ಲ. ಫೆ.28 ರಂದು ಪಶ್ಚಿಮ ಏಷ್ಯಾದಲ್ಲಿ ಪ್ರಾರಂಭವಾದ ಸಮಸ್ಯೆಗಳ ಬಗ್ಗೆ ರಾಹುಲ್ ಗಾಂಧಿ ಬಹಳ ಸ್ಪಷ್ಟವಾಗಿ ಹೇಳಿದ್ದರು. ದೇಶ ಬಹಳ ಸಂದಿಗ್ಧ ಪರಿಸ್ಥಿತಿಯಲ್ಲಿ ಸಿಕ್ಕಿಹಾಕಿಕೊಳ್ಳುತ್ತೆ, ಇದರ ಬಗ್ಗೆ ಕ್ರಮ ವಹಿಸಬೇಕು ಎಂದು ಎಚ್ಚರಿಕೆ ಕೊಟ್ಟಿದ್ದರು. ಆದರೆ ಅವರ ಮಾತನ್ನು ಬಾಲಿಶ ಅಂತ ತಳ್ಳಿ ಹಾಕಿದ್ದರು.

ಈಗ ಪೆಟ್ರೋಲ್ ಮಿತವ್ಯಯ ಮಾಡಿ ಎಂದು ಹೇಳುತ್ತಿದ್ದಾರೆ. ಚಿನ್ನ ಖರೀದಿ ಮಾಡಬೇಡಿ, ಫಾರಿನ್ ಟೂರ್‌ಗೆ ಹೋಗಬೇಡಿ ಎನ್ನುತ್ತಿದ್ದಾರೆ. ಇವರು ಏನು ಮಾಡುತ್ತಿದ್ದಾರೆ. ಕಳೆದ 12 ವರ್ಷದಿಂದ ಇವರಿಗೆ ಯಾವ ಹೊಣೆಗಾರಿಕೆ ಇತ್ತು ಎಂದು ಹೇಳಲಿ.

ಹೂಗ್ಲಿ ನದಿಯ ಬೋಟಲ್ಲಿ ಹೋಗುವಾಗ, ಜಲ್ಮುರಿ ತಿನ್ನೋಕೆ ಹೋದಾಗ, ಸಿಕ್ಕಿಂನಲ್ಲಿ ಫುಟ್ಬಾಲ್ ಆಡೋಕೆ ಹೋದಾಗ, ವಾರಾಣಸಿಯಲ್ಲಿ ದೇವಸ್ಥಾನದ ದರ್ಶನಕ್ಕೆ ಹೋದಾಗ, ಬಂಗಾಳದಲ್ಲಿ ಲಕ್ಷಾಂತರ ಜನರ ಸಾರ್ವಜನಿಕ ಸಭೆ ಮಾಡುವಾಗ ಇವರಿಗೆ ಮಿತವ್ಯಯ ಕಾಣಲಿಲ್ಲ. ನಾವು ಬೇರೆಯವರಿಗೆ ಹೇಳುವಾಗ ಮೊದಲು ಅನುಸರಿಸಬೇಕು. ಪ್ರಧಾನಿ ತಮ್ಮ ಮನೆಯಲ್ಲಿ ಮೊದಲು ಮಿತವ್ಯಯ ಪ್ರಾರಂಭ ಮಾಡಲಿ. ಇವರಿಗೆ ಎಂಟು ಸಾವಿರ ಕೋಟಿ ಏರೋಪ್ಲೇನ್ ಬೇಕು. ಮಿತವ್ಯಯ ಮಾಡಬೇಕಾದರೆ ಇವರು ಕಮರ್ಷಿಯಲ್ ಫ್ಲೈಟ್‌ನಲ್ಲಿ ಓಡಾಡಲಿ. ಸಣ್ಣ ಕಾರಿನಲ್ಲಿ ಓಡಾಡಲಿ, ಇಂದಿರಾ ಗಾಂಧಿ ಅಂಬಾಸಿಡರ್ ಕಾರಿನಲ್ಲಿ ಓಡಾಡುತ್ತಿದ್ದರು. ಇವರು ಅಂತ ಕಾರು ಉಪಯೋಗಿಸಲಿ, ಲಾಲ್ ಬಹದ್ದೂರ್ ಶಾಸ್ತ್ರಿ ಫಿಯೆಟ್ ಕಾರ್ ಇಟ್ಕೊಂಡಿದ್ದರು. ಜನಸಾಮಾನ್ಯರು ಜೀವನ ನಡೆಸುವುದಕ್ಕೆ ಕಷ್ಟ ಆಗ್ತಿದೆ ಅನ್ನೋದು ಇವರಿಗೆ ಅರ್ಥ ಆಗಿಲ್ಲ ಎಂದು ಹರಿಪ್ರಸಾದ್ ಅಸಮಾಧಾನ ಹೊರಹಾಕಿದ್ದಾರೆ.

### ಆರೆಸ್ಸೆಸ್‌ಗೆ ಸರ್ಕಾರ ಹೊರಗುತ್ತಿಗೆ

**ಕಳೆದ ಐದು ತಿಂಗಳ ಕಾಲ ಸರ್ಕಾರ ಏನು ಮಾಡ್ತಾ ಇದೆ ಎಂದು ಗೊತ್ತಿರಲಿಲ್ಲ. ಸರ್ಕಾರವನ್ನು ಇವರು ಆರೆಸ್‌ಎಸ್‌ಗೆ ಔಟ್ ಸೋರ್ಸ್ ಮಾಡಿದ್ದಾರೆ. ಆರ್‌ಎಸ್‌ಎಸ್‌ನವರು ಸರ್ಕಾರ ನಡೆಸುತ್ತಿದ್ದಾರೆ. ಇವರ ಕೈಯಲ್ಲಿ ಏನೂ ಇಲ್ಲ. ವರ್ಕ್ ಫ್ರಮ್ ಹೋಮ್ ಮೊದಲು ನರೇಂದ್ರ ಮೋದಿ ಶುರು ಮಾಡಲಿ. ನೀವು ಮನೇಲಿ ಕೂತು ಪ್ರಚಾರ ಮಾಡಿ, ನಮಗೆ ಕೋಟಿ ದುಡ್ಡು ಉಳಿಯುತ್ತೆ. ಮಿತವ್ಯಯದ ಬಗ್ಗೆ ನರೇಂದ್ರ ಮೋದಿ ಹೇಳುವುದು ಹಾಸ್ಯಾಸ್ಪದ. ಇವರಂತಹ ಅಸಮರ್ಥ ದೇಶದ ಪ್ರಧಾನಿಯನ್ನು ಯಾವತ್ತು ನೋಡಿಲ್ಲ ಎಂದು ಹರಿಪ್ರಸಾದ್ ಎಂದಿದ್ದಾರೆ.**

# ಯುದ್ಧ ಹಿನ್ನೆಲೆ ಪ್ರಧಾನಿಯಿಂದ ಮಿತವ್ಯಯದ ಸಂದೇಶ

**ಬೆಂಗಳೂರು, ಮೇ 11:** ಇಸ್ರೇಲ್, ಅಮೆರಿಕಾ, ಇರಾನ್ ಯುದ್ಧ ಮುಗಿಯದ ಕಾರಣ ಮುಂಜಾಗ್ರತೆಯಾಗಿ ಪ್ರಧಾನಿ ನರೇಂದ್ರ ಮೋದಿ ಅವರು ಪೆಟ್ರೋಲ್, ಡೀಸೆಲ್ ಮಿತವ್ಯಯದ ಸಂದೇಶ ಕೊಟ್ಟಿದ್ದಾರೆ. ಕಾಂಗ್ರೆಸ್‌ನವರಿಗೆ ತ್ಯಾಗ, ದೇಶಭಕ್ತಿ ಅನ್ನುವುದೇ ಗೊತ್ತಿಲ್ಲ. ಕಾಂಗ್ರೆಸ್‌ನವರಿಗೆ ಜನಮಾನಸದಲ್ಲಿ ದೇಶಭಕ್ತಿ ಆಳವಾಗಿ ಬೇರೂರಿದೆ ಎಂಬುದು ಗೊತ್ತಿಲ್ಲ. ವಿರೋಧ ಮಾಡುವುದರ ಸಲುವಾಗಿ ವಿರೋಧ ಮಾಡುತ್ತಾರೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

ಗದಗನಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅಂತರಾಷ್ಟ್ರೀಯ ಮಟ್ಟದಲ್ಲಿ ಇರಾನ್ ಇಸ್ರೇಲ್, ಅಮೇರಿಕಾ ಯುದ್ಧ ನಡೆಯುತ್ತಿದೆ. ಗಲ್ಫ್ ರಾಷ್ಟ್ರದ ಯುದ್ಧ ಮುಗಿಯುವಂತೆ ಕಾಣುತ್ತಿಲ್ಲ. ಉಕ್ರೇನ್ – ರಷ್ಯಾ ಯುದ್ಧ ಆದಾಗ ಬಹಳಷ್ಟು ಸಮಸ್ಯೆ ಆಗಿತ್ತು. ರಸಗೊಬ್ಬರ ಕಚ್ಚಾವಸ್ತುಗಳ ಸಮಸ್ಯೆ ಆಗಿತ್ತು. ಈಗ ಪೆಟ್ರೋಲ್, ಡೀಸೆಲ್, ಆಯಿಲ್ ಸಮಸ್ಯೆ ಆಗುತ್ತಿದೆ.

ಇರಾನ್ ದೇಶದ ಮೇಲೆ ಅವಲಂಬಿಸಿದ್ದೇವೆ. ಇಷ್ಟು ದಿನ ನರೇಂದ್ರ ಮೋದಿ ಅವರು ಅಂತಾರಾಷ್ಟ್ರೀಯ ಮಟ್ಟದ ವ್ಯಕ್ತಿತ್ವ ಉಪಯೋಗಿಸಿ ಕಳೆದ ಎರಡು ತಿಂಗಳು ಪೆಟ್ರೋಲ್ ಡೀಸೆಲ್, ಗ್ಯಾಸ್ ಸಮಸ್ಯೆ ಆಗದಂತೆ ನೋಡಿದ್ದರು.

ಹಲವು ರಾಷ್ಟ್ರಗಳಲ್ಲಿ ದರ ಏರಿಕೆ ತೈಲ ಕಂಪನಿಗಳು ನಷ್ಟದಲ್ಲಿ ವಿತರಣೆ ಮಾಡಿದ್ದಾರೆ ಯುದ್ಧ ಮುಗಿಯುತ್ತೇ ಎಂಬ ನಂಬಿಕೆ ಇತ್ತು. ಆದರೆ, ಯುದ್ಧ ಮುಗಿದ್ದಿಲ್ಲ. ಬರುವ ದಿನಗಳಲ್ಲಿ ಪೆಟ್ರೋಲ್ ಡಿಸೇಲ್ ಗ್ಯಾಸ್ ಸಂಕಷ್ಟ ಬರಹಬಹುದು. ಅಂತರಾಷ್ಟ್ರೀಯ ಮಟ್ಟದಲ್ಲಿ ದರಗಳು ಹತ್ತು ಪಟ್ಟು ಹೆಚ್ಚಿಗೆ ಆಗಿವೆ. ಅಮೆರಿಕಾ, ಶ್ರೀಲಂಕಾ, ಮಲೇಷಿಯಾ, ಪಾಕಿಸ್ತಾನ ಸೇರಿದಂತೆ ಹಲವು ರಾಷ್ಟ್ರದಲ್ಲಿ ದರ ಏರಿಕೆ ಆಗಿದೆ. ಭಾರತ ದರ ಹೆಚ್ಚಿಗೆ ಆಗದೆ ಇರುವ ದೇಶವಾಗಿದೆ ಎಂದು ಬಸವರಾಜ ಬೊಮ್ಮಾಯಿ ಹೇಳಿದರು.



- ಕಾಂಗ್ರೆಸ್‌ನವರಿಗೆ ದೇಶಭಕ್ತಿ ಎನ್ನುವುದೇ ಗೊತ್ತಿಲ್ಲ, ಕೇವಲ ವಿರೋಧಿಸುವ ಸಲುವಾಗಿ
- ಯುದ್ಧ ಮುಗಿಯದ ಹಿನ್ನೆಲೆಯಲ್ಲಿ ಪ್ರಧಾನಿ ಮಿತವ್ಯಯದ ಸಂದೇಶ ಕೊಟ್ಟಿದ್ದಾರೆ: ಬಸವರಾಜ ಬೊಮ್ಮಾಯಿ

**ಬಂಗಾರ ಖರೀದಿ ಮಾಡುವುದರಿಂದ ವಿದೇಶಿ ತೆರಿಗೆ ಹೊಡೆತ ಬೀಳುತ್ತಿದೆ. ಹೀಗಾಗಿ ಒಂದು ವರ್ಷ ಬಂಗಾರ ಖರೀದಿ ಮಾಡದಿದ್ದರೆ ಏನೂ ಆಗುವುದಿಲ್ಲ. ಇನ್ನು ಪೆಟ್ರೋಲ್ ಡಿಸೇಲ್ ಮಿತವ್ಯಯವಾಗಿ ಬಳಕೆ ಮಾಡಬೇಕು. ರಸಗೊಬ್ಬರ ಬಳಕೆ ಕಡಿಮೆ ಮಾಡಿ ಸಾವಯವ ಗೊಬ್ಬರ ಬಳಕೆ ಮಾಡಿ ಎಂದಿದ್ದಾರೆ. ಇನ್ನು ವಿದೇಶ ಪ್ರಯಾಣ ಸಹ ಕಡಿಮೆ ಮಾಡಬೇಕು ಎಂದಿದ್ದಾರೆ ದೇಶಕ್ಕಾಗಿ ನಾವು ಇಷ್ಟಾದರೂ ಮಾಡಬೇಕಿದೆ.**

**-ಬಸವರಾಜ ಬೊಮ್ಮಾಯಿ** । ಸಂಸದ


**ಲಕ್ಷಾಂತರ ನಿರುದ್ಯೋಗಿಗಳ ಭವಿಷ್ಯ ಅತಂತ್ರ ಸ್ಥಿತಿಗೆ ತಳ್ಳಿದ ಕರಾಳ ಇತಿಹಾಸ ಅಂಟಿಸಿಕೊಂಡಿದೆ ಎಂದು ಅಸಮಾಧಾನ**

# ಕೆಪಿಎಸ್‌ಸಿ ಕಲ್ಪವೃಕ್ಷವಲ್ಲ, ಪಾಪಾಸ್‌ಕಳ್ಳಿ: ವಿಜಯೇಂದ್ರ

**ಬೆಂಗಳೂರು, ಮೇ 11:** ಇತ್ತೀಚಿನ ವರ್ಷಗಳಲ್ಲಿ ಕರ್ನಾಟಕ ಲೋಕಸೇವಾ ಆಯೋಗ (ಕೆಪಿಎಸ್‌ಸಿ) ಅರ್ಹ ಪ್ರತಿಭಾವಂತ ನಿರುದ್ಯೋಗಿಗಳ ಪಾಲಿಗೆ ಕಲ್ಪವೃಕ್ಷವಾಗುವ ಬದಲು ಪಾಪಾಸುಕಳ್ಳಿಯಾಗಿ ಲಕ್ಷಾಂತರ ನಿರುದ್ಯೋಗಿಗಳ ಭವ್ಯ ಭವಿಷ್ಯವನ್ನು ಅತಂತ್ರ ಸ್ಥಿತಿಗೆ ಸಿಲುಕಿಸಿದ ಕರಾಳ ಇತಿಹಾಸವನ್ನು ಅಂಟಿಸಿಕೊಂಡಿದೆ ಎಂದು ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ಅಸಮಾಧಾನ ಹೊರಹಾಕಿದ್ದಾರೆ.

ತಮ್ಮ ಸಾಮಾಜಿಕ ಜಾಲತಾಣದ ಖಾತೆಯಲ್ಲಿ ಈ ಬಗ್ಗೆ ಮಾಹಿತಿ ಹಂಚಿಕೊಂಡಿರುವ ಅವರು, ಸರ್ಕಾರ ಈ ನಿಟ್ಟಿನಲ್ಲಿ ತನ್ನ ಬದ್ಧತೆಯನ್ನು ಪ್ರದರ್ಶಿಸಿ 56,432 ಹುದ್ದೆಗಳ ಭರ್ತಿಗೆ ಮೀನ-ಮೇಷ ಎಣಿಸದೇ ಅಧಿಸೂಚನೆ ಹೊರಡಿಸಿ ಅತೀ ಶೀಘ್ರದಲ್ಲಿ ನ್ಯಾಯೋಚಿತವಾಗಿ ಅಭ್ಯರ್ಥಿಗಳ ಆಯ್ಕೆ ಆಗುವಂತೆ ಕಾಳಜಿ ಪ್ರದರ್ಶಿಸಲಿ. ಇಲ್ಲವಾದರೆ ಸದ್ಯ ಈಗಾಗಲೇ ಹತಾಶೆಯ ಅಂಚಿನಲ್ಲಿರುವ ಲಕ್ಷಾಂತರ ನಿರುದ್ಯೋಗಿಗಳ ಆಕ್ರೋಶ ಸ್ಫೋಟವಾಗಲಿದೆ ಎಂಬ ಎಚ್ಚರಿಕೆ ನೀಡಿದ್ದಾರೆ.

ನಿರುದ್ಯೋಗಿ ಯುವಜನರ ಬೃಹತ್



ಪ್ರತಿಭಟನೆಗೆ ಮಣಿದು 56,432 ಹುದ್ದೆಗಳಿಗೆ ನೇಮಕಾತಿ ಪ್ರಕ್ರಿಯೆ ಆರಂಭಿಸುವುದಾಗಿ ಸರ್ಕಾರ ಪ್ರಕಟಿಸಿದೆ. ಆದರೆ ಈ ಸಂಬಂಧ ಇನ್ನೂ ಅಧಿಸೂಚನೆ ಹೊರಡಿಸಿಲ್ಲ. ಸರ್ಕಾರಿ ಯಂತ್ರವನ್ನು ಸಮರ್ಥವಾಗಿ ನಿಭಾಯಿಸಲು ಅರ್ಹ ಅಧಿಕಾರಿಗಳನ್ನು ನೇಮಿಸುವ ಸಾಂವಿಧಾನಿಕ ಹೊಣೆ ಹೊತ್ತಿರುವ ಲೋಕಸೇವಾ ಆಯೋಗ ಅಭ್ಯರ್ಥಿಗಳ ಆಯ್ಕೆಯಲ್ಲಿ ಪಾರದರ್ಶಕತೆ ಕಾಯ್ದುಕೊಳ್ಳುವುದರಲ್ಲಿ ವಿಫಲವಾಗಿ ಬ್ರಹ್ಮಾಂಡ ಭ್ರಷ್ಟಾಚಾರ, ಅಕ್ರಮ ಹಾಗೂ ದೋಷಪೂರಿತ ಪ್ರಕ್ರಿಯೆಗಳಿಂದ ಕುಖ್ಯಾತಿ ಪಡೆದಿದೆ ಎಂದು ವಾಗ್ದಾಳಿ ನಡೆಸಿದ್ದಾರೆ.

ಆಯೋಗದ ಈ ದುರವಸ್ಥೆಗೆ ಅಂಕುಶ ಹಾಕಲು ಆಯೋಗದ ವಿರುದ್ಧದ ನ್ಯಾಯಾಲಯದ ಅನೇಕ ತೀರ್ಪುಗಳು ಭ್ರಷ್ಟ ವ್ಯವಸ್ಥೆಯನ್ನು ಬಯಲು ಮಾಡಿದೆ. ಕೆಲ ತಪ್ಪಿತಸ್ಥರ ಮುಖವಾಡಗಳು ಕೂಡ ಕಳಚಿ ಬಿದ್ದಿವೆ. ಇಷ್ಟಾಗಿಯೂ ಆಯೋಗದ ವ್ಯವಸ್ಥೆಗೆ ಕಾಯಕಲ್ಪ ನೀಡುವ ಪ್ರಯತ್ನ ಈವರೆವಿಗೂ ಸಾಧ್ಯವಾಗಿಲ್ಲ, ಸದ್ಯ ನೂತನ ತಂತ್ರಜ್ಞಾನವನ್ನು ಅಳವಡಿಸಿಕೊಂಡು ಅಭ್ಯರ್ಥಿಗಳ ಆಯ್ಕೆಗೆ ಸುಧಾರಣೆಗಳನ್ನು ತರುವುದಾಗಿ ಆಯೋಗದ ಮೂಲಗಳು ತಿಳಿಸಿವೆ.

ಆದರೆ ಇದನ್ನು ನಂಬುವ ಮನಃಸ್ಥಿತಿಯನ್ನು ಉದ್ಯೋಗಾಕಾಂಕ್ಷಿಗಳು ಕಳೆದುಕೊಂಡಿದ್ದಾರೆ. ಆದಾಗ್ಯೂ ಈ ನಿಟ್ಟಿನಲ್ಲಿ ಕರ್ನಾಟಕ ಲೋಕ ಸೇವಾ ಆಯೋಗ ಇನ್ನಾದರೂ ಪಾರದರ್ಶಕತೆ ಕಾಯ್ದುಕೊಂಡು ಕಟ್ಟುನಿಟ್ಟಿನ ನಿಯಮಗಳನ್ನು ಅಳವಡಿಸಿಕೊಂಡು ಅರ್ಹ ಅಭ್ಯರ್ಥಿಗಳ ಆಯ್ಕೆಗೆ ಸುಭದ್ರ ವ್ಯವಸ್ಥೆ ರೂಪಿಸಿಕೊಳ್ಳದೇ ಹೋದರೆ ಮುಂದಿನ ದಿನಗಳಲ್ಲಿ ಆಯೋಗದ ಅಸ್ತಿತ್ವವನ್ನು ಪ್ರಶ್ನಿಸುವ ಪರಿಸ್ಥಿತಿ ಉದ್ಭವವಾಗಲಿದೆ ಎಂದು ವಿಜಯೇಂದ್ರ ಎಚ್ಚರಿಕೆ ನೀಡಿದ್ದಾರೆ.

# ಮಾದಪ್ಪನ ಭಕ್ತರಿಗೆ ಭದ್ರತೆ ಒದಗಿಸಲು ಸರ್ಕಾರ ವಿಫಲ: ಪ್ರತಿಪಕ್ಷ ನಾಯಕ ಅಶೋಕ್ ಟೀಕೆ

**ಬೆಂಗಳೂರು, ಮೇ 10:** ಮಲೆಮಹದೇಶ್ವರ ಬೆಟ್ಟದಲ್ಲಿ ಚಿರತೆ ದಾಳಿ, ಅಮಾಯಕ ಭಕ್ತರ ಸಾವು ರಾಜ್ಯಸರ್ಕಾರದ ಆಡಳಿತ ವೈಫಲ್ಯ, ನಿರ್ಲಕ್ಷ್ಯಕ್ಕೆ ಕನ್ನಡಿ ಹಿಡಿದಿದ್ದು, ಮಾದಪ್ಪನ ಭಕ್ತರಿಗೆ ಭದ್ರತೆ ಒದಗಿಸಲು ರಾಜ್ಯ ಸರ್ಕಾರ ಸಂಪೂರ್ಣ ವಿಫಲವಾಗಿದೆ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ್ ದೂರಿದ್ದಾರೆ

ಈ ಬಗ್ಗೆ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಟ್ವೀಟ್ ಮಾಡಿರುವ ಅವರು, ಭಕ್ತರು ದೇವರ ದರ್ಶನಕ್ಕೆ ತಮ್ಮ ಜೀವವನ್ನು



ಪಣಇಟ್ಟು ಹೋಗುವ ಪರಿಸ್ಥಿತಿ ನಿರ್ಮಾಣವಾಗಿದೆ. ಮುಖ್ಯಮಂತ್ರಿ ಸಿದ್ಧರಾಮಯ್ಯ ಹಾಗೂ ಚಾಮರಾಜನಗರ ಜಿಲ್ಲಾ ಉಸ್ತುವಾರಿ ಸಚಿವರು ಇನ್ನಾದರು ಎಚ್ಚೆತ್ತುಕೊಳ್ಳಬೇಕು. ಭಕ್ತರ ಸುರಕ್ಷತೆಗೆ ಶಾಶ್ವತ ಮತ್ತು ಕಠಿಣ ಕ್ರಮಗಳನ್ನು ಜಾರಿ ಮಾಡಬೇಕು ಎಂದು ಆಗ್ರಹಿಸಿದ್ದಾರೆ.

ದೇವಸ್ಥಾನದ ಹೆಸರಿನಲ್ಲಿ ಕೋಟಿ ಕೋಟಿ ಹಣ ಸಂಗ್ರಹ ಮಾಡುವ ಸರ್ಕಾರಕ್ಕೆ ಭಕ್ತರ ಸುರಕ್ಷತೆ ಬಗ್ಗೆ ಕನಿಷ್ಠ ಕಾಳಜಿಯೂ ಇಲ್ಲದಿರುವುದು ಅತ್ಯಂತ ದುಃಖಕರ ಮತ್ತು ಖಂಡನೀಯ. ಪ್ರತಿ ವಾಹನದಿಂದ ನೂರಾರು ರೂಪಾಯಿ ಪ್ರವೇಶ ಶುಲ್ಕ ವಸೂಲಿ ಮಾಡುವ ಸರ್ಕಾರಕ್ಕೆ ಭಕ್ತರಿಗೆ ಸೂಕ್ತ ಭದ್ರತೆ ಒದಗಿಸಲು ಆಗದಿರುವುದು ವಿಪರ್ಯಾಸ ಎಂದಿದ್ದಾರೆ.

ಜಿಲ್ಲಾ ಉಸ್ತುವಾರಿ ಸಚಿವರು ಏನು ಮಾಡುತ್ತಿದ್ದಾರೆ, ಶ್ರೀ ಮಲೈಮಹದೇಶ್ವರಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ಏನು ಮಾಡುತ್ತಿದೆ ಭಕ್ತರ ಜೀವಕ್ಕಿಂತ ಹಣದ ಸಂಗ್ರಹವೇ ಮುಖ್ಯವಾಗಿದೆಯೇ ಎಂದು ಅವರು ಪ್ರಶ್ನಿಸಿ, ಕಾಡು ಪ್ರಾಣಿಗಳ ದಾಳಿ ಹೆಚ್ಚಾಗುತ್ತಿದ್ದರೂ ಭದ್ರತಾ ಕ್ರಮ ಇಲ್ಲ. ನಿಯಂತ್ರಣ ಇಲ್ಲ. ತುರ್ತು ವೈದ್ಯಕೀಯ ಸೌಲಭ್ಯಗಳಿಲ್ಲ. ಜನರ ಸುರಕ್ಷತೆ, ಕಾಳಜಿ ಮರೀಚಿಕೆಯಾಗಿದೆ ಎಂದು ಆರೋಪಿಸಿದ್ದಾರೆ.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com
Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

### ಭಾರತದ ಆರ್ಥಿಕತೆ ಮೇಲೆ ಮಧ್ಯಪ್ರಾಚ್ಯ ಯುದ್ಧದ ಪರಿಣಾಮ

# ಪ್ರಸಕ್ತ ಹಣಕಾಸು ವರ್ಷದಲ್ಲಿ ಬೆಳವಣಿಗೆ ಶೇ.6.7ಕ್ಕೆ ಕುಸಿತ

**ನವದೆಹಲಿ, ಮೇ 11:** ಭೌಗೋಳಿಕ ರಾಜಕೀಯ ಉದ್ವಿಗ್ನತೆಗಳು ಮತ್ತು ಇರಾನ್ ಸಂಘರ್ಷಕ್ಕೆ ಸಂಬಂಧಿಸಿದ ತೈಲ ಬೆಲೆ ಏರಿಕೆಯು ಆರ್ಥಿಕ ವೇಗದ ಮೇಲೆ ಪರಿಣಾಮ ಬೀರುವುದರಿಂದ, ಭಾರತದ ಆರ್ಥಿಕ ಬೆಳವಣಿಗೆ ಶೇ.7ರಿಂದ ಶೇ.6.7ಕ್ಕೆ ನಿಧಾನವಾಗುವ ನಿರೀಕ್ಷೆಯಿದೆ ಎಂದು ಫಿಚ್ ಗ್ರೂಪ್ ಕಂಪನಿಯಾದ ಬಿಎಂಐ ವರದಿ ತಿಳಿಸಿದೆ.

2026 ರ ಜನವರಿ–ಮಾರ್ಚ್ ತ್ರೈಮಾಸಿಕದಲ್ಲಿ ಭಾರತದ ಆರ್ಥಿಕತೆಯು ವರ್ಷದಿಂದ ವರ್ಷಕ್ಕೆ ಶೇ.8 ರಷ್ಟು ಬೆಳವಣಿಗೆ ಕಂಡಿದೆ ಎಂದು ಬಿಎಂಐ ಅಂದಾಜಿಸಿದೆ, ಇದು ಅದರ ಮೂಲ ಶೇ.7.8 ಪ್ರಕ್ಷೇಪಣಕ್ಕಿಂತ ವೇಗವಾಗಿದೆ. 2025–26 ರ ಬೆಳವಣಿಗೆಯ ಮುನ್ಸೂಚನೆಯನ್ನು ಶೇ.0.1 ರಷ್ಟು ಹೆಚ್ಚಿಸಿ ಶೇ.7.7ಕ್ಕೆ ಪರಿಷ್ಕರಿಸಿದೆ. ಇರಾನ್–ಯುಎಸ್ ಸಂಘರ್ಷ ಉಲ್ಬಣಗೊಳ್ಳುವ ನಿರೀಕ್ಷೆಯು ಅದರ ಬೆಳವಣಿಗೆಯ ಮುನ್ನೋಟಕ್ಕೆ ಕೆಳಮುಖ ಅಪಾಯವನ್ನುಂಟುಮಾಡುತ್ತದೆ ಮತ್ತು ಭಾರತವು ತನ್ನ ಹಣಕಾಸಿನ ಬಲವರ್ಧನೆ ಕಾರ್ಯಸೂಚಿಗೆ ವಿರುದ್ಧವಾಗಿ ರಕ್ಷಣಾ ಮತ್ತು ಇಂಧನ ಬೆಲೆ ಸ್ಥಿರೀಕರಣದ ವೆಚ್ಚದ ಅಗತ್ಯಗಳನ್ನು ಸಮತೋಲನಗೊಳಿಸಬೇಕು ಎಂದು ವರದಿ ಹೇಳಿದೆ. 2025 ರಲ್ಲಿ ಕೈಗೊಳ್ಳಲಾದ ಜಿಎಸ್ಟಿ ಮತ್ತು ಆದಾಯ ತೆರಿಗೆಯಲ್ಲಿನ ತೆರಿಗೆ ಸುಧಾರಣೆಗಳು ಹಣದುಬ್ಬರದ ಪರಿಣಾಮಗಳನ್ನು ಭಾಗಶಃ ಸರಿದೂಗಿಸುತ್ತದೆ ಎಂದು ಬಿಎಂಐ ಹೇಳಿದೆ, ಸಡಿಲವಾದ ವಿತ್ತೀಯ ನೀತಿಯು ಬಂಡವಾಳ ವೆಚ್ಚವನ್ನು ಬೆಂಬಲಿಸುತ್ತದೆ ಎಂದು ಹೇಳಿದರು. ಆದಾಗ್ಯೂ, ಯುದ್ಧದ ಮಧ್ಯೆ ಹೆಚ್ಚಿದ ಅನಿಶ್ಚಿತತೆ ಮತ್ತು ಹೆಚ್ಚಿನ ಇನ್ಪುಟ್ ಬೆಲೆಗಳು ಹೂಡಿಕೆಯ ಮೇಲೆ ಪರಿಣಾಮ ಬೀರುವ ಸಾಧ್ಯತೆಯಿದೆ. ಬದಲಾಗದ ಹಣಕಾಸು ವರ್ಷ 27 ಮುನ್ಸೂಚನೆಯ ಹಿಂದಿನ ಒಂದು ಅಂಶವೆಂದರೆ ಕಳೆದ ವರ್ಷದ ತೆರಿಗೆ ಸುಧಾರಣೆಗಳ ಪರಿಣಾಮಗಳು 2026 ರ ಏಪ್ರಿಲ್–ಜೂನ್ ತ್ರೈಮಾಸಿಕದ ವೇಳೆಗೆ ಕಣ್ಮರೆಯಾಗುತ್ತವೆ ಎಂಬ ಮೌಲ್ಯಮಾಪನ ಎಂದು ಬಿಎಂಐ ಹೇಳಿದೆ. "ಹೊಸ ಹಣಕಾಸು ವರ್ಷದಲ್ಲಿ ಇನ್‌ಪುಟ್ ವೆಚ್ಚಗಳು ಹೆಚ್ಚಾದಂತೆ ಕಳೆದ ವರ್ಷದ ತೆರಿಗೆ ಸುಧಾರಣೆಗಳ ಪರಿಣಾಮಗಳು ಮಸುಕಾಗುತ್ತವೆ ಎಂಬ ನಮ್ಮ ನಂಬಿಕೆಯಿಂದಾಗಿ, ಹಣಕಾಸು ವರ್ಷ 2026–27 ರಲ್ಲಿ ಶೇ. 6.7 ರಷ್ಟು ಜಿಡಿಪಿ ಬೆಳವಣಿಗೆಯ ನಮ್ಮ ಮುನ್ಸೂಚನೆಯನ್ನು ನಾವು ಕಾಯ್ದುಕೊಳ್ಳುತ್ತೇವೆ" ಎಂದು ಬಿಎಂಐ ಹೇಳಿದೆ, ಜಿಡಿಪಿ ಬೆಳವಣಿಗೆ "ಗಮನಾರ್ಹವಾಗಿ ನಿಧಾನವಾಗಬಹುದು" ಎಂದು ಹೇಳಿದೆ. ಕಳೆದ ತ್ರೈಮಾಸಿಕದಲ್ಲಿ ವಿದ್ಯುತ್ ಉತ್ಪಾದನೆಯು ವರ್ಷಕ್ಕೆ ಶೇ. 2.7 ರಷ್ಟು ಬೆಳೆದಿದ್ದರೂ, ಜನವರಿ–ಫೆಬ್ರವರಿಯಲ್ಲಿ ವಿದ್ಯುತ್ ಬೇಡಿಕೆಯಿಂದಾಗಿ ಬೆಳವಣಿಗೆ ಸಂಭವಿಸಿದೆ. ಮಾರ್ಚ್‌ನಲ್ಲಿ, ವಿದ್ಯುತ್ ಬಳಕೆ ವರ್ಷಕ್ಕೆ ಶೇ. 0.9 ರಷ್ಟು ಹೆಚ್ಚಾಗಿದೆ. ಇರಾನ್‌ನ ಸಂಘರ್ಷವು ಈಗಾಗಲೇ ಸರಬರಾಜುಗಳನ್ನು ಕಡಿತಗೊಳಿಸಿದೆ ಮತ್ತು ಅದು ಈಗಾಗಲೇ 27 ರ ಶೇ. 6.7 ರಷ್ಟು ಬೆಳವಣಿಗೆಯ ಅಂದಾಜಿನಲ್ಲಿ ಅಂಶವಾಗಿದೆ ಎಂದು ವರದಿಯಲ್ಲಿ ಉಲ್ಲೇಖಿಸಲಾಗಿದೆ. ಇತ್ತೀಚೆಗೆ, ವಿಶ್ವಸಂಸ್ಥೆಯ ವರದಿಯೊಂದು ಭಾರತವು ವಿಶ್ವದಲ್ಲಿ ಅತಿಹೆಚ್ಚು ಹಣ ರವಾನೆ ಸ್ವೀಕರಿಸುವ ದೇಶವಾಗಿದೆ ಮತ್ತು 100 ಶತಕೋಟಿ ಡಾಲರ್‌ಗಳನ್ನು ಮೀರಿದ ಏಕೈಕ ರಾಷ್ಟ್ರವಾಗಿದೆ ಎಂದು ಹೇಳಿದೆ ಎಂದು ವಲಸೆ ಸಂಸ್ಥೆ ಹೇಳಿದೆ, 2024ರಲ್ಲಿ ದೇಶವು 137 ಶತಕೋಟಿ ಡಾಲರ್‌ಗಳಿಗಿಂತ ಹೆಚ್ಚು ಹಣ ರವಾನೆಯನ್ನು ಪಡೆದಿದೆ ಎಂದು ಹೇಳಿದೆ. "ಭಾರತವು ನಿರಂತರವಾಗಿ ಹಣ ರವಾನೆಯಲ್ಲಿ ಅಗ್ರಸ್ಥಾನದಲ್ಲಿದೆ, ನಂತರ ಮೆಕ್ಸಿಕೊ" ಎಂದು ಅಂತರರಾಷ್ಟ್ರೀಯ ವಲಸೆ ಸಂಸ್ಥೆ ಬಿಡುಗಡೆ ಮಾಡಿದ ವಿಶ್ವ ವಲಸೆ ವರದಿ ಹೇಳಿದೆ.

## ಚಳ್ಳಕೆರೆಯಲ್ಲಿ ಸರ್ಕಾರಿ ಗೌರವದೊಂದಿಗೆ ಸಚಿವ ಸುಧಾಕರ್ ಅಂತ್ಯಕ್ರಿಯೆ

**ಚಿತ್ರದುರ್ಗ, ಮೇ. 11:** ಶ್ವಾಸಕೋಶದ ಸೋಂಕು ಹಾಗೂ ಅನಾರೋಗ್ಯದಿಂದ ಭಾನುವಾರ ನಿಧನರಾದ ರಾಜ್ಯದ ಯೋಜನೆ



ಮತ್ತು ಸಾಂಖ್ಯಿಕ ಹಾಗೂ ಚಿತ್ರದುರ್ಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ. ಸುಧಾಕರ್ ಅವರ ಅಂತ್ಯಕ್ರಿಯೆ ಚಳ್ಳಕೆರೆ ಜೈನಧಾಮದಲ್ಲಿ ಸೋಮವಾರ ಸಂಜೆ ನೆರವೇರಿತು. ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅಂತ್ಯಕ್ರಿಯೆಯಲ್ಲಿ ಭಾಗಿಯಾಗಿ ಅಂತಿಮ ನಮನ ಸಲ್ಲಿಸಿದರು. ಈ ವೇಳೆ ವಿಧಾನಸಭಾಧ್ಯಕ್ಷ ಯು.ಟಿ.ಖಾದರ್, ಗೃಹ ಸಚಿವ ಜಿ.ಪರಮೇಶ್ವರ್, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಹೆಚ್.ಕೆ.ಪಾಟೀಲ್, ಲೋಕೋಪಯೋಗಿ ಸಚಿವ ಸತೀಶ್ ಜಾರಕೀಹೊಳೆ, ಇಂಧನ ಸಚಿವ ಕೆ.ಜೆ.ಜಾರ್ಜ್, ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಕೆ.ಎಚ್.ಮುನಿಯಪ್ಪ, ವೈದ್ಯಕೀಯ ಶಿಕ್ಷಣ ಸಚಿವ ಶರಣಪ್ರಕಾಶ್ ಪಾಟೀಲ್, ಉನ್ನತ ಶಿಕ್ಷಣ ಸಚಿವ ಎಂ.ಸಿ.ಸುಧಾಕರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್, ಅರಣ್ಯ ಸಚಿವ ಈಶ್ವರ ಖಂಡ್ರೆ, ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್ ಸೇರಿದಂತೆ ಸಚಿವ ಸಂಪುಟದ ಸಹದ್ಯೋಗಿ ಸಚಿವರು, ಶಾಸಕರು, ಜನಪ್ರತಿನಿಧಿಗಳು ಇದ್ದರು. ಪೊಲೀಸ್ ಇಲಾಖೆ ವತಿಯಿಂದ ಮೃತರ ಗೌರವಾರ್ಥ 3ಸುತ್ತಿನ ಕುಶಾಲತೋಪು ಸಿಡಿಸುವ ಮೂಲಕ ಗೌರವ ವಂದನೆ ಸಲ್ಲಿಸಲಾಯಿತು. ಒಂದು ನಿಮಿಷದ ಮೌನಾಚರಣೆ ಆಚರಿಸಿಲಾಯಿತು. ಮುಖ್ಯಮಂತ್ರಿ ಸಿದ್ದರಾಮಯ್ಯ ರಾಷ್ಟ್ರಧ್ವಜವನ್ನು ಸಚಿವರ ಪತ್ನಿಗೆ ಹಸ್ತಾಂತರಿಸಿದರು.



**ಚಿತ್ರದುರ್ಗದ ಚಳ್ಳಕೆರೆಯಲ್ಲಿ ಸಚಿವ ಡಿ. ಸುಧಾಕರ್ ಅಂತ್ಯಕ್ರಿಯೆ ಸಂದರ್ಭದಲ್ಲಿ ಮೃತರ ಕುಟುಂಬ ಸದಸ್ಯರಿಗೆ ವಿಧಾನಸಭಾಧ್ಯಕ್ಷ ಯು.ಟಿ. ಖಾದರ್, ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ. ಶಿವಕುಮಾರ್ ಮತ್ತಿತರರು ಸಾಂತ್ವನ ಹೇಳಿದರು.**

## ಎಲ್ಲ ಫಲಾನುಭವಿಗಳಿಗೂ ಮೇ 20ರ ಸಮಾವೇಶದಲ್ಲಿ ಸವಲತ್ತು ವಿತರಿಸಿ



**ಸಿದ್ಧತೆ ಮಾಡಿಕೊಳ್ಳುವಂತೆ ಜಿಲ್ಲಾಡಳಿತಕ್ಕೆ ಗೃಹ ಸಚಿವ ಡಾ.ಜಿ. ಪರಮೇಶ್ವರ್ ಸೂಚನೆ**

**ಬೆಂಗಳೂರು, ಮೇ 11:** ತುಮಕೂರಿನಲ್ಲಿ ಮೇ 20ರಂದು ನಡೆಯಲಿರುವ ರಾಜ್ಯ ಸರ್ಕಾರದ ಬೃಹತ್ ಸಾಧನಾ ಸಮಾವೇಶದಲ್ಲಿ ಭಾಗವಹಿಸುವ ಎಲ್ಲಾ ಫಲಾನುಭವಿಗಳಿಗೂ ಅಂದೇ ಸವಲತ್ತುಗಳನ್ನು ವಿತರಿಸಬೇಕು ಎಂದು ಗೃಹ ಸಚಿವರು ಹಾಗೂ ತುಮಕೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಜಿ.ಪರಮೇಶ್ವರ ಅವರು ಜಿಲ್ಲಾಡಳಿತಕ್ಕೆ ಸೂಚಿಸಿದರು.

ಮೇ 20ರಂದು ತುಮಕೂರಿನಲ್ಲಿ ನಡೆಯಲಿರುವ ಕರ್ನಾಟಕ ಸರ್ಕಾರದ 3 ವರ್ಷಗಳ ಸಾಧನೆ–ಸಂಭ್ರಮ ಬೃಹತ್ ಸಮಾವೇಶ ಕಾರ್ಯಕ್ರಮ ಹಾಗೂ ತುಮಕೂರು ಜಿಲ್ಲೆಯ ಕಂದಾಯ ಇಲಾಖೆ ಹಾಗೂ ಇತರ ಫಲಾನುಭವಿಗಳಿಗೆ ಸವಲತ್ತುಗಳನ್ನು ವಿತರಿಸುವ ಕಾರ್ಯಕ್ರಮ ಕುರಿತು ಜಿಲ್ಲಾಧಿಕಾರಿ ಕಚೇರಿಯಲ್ಲಿ ಸೋಮವಾರ ನಡೆದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಭಾಗವಹಿಸುವ ಈ ಬೃಹತ್ ಸಮಾವೇಶದಲ್ಲಿ ಭಾಗವಹಿಸುವ ಫಲಾನುಭವಿಗಳಿಗೆ ವೇದಿಕೆಯಲ್ಲಿ ಸಾಂಕೇತಿಕವಾಗಿ ಸವಲತ್ತು ವಿತರಣೆ ಮಾಡಿದರೂ ಇನ್ನಿತರ ಫಲಾನುಭವಿಗಳಿಗೆ ಅದೇ ವೇದಿಕೆಯಲ್ಲಿ ಸವಲತ್ತುಗಳನ್ನು ಹಾಗೂ ಹಕ್ಕುಪತ್ರಗಳನ್ನು ವಿತರಿಸಲು ಸಿದ್ಧತೆ ಮಾಡಿಕೊಳ್ಳಬೇಕು ಎಂದು ಸಚಿವರು ತಿಳಿಸಿದರು.

ಜಿಲ್ಲೆಯಾದ್ಯಂತ ಎಲ್ಲಾ 10 ತಾಲ್ಲೂಕುಗಳಿಂದ 2 ಲಕ್ಷಕ್ಕೂ ಹೆಚ್ಚು ಫಲಾನುಭವಿಗಳು ಈ ಕಾರ್ಯಕ್ರಮಕ್ಕೆ ಆಗಮಿಸುವ ನಿರೀಕ್ಷೆಯಿದ್ದು, ಈ ಫಲಾನುಭವಿಗಳನ್ನು ಕಾರ್ಯಕ್ರಮಕ್ಕೆ ಕರೆತರಲು ಸಂಬಂಧಿಸಿದ ತಾಲ್ಲೂಕು ಆಡಳಿತ ಸೂಕ್ತ ಕ್ರಮ ಕೈಗೊಳ್ಳಬೇಕು.

ಫಲಾನುಭವಿಗಳನ್ನು ಆಯಾ ತಾಲ್ಲೂಕುಗಳ ಇತರ ಪ್ರದೇಶಗಳಿಂದ ಹೊರಡುವ ಜಾಗದಲ್ಲಿಯೇ ಫಲಾನುಭವಿಗಳಿಗೆ ಬೆಳಗಿನ ಉಪಹಾರ ನಂತರವೇ ಬಸ್ಸುಗಳು ಹೊರಡಬೇಕು. ಈ ಸಂಬಂಧ ಫಲಾನುಭವಿಗಳ ಸುರಕ್ಷತೆ ಹಾಗೂ ಉಪಚಾರದಲ್ಲಿ ಯಾವುದೇ ಕೊರತೆ ಆಗಬಾರದು ಎಂದು ಸಚಿವರು ಅಧಿಕಾರಿಗಳಿಗೆ ಸೂಚಿಸಿದರು.

ಕಾರ್ಯಕ್ರಮದಲ್ಲಿ ಸಚಿವರು, ಹಿರಿಯ ಅಧಿಕಾರಿಗಳು ಆಗಮಿಸುವುದರಿಂದ ಯಾವುದೇ ಕೊರತೆಯಾಗದಂತೆ ಅವರಿಗೆ ಆತಿಥ್ಯದ ವ್ಯವಸ್ಥೆಯಾಗಬೇಕು. ಈಗಾಗಲೇ ತುಮಕೂರು ಮಾದರಿ ಎಂಬ ಪರಿಕಲ್ಪನೆ ರಾಜ್ಯ ಸರ್ಕಾರದ ಮಟ್ಟದಲ್ಲಿ ಜನಜನಿತವಾಗಿದೆ. ಮುಖ್ಯಮಂತ್ರಿಗಳ ಕಾರ್ಯಕ್ರಮ, ರಾಷ್ಟ್ರೀಯ, ಅಂತಾರಾಷ್ಟ್ರೀಯ ಕಾರ್ಯಕ್ರಮಗಳನ್ನು ಸಂಘಟಿಸಿ ಯಶಸ್ವಿಯಾಗಿರುವುದರಿಂದ ರಾಜ್ಯ ಸರ್ಕಾರಕ್ಕೆ ತುಮಕೂರಿನ ಬಗ್ಗೆ ವಿಶೇಷ ಆಸಕ್ತಿ ಹಾಗೂ ವಿಶ್ವಾಸ ಇರುತ್ತದೆ. ಈ ಹಿನ್ನೆಲೆಯಲ್ಲಿ ತುಮಕೂರು ಮಾದರಿ ಎಂಬ ಬಗ್ಗೆ ಯಾವುದೇ ಕೊರತೆಯಿಲ್ಲದಂತೆ ಅತ್ಯಂತ ಶಿಸ್ತುಬದ್ಧವಾಗಿ ಗೊಂದಲಗಳಿಗೆ ಆಸ್ಪದ ನೀಡದಂತೆ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಎಲ್ಲಾ ಅಧಿಕಾರಿಗಳು ಶ್ರಮಿಸಬೇಕು ಎಂದರು.

ಸಭೆಯಲ್ಲಿ ಜಿಲ್ಲಾಧಿಕಾರಿ ಶುಭಾ ಕಲ್ಯಾಣ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಬಿ.ವಿ. ಅಶ್ವಿಜ, ಜಿಲ್ಲಾ ಪೊಲೀಸ್ ಅಧೀಕ್ಷಕ ಅಶೋಕ್ ಕೆ.ವಿ. ಸೇರಿದಂತೆ ಜಿಲ್ಲಾ ಮಟ್ಟದ ಇತರ ಅಧಿಕಾರಿಗಳು ಉಪಸ್ಥಿತರಿದ್ದರು. ಜಿಲ್ಲೆಯ ಇತರೆ ತಾಲ್ಲೂಕುಗಳ ತಹಶೀಲ್ದಾರ್, ತಾಲ್ಲೂಕು ಮಟ್ಟದ ಅಧಿಕಾರಿಗಳು ವಿಡಿಯೋ ಕಾನ್ಫರೆನ್ಸ್ ಮೂಲಕ ಹಾಜರಾಗಿದ್ದರು.



**ಉತ್ತರಾಖಂಡದ ಪ್ರಮುಖ ಯಾತ್ರಾಸ್ಥಳಗಳಿಗೆ ಸಂಪರ್ಕ ಕಲ್ಪಿಸುವ ಹುಬ್ಬಳ್ಳಿ – ಹೃಷಿಕೇಶ್ ಸಾಪ್ತಾಹಿಕ ಎಕ್ಸ್‌ಪ್ರೆಸ್ ರೈಲಿಗೆ ಹುಬ್ಬಳ್ಳಿಯ ಸಿದ್ಧಾರೂಢ ನಿಲ್ದಾಣದಲ್ಲಿ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಸೋಮವಾರ ಹಸಿರು ನಿಶಾನೆ ತೋರಿದರು.**

## ಪ್ರತಿಯೊಬ್ಬರೂ ಆರೋಗ್ಯದಿಂದ ಇದ್ದಾಗ ಮಾತ್ರ ವಿಕಸಿತ ಭಾರತ ನಿರ್ಮಾಣ ಸಾಧ್ಯ



**ಬೆಂಗಳೂರು, ಮೇ 11:** ಯೋಗಾಸನ ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸುತ್ತವೆ. ಪ್ರತಿಯೊಬ್ಬ ನಾಗರಿಕ ಆರೋಗ್ಯವಂತನಾಗಿದ್ದರೆ ಮಾತ್ರ ವಿಕಸಿತ ಭಾರತ ನಿರ್ಮಾಣ ಸಾಧ್ಯ ಎಂದು ಕೇಂದ್ರ ಸೂಕ್ಷ್ಮ ಹಾಗೂ ಸಣ್ಣ ಕೈಗಾರಿಕಾ ಖಾತೆ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ಹೇಳಿದ್ದಾರೆ. ನಗರದಲ್ಲಿ ಅಟಲ್ ಬಿಹಾರಿ ವಾಜಪೇಯಿ ಯೋಗ ಕೇಂದ್ರವನ್ನು ಉದ್ಘಾಟಿಸಿ ಮಾತನಾಡಿ, ಶೋಭಾ ಕರಂದ್ಲಾಜೆ, ಯೋಗ ಅಂತಾರಾಷ್ಟ್ರೀಯ ಮಟ್ಟದಲ್ಲಿ ಪ್ರಸಿದ್ಧಿ ಪಡೆದಿದೆ. ಇಂದಿನ ಒತ್ತಡದ ಬದುಕಿನಲ್ಲಿ, ವಿಶೇಷವಾಗಿ ಮಹಿಳೆಯರು ಮತ್ತು ಯುವಜನರಲ್ಲಿ ಆರೋಗ್ಯದ ಸಮಸ್ಯೆಗಳು ಹೆಚ್ಚಾಗುತ್ತಿವೆ. ಈ ಸಮಸ್ಯೆಗಳಿಗೆ ಯೋಗವು ಅತ್ಯುತ್ತಮ ಔಷಧವಾಗಿದೆ ಎಂದರು.

## ಸರ್ಕಾರಿ ನೌಕರರಿಗೆ ತುಟ್ಟಿಭತ್ಯೆ ಹೆಚ್ಚಳ: ನೌಕರರ ಸಂಘ ಸ್ವಾಗತ



**ಬೆಂಗಳೂರು, ಮೇ 11:** ರಾಜ್ಯ ಸರ್ಕಾರಿ ನೌಕರರ ತುಟ್ಟಿಭತ್ಯೆ(ಡಿಎ)ಯನ್ನು ಶೇ.1.50ರಷ್ಟು ಹೆಚ್ಚಿಸಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ. 2026 ಜ.1ರಿಂದ ಅನ್ವಯವಾಗುವಂತೆ ಪ್ರಸ್ತುತ ಮೂಲ ವೇತನದ ಶೇ.14.25 ರಿಂದ ಶೇ.15.75ಕ್ಕೆ ಪರಿಷ್ಕರಿಸಿ ಆದೇಶ ಹೊರಡಿಸಲಾಗಿದೆ. ಸರ್ಕಾರಿ ನೌಕರರು ವೇತನ ಪರಿಷ್ಕರಣೆ ಮಾಡುವ ಸಂಬಂಧ ವೇತನ ಆಯೋಗ ರಚನೆ ಮಾಡಬೇಕೆಂದು ಸಿಎಂಗೆ ಮನವಿ ಮಾಡಿದ್ದರು. ಇದರ ಬೆನ್ನಲ್ಲೇ ಸರ್ಕಾರ ನೌಕರರ ತುಟ್ಟಿಭತ್ಯೆ ಪರಿಷ್ಕರಣೆ ಮಾಡಿರುವುದು ವಿಶೇಷವಾಗಿದೆ. ಈ ಮಹತ್ವದ ನಿರ್ಧಾರವನ್ನು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘವು ಸ್ವಾಗತಿಸಿದೆ. ತುಟ್ಟಿಭತ್ಯೆ ಹೆಚ್ಚಳ ಮಾಡಿರುವುದು ಸಂತಸದ ವಿಷಯ. ಇದಕ್ಕಾಗಿ ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ. ಶಿವಕುಮಾರ್ ಹಾಗೂ ಆರ್ಥಿಕ ಇಲಾಖೆಯ ಉನ್ನತ ಅಧಿಕಾರಿಗಳಿಗೆ ಸಂಘದ ಪರವಾಗಿ ರಾಜ್ಯಾಧ್ಯಕ್ಷ ಸಿ.ಎಸ್.ಷಡಾಕ್ಷರಿ ಅವರು ಅಭಿನಂದನೆ ಸಲ್ಲಿಸಿದ್ದಾರೆ.



**ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಕುಟುಂಬ ಸದಸ್ಯರೊಂದಿಗೆ ಶ್ರೀಕ್ಷೇತ್ರ ಧರ್ಮಸ್ಥಳಕ್ಕೆ ಭೇಟಿ ನೀಡಿ, ಮಂಜುನಾಥ ಸ್ವಾಮಿಗೆ ಪೂಜೆ ಸಲ್ಲಿಸಿದರು. ಇದೇ ಸಂದರ್ಭದಲ್ಲಿ ಧರ್ಮಾಧಿಕಾರಿ ಡಿ.ವೀರೇಂದ್ರ ಹೆಗ್ಗಡೆ ಹಾಗೂ ಮಾತೃಶ್ರೀ ಹೇಮಾವತಿ ಹೆಗ್ಗಡೆ ಅವರ ಆಶೀರ್ವಾದ ಪಡೆದರು. ಸಂಸದ ಕ್ಯಾ.ಬ್ರಿಜೇಶ್ ಚೌಟ, ಶಾಸಕರಾದ ಹರೀಶ್ ಪೂಂಜ, ಪ್ರತಾಪ್‌ಸಿಂಹ ನಾಯಕ್ ಇತರರಿದ್ದರು.**



## ಸಂಭ್ರಮದ ವಸಂತೋತ್ಸವ: ಗೋಪಾಲಕೃಷ್ಣ ಸ್ವಾಮಿಗೆ ಕಲಶಾಭಿಷೇಕ

ಮುಂಬಯಿ, ಮೇ 11: ಗೋಪಾಲಕೃಷ್ಣ ಪಬ್ಲಿಕ್ ಟ್ರಸ್ಟ್, ಗೋಕುಲ, ಸಾಯನ್ ಬಿಎಸ್‌ಕೆಬಿ ಅಸೋಸಿಯೇಶನ್ ಸಹಯೋಗದೊಂದಿಗೆ ಶ್ರೀ ಗೋಪಾಲಕೃಷ್ಣ ದೇವರ ಪ್ರತಿಷ್ಠಾಪನಾ ದಿನವನ್ನು, ಶ್ರೀ ದೇವರಿಗೆ ಕಲಶಾಭಿಷೇಕ, ರಂಗಪೂಜೆ, ಪಲ್ಲಕ್ಕಿ ಉತ್ಸವ ಹಾಗೂ ವಸಂತೋತ್ಸವದೊಂದಿಗೆ ರವಿವಾರ ವಿಜೃಂಭಣೆಯಿಂದ ಆಚರಿಸಲಾಯಿತು.

ಪ್ರತಿಷ್ಠಾದಿನದ ಅಂಗವಾಗಿ ಪ್ರಾತಃಕಾಲ ದೇವಾಲಯ ಸಭಾಗೃಹದಲ್ಲಿ, ಗೌ.ಕಾರ್ಯದರ್ಶಿ ಯಜಮಾನತ್ವದಲ್ಲಿ, ವೇದಮೂರ್ತಿಗಳಾದ ದರೆಗುಡ್ಡೆ ಶ್ರೀನಿವಾಸ್ ಭಟ್, ವಾಸುದೇವ ಭಟ್ ರವರ ಪ್ರಧಾನ ಪೌರೋಹಿತ್ಯದಲ್ಲಿ ದೇವತಾ ಪ್ರಾರ್ಥನೆ, ನವಕ ಪ್ರಧಾನ ಹೋಮದೊಂದಿಗೆ ಧಾರ್ಮಿಕ ಕಾರ್ಯಕ್ರಮಗಳು ಆರಂಭವಾಗಿ, ವೇದಮೂರ್ತಿಗಳಾದ ದರೆಗುಡ್ಡೆ ಶ್ರೀನಿವಾಸ್ ಭಟ್ ಮತ್ತು ಗಣೇಶ್ ಭಟ್ ಸಹ ಪುರೋಹಿತ ವರ್ಗದವರೊಂದಿಗೆ ಶ್ರೀ ದೇವರ ಕಲಶಾಭಿಷೇಕವನ್ನು ವಿಧಿವತ್ತಾಗಿ ನೆರವೇರಿಸಿದರು. ನಂತರ ಶ್ರೀ ದೇವರ ಪುಷ್ಪಾಲಂಕಾರ, ವಿಷ್ಣು ಸಹಸ್ರನಾಮ ಪಠನೆ, ಮಹಾಪೂಜೆಯು ವೈಭವದಿಂದ ಜರಗಿತು. ಸೇವಾರ್ಥಿಗಳಿಗೆ ಪ್ರಸಾದ ವಿತರಣೆ, ನೆರೆದ ಭಕ್ತಾದಿಗಳಿಗೆಲ್ಲಾ ತೀರ್ಥ ಪ್ರಸಾದ ವಿತರಣೆ ಹಾಗೂ ಅನ್ನ ಸಂತರ್ಪಣೆ ನೆರವೇರಿತು.

ಸಾಂಸ್ಕೃತಿಕ ಕಾರ್ಯಕ್ರಮದ ಅಂಗವಾಗಿ ಅಪರಾಹ್ನ ಗೋಕುಲ ಭಜನಾ ಮಂಡಳಿ ಹಾಗೂ ವಲಯದ ಭಜನಾ ಮಂಡಳಿಗಳಿಂದ ಹರಿನಾಮ ಸಂಕೀರ್ತನಾ ಸೇವೆ ಜರುಗಿತು. ನಂತರ ಗೋಪಾಲಕೃಷ್ಣ ದೇವಾಲಯದ ಸಭಾಗೃಹದಲ್ಲಿ ನಾಟ್ಯ ವೇದಾಲಯ, ಬೆಂಗಳೂರು, ಇದರ ಗುರು ವಿದುಷಿ ಚಿತ್ರಾ ವಿನೋದ್ ಅವರ ಶಿಷ್ಯವೃಂದವು ನೃತ್ಯಾರ್ಪಣ, ಭರತನಾಟ್ಯ ನೃತ್ಯ ಸೇವೆ ಪ್ರಸ್ತುತಗೊಳಿತು.

ಪ್ರಸಿದ್ಧ ಸ್ಯಾಕ್ಸೋಫೋನ್ ವಾದಕ ಹರೀಶ್ ಪೂಜಾರಿ ಬಳಗದವರಿಂದ ಸ್ಯಾಕ್ಸೋಫೋನ್ ವಾದನದೊಂದಿಗೆ ಸಂಜೆ ನಿತ್ಯಪೂಜೆ. ನಂತರ ದೀಪೋತ್ಸವದೊಂದಿಗೆ ರಂಗಪೂಜೆ, ಪಲ್ಲಕ್ಕಿ ಉತ್ಸವ, ತೊಟ್ಟಿಲುಪೂಜೆ, ವಸಂತಪೂಜೆ, ವೇದಮೂರ್ತಿ ಗಣೇಶ್ ಭಟ್ ನೇತೃತ್ವದಲ್ಲಿ ಅಷ್ಟಾವಧಾನ ಸೇವೆ ಇತ್ಯಾದಿ ಧಾರ್ಮಿಕ ಕಾರ್ಯಕ್ರಮಗಳು ನೆರವೇರಿದವು. ಅಷ್ಟಾವಧಾನ ಸೇವೆಯ ಅಂಗವಾಗಿ ಅಶ್ವಿನಿ ಹೊಳ್ಳ ಅವರಿಂದ ಸಂಗೀತ, ಸಹನಾ ಭಾರದ್ವಾಜ್ ಅವರಿಂದ ಯಕ್ಷಗಾನ ಹಾಗೂ ಅನನ್ಯ ರಾವ್ ಅವರಿಂದ ನೃತ್ಯ ಸೇವೆ ಜರುಗಿತು.

ಬಿಎಸ್‌ಕೆಬಿಎ ಅಧ್ಯಕ್ಷ ಡಾ| ಸುರೇಶ್ ಎಸ್. ರಾವ್ ಅವರ ಮಾರ್ಗದರ್ಶನ ಹಾಗೂ ನೇತೃತ್ವದಲ್ಲಿ ಜರಗಿದ ಇಡೀ ದಿನದ ವರ್ಧಂತಿ ಉತ್ಸವದಲ್ಲಿ ಗೌ. ಕಾರ್ಯದರ್ಶಿ ಎ.ಪಿ.ಕೆ.ಪೋತಿ, ಕೋಶಾಧಿಕಾರಿ ಗಣೇಶ್ ಭಟ್, ಜೊತೆ ಕಾರ್ಯದರ್ಶಿ ಪ್ರಶಾಂತ್ ಹೆರ್ಲೆ, ಮಾಜಿ ಉಪಾಧ್ಯಕ್ಷ ವಾಮನ್ ಹೊಳ್ಳ, ಮಾಜಿ ಕೋಶಾಧಿಕಾರಿ ಹರಿದಾಸ್ ಭಟ್, ಗೋಪಾಲಕೃಷ್ಣ ಪಬ್ಲಿಕ್ ಟ್ರಸ್ಟ್ ವಿಶ್ವಸ್ತರು ಶೈಲಿನಿ ರಾವ್, ಉಭಯ ಸಂಸ್ಥೆಗಳ ಕಾರ್ಯಕಾರಿ ಸಮಿತಿ ಸದಸ್ಯರುಗಳ ಸಹಿತ ನೂರಾರು ಭಕ್ತರು ಉಪಸ್ಥಿತರಿದ್ದರು.

## ಕೆಎಎಸ್ ಅಧಿಕಾರಿಗಳ ವರ್ಗ

**ಬೆಂಗಳೂರು, ಮೇ 11:** ಸಾರ್ವಜನಿಕ ಹಾಗೂ ಆಡಳಿತಾತ್ಮಕ ಹಿತದೃಷ್ಟಿಯಿಂದ ಕೆಲವು ಕೆಎಎಸ್ ಅಧಿಕಾರಿಗಳನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ವರ್ಗಾಯಿಸಿ ಸರ್ಕಾರ ಆದೇಶಿಸಿದೆ. ಸ್ಥಳ ನಿರೀಕ್ಷಣೆಯಲ್ಲಿದ್ದ ಡಾ. ಪಿ.ಶಿವರಾಜು, (ಕೆಎಎಸ್ ಸೂಪರ್‌ಟೈಮ್ ಸ್ಕೇಲ್) ಅವರನ್ನು ಕವಿತಾ ರಾಜಾರಾಂ ಅವರಿಂದ ತೆರವಾದ ಮೈಸೂರಿನ ಪ್ರಾದೇಶಿಕ ಆಯುಕ್ತರ ಕಚೇರಿಯ ಹೆಚ್ಚುವರಿ ಆಯುಕ್ತರನ್ನಾಗಿ ನೇಮಿಸಲಾಗಿದೆ. ರಾಜ್ಯ ಗ್ರಾಮೀಣ ಜೀವನೋಪಾಯ ಅಭಿಯಾನ ಕೌಶಲಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಮುಖ್ಯ ಕಾರ್ಯಾಚರಣೆ ಅಧಿಕಾರಿ ಕೆ. ಅನ್ನಪೂರ್ಣ ಅವರನ್ನು ಬಿ. ಶೋಭಾ ಅವರಿಂದ ತೆರವಾಗಿದ್ದ ಬೆಂಗಳೂರಿನ ಕರ್ನಾಟಕ ಸರ್ಕಾರಿ ವಿಮಾ ಇಲಾಖೆ ನಿರ್ದೇಶಕರನ್ನಾಗಿ ನೇಮಿಸಲಾಗಿದೆ. ಬಿ. ಶೋಭಾ ಅವರನ್ನು ಜಂಟಿ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರದ ಸಚಿವಾಲಯ ಹುದ್ದೆಗೆ ನೇಮಿಸಲಾಗಿದೆ. ಜಂಟಿ ಕಾರ್ಯದರ್ಶಿಯಾಗಿದ್ದ ಡಾ. ವೆಂಕಟೇಶ್‌ಮೂರ್ತಿ ಅವರನ್ನು ಸಿಬ್ಬಂದಿ ಆಡಳಿತ ಸುಧಾರಣೆ (ರಾಜ್ಯ ಶಿಷ್ಟಾಚಾರ) ಇಲಾಖೆ ಜಂಟಿ ಕಾರ್ಯದರ್ಶಿ ಹುದ್ದೆಗೆ ನೇಮಿಸಲಾಗಿದೆ. ರಾಮಚಂದ್ರ ಗಡದೆ, ವಿಶೇಷ ಭೂಸ್ವಾಧೀನಾಧಿಕಾರಿ, ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರಿ, ಕಲಬುರಗಿ ಇವರನ್ನು ರಾಜೀವಗಾಂಧಿ ವಸತಿ ನಿಗಮದ ಪ್ರಧಾನ ವ್ಯವಸ್ಥಾಪಕ ಹುದ್ದೆಗೆ ನೇಮಿಸಿ ವರ್ಗಾಯಿಸಲಾಗಿದೆ.

## ಉಪನಗರ ರೈಲು ಯೋಜನೆ: 1513.75 ಕೋಟಿ ರೂ. ಮೊತ್ತದ ಕಾರ್ಯಾದೇಶ

**153 ಮೆಟ್ರೋ ಕೋಚ್‌ಗಳ ಖರೀದಿಗೆ ಐಸಿಎಫ್ ಜೊತೆ ಒಪ್ಪಂದ**




**ಬೆಂಗಳೂರು, ಮೇ 11:** ನಗರದ ಸಂಚಾರ ದಟ್ಟಣೆಗೆ ಮುಕ್ತಿ ನೀಡಲಿರುವ ಬಹುನಿರೀಕ್ಷಿತ ಬೆಂಗಳೂರು ಉಪನಗರ ಸಾರಿಗೆ ಯೋಜನೆಗೆ ಮಹತ್ವದ ವೇಗ ದೊರಕಿದೆ. ಯೋಜನೆಯ ಕಾರಿಡಾರ್–2 ಮತ್ತು ಕಾರಿಡಾರ್–4ಕ್ಕೆ ಅಗತ್ಯವಿರುವ 153 ಹವಾನಿಯಂತ್ರಿತ 'ಬ್ರಾಡ್–ಗೇಜ್ ಮೆಟ್ರೋ ಮಾದರಿಯ ಬೋಗಿ'ಗಳನ್ನು ಪೂರೈಸುವಂತೆ ಚೆನ್ನೈನ ಇಂಟೆಗ್ರಲ್ ಕೋಚ್ ಫ್ಯಾಕ್ಟರಿಗೆ ಕೆರೈಡ್ ಸಂಸ್ಥೆಯು ಅಧಿಕೃತವಾಗಿ ಕಾರ್ಯಾದೇಶ ನೀಡಿದೆ.

ಈ ಬೃಹತ್ ಕಾರ್ಯಾದೇಶದ ಒಟ್ಟು ಮೊತ್ತ 1513.75 ಕೋಟಿ ರೂ.ಗಳಾಗಿದ್ದು, ಭವಿಷ್ಯದಲ್ಲಿ ಬೆಂಗಳೂರು ಹಾಗೂ ಸುತ್ತಮುತ್ತಲಿನ ಜನತೆಗೆ ಇದೊಂದು ಅತ್ಯಂತ ವಿಶ್ವಾಸಾರ್ಹ ಮತ್ತು ಸುಸ್ಥಿರ ಸಾರಿಗೆ ವ್ಯವಸ್ಥೆಯಾಗಿ ಹೊರಹೊಮ್ಮಲಿದೆ.

ಮೇ 6ರಂದು ನೀಡಲಾದ ಈ ಗುತ್ತಿಗೆಯ ಅನ್ವಯ, ಮುಂದಿನ 18 ತಿಂಗಳೊಳಗೆ ಐಸಿಎಫ್ ಸಂಸ್ಥೆಯು ಬೋಗಿಗಳ ಪೂರೈಕೆಯನ್ನು ಕಡ್ಡಾಯವಾಗಿ ಆರಂಭಿಸಬೇಕಿದೆ. ಕಾರಿಡಾರ್–2ರ ವ್ಯಾಪ್ತಿಗೆ ಬರುವ ಚಿಕ್ಕಬಾಣಾವರ–ಯಶವಂತಪುರ ಮಾರ್ಗವನ್ನು ನಿಗದಿತ ಸಮಯದಲ್ಲಿಯೇ ಸಾರ್ವಜನಿಕ ಸೇವೆಗೆ ಮುಕ್ತಗೊಳಿಸುವ ದೃಷ್ಟಿಯಿಂದ ಈ ಗಡುವು ವಿಧಿಸಲಾಗಿದೆ. ಅಲ್ಲದೆ, ಡಿಸೆಂಬರ್ 2025ರಲ್ಲಿ ನಡೆದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಪ್ರಧಾನಮಂತ್ರಿಯವರು ಸೂಚಿಸಿದ್ದ ಕಾಲಮಿತಿಗೂ ಇದು ಪೂರಕವಾಗಿದೆ ಎಂದು ಕೆ–ರೈಡ್ ಸ್ಪಷ್ಟಪಡಿಸಿದೆ. ಶೀಘ್ರದಲ್ಲೇ ಉಭಯ ಸಂಸ್ಥೆಗಳ ನಡುವೆ ಅಧಿಕೃತ ಒಡಂಬಡಿಕೆಗೆ ಸಹಿ ಬೀಳಲಿದೆ.


**ಕಾರ್ಯಾದೇಶದ ಪ್ರಮುಖ ಅಂಶಗಳು:** ಚೆನ್ನೈನ ಐಸಿಎಫ್‌ಗೆ ನೀಡಲಾದ ಈ ಸಮಗ್ರ ಗುತ್ತಿಗೆಯು ಕೇವಲ ಬೋಗಿಗಳ ನಿರ್ಮಾಣವನ್ನಷ್ಟೇ ಅಲ್ಲದೆ, ಈ ಕೆಳಗಿನ ಜವಾಬ್ದಾರಿಗಳನ್ನು ಒಳಗೊಂಡಿದೆ: ರೈಲು ಬೋಗಿಗಳ ವಿನ್ಯಾಸ ಮತ್ತು ಸಂಪೂರ್ಣ ಉತ್ಪಾದನೆ. ಗುಣಮಟ್ಟ ಪರಿಶೀಲನೆ, ಜೋಡಣೆ, ಪರೀಕ್ಷೆ ಹಾಗೂ ಕಾರ್ಯಾರಂಭ. ಆರ್.ಡಿ.ಎಸ್.ಒ ನಿಂದ ಅಗತ್ಯವಿರುವ ಶಾಸನಬದ್ಧ ಅನುಮೋದನೆಗಳ ಪಡೆಯುವಿಕೆ. ಸಿಗ್ನಲಿಂಗ್, ವಿದ್ಯುತ್ ಪೂರೈಕೆ ಹಾಗೂ ಪ್ಲಾಟ್‌ಫಾರ್ಮ್ ಸ್ಕ್ರೀನ್‌ಡೋರ್ ಗುತ್ತಿಗೆಗಳೊಂದಿಗೆ ಸುಗಮ ಸಮನ್ವಯ. ಕಾರಿಡಾರ್‌ಗಳ ಕಾರ್ಯಾಚರಣೆಗೆ ಕಡ್ಡಾಯವಾಗಿರುವ ರಾಮ್ಸ್‌ಗಳ (ವಿಶ್ವಾಸಾರ್ಹತೆ, ಲಭ್ಯತೆ, ನಿರ್ವಹಣೆ ಮತ್ತು ಸುರಕ್ಷತೆ) ಮಾನದಂಡಗಳ ಪೂರೈಕೆ.



**ಬೆಂಗಳೂರು ಉಪನಗರ ರೈಲು ಯೋಜನೆಯ ಪಾಲಿಗೆ ಈ ಕಾರ್ಯಾದೇಶವು ಒಂದು ಐತಿಹಾಸಿಕ ಮೈಲಿಗಲ್ಲಾಗಿದೆ. ಐಸಿಎಫ್ ಜೊತೆಗಿನ ಈ ಪಾಲುದಾರಿಕೆಯ ಮೂಲಕ, ಕಾರಿಡಾರ್ 2 ಮತ್ತು 4ರ ಟ್ರ್ಯಾಕ್ ಮತ್ತು ವ್ಯವಸ್ಥೆಗಳ ಮೂಲಸೌಕರ್ಯ ಕಾಮಗಾರಿ ಪೂರ್ಣಗೊಳ್ಳುವಷ್ಟರಲ್ಲಿ, ಅಗತ್ಯವಾಗಿರುವ ರೈಲು ಬೋಗಿಗಳು ಲಭ್ಯವಿರುವುದನ್ನು ನಾವು ಖಚಿತಪಡಿಸಿಕೊಳ್ಳುತ್ತಿದ್ದೇವೆ. ಈ ಸಮನ್ವಯತೆಯು ಬೆಂಗಳೂರಿನ ನಾಗರಿಕರಿಗೆ ವಿಶ್ವದರ್ಜೆಯ ಉಪನಗರ ರೈಲ್ವೆಜಾಲವನ್ನು ಯಾವುದೇ ವಿಳಂಬವಿಲ್ಲದೆ ತಲುಪಿಸಲು, ಸುಸ್ಥಿರ ನಗರ ಸಾರಿಗೆಯ ದೃಷ್ಟಿಕೋನವನ್ನು ಈಡೇರಿಸಲು ಹಾಗೂ ನಗರದ ಟ್ರಾಫಿಕ್ ಸಮಸ್ಯೆಯನ್ನು ತಗ್ಗಿಸಲು ನೆರವಾಗಲಿದೆ**

**– ಲಕ್ಷ್ಮಣ್ ಸಿಂಗ್, ವ್ಯವಸ್ಥಾಪಕ ನಿರ್ದೇಶಕರು ಎಂ.ಡಿ. ಕೆ–ರೈಡ್**

# ಮೇ 15–20 ರಿಂದ ಪ್ರಧಾನಿ ಮೋದಿ ಯುಎಇ, ನೆದರ್ಲೆಂಡ್ಸ್ ಸ್ವೀಡನ್, ನಾರ್ವೇ, ಇಟಲಿಗೆ ಭೇಟಿ: ದ್ವಿಪಕ್ಷೀಯ ಚರ್ಚೆ



**ನವದೆಹಲಿ, ಮೇ 11 :** ಪ್ರಧಾನಿ ನರೇಂದ್ರ ಮೋದಿ ಅವರು ಮೇ 15–20 ರಿಂದ ಯುಎಇ, ನೆದರ್ಲೆಂಡ್ಸ್, ಸ್ವೀಡನ್, ನಾರ್ವೇ ಮತ್ತು ಇಟಲಿಯನ್ನು ಒಳಗೊಂಡ ಐದು ರಾಷ್ಟ್ರಗಳ ಭೇಟಿಯನ್ನು ಕೈಗೊಳ್ಳಲಿದ್ದಾರೆ. ಇತ್ತೀಚೆಗೆ ಮುಕ್ತಾಯಗೊಂಡ ಭಾರತ–ಇಯು ಮುಕ್ತ ವ್ಯಾಪಾರ ಒಪ್ಪಂದದ ಹಿನ್ನೆಲೆಯಲ್ಲಿ ಯುರೋಪ್‌ನೊಂದಿಗೆ ಭಾರತದ ಆರ್ಥಿಕ ಪಾಲುದಾರಿಕೆಯನ್ನು ಇನ್ನಷ್ಟು ಬಲಪಡಿಸಲು ಇದು ಪ್ರಯತ್ನಿಸಲಿದೆ. ಭೇಟಿಯ ಮೊದಲ ಹಂತದಲ್ಲಿ, ಪ್ರಧಾನಿ ನರೇಂದ್ರ ಮೋದಿ ಅವರು ಮೇ 15 ರಂದು ಯುನೈಟೆಡ್ ಅರಬ್ ಎಮಿರೇಟ್ಸ್‌ಗೆ ಭೇಟಿ ನೀಡಲಿದ್ದಾರೆ, ಅಲ್ಲಿ ಅವರು ಯುಎಇ ಅಧ್ಯಕ್ಷ ಶೇಖ್ ಮೊಹಮ್ಮದ್ ಬಿನ್ ಜಾಯೆದ್ ಅಲ್ ನಹ್ಯಾನ್ ಅವರನ್ನು ಭೇಟಿ ಮಾಡಲಿದ್ದಾರೆ. ಇಬ್ಬರು ನಾಯಕರು ದ್ವಿಪಕ್ಷೀಯ ವಿಷಯಗಳ ಬಗ್ಗೆ, ವಿಶೇಷವಾಗಿ ಇಂಧನ ಸಹಕಾರ, ಹಾಗೂ ಪರಸ್ಪರ ಆಸಕ್ತಿಯ ಪ್ರಾದೇಶಿಕ ಮತ್ತು ಅಂತರರಾಷ್ಟ್ರೀಯ ವಿಷಯಗಳ ಕುರಿತು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಳ್ಳಲು ಅವಕಾಶವನ್ನು ಹೊಂದಿರುತ್ತಾರೆ. ತಮ್ಮ ಭೇಟಿಯ ಎರಡನೇ ಹಂತದಲ್ಲಿ, ನೆದರ್ಲೆಂಡ್ಸ್ ಪ್ರಧಾನಿ ರಾಬ್ ಜೆಟ್ಟನ್ ಅವರ ಆಹ್ವಾನದ ಮೇರೆಗೆ, ಪ್ರಧಾನಿ ಮೋದಿ ಮೇ 15–17 ರವರೆಗೆ ನೆದರ್ಲೆಂಡ್ಸ್‌ಗೆ ಅಧಿಕೃತ ಭೇಟಿ ನೀಡಲಿದ್ದಾರೆ. 2017 ರಲ್ಲಿ ಪ್ರಧಾನಿಯವರು ನೆದರ್ಲೆಂಡ್ಸ್‌ಗೆ ಭೇಟಿ ನೀಡಿದ ನಂತರ ಇದು ಅವರ ಎರಡನೇ ಭೇಟಿಯಾಗಲಿದೆ.

ಈ ಭೇಟಿಯ ಸಮಯದಲ್ಲಿ, ಪ್ರಧಾನಿಯವರು ರಾಜ ವಿಲ್ಲೆಮ್–ಅಲೆಕ್ಸಾಂಡರ್ ಮತ್ತು ರಾಣಿ ಮ್ಯಾಕ್ಸಿಮಾ ಅವರನ್ನು ಭೇಟಿ ಮಾಡಲಿದ್ದಾರೆ ಮತ್ತು ಪ್ರಧಾನಿ ರಾಬ್ ಜೆಟ್ಟನ್ ಅವರೊಂದಿಗೆ ಮಾತುಕತೆ ನಡೆಸಲಿದ್ದಾರೆ. ಈ ಭೇಟಿಯ ಮೂರನೇ ಹಂತಕ್ಕಾಗಿ, ಸ್ವೀಡನ್ ಪ್ರಧಾನಿ ಉಲ್ಫ್ ಕ್ರಿಸ್ಟರ್ಸನ್ ಅವರ ಆಹ್ವಾನದ ಮೇರೆಗೆ, ಪ್ರಧಾನಿ ಮೋದಿ ಅವರು ಮೇ 17–18 ರಂದು ಸ್ವೀಡನ್‌ನ ಗೋಥೆನ್‌ಬರ್ಗ್‌ಗೆ ಪ್ರಯಾಣಿಸಲಿದ್ದಾರೆ.

ಪ್ರಧಾನಿ ಮೋದಿ ಅವರು ಈ ಹಿಂದೆ 2018 ರಲ್ಲಿ ಮೊದಲ ಬಾರಿಗೆ ಭಾರತ–ನಾರ್ಡಿಕ್ ಶೃಂಗಸಭೆಗಾಗಿ ಸ್ವೀಡನ್‌ಗೆ ಭೇಟಿ ನೀಡಿದ್ದರು. ದ್ವಿಪಕ್ಷೀಯ ಸಂಬಂಧಗಳ ಸಂಪೂರ್ಣ ವ್ಯಾಪ್ತಿಯನ್ನು ಪರಿಶೀಲಿಸಲು ಮತ್ತು ದ್ವಿಪಕ್ಷೀಯ ವ್ಯಾಪಾರವನ್ನು ಹೆಚ್ಚಿಸಲು ಸಹಕಾರದ ಹೊಸ ಮಾರ್ಗಗಳನ್ನು ಅನ್ವೇಷಿಸಲು ಪ್ರಧಾನಿ ಮೋದಿ ಅವರು ಪ್ರಧಾನಿ ಕ್ರಿಸ್ಟರ್ಸನ್ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ, ಇದು 7.75 ಬಿಲಿಯನ್ ಅಮೆರಿಕನ್ ಡಾಲರ್ (2025) ತಲುಪಿದೆ ಮತ್ತು ಭಾರತಕ್ಕೆ 2.825 ಶತಕೋಟಿ ಡಾಲರ್ (2000 – 2025) ತಲುಪಿರುವ ಸ್ವೀಡಿಷ್ ಎಫ್‌ಡಿಐ, ಜೊತೆಗೆ ಹಸಿರು ಪರಿವರ್ತನೆ, ಕೃತಕ ಬುದ್ಧಿಮತ್ತೆ, ಉದಯೋನ್ಮುಖ ತಂತ್ರಜ್ಞಾನಗಳು, ನವೋದ್ಯಮಗಳು, ಸ್ಥಿತಿಸ್ಥಾಪಕ ಪೂರೈಕೆ ಸರಪಳಿ, ರಕ್ಷಣೆ, ಬಾಹ್ಯಾಕಾಶ, ಹವಾಮಾನ ಕ್ರಿಯೆ ಮತ್ತು ಜನರಿಂದ ಜನರಿಗೆ ಸಂಬಂಧಗಳಲ್ಲಿ ಸಹಯೋಗವನ್ನು ಹೊಂದಿದೆ.

### ಬಂಗಾಳದ ಗಡಿಯಲ್ಲಿ ನುಸುಳುವಿಕೆಗೆ ಸುವೇಂದು ಸರ್ಕಾರ ಬ್ರೇಕ್

# ಮೊದಲ ಸಂಪುಟ ಸಭೆಯಲ್ಲೇ ಬಿಎಸ್‌ಎಫ್‌ಗೆ ಭೂಮಿ



**ಕೋಲ್ಕತ್ತಾ, ಮೇ 11:** : ಪಶ್ಚಿಮ ಬಂಗಾಳದ ನೂತನ ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕರಿಸಿದ ಸುವೇಂದು ಅಧಿಕಾರಿ ತಮ್ಮ ಮೊದಲ ಸಚಿವ ಸಂಪುಟ ಸಭೆಯಲ್ಲೇ ರಾಜ್ಯದ ಗಡಿ ಭದ್ರತೆಗೆ ಸಂಬಂಧಿಸಿದಂತೆ ಐತಿಹಾಸಿಕ ನಿರ್ಧಾರ ಕೈಗೊಂಡಿದ್ದಾರೆ. ಭಾರತ–ಬಾಂಗ್ಲಾದೇಶ ಗಡಿಯಲ್ಲಿ ಬಾಕಿ ಉಳಿದಿರುವ ಬೇಲಿ ನಿರ್ಮಾಣಕ್ಕಾಗಿ ಅಗತ್ಯವಿರುವ ಭೂಮಿಯನ್ನು ಮುಂದಿನ 45 ದಿನಗಳಲ್ಲಿ ಗಡಿ ಭದ್ರತಾ ಪಡೆಗೆ ಹಸ್ತಾಂತರಿಸುವುದಾಗಿ ಅವರು ಘೋಷಿಸಿದ್ದಾರೆ. ಚುನಾವಣಾ ಪ್ರಚಾರದ ಸಂದರ್ಭದಲ್ಲಿ ಬಿಜೆಪಿ ನೀಡಿದ್ದ ಪ್ರಮುಖ ಭರವಸೆಗಳಲ್ಲಿ ಗಡಿ ಬೇಲಿ ನಿರ್ಮಾಣವೂ ಒಂದಾಗಿತ್ತು. ಅಧಿಕಾರಕ್ಕೆ ಬಂದ ಕೂಡಲೇ ಈ ಭರವಸೆಯನ್ನು ಈಡೇರಿಸಲು ಮುಂದಾಗಿರುವ ಸರ್ಕಾರ, ಅಕ್ರಮ ನುಸುಳುವಿಕೆ ಮತ್ತು ಕಳ್ಳಸಾಗಣೆಯನ್ನು 100% ತಡೆಯುವ ಉದ್ದೇಶದಿಂದ ಈ ಕ್ರಮ ಕೈಗೊಂಡಿದೆ. ಭೂ ಹಸ್ತಾಂತರ ಪ್ರಕ್ರಿಯೆಯನ್ನು 45 ದಿನಗಳಲ್ಲಿ ಪೂರ್ಣಗೊಳಿಸುವಂತೆ ಮುಖ್ಯ ಕಾರ್ಯದರ್ಶಿಯವರಿಗೆ ಈಗಾಗಲೇ ಸೂಚನೆ ನೀಡಲಾಗಿದೆ. ಪಶ್ಚಿಮ ಬಂಗಾಳವು ಬಾಂಗ್ಲಾದೇಶದೊಂದಿಗೆ 4,097 ಕಿ.ಮೀ ಗಡಿಯನ್ನು ಹಂಚಿಕೊಂಡಿದೆ. ಕೇಂದ್ರ ಗೃಹ ಸಚಿವಾಲಯದ ಪ್ರಕಾರ, ಸುಮಾರು 3,240 ಕಿ.ಮೀ.ಗೆ ಈಗಾಗಲೇ ಬೇಲಿ ಹಾಕಲಾಗಿದೆ. ಈ ಹಿಂದೆ ಭೂಮಿ ಹಸ್ತಾಂತರದಲ್ಲಿ ಉಂಟಾಗಿದ್ದ ವಿಳಂಬದಿಂದಾಗಿ ಗಡಿಯ ಹಲವು ಕಿಲೋಮೀಟರ್‌ಗಳಷ್ಟು ಭಾಗದಲ್ಲಿ ಬೇಲಿ ನಿರ್ಮಾಣ ಕಾರ್ಯ ಬಾಕಿ ಉಳಿದಿತ್ತು. ಪಶ್ಚಿಮ ಬಂಗಾಳದ ಅಂತರಾಷ್ಟ್ರೀಯ ಗಡಿಯಲ್ಲಿ ಸುಮಾರು 127 ಕಿಲೋಮೀಟರ್‌ಗಳಷ್ಟು ಭಾಗದಲ್ಲಿ ಇನ್ನೂ ತಂತಿ ಬೇಲಿ ನಿರ್ಮಾಣವಾಗಿರಲಿಲ್ಲ. ಭೂಸ್ವಾಧೀನ ಪ್ರಕ್ರಿಯೆಯಲ್ಲಿನ ವಿಳಂಬದಿಂದಾಗಿ ಈ ಭಾಗವು ಮುಕ್ತವಾಗಿಯೇ ಉಳಿದಿತ್ತು, ಇದು ಅಕ್ರಮ ನುಸುಳುವಿಕೆಗೆ ದಾರಿಕಲ್ಪಿಸಿತ್ತು. ಈಗಿನ 105 ಎಕರೆ ಭೂಮಿ ಹಸ್ತಾಂತರದ ನಿರ್ಧಾರವು ಈ 127 ಕಿ.ಮೀ ವ್ಯಾಪ್ತಿಯಲ್ಲಿ ಬೇಲಿ ನಿರ್ಮಿಸಲು ಸಹಕಾರಿಯಾಗಲಿದೆ. ಒಟ್ಟು 127 ಕಿ.ಮೀ ಬಾಕಿ ಇರುವ ಪ್ರದೇಶದಲ್ಲಿ, ಅತ್ಯಂತ ಸೂಕ್ಷ್ಮವೆಂದು ಗುರುತಿಸಲಾದ ಸುಮಾರು 8 ಕಿ.ಮೀ. ಜಾಗದಲ್ಲಿ ಆದ್ಯತೆಯ ಮೇಲೆ ಬೇಲಿ ನಿರ್ಮಾಣ ಕಾರ್ಯವನ್ನು ತಕ್ಷಣವೇ ಪ್ರಾರಂಭಿಸಲು ನಿರ್ಧರಿಸಲಾಗಿದೆ.

**ವಿರೋಧಿಸಿದ್ದ ಮಮತಾ:**

ಮಮತಾ ಬ್ಯಾನರ್ಜಿ ನೇತೃತ್ವದ ಹಿಂದಿನ ಸರ್ಕಾರವು ಬಿಎಸ್‌ಎಫ್‌ಗೆ ಭೂಮಿ ನೀಡಲು ಕೆಲವು ಪ್ರಮುಖ ಕಾರಣಗಳಿಂದ ವಿರೋಧ ವ್ಯಕ್ತಪಡಿಸಿತ್ತು. ಕೇಂದ್ರ ಸರ್ಕಾರವು ಬಿಎಸ್‌ಎಫ್‌ನ ಅಧಿಕಾರ ವ್ಯಾಪ್ತಿಯನ್ನು ಗಡಿಯಿಂದ 15 ಕಿ.ಮೀ ನಿಂದ 50 ಕಿ.ಮೀ ವರೆಗೆ ಹೆಚ್ಚಿಸಿತ್ತು.

ಇದನ್ನು ಮಮತಾ ಬ್ಯಾನರ್ಜಿ ಅವರು ಒಕ್ಕೂಟ ವ್ಯವಸ್ಥೆಯ ಮೇಲಿನ ದಾಳಿ ಎಂದು ಕರೆದಿದ್ದರು ಮತ್ತು ಈ ನಿರ್ಧಾರವನ್ನು ಹಿಂತೆಗೆದುಕೊಳ್ಳುವವರೆಗೆ ಭೂಮಿ ನೀಡುವುದಿಲ್ಲ ಎಂಬ ನಿಲುವು ತಳೆದಿದ್ದರು.

ಕಾನೂನು ಮತ್ತು ಸುವ್ಯವಸ್ಥೆ ರಾಜ್ಯದ ವಿಷಯವಾಗಿದ್ದು, ಬಿಎಸ್‌ಎಫ್ ವ್ಯಾಪ್ತಿ ಹೆಚ್ಚಳದಿಂದ ರಾಜ್ಯ ಪೊಲೀಸರ ಅಧಿಕಾರ ಮೊಟಕಾಗುತ್ತದೆ ಎಂದು ಅವರು ವಾದಿಸಿದ್ದರು. ಗಡಿಭಾಗದ ಜನರನ್ನು ಬಿಎಸ್‌ಎಫ್ ಅಧಿಕಾರಿಗಳು ಪೀಡಿಸುತ್ತಿದ್ದಾರೆ ಮತ್ತು ಮತ ಚಲಾಯಿಸದಂತೆ ಬೆದರಿಕೆ ಹಾಕುತ್ತಿದ್ದಾರೆ ಎಂದು ಅವರು ಆರೋಪಿಸಿದ್ದರು.

ನಾವು ಈಗಾಗಲೇ ರೈಲ್ವೆ ಮತ್ತು ಇತರ ಕೇಂದ್ರ ಸಂಸ್ಥೆಗಳಿಗೆ ಸಾಕಷ್ಟು ಭೂಮಿ ನೀಡಿದ್ದೇವೆ, ಮೊದಲು ಅಲ್ಲಿನ ಕೆಲಸ ಮುಗಿಸಿ, ನಂತರ ಉಳಿದ ಜಾಗ ನೀಡುತ್ತೇವೆ ಎಂದು ತಮ್ಮ ನಿರ್ಧಾರವನ್ನು ಸಮರ್ಥಿಸಿಕೊಳ್ಳುತ್ತಿದ್ದರು.

## ಜೂನ್‌ನಿಂದ ಅನ್ನಪೂರ್ಣ ಭಂಡಾರ್ ಅಡಿಯಲ್ಲಿ ಬಂಗಾಳದ ಮಹಿಳೆಯರಿಗೆ ಮಾಸಿಕ 3000 ರೂ., ಉಚಿತ ಬಸ್ ಪ್ರಯಾಣದ ಸಾಧ್ಯತೆ

**ಕೋಲ್ಕತ್ತಾ, ಮೇ 11:** ಪಶ್ಚಿಮ ಬಂಗಾಳದ ಅರ್ಹ ಮಹಿಳೆಯರು ಮುಂದಿನ ತಿಂಗಳಿನಿಂದ "ಅನ್ನಪೂರ್ಣ ಭಂಡಾರ್" ಯೋಜನೆಯ ಪ್ರಯೋಜನವನ್ನು ಪಡೆಯುವ ಸಾಧ್ಯತೆ ಇದೆ, ಈ ಕಾರ್ಯಕ್ರಮವನ್ನು ಜಾರಿಗೆ ತರಲು ಕ್ರಮಗಳನ್ನು ಪ್ರಾರಂಭಿಸುವಂತೆ ಮುಖ್ಯಮಂತ್ರಿ ಸುವೇಂದು ಅಧಿಕಾರಿ ಸೋಮವಾರ ಅಧಿಕಾರಿಗಳನ್ನು ಕೇಳಿದ್ದಾರೆ. ಮುಂದಿನ ತಿಂಗಳಿನಿಂದ ಸರ್ಕಾರಿ ಬಸ್‌ಗಳಲ್ಲಿ ಮಹಿಳೆಯರು ಉಚಿತ ಪ್ರಯಾಣವನ್ನು ಪಡೆಯುವುದನ್ನು ಖಚಿತಪಡಿಸಿಕೊಳ್ಳಲು ಅಧಿಕಾರಿ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ ಎಂದು ರಾಜ್ಯ ಸಚಿವಾಲಯದ ಮೂಲಗಳು ತಿಳಿಸಿವೆ. 'ಅನ್ನಪೂರ್ಣ ಭಂಡಾರ್' ಯೋಜನೆಯಡಿ, ಮಹಿಳಾ ಫಲಾನುಭವಿಗಳು ಮಾಸಿಕ 3000 ರೂ. ಆರ್ಥಿಕ ಸಹಾಯಕ್ಕೆ ಅರ್ಹರಾಗಿರುತ್ತಾರೆ.

ಮಮತಾ ಬ್ಯಾನರ್ಜಿ ನೇತೃತ್ವದ ತೃಣಮೂಲ ಕಾಂಗ್ರೆಸ್‌ನ 15 ವರ್ಷಗಳ ಆಡಳಿತವನ್ನು ಕೊನೆಗೊಳಿಸುವ ಮೂಲಕ ಕೇಸರಿ ಪಕ್ಷ ಅಧಿಕಾರಕ್ಕೆ ಬಂದ ಇತ್ತೀಚಿನ ವಿಧಾನಸಭಾ ಚುನಾವಣೆಗೆ ಮುಂಚಿತವಾಗಿ ಪ್ರಕಟವಾದ ಬಿಜೆಪಿಯ ಸಂಕಲ್ಪ ಪತ್ರ (ಪ್ರಣಾಳಿಕೆ) ಯಲ್ಲಿ ಈ ಯೋಜನೆ ಪ್ರಮುಖ ಪ್ರತಿಜ್ಞೆಯಾಗಿತ್ತು. ಮುಖ್ಯಮಂತ್ರಿ ಬ್ಯಾನರ್ಜಿ ಜಾರಿಗೆ ತಂದ ಜನಪ್ರಿಯ ಲಕ್ಷ್ಮಿರ್ ಭಂಡಾರ್ ಯೋಜನೆಯನ್ನು ಎದುರಿಸಲು ಬಿಜೆಪಿ 'ಅನ್ನಪೂರ್ಣ ಭಂಡಾರ್' ಉಪಕ್ರಮವನ್ನು ಪ್ರಾರಂಭಿಸಿತು. ಲಕ್ಷ್ಮಿರ್ ಭಂಡಾರ್ ಅಡಿಯಲ್ಲಿ, ಸಾಮಾನ್ಯ ವರ್ಗದ ಮಹಿಳೆಯರಿಗೆ ತಿಂಗಳಿಗೆ 1500 ರೂ.ಗಳನ್ನು ಪಡೆಯಲಾಗುತ್ತಿತ್ತು, ಆದರೆ ಪರಿಶಿಷ್ಟ ಜಾತಿ ಮತ್ತು ಪಂಗಡದ ವಿಭಾಗಗಳವರಿಗೆ 1700 ರೂ.ಗಳನ್ನು ನೀಡಲಾಗುತ್ತಿತ್ತು. ಮಹಿಳಾ ಫಲಾನುಭವಿಗಳಿಗೆ ತಿಂಗಳಿಗೆ 3,000 ರೂ.ಗಳ ಆರ್ಥಿಕ ನೆರವು ನೀಡುವುದಾಗಿ ಬಿಜೆಪಿಯ ಚುನಾವಣಾ ಪ್ರಣಾಳಿಕೆಯಲ್ಲಿ ಉಲ್ಲೇಖಿಸಲಾದ ಪ್ರಮುಖ ಭರವಸೆಯನ್ನು ಉಲ್ಲೇಖಿಸಿದೆ. ಎಲ್ಲಾ ರಾಜ್ಯ ಸಾರಿಗೆ ವಾಹನಗಳಲ್ಲಿ ಮಹಿಳೆಯರಿಗೆ ಉಚಿತ ಬಸ್ ಪ್ರಯಾಣವೂ ಕೇಸರಿ ಪಕ್ಷದ ಪ್ರತಿಜ್ಞೆಗಳಲ್ಲಿ ಸೇರಿತ್ತು. ಆದಾಗ್ಯೂ, ಯೋಜನೆಗಳ ಅರ್ಹತಾ ಮಾನದಂಡಗಳು ಮತ್ತು ಅನುಷ್ಠಾನ ಮಾರ್ಗಸೂಚಿಗಳನ್ನು ಇನ್ನೂ ಅಂತಿಮಗೊಳಿಸಲಾಗಿಲ್ಲ.

## ಪುರಸಭೆ ನೇಮಕಾತಿ ಹಗರಣದಲ್ಲಿ ತೃಣಮೂಲ ಕಾಂಗ್ರೆಸ್‌ನ ಮಾಜಿ ಸಚಿವ ಸುಜಿತ್ ಬೋಸ್ ಇ.ಡಿ ಬಲೆಗೆ

**ನವದೆಹಲಿ, ಮೇ 11:** ಬಹುಕೋಟಿ ಮೌಲ್ಯದ ಪುರಸಭೆ ನೇಮಕಾತಿ ಹಗರಣಕ್ಕೆ ಸಂಬಂಧಿಸಿದಂತೆ ಜಾರಿ ನಿರ್ದೇಶನಾಲಯ (ಇಡಿ) ಸೋಮವಾರ ಪಶ್ಚಿಮ ಬಂಗಾಳದ ಮಾಜಿ ಸಚಿವ ಮತ್ತು ತೃಣಮೂಲ ಕಾಂಗ್ರೆಸ್ ನಾಯಕ ಸುಜಿತ್ ಬೋಸ್‌ರನ್ನು ಬಂಧಿಸಿದೆ. ಇಡಿ ಪ್ರಕಾರ, ಬೋಸ್ ಅವರು ಸೌತ್ ಡಮ್ ಡಮ್ ಪುರಸಭೆಯ ವಿವಿಧ ಹುದ್ದೆಗಳಿಗೆ ಸುಮಾರು 150 ಅಭ್ಯರ್ಥಿಗಳನ್ನು ಹಣಕಾಸಿನ ಪ್ರಯೋಜನಕ್ಕಾಗಿ ಶಿಫಾರಸು ಮಾಡಿದ್ದಾರೆ ಎಂದು ಆರೋಪಿಸಲಾಗಿದೆ. ಹಲವಾರು ವ್ಯಕ್ತಿಗಳಿಗೆ ಪುರಸಭೆಯ ಉದ್ಯೋಗಗಳನ್ನು ಸುಗಮಗೊಳಿಸುವ ಸಲುವಾಗಿ ಬೋಸ್ ಸ್ವಾಧೀನಪಡಿಸಿಕೊಂಡಿದ್ದಾರೆ ಎಂದು ಹೇಳಲಾದ ಫ್ಲಾಟ್‌ಗಳು ಸೇರಿದಂತೆ ಪ್ರಕರಣಕ್ಕೆ ಸಂಬಂಧಿಸಿದ ಅಪರಾಧದ ಆದಾಯವನ್ನು ಪತ್ತೆಹಚ್ಚಲಾಗಿದೆ ಎಂದು ತನಿಖಾಧಿಕಾರಿಗಳು ಹೇಳಿಕೊಂಡಿದ್ದಾರೆ. ಅವರ ನಿಯಂತ್ರಣದಲ್ಲಿದೆ ಎನ್ನಲಾದ ಬ್ಯಾಂಕ್ ಖಾತೆಗಳಲ್ಲಿ ದೊಡ್ಡ ನಗದು ಠೇವಣಿಗಳು ಕಂಡುಬಂದಿವೆ ಎಂದು ಸಂಸ್ಥೆ ಹೇಳಿದೆ. ಮಾಜಿ ಸಚಿವರನ್ನು ಮಂಗಳವಾರ ಬೆಳಿಗ್ಗೆ ವಿಶೇಷ ನ್ಯಾಯಾಲಯದ ಮುಂದೆ ಹಾಜರುಪಡಿಸುವ ನಿರೀಕ್ಷೆಯಿದೆ.

# ದೇಶದ ಆರ್ಥಿಕ ನಿರ್ಬಂಧ: ಬಿಜೆಪಿ ವಿರುದ್ಧ ಅಖಿಲೇಶ್ ಯಾದವ್ ವಾಗ್ದಾಳಿ ನಿಯಂತ್ರಣ ಕಳೆದುಕೊಂಡ ಸರ್ಕಾರ – ಕಟು ಟೀಕೆ



**ನವದೆಹಲಿ, ಮೇ 11:** ಸಮಾಜವಾದಿ ಪಕ್ಷದ ಮುಖ್ಯಸ್ಥ ಅಖಿಲೇಶ್ ಯಾದವ್ ಸೋಮವಾರ ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದಾರೆ, ಇತ್ತೀಚಿನ ಆರ್ಥಿಕ ನಿರ್ಬಂಧಗಳು ಮತ್ತು ನಡೆಯುತ್ತಿರುವ ಆರ್ಥಿಕ ಪರಿಸ್ಥಿತಿಗೆ ಸಂಬಂಧಿಸಿದ ಮನವಿಗಳ ಕುರಿತು ಅವರು, ಸರ್ಕಾರವು ಆರ್ಥಿಕತೆಯ ಮೇಲೆ "ಸಂಪೂರ್ಣವಾಗಿ ನಿಯಂತ್ರಣ ಕಳೆದುಕೊಂಡಿದೆ" ಮತ್ತು ಅದರ ವೈಫಲ್ಯಗಳ ಹೊರೆಯನ್ನು ಸಾಮಾನ್ಯ ನಾಗರಿಕರ ಮೇಲೆ ವರ್ಗಾಯಿಸಲು ಪ್ರಯತ್ನಿಸುತ್ತಿದೆ ಎಂದು ಆರೋಪಿಸಿದ್ದಾರೆ. ತಮ್ಮ ವಾಟ್ಸಾಪ್ ಚಾನೆಲ್‌ನಲ್ಲಿ ಸುದೀರ್ಘ ಪೋಸ್ಟ್‌ನಲ್ಲಿ, ಚುನಾವಣೆಗಳು ಮುಗಿದ ನಂತರವೇ ಬಿಜೆಪಿ ದೇಶದ "ಬಿಕ್ಕಟ್ಟನ್ನು" ನೆನಪಿಸಿಕೊಂಡಿದೆ ಮತ್ತು ಭಾರತ ಎದುರಿಸುತ್ತಿರುವ "ನಿಜವಾದ ಬಿಕ್ಕಟ್ಟು" ಆಡಳಿತ ಪಕ್ಷವೇ ಎಂದು ಪ್ರತಿಪಾದಿಸಿದರು ಎಂದು ಯಾದವ್ ಹೇಳಿದ್ದಾರೆ. "ಚುನಾವಣೆಗಳು ಮುಗಿದ ತಕ್ಷಣ, ಅವರು ಇದ್ದಕ್ಕಿದ್ದಂತೆ 'ಬಿಕ್ಕಟ್ಟು'ಯನ್ನು ನೆನಪಿಸಿಕೊಂಡರು" ಎಂದು ಉತ್ತರ ಪ್ರದೇಶದ ಮಾಜಿ ಮುಖ್ಯಮಂತ್ರಿ ಬರೆದಿದ್ದಾರೆ, "ವಾಸ್ತವದಲ್ಲಿ, ದೇಶಕ್ಕೆ ಒಂದೇ ಒಂದು ನಿಜವಾದ 'ಬಿಕ್ಕಟ್ಟು' ಇದೆ, ಮತ್ತು ಅದರ ಹೆಸರು: ಬಿಜೆಪಿ." ಕೇಂದ್ರ ಸರ್ಕಾರದ ಆರ್ಥಿಕ ನಿರ್ವಹಣೆಯನ್ನು ಪ್ರಶ್ನಿಸಿದ ಸಮಾಜವಾದಿ ಪಕ್ಷದ ಅಧ್ಯಕ್ಷರು, ಐದು ಟ್ರಿಲಿಯನ್ ಡಾಲರ್ ಆರ್ಥಿಕತೆಯನ್ನು ನಿರ್ಮಿಸುವ ಸರ್ಕಾರದ ದೃಷ್ಟಿಕೋನವನ್ನು ಗುರಿಯಾಗಿಸಿಕೊಂಡು, ರೂಪಾಯಿಯ ಕುಸಿತವು ಹದಗೆಡುತ್ತಿರುವ ಆರ್ಥಿಕ ಪರಿಸ್ಥಿತಿಯನ್ನು ಹೇಗೆ ಪ್ರತಿಬಿಂಬಿಸುತ್ತದೆ ಎಂದು ಆರೋಪಿಸಿದರು. "ಇಷ್ಟೊಂದು ನಿರ್ಬಂಧಗಳನ್ನು ವಿಧಿಸಬೇಕಾದರೆ, ಹೆಚ್ಚು ಪ್ರಚಾರ ಮಾಡಲಾದ 'ಐದು ಟ್ರಿಲಿಯನ್ ಡಾಲರ್ ಆರ್ಥಿಕತೆ' ಎಂದಾದರೂ ವಾಸ್ತವವಾಗುತ್ತದೆ? ಬಿಜೆಪಿ ಸರ್ಕಾರವು ಸಂಪೂರ್ಣವಾಗಿ ನಿಯಂತ್ರಣ ಕಳೆದುಕೊಂಡಂತೆ ತೋರುತ್ತದೆ. ಭಾರತೀಯ ರೂಪಾಯಿ ಆಳಕ್ಕೆ ಕುಸಿಯುತ್ತಿರುವಾಗ ಡಾಲರ್ ಆಕಾಶಕ್ಕೆ ಏರುತ್ತಿದೆ" ಎಂದು ಅವರು ಹೇಳಿದರು. ಚಿನ್ನದ ಖರೀದಿಯನ್ನು ನಿರುತ್ಸಾಹಗೊಳಿಸುವ ಮನವಿಗಳನ್ನು ಯಾದವ್ ಟೀಕಿಸಿದರು, ಅಂತಹ ಸಲಹೆಗಳನ್ನು ಹಣದುಬ್ಬರ ಮತ್ತು ನಿರುದ್ಯೋಗದಿಂದ ಬಳಲುತ್ತಿರುವ ಸಾಮಾನ್ಯ ನಾಗರಿಕರಿಗಿಂತ "ಭ್ರಷ್ಟ ಬಿಜೆಪಿ ಸಹಚರರಿಗೆ" ನಿರ್ದೇಶಿಸಬೇಕು ಎಂದು ಆರೋಪಿಸಿದರು. "ಚಿನ್ನವನ್ನು ಖರೀದಿಸಬಾರದು ಎಂಬ ಮನವಿಯನ್ನು ಸಾರ್ವಜನಿಕರ ಕಡೆಗೆ ನಿರ್ದೇಶಿಸಬಾರದು, ಆದರೆ ಬಿಜೆಪಿ ಸದಸ್ಯರು ಮತ್ತು ಅವರ ಭ್ರಷ್ಟ ಸಹಚರರಿಗೆ ನಿರ್ದೇಶಿಸಬೇಕು, ಏಕೆಂದರೆ ಸಾಮಾನ್ಯ ಜನರು 1.5 ಲಕ್ಷ ರೂಪಾಯಿಗಳ 10 ಗ್ರಾಂ ಚಿನ್ನವನ್ನು ಸಹ ಖರೀದಿಸಲು ಶಕ್ತರಲ್ಲ" ಎಂದು ಅವರು ಆರೋಪಿಸಿದರು. ಸರ್ಕಾರದ ಇಂತಹ ಮನವಿಗಳು ಮಾರುಕಟ್ಟೆಗಳು ಮತ್ತು ವ್ಯವಹಾರಗಳಲ್ಲಿ ಭೀತಿಯನ್ನು ಉಂಟುಮಾಡಬಹುದು ಎಂದು ಎಚ್ಚರಿಸಿದ ಯಾದವ್, ಭಯ ಮತ್ತು ಅನಿಶ್ಚಿತತೆಯು ಹಣದುಬ್ಬರ ಮತ್ತು ಆರ್ಥಿಕ ಕುಸಿತದ ಬಗ್ಗೆ ಕಳವಳಗಳನ್ನು ಹೆಚ್ಚಿಸುತ್ತದೆ ಎಂದು ಹೇಳಿದರು.

ಕೇಂದ್ರದ ವಿದೇಶಾಂಗ ನೀತಿಯನ್ನು ಗುರಿಯಾಗಿಸಿಕೊಂಡು, ಬಿಜೆಪಿ ಸರ್ಕಾರವು ಭಾರತದ ಸಾಂಪ್ರದಾಯಿಕ ಅಲಿಪ್ತ ವಿಧಾನದಿಂದ ಹೊರಬಂದು ಬಾಹ್ಯ ಒತ್ತಡದಲ್ಲಿ ಆಯ್ದ ಅಂತರರಾಷ್ಟ್ರೀಯ ಬಣಗಳೊಂದಿಗೆ ಹೊಂದಾಣಿಕೆ ಮಾಡಿಕೊಂಡಿದೆ ಎಂದು ಯಾದವ್ ಆರೋಪಿಸಿದರು, ಇದು ದೇಶದ ಆರ್ಥಿಕ ಸವಾಲುಗಳನ್ನು ಇನ್ನಷ್ಟು ಹದಗೆಡಿಸಿದೆ. "ದೇಶದ ಜನರು ಈಗ ಹಣದುಬ್ಬರ, ನಿರುದ್ಯೋಗ, ನಿರುದ್ಯೋಗ ಮತ್ತು ಆರ್ಥಿಕ ಕುಸಿತದ ಮೂಲಕ ಬೆಲೆ ತೆರುತ್ತಿದ್ದಾರೆ" ಎಂದು ಅವರು ಹೇಳಿದರು, ರೈತರು, ಕಾರ್ಮಿಕರು, ಯುವಕರು, ಗೃಹಿಣಿಯರು, ಸಂಬಳ ಪಡೆಯುವ ಉದ್ಯೋಗಿಗಳು ಮತ್ತು ಉದ್ಯಮಿಗಳು ಎಲ್ಲರೂ ಪರಿಣಾಮ ಬೀರಿದ್ದಾರೆ ಎಂದು ಅವರು ಹೇಳಿದರು. "ಇಂದು ದೇಶವು ಹೇಳುತ್ತದೆ: ನಮಗೆ ಬಿಜೆಪಿ ಬೇಡ!" ಎಂದು ಅವರು ಘೋಷಿಸಿದರು.

# ಅಣ್ಣಾ ಡಿಎಂಕೆಯಲ್ಲಿ ಭಿನ್ನಮತ: ಸಿಡಿದೆದ್ದ ಶಾಸಕರಿಂದ ವಿಜಯ್ ಬೆಂಬಲಿಸಲು ಒಲವು



**ಚೆನ್ನೈ, ಮೇ 11:** ತಮಿಳುನಾಡು ವಿಧಾನಸಭಾ ಚುನಾವಣೆಯಲ್ಲಿ ಅಖಿಲ ಭಾರತ ಅಣ್ಣಾ ದ್ರಾವಿಡ ಮುನ್ನೇತ್ರ ಕಳಗಂ (ಎಐಎಡಿಎಂಕೆ) ಅನುಭವಿಸಿದ ಹೀನಾಯ ಸೋಲಿನ ಬೆನ್ನಲ್ಲೇ ಪಕ್ಷದಲ್ಲಿ ಆಂತರಿಕ ಭಿನ್ನಮತ ಸ್ಫೋಟಗೊಂಡಿದೆ. ನಟ ವಿಜಯ್ ನೇತೃತ್ವದ ನೂತನ ಆಡಳಿತಾರೂಢ ಟಿವಿಕೆ ಪಕ್ಷಕ್ಕೆ ಬೆಂಬಲ ನೀಡುವ ವಿಚಾರದಲ್ಲಿ ಎಐಎಡಿಎಂಕೆ ಶಾಸಕರು ಎರಡು ಬಣಗಳಾಗಿ ವಿಭಜನೆಗೊಂಡಿದ್ದು, ಪಕ್ಷದಲ್ಲಿ ಮತ್ತೊಂದು ಮಹತ್ವದ ಒಡಕು ಮೂಡುವ ಲಕ್ಷಣಗಳು ಗೋಚರಿಸುತ್ತಿವೆ. ಚುನಾವಣಾ ಫಲಿತಾಂಶ ಪ್ರಕಟವಾದ ನಂತರ ಎಐಎಡಿಎಂಕೆ ಪ್ರಧಾನ ಕಾರ್ಯದರ್ಶಿ ಎಡಪ್ಪಾಡಿ ಕೆ. ಪಳನಿಸ್ವಾಮಿ (ಇಪಿಎಸ್) ನೇತೃತ್ವದಲ್ಲಿ ಅನೇಕ ಶಾಸಕಾಂಗ ಪಕ್ಷದ ಸಭೆಗಳು ನಡೆದಿವೆ. ವರದಿಗಳ ಪ್ರಕಾರ, ಸರ್ಕಾರ ರಚಿಸಲು ಟಿವಿಕೆ ಪಕ್ಷಕ್ಕೆ ಬೆಂಬಲ ನೀಡುವುದನ್ನು ಪಕ್ಷದ ಒಂದು ಬಣ ಬಲವಾಗಿ ವಿರೋಧಿಸುತ್ತಿದ್ದರೆ, ಮತ್ತೊಂದು ಬಣವು ಹೊರಗಿನಿಂದ ಬೆಂಬಲ ನೀಡುವ ಪ್ರಸ್ತಾಪ ಮುಂದಿಟ್ಟಿದೆ. ಚುನಾವಣೆಯಲ್ಲಿನ ಪಕ್ಷದ ಕಳಪೆ ಸಾಧನೆಯ ಹಿನ್ನೆಲೆಯಲ್ಲಿ ಎಡಪ್ಪಾಡಿ ಕೆ. ಪಳನಿಸ್ವಾಮಿ ಅವರು ತಮ್ಮ ಸ್ಥಾನದಿಂದ ಕೆಳಗಿಳಿಯಬೇಕು ಎಂದು ಕೆಲವು ಶಾಸಕರು ಒತ್ತಾಯಿಸಿದ್ದಾರೆ. ಹಿರಿಯ ಮುಖಂಡರು ಮತ್ತು ಮಾಜಿ ಸಚಿವರಾದ ಎಸ್.ಪಿ. ವೇಲುಮಣಿ ಹಾಗೂ ಸಿ.ವಿ. ಷಣ್ಮುಗಂ ಅವರು ತಮ್ಮ ಬೆಂಬಲಿಗ ಶಾಸಕರೊಂದಿಗೆ ಪಳನಿಸ್ವಾಮಿ ನೇತೃತ್ವದ ಸಭೆಗಳಿಗೆ ಗೈರುಹಾಜರಾಗುವ ಮೂಲಕ ಭಿನ್ನಮತವನ್ನು ಬಹಿರಂಗಪಡಿಸಿದ್ದಾರೆ. ವೇಲುಮಣಿ ಮತ್ತು ಷಣ್ಮುಗಂ ಬಣವು ಆಡಳಿತರೂಢ ಟಿವಿಕೆ ಪಕ್ಷವನ್ನು ಬೆಂಬಲಿಸಲು ಒಲವು ತೋರುತ್ತಿದೆ ಎಂದು ಪಕ್ಷದ ಮೂಲಗಳು ತಿಳಿಸಿವೆ. ಎಐಎಡಿಎಂಕೆ ಈ ಬಾರಿಯ ಚುನಾವಣೆಯಲ್ಲಿ ಒಟ್ಟು 234 ಕ್ಷೇತ್ರಗಳ ಪೈಕಿ 167 ಸ್ಥಾನಗಳಲ್ಲಿ ಸ್ಪರ್ಧಿಸಿತ್ತು. ಆದರೆ ಕೇವಲ 47 ಸ್ಥಾನಗಳನ್ನು ಗೆಲ್ಲುವಲ್ಲಿ ಮಾತ್ರ ಶಕ್ತವಾಗಿದೆ. ಪಕ್ಕದ ಪುದುಚೇರಿಯ ಐಷಾರಾಮಿ ರೆಸಾರ್ಟ್‌ನಲ್ಲಿ ಮೂರು ದಿನಗಳ ಕಾಲ ತಂಗಿದ್ದ ಶಾಸಕರು ಚೆನ್ನೈಗೆ ಮರಳಿದ್ದರು. ಆದರೆ, ಆ ಬಳಿಕ ಪಳನಿಸ್ವಾಮಿ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ಒಟ್ಟು 47 ಶಾಸಕರ ಪೈಕಿ ಐವರು ಶಾಸಕರು ಗೈರುಹಾಜರಾಗಿದ್ದರು. ಟಿವಿಕೆಗೆ ಬೆಂಬಲ ನೀಡುವ ಪ್ರಸ್ತಾಪವನ್ನು ಸದ್ಯಕ್ಕೆ ತಳ್ಳಿಹಾಕಿರುವ ಪಳನಿಸ್ವಾಮಿ, 'ಟಿವಿಕೆ ನಾಯಕ ಸಿ. ಜೋಸೆಫ್ ವಿಜಯ್ ಅವರು ನೇರವಾಗಿ ನನ್ನನ್ನು ಸಂಪರ್ಕಿಸಬೇಕು. ಅಲ್ಲಿಯವರೆಗೆ ಇಂತಹ ಯಾವುದೇ ಪ್ರಸ್ತಾಪವನ್ನು ನಾನು ಪರಿಗಣಿಸುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ಈ ಬಗ್ಗೆ ಪ್ರತಿಕ್ರಿಯಿಸಿರುವ ಎಐಎಡಿಎಂಕೆ ಮಾಜಿ ನಾಯಕ ಕೆ.ಸಿ. ಪಳನಿಸ್ವಾಮಿ, ಪಕ್ಷದಲ್ಲಿ ಸ್ಪಷ್ಟವಾದ ಒಡಕು ಮೂಡಿದೆ. ಅನೇಕ ಶಾಸಕರು ನಾಯಕತ್ವ ಬದಲಾವಣೆಯನ್ನು ಬಯಸುತ್ತಿದ್ದಾರೆ. ಪಳನಿಸ್ವಾಮಿ ಅವರು ನಾಯಕರಾಗಿ ಮುಂದುವರಿದರೆ, ಕೆಲವು ಶಾಸಕರು ಟಿವಿಕೆಗೆ ಬೆಂಬಲ ನೀಡುವ ಸಾಧ್ಯತೆಯಿದೆ. ಮುಂದಿನ ಚುನಾವಣೆಯನ್ನು ಒಗ್ಗಟ್ಟಾಗಿ ಎದುರಿಸಲು ಅನುಕೂಲವಾಗುವಂತೆ ಪಳನಿಸ್ವಾಮಿ ಅವರು ಸ್ವಯಂಪ್ರೇರಿತವಾಗಿ ತಮ್ಮ ಸ್ಥಾನದಿಂದ ಕೆಳಗಿಳಿಯಬೇಕು ಎಂದು ಅಭಿಪ್ರಾಯಪಟ್ಟಿದ್ದಾರೆ.

# ಮಗನ ಡ್ರಗ್ಸ್ ವ್ಯಸನಕ್ಕೆ ಬೇಸತ್ತು ಪೋಷಕರಿಂದಲೇ ಹತ್ಯೆಗೆ ಸುಫಾರಿ



**ಲಖನೌ, ಮೇ 11:** ಮಾದಕ ವ್ಯಸನಿಯಾಗಿದ್ದ 32 ವರ್ಷದ ಮಗನ ನಿರಂತರ ಕಿರುಕುಳದಿಂದ ಬೇಸತ್ತ ಹೆತ್ತವರೇ ಆತನನ್ನು ಕೊಲೆ ಮಾಡಲು 5 ಲಕ್ಷ ರೂ. ಸುಪಾರಿ ನೀಡಿರುವ ಆಘಾತಕಾರಿ ಘಟನೆ ಉತ್ತರ ಪ್ರದೇಶದ ಬಿಜ್ನೋರ್‌ನಲ್ಲಿ ಬೆಳಕಿಗೆ ಬಂದಿದೆ. ಸುಪಾರಿ ಹಂತಕನಿಗೆ ಮುಂಗಡ ಹಣ ನೀಡಲು ತಾಯಿಯೇ ತನ್ನ ಚಿನ್ನಾಭರಣಗಳನ್ನು 55,000 ರೂ.ಕ್ಕೆ ಮಾರಾಟ ಮಾಡಿರುವುದು ಪೊಲೀಸ್ ತನಿಖೆಯಿಂದ ತಿಳಿದುಬಂದಿದೆ. ಕೊಲೆಯಾದ ಯುವಕನನ್ನು ಅಮ್ರೋಹದ ನಾಸಿರ್ಪುರ ಗ್ರಾಮದ ದುಷ್ಯಂತ್ ಕುಮಾರ್ (32) ಎಂದು ಗುರುತಿಸಲಾಗಿದೆ. ಶನಿವಾರ ಬೆಳಗ್ಗೆ ಅರಣ್ಯ ಪ್ರದೇಶದ ಸಮೀಪವಿರುವ ಒಣಗಿದ ಕಾಲುವೆಯಲ್ಲಿ ದುಷ್ಯಂತ್ ಮೃತದೇಹ ಪತ್ತೆಯಾದಾಗ ಈ ಪ್ರಕರಣ ಹೊರಬಿದ್ದಿದೆ. ಅಮ್ರೋಹ ಪೊಲೀಸ್ ವರಿಷ್ಠಾಧಿಕಾರಿ (ಎಸ್ಪಿ) ಲಖನ್ ಸಿಂಗ್ ಯಾದವ್ ಅವರು ಘಟನೆಯ ಕುರಿತು ಮಾಹಿತಿ ನೀಡಿದ್ದಾರೆ. ದುಷ್ಯಂತ್ ತೀವ್ರ ಮಾದಕ ವ್ಯಸನಿಯಾಗಿದ್ದ. ಆತ ಪ್ರತಿದಿನ ಅಮಲಿನಲ್ಲಿ ಬಂದು 60ರ ವಯಸ್ಸಿನ ತನ್ನ ವೃದ್ಧ ತಂದೆ–ತಾಯಿಯನ್ನು ನಿಂದಿಸುತ್ತಿದ್ದ ಮತ್ತು ಅವರ ಮೇಲೆ ಹಲ್ಲೆ ನಡೆಸುತ್ತಿದ್ದ. ಮಗನ ಈ ನಿರಂತರ ಕಿರುಕುಳದಿಂದ ರೋಸಿಹೋಗಿದ್ದ ತಂದೆ ಪ್ರೀತಮ್ ಸಿಂಗ್ ಮತ್ತು ತಾಯಿ ಮಾಯಾ ದೇವಿ, ತಮ್ಮ ಕಿರಿಯ ಮಗ ಸಂಕಿತ್ ಜೊತೆ ಸೇರಿ ಈತನನ್ನು ಮುಗಿಸಲು ನಿರ್ಧರಿಸಿದ್ದರು. ಇದಕ್ಕಾಗಿ ಜೋಗೇಂದ್ರ ಎಂಬ ಸ್ಥಳೀಯ ಅಪರಾಧಿಗೆ 5 ಲಕ್ಷ ರೂ. ಸುಪಾರಿ ನೀಡಿದ್ದರು ಎಂದು ಅವರು ವಿವರಿಸಿದ್ದಾರೆ. ಯೋಜನೆಯಂತೆ, ಶುಕ್ರವಾರ ರಾತ್ರಿ ಜೋಗೇಂದ್ರ ಹಾಗೂ ಆತನ ಸಹಚರರು, ಮೃತನ ಕಿರಿಯ ಸಹೋದರ ಸಂಕಿತ್ ಜೊತೆಗೂಡಿ ದುಷ್ಯಂತ್‌ನನ್ನು ಉಸಿರುಗಟ್ಟಿಸಿ ಕೊಲೆ ಮಾಡಿದ್ದಾರೆ. ಬಳಿಕ ಮೃತದೇಹವನ್ನು ಯಾರಿಗೂ ಕಾಣದಂತೆ ನಿರ್ಜನ ಕಾಲುವೆಯಲ್ಲಿ ಎಸೆದು ಪರಾರಿಯಾಗಿದ್ದರು. ದುಷ್ಯಂತ್ ಸಾವಿನ ಬಗ್ಗೆ ಅನುಮಾನಗೊಂಡು ಕಿರಿಯ ಸಹೋದರ ಸಂಕಿತ್‌ನನ್ನು ಪೊಲೀಸರು ತೀವ್ರ ವಿಚಾರಣೆಗೆ ಒಳಪಡಿಸಿದಾಗ ಅಸಲಿ ಸತ್ಯ ಬಾಯ್ಬಿಟ್ಟಿದ್ದಾನೆ. ತಕ್ಷಣ ಕಾರ್ಯಪ್ರವೃತ್ತರಾದ ಪೊಲೀಸರು ತಂದೆ ಪ್ರೀತಮ್ ಸಿಂಗ್ ಹಾಗೂ ಸಹೋದರ ಸಂಕಿತ್‌ನನ್ನು ಬಂಧಿಸಿದ್ದಾರೆ. ಪೋಷಕರು, ಕಿರಿಯ ಮಗ ಹಾಗೂ ಸುಪಾರಿ ಹಂತಕನ ವಿರುದ್ಧ ಭಾರತೀಯ ನ್ಯಾಯ ಸಂಹಿತೆ ಸೆಕ್ಷನ್ 103(1) (ಕೊಲೆ) ಅಡಿಯಲ್ಲಿ ಎಫ್‌ಐಆರ್ ದಾಖಲಿಸಲಾಗಿದೆ. ಬಂಧಿತರನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ. ಪ್ರಕರಣದ ಪ್ರಮುಖ ಆರೋಪಿಗಳಾದ ತಾಯಿ ಮಾಯಾದೇವಿ, ಸುಪಾರಿ ಹಂತಕ ಜೋಗೇಂದ್ರ ಹಾಗೂ ಆತನ ಇಬ್ಬರು ಅಪರಿಚಿತ ಸಹಚರರು ತಲೆಮರೆಸಿಕೊಂಡಿದ್ದು, ಅವರಿಗಾಗಿ ತೀವ್ರ ಶೋಧ ಕಾರ್ಯ ಮುಂದುವರಿದಿದೆ ಎಂದು ಪೊಲೀಸರು ತಿಳಿಸಿದ್ದಾರೆ.



ತಮಿಳುನಾಡು ನೂತನ ಮುಖ್ಯಮಂತ್ರಿ ಜೋಸೆಫ್ ವಿಜಯ್ ಅವರು ಸೋಮವಾರ ಮಾಜಿ ಮುಖ್ಯಮಂತ್ರಿ ಮತ್ತು ಡಿಎಂಕೆ ಮುಖ್ಯಸ್ಥ ಎಂ.ಕೆ. ಸ್ಟಾಲಿನ್ ಅವರನ್ನು ಭೇಟಿಯಾಗಿದ್ದರು.

# ದೆಹಲಿಯ ನೆಹರೂ ಪ್ಲೇಸ್‌ನಲ್ಲಿ ಇಬ್ಬರು ಮಹಿಳೆಯರ ಮೇಲಿನ ಕಿರುಕುಳ ಪ್ರಕರಣ: ಇಬ್ಬರ ಬಂಧನ, ಮತ್ತಿಬ್ಬರು ಪರಾರಿ

**ನವದೆಹಲಿ, ಮೇ 11:** ಆಗ್ನೇಯ ದೆಹಲಿಯ ನೆಹರೂ ಪ್ಲೇಸ್ ಪ್ರದೇಶದ ಎರೋಸ್ ಹೋಟೆಲ್ ಬಳಿ ಈಶಾನ್ಯ ಪ್ರದೇಶದ ಇಬ್ಬರು ಮಹಿಳೆಯರಿಗೆ ಕಿರುಕುಳ ಮತ್ತು ಹಲ್ಲೆ ನಡೆಸಿದ ಆರೋಪದ ಮೇಲೆ ಇಬ್ಬರು ಪುರುಷರನ್ನು ಬಂಧಿಸಲಾಗಿದ್ದು, ಇನ್ನಿಬ್ಬರು ತಲೆಮರೆಸಿಕೊಂಡಿದ್ದಾರೆ ಎಂದು ಪೊಲೀಸರು ಸೋಮವಾರ ತಿಳಿಸಿದ್ದಾರೆ. ಪೊಲೀಸರ ಪ್ರಕಾರ, ಭಾನುವಾರ ಬೆಳಿಗ್ಗೆ 7 ಗಂಟೆ ಸುಮಾರಿಗೆ ಮಹಿಳೆಯರು ಸಹಾಯ ಕೋರಿ ಕಲ್ಕಾಜಿ ಪೊಲೀಸ್ ಠಾಣೆಯನ್ನು ಸಂಪರ್ಕಿಸಿದಾಗ ಈ ಘಟನೆ ಸಂಭವಿಸಿದೆ. ಪೊಲೀಸ್ ತಂಡ ತಕ್ಷಣ ಸ್ಥಳಕ್ಕೆ ತಲುಪಿ ನಂತರ ವೈದ್ಯಕೀಯ ಪರೀಕ್ಷೆಗಾಗಿ ಸಂತ್ರಸ್ತರನ್ನು ಏಮ್ಸ್ ಆಸ್ಪತ್ರೆಗೆ ಕರೆದೊಯ್ದಿತು. ಆರಂಭಿಕ ತನಿಖೆಯ ಸಮಯದಲ್ಲಿ, ಮಹಿಳೆಯರ ಮೇಲೆ ನಿಂದನೀಯ ಮತ್ತು ಅವಹೇಳನಕಾರಿ ಹೇಳಿಕೆಗಳನ್ನು ನೀಡಲಾಗಿದೆ ಎಂದು ಪೊಲೀಸರು ಕಂಡುಕೊಂಡರು, ಇದು ನಂತರ ಆರೋಪಿಗಳು ಮತ್ತು ಬಲಿಪಶುಗಳ ನಡುವೆ ದೈಹಿಕ ವಾಗ್ವಾದಕ್ಕೆ ಕಾರಣವಾಯಿತು. ಎಫ್‌ಐಆರ್ ಪ್ರಕಾರ, ಮಹಿಳೆಯರು ಅಂಗಡಿಯಲ್ಲಿ ಚಹಾ ಕುಡಿಯುತ್ತಿದ್ದಾಗ ಇಬ್ಬರು ಪುರುಷರು ಅವರನ್ನು ಬೈಯಲು ಪ್ರಾರಂಭಿಸಿದರು ಎಂದು ಆರೋಪಿಸಲಾಗಿದೆ. ಸ್ವಲ್ಪ ಸಮಯದ ನಂತರ, ಅವರ ಕೆಲವು ಸಹಚರರು ಸೇರಿಕೊಂಡು ಘರ್ಷಣೆಯನ್ನು ಪ್ರಚೋದಿಸಿದರು ಎಂದು ಆರೋಪಿಸಲಾಗಿದೆ. ಬಲಿಪಶುಗಳಲ್ಲಿ ಒಬ್ಬರು ತಮ್ಮ ಸ್ನೇಹಿತನ ಮೇಲೆ ಹಲ್ಲೆ ನಡೆಸಲಾಗಿದೆ ಮತ್ತು ಗಲಾಟೆಯ ಸಮಯದಲ್ಲಿ ಅವರ ಬಟ್ಟೆಗಳನ್ನು ಹರಿದು ಹಾಕಲಾಗಿದೆ ಎಂದು ಹೇಳಿಕೊಂಡಿದ್ದಾರೆ. ಆರೋಪಿಗಳು ಮಹಿಳೆಯರನ್ನು "ವೇಶ್ಯೆಯರು" ಎಂದು ಕರೆದಿದ್ದಾರೆ ಮತ್ತು ಅವರಲ್ಲಿ ಒಬ್ಬರು ಬಿದಿರಿನ ಕೋಲನ್ನು ಬಳಸಿ ಬಲಿಪಶುವಿನ ಮೇಲೆ ಹಲ್ಲೆ ನಡೆಸಿದ್ದಾರೆ ಎಂದು ಎಫ್‌ಐಆರ್‌ನಲ್ಲಿ ಉಲ್ಲೇಖಿಸಲಾಗಿದೆ. ಮಹಿಳೆಯರು ಅಲ್ಲಿಂದ ಹೊರಹೋಗಲು ಮತ್ತು ವಿಷಯವನ್ನು ವರದಿ ಮಾಡಲು ಪ್ರಯತ್ನಿಸಿದಾಗ ಗಂಭೀರ ಪರಿಣಾಮಗಳನ್ನು ಎದುರಿಸಬೇಕಾಗುತ್ತದೆ ಎಂದು ಬೆದರಿಕೆ ಹಾಕಲಾಗಿದೆ ಎಂದು ಮಹಿಳೆಯರು ಆರೋಪಿಸಿದ್ದಾರೆ. ಭಾರತೀಯ ನ್ಯಾಯ ಸಂಹಿತಾದ ಹಲವು ಸೆಕ್ಷನ್‌ಗಳ ಅಡಿಯಲ್ಲಿ ಪೊಲೀಸರು ಕಲ್ಕಾಜಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದಾರೆ, ಇದರಲ್ಲಿ ಹಲ್ಲೆ, ತಪ್ಪು ಸಂಯಮ, ಹಿಂಬಾಲಿಸುವುದು, ಕ್ರಿಮಿನಲ್ ಬೆದರಿಕೆ ಮತ್ತು ನೋವುಂಟುಮಾಡುವ ಆರೋಪಗಳಿವೆ. ಹತ್ತಿರದ ಪ್ರದೇಶಗಳ ಸಿಸಿಟಿವಿ ದೃಶ್ಯಾವಳಿಗಳನ್ನು ಪರಿಶೀಲಿಸಲಾಗುತ್ತಿದೆ ಮತ್ತು ಘಟನೆಯ ಸಮಯದಲ್ಲಿ ಹಾಜರಿದ್ದ ಹಲವಾರು ಸಾಕ್ಷಿಗಳನ್ನು ಪ್ರಶ್ನಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಉಳಿದ ಆರೋಪಿಗಳ ಬಂಧನವನ್ನು ಖಚಿತಪಡಿಸಿಕೊಳ್ಳಲು ಪೊಲೀಸ್ ತಂಡಗಳು ದಾಳಿ ನಡೆಸುತ್ತಿವೆ.

# ಮೋದಿ ಭೇಟಿ ವೇಳೆ ಭದ್ರತಾ ವೈಫಲ್ಯ: ಹಿರಿಯ ಪೊಲೀಸ್ ಅಧಿಕಾರಿಗಳ ತಲೆದಂಡ ಸಾಧ್ಯತೆ



**ಬೆಂಗಳೂರು, ಮೇ 11:** ಪ್ರಧಾನಿ ನರೇಂದ್ರಮೋದಿ ಅವರು ನಗರಕ್ಕೆ ಭಾನುವಾರ ಆಗಮಿಸಿದ ವೇಳೆ ಭದ್ರತಾ ವೈಫಲ್ಯ ಉಂಟಾದ ಹಿನ್ನೆಲೆಯಲ್ಲಿ ಕೆಲವು ಹಿರಿಯ ಪೊಲೀಸ್ ಅಧಿಕಾರಿಗಳ ತಲೆದಂಡವಾಗುವ ಸಾಧ್ಯತೆ ಇದೆ.

ಪ್ರಕರಣವನ್ನು ಗಂಭೀರವಾಗಿ ತೆಗೆದುಕೊಳ್ಳಲಾಗಿದ್ದು, ಇದು ಪ್ರಧಾನಿಯನ್ನು ಗುರಿಯಾಗಿಟ್ಟುಕೊಂಡು ನಡೆಸಿರುವ ವ್ಯವಸ್ಥಿತ ಸಂಚು ಎಂಬುದು ಮೇಲ್ನೋಟಕ್ಕೆ ಕಂಡುಬಂದಿರುವುದರಿಂದ ಹಿರಿಯ ಅಧಿಕಾರಿಗಳನ್ನು ಅಮಾನತು ಪಡಿಸುವ ಬಗ್ಗೆ ಚಿಂತನೆ ನಡೆಸಲಾಗಿದೆ.

ರಾಜ್ಯ ಗುಪ್ತಚರ ವಿಭಾಗದ ಎಡಿಜಿಪಿ ಲಾಬೂರಾಮ್, ಬೆಂಗಳೂರು ದಕ್ಷಿಣ ಜಿಲ್ಲಾ ಎಸ್‌ಪಿ ಶ್ರೀನಿವಾಸ್ ಗೌಡ ಸೇರಿದಂತೆ ಪ್ರಧಾನಿಗಳ ಭದ್ರತಾ ಉಸ್ತುವಾರಿ ವಹಿಸಿದ್ದ ಪೊಲೀಸ್ ಅಧಿಕಾರಿಗಳಿಗೆ ಅಮಾನತು ಶಿಕ್ಷೆ ಕಾದಿದೆ ಎಂದು ಮೂಲಗಳು ಖಚಿತಪಡಿಸಿವೆ. ಈಗಾಗಲೇ ಜಿಲಿಟಿನ್ ಕಡ್ಡಿ ಪತ್ತೆಯಾದ ಪ್ರಕರಣವನ್ನು ರಾಷ್ಟ್ರೀಯ ತನಿಖಾ ದಳ (ಎನ್‌ಐಎ), ರಾಷ್ಟ್ರೀಯ ಭದ್ರತಾ ದಳ(ಎನ್‌ಎಸ್‌ಜಿ), ಸಂಶೋಧನೆ ಮತ್ತು ವಿಶ್ಲೇಷಣೆ(ರಾ) ಸೇರಿದಂತೆ ವಿವಿಧ ಕೇಂದ್ರೀಯ ಸಂಸ್ಥೆಗಳು ತನಿಖೆಯನ್ನು ಕೈಗೆತ್ತಿಕೊಂಡಿವೆ.

ಪ್ರಕರಣ ಸಂಬಂಧ 3 ತಂಡಗಳು ಪ್ರತ್ಯೇಕಾಗಿ ಜಿಲಿಟಿನ್ ಕಡ್ಡಿ ಹಾಗೂ ಬೆಂಕಿಪೊಟ್ಟಣ ಪತ್ತೆಯಾದ ಬೆಂಗಳೂರು ದಕ್ಷಿಣ ಜಿಲ್ಲೆಯ ಕಗ್ಗಲೀಪುರ ಸಮೀಪವಿರುವ ಒಡೇರಹಳ್ಳಿ ಕೆರೆಗೆ ಭೇಟಿ ಕೊಟ್ಟು ಸ್ಥಳೀಯ ಪೊಲೀಸರಿಂದ ಮಾಹಿತಿ ಪಡೆಯುತ್ತಿದೆ. ಪೊಲೀಸರ ವಶದಲ್ಲಿರುವ ಸಂಶಯಾಸ್ಪದ ವ್ಯಕ್ತಿ ಯಾವುದಾದರು ಭಯೋತ್ಪಾದಕ ಸಂಘಟನೆಗೆ ಸೇರಿದವನೇ? ಈತನಿಗೆ ಯಾರಾದರೂ ಪ್ರಚೋದನೆ ನೀಡಿದ್ದರೆ? ಅಂತಾರಾಷ್ಟ್ರೀಯ ಉಗ್ರಗಾಮಿ ಸಂಘಟನೆಗಳ ಸಂಪರ್ಕವಿದೆಯೇ ಸೇರಿದಂತೆ ಎಲ್ಲಾ ಆಯಾಮಗಳಲ್ಲೂ ತನಿಖೆ ಮುಂದುವರಿದಿದೆ.

ಪ್ರಕರಣದಲ್ಲಿ ಪೊಲೀಸರ ಭದ್ರತಾ ವೈಫಲ್ಯದ ಬಗ್ಗೆ ಸಂಶಯ ವ್ಯಕ್ತಪಡಿಸಿರುವ ತನಿಖಾ ಸಂಸ್ಥೆಗಳು ಹಿರಿಯ ಅಧಿಕಾರಿಗಳ ಅಮಾನತಿಗೆ ಸರ್ಕಾರಕ್ಕೆ ಶಿಫಾರಸ್ಸು ಮಾಡುವ ಸಾಧ್ಯತೆ ಇದೆ. ಪ್ರಧಾನಿ ಭದ್ರತೆಗೆ ಪೊಲೀಸರು ಕಾರ್ಯಕ್ರಮ ಆರಂಭಕ್ಕೂ ಮುನ್ನವೇ ನಿಯೋಜನೆ ಮಾಡಲಾಗಿರುತ್ತದೆ.

ಇಷ್ಟು ಭದ್ರತೆ ನಡುವೆಯೇ ಜಿಲಿಟಿನ್ ಕಡ್ಡಿ ಪತ್ತೆಯಾಗಿರುವುದು ಪೊಲೀಸರ ವೈಫಲ್ಯವೇ ಎಂದು ಸಂಶಯ ವ್ಯಕ್ತವಾಗಿದೆ. ಕೋರಮಂಗಲ ಮೂಲದ ವ್ಯಕ್ತಿಯೋರ್ವ ನಗರ ಪೊಲೀಸ್ ಆಯುಕ್ತರ ಕಚೇರಿಗೆ ದೂರವಾಣಿ ಕರೆ ಮಾಡಿ ಬೆದರಿಕೆವೊಡ್ಡಿದ್ದ. ಇದಕ್ಕೂ ಜಿಲಿಟಿನ್ ಕಡ್ಡಿ ಪತ್ತೆಯಾಗಿರುವುದಕ್ಕೂ ಒಂದಕ್ಕೊಂದು ಸಾಮ್ಯತೆ ಇದೆಯೇ ಎಂಬುದರ ಬಗ್ಗೆಯೂ ತನಿಖೆ ನಡೆಸಲಾಗುತ್ತಿದೆ.



ಬೆಂಗಳೂರಿನ ಕಬ್ಬನ್ ಪಾರ್ಕ್‌ನಲ್ಲಿ ನಡೆಯುತ್ತಿರುವ ಮಾವಿನಮೇಳಕ್ಕೆ ಮಾಜಿ ಪ್ರಧಾನಿ ಎಚ್‌ಡಿ ದೇವೇಗೌಡರು ಸೋಮವಾರ ಭೇಟಿ ನೀಡಿದ್ದರು.

# ಜಿಬಿಎ ಪಾಲಿಕೆಗಳಿಗೆ ಶೀಘ್ರದಲ್ಲೇ ಕ್ರೆಡಿಟ್ ರೇಟಿಂಗ್

### ಮುನಿಸಿಪಲ್ ಬಾಂಡ್ ಮೂಲಕ ಹಣ ಸಂಗ್ರಹ: ವಿಶೇಷ ಆಯುಕ್ತ ಹರೀಶ್ ಕುಮಾರ್



**ಬೆಂಗಳೂರು, ಮೇ 11:** ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ಅಡಿಯಲ್ಲಿ ರಚನೆಯಾದ ಐದು ನಗರ ನಿಗಮಗಳು ಶೀಘ್ರದಲ್ಲೇ ಕ್ರೆಡಿಟ್ ರೇಟಿಂಗ್ ಪಡೆಯಲಿದ್ದು, ಮುನ್ಸಿಪಲ್ ಬಾಂಡ್ ಮೂಲಕ ಸಾವಿರಾರು ಕೋಟಿ ರೂಪಾಯಿ ಮೌಲ್ಯದ ಮೂಲಸೌಕರ್ಯ ಯೋಜನೆಗಳನ್ನು ಕೈಗೆತ್ತಿಕೊಳ್ಳಲು ಸಜ್ಜಾಗಿವೆ. ಕ್ರೆಡಿಟ್ ರೇಟಿಂಗ್‌ಗೆ ಅಗತ್ಯವಿರುವ ದಾಖಲೆ ಪ್ರಕ್ರಿಯೆ ಪೂರ್ಣಗೊಂಡಿದ್ದು, ಈ ತಿಂಗಳ ಅಂತ್ಯದೊಳಗೆ ಐದು ನಿಗಮಗಳಿಗೂ ರೇಟಿಂಗ್ ಸಿಗುವ ನಿರೀಕ್ಷೆ ಇದೆ ಎಂದು ಜಿಬಿಎ ವಿಶೇಷ ಆಯುಕ್ತ (ಹಣಕಾಸು) ಹರೀಶ್ ಕುಮಾರ್ ಅವರು ತಿಳಿಸಿದ್ದಾರೆ.

ರೇಟಿಂಗ್ ಸಿಕ್ಕ ಬಳಿಕ ಪ್ರತಿ ನಿಗಮವೂ ಕೈಗೆತ್ತಿಕೊಳ್ಳಲಿರುವ ಪ್ರಮುಖ ಯೋಜನೆಗಳನ್ನು ಘೋಷಿಸಿ, ಅವುಗಳಿಗೆ ಅಗತ್ಯವಿರುವ ಹಣವನ್ನು ಮುನ್ಸಿಪಲ್ ಬಾಂಡ್ ಮೂಲಕ ಸಂಗ್ರಹಿಸಲಿದೆ. ನಗರಾಭಿವೃದ್ಧಿಗೆ ಉತ್ತೇಜನ ನೀಡುವ ಉದ್ದೇಶದಿಂದ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಕೇಂದ್ರ ಬಜೆಟ್‌ನಲ್ಲಿ ರೂ.1,000 ಕೋಟಿಗೂ ಹೆಚ್ಚು ಮೌಲ್ಯದ ಬಾಂಡ್ ಬಿಡುಗಡೆ ಮಾಡಿದ ನಗರ ಸಂಸ್ಥೆಗೆ ರೂ.100 ಕೋಟಿ ಪ್ರೋತ್ಸಾಹಧನ ನೀಡುವುದಾಗಿ ಘೋಷಿಸಿದ್ದರು.

ರಾಜ್ಯ ಬಜೆಟ್ ಮಂಡಿಸಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕೂಡ ಐದು ನಗರ ನಿಗಮಗಳು ತಮ್ಮ ಬ್ಯಾಲೆನ್ಸ್ ಶೀಟ್ ಆಧರಿಸಿ ಮುನ್ಸಿಪಲ್ ಬಾಂಡ್ ಮೂಲಕ ಸಂಪನ್ಮೂಲ ಸಂಗ್ರಹಿಸಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಬೇಕು ಎಂದು ಸೂಚಿಸಿದ್ದರು.ಈ ವರ್ಷದ ಮಾರ್ಚ್‌ನಲ್ಲಿ ಮಂಡಿಸಲಾದ ಮೊದಲ ಬಜೆಟ್‌ಗಳಲ್ಲಿ ಐದು ನಿಗಮಗಳೂ ತಲಾ ರೂ.200 ಕೋಟಿ ಮೌಲ್ಯದ ಮುನ್ಸಿಪಲ್ ಬಾಂಡ್ ಬಿಡುಗಡೆ ಮಾಡುವ ಯೋಜನೆ ಘೋಷಿಸಿದ್ದವು.

# ಹೆಣ್ಣು ಭ್ರೂಣಹತ್ಯೆ ಅಕ್ರಮಗಳ ಮಾಹಿತಿ ನೀಡಿದರೆ 1 ಲಕ್ಷ ರೂ. ಬಹುಮಾನ


### ಪಿಡುಗು ತಡೆಗೆ ಸಾರ್ವಜನಿಕರ ಸಹಭಾಗಿತ್ವ ಕೋರಿದ ಸರ್ಕಾರ

**ಬೆಂಗಳೂರು, ಮೇ 11:** ರಾಜ್ಯದಲ್ಲಿ ಲಿಂಗಾನುಪಾತದ ಸಮತೋಲನ ಕಾಯ್ದುಕೊಳ್ಳಲು ಮತ್ತು ಹೆಣ್ಣು ಭ್ರೂಣಹತ್ಯೆಯಂತಹ ಸಾಮಾಜಿಕ ಪಿಡುಗನ್ನು ಬೇರುಸಹಿತ ಕಿತ್ತೊಗೆಯಲು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮಹತ್ವದ ಹೆಜ್ಜೆಯನ್ನಿಟ್ಟಿದೆ. ಹೆಣ್ಣು ಭ್ರೂಣಹತ್ಯೆ ತಡೆಗೆ ಸಾರ್ವಜನಿಕರ ಸಹಭಾಗಿತ್ವವನ್ನು ಕೋರಿರುವ ಸರ್ಕಾರ, ಈ ಬಗ್ಗೆ ಮಾಹಿತಿ ನೀಡುವವರಿಗೆ ಭಾರಿ ಮೊತ್ತದ ನಗದು ಬಹುಮಾನವನ್ನು ಘೋಷಿಸಿದೆ. ಯಾರಾದರೂ ಅಕ್ರಮವಾಗಿ ಹೆಣ್ಣು ಭ್ರೂಣಹತ್ಯೆಯಲ್ಲಿ ತೊಡಗಿದ್ದರೆ ಅಥವಾ ಅದಕ್ಕೆ ಪ್ರಚೋದನೆ ನೀಡುತ್ತಿದ್ದರೆ, ಅಂತಹವರ ಬಗ್ಗೆ ನಿಖರ ಮಾಹಿತಿ ನೀಡುವ ಸಾರ್ವಜನಿಕರಿಗೆ 1 ಲಕ್ಷ ನಗದು ಬಹುಮಾನ ನೀಡಲಾಗುವುದು ಎಂದು ಇಲಾಖೆ ತಿಳಿಸಿದೆ.

ಮಾಹಿತಿ ನೀಡುವವರ ವಿವರಗಳನ್ನು ಅತ್ಯಂತ ಗೌಪ್ಯವಾಗಿ ಇಡಲಾಗುವುದು ಮತ್ತು ಅವರಿಗೆ ಸಾಮಾಜಿಕ ಮನ್ನಣೆಯನ್ನೂ ನೀಡಲಾಗುವುದು ಎಂದು ಸರ್ಕಾರ ಭರವಸೆ ನೀಡಿದೆ.

ಹೆಣ್ಣು ಭ್ರೂಣಹತ್ಯೆಗೆ ಸಂಬಂಧಿಸಿದ ದೂರು ಅಥವಾ ಮಾಹಿತಿಯನ್ನು ನೀಡಲು ಈ ಕೆಳಗಿನ ದೂರವಾಣಿ ಸಂಖ್ಯೆಗಳನ್ನು ಸಂಪರ್ಕಿಸಬಹುದು: 080–23295603 / 080–23295605 "ಮಡಿಲು ಸೇರುವ ಮುನ್ನ ಮಣ್ಣು ಸೇರಿಸದಿರಿ, ನನಗೂ ಬದುಕುವ ಹಕ್ಕಿದೆ" ಎಂಬ ಘೋಷವಾಕ್ಯದೊಂದಿಗೆ ಸರ್ಕಾರ ಜಾಗೃತಿ ಮೂಡಿಸುತ್ತಿದೆ.

"ಅಪ್ಪಾ, ಅಮ್ಮಾ, ಅಜ್ಜ, ಅಜ್ಜಿ ನಾನು ಹೆಣ್ಣು ಎಂಬ ಕಾರಣಕ್ಕೆ ನನ್ನನ್ನು ಕೊಲ್ಲಬೇಡಿ, ನಾನು ಎಂದಿಗೂ ನಿಮಗೆ ಹೊರೆಯಾಗುವುದಿಲ್ಲ, ಬದಲಾಗಿ ಆಸರೆಯಾಗುತ್ತೇನೆ" ಎಂದು ಭ್ರೂಣದ ಪರವಾಗಿ ಭಾವನಾತ್ಮಕವಾಗಿ ಮನವಿ ಮಾಡಿಕೊಳ್ಳಲಾಗಿದೆ. "ಭಯ ಬೇಡ, ನಂಬಿಕೆ ಇರಿಸಿ, ಹೆಣ್ಣುಭ್ರೂಣದ ಜೀವ ಉಳಿಸಿ." ಇದು ಸರ್ಕಾರದ ಆಶಯವಾಗಿದ್ದು, ಸಾರ್ವಜನಿಕರು ಈ ಅಭಿಯಾನದಲ್ಲಿ ಕೈಜೋಡಿಸಿ ಹೆಣ್ಣುಮಕ್ಕಳ ಬದುಕನ್ನು ಹಸನಾಗಿಸಬೇಕೆಂದು ಆರೋಗ್ಯ ಇಲಾಖೆ ವಿನಂತಿಸಿದೆ.



ಮುಂಗಾರು ಮಳೆ ಆರಂಭದ ಹಿನ್ನೆಲೆಯಲ್ಲಿ ಬೆಂಗಳೂರಿನ ಕಬ್ಬನ್ ಪಾರ್ಕ್‌ನಲ್ಲಿ ಸೋಮವಾರ ಮುಂಜಾಗ್ರತಾ ಕ್ರಮವಾಗಿ ಕೆರೆ ಸ್ವಚ್ಛಗೊಳಿಸುವ ಕಾರ್ಯ ಕೈಗೆತ್ತಿಕೊಳ್ಳಲಾಗಿತ್ತು.

# ಯುವಸಂಗಮ: ರಾಜಸ್ಥಾನ ವಿದ್ಯಾರ್ಥಿಗಳೊಂದಿಗೆ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋತ್ ಸಂವಾದ



**ಬೆಂಗಳೂರು, ಮೇ 11:** ಯುವ ಸಂಗಮ ಕಾರ್ಯಕ್ರಮದ ಅಂಗವಾಗಿ ಕರ್ನಾಟಕಕ್ಕೆ ಭೇಟಿ ನೀಡಿದ ರಾಜಸ್ಥಾನದ ವಿದ್ಯಾರ್ಥಿಗಳೊಂದಿಗೆ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋತ್ ಅವರು ಸೋಮವಾರ ಲೋಕಭವನ ದಲ್ಲಿ ಸಂವಾದ ನಡೆಸಿದರು.

ವಿದ್ಯಾರ್ಥಿಗಳನ್ನುದ್ದೇಶಿಸಿ ಮಾತನಾಡಿದ ರಾಜ್ಯಪಾಲರು, ಇಂತಹ ಶೈಕ್ಷಣಿಕ ಹಾಗೂ ಸಾಂಸ್ಕೃತಿಕ ವಿನಿಮಯ ಕಾರ್ಯಕ್ರಮಗಳು ದೇಶದ ವಿವಿಧ ರಾಜ್ಯಗಳ ಸಾಮಾಜಿಕ, ಸಾಂಸ್ಕೃತಿಕ ಹಾಗೂ ಅಭಿವೃದ್ಧಿಯ ವೈಶಿಷ್ಟ್ಯಗಳ ಬಗ್ಗೆ ಅರಿವು ಮೂಡಿಸುವ ಮೂಲಕ ರಾಷ್ಟ್ರೀಯ ಏಕತೆಯನ್ನು ಬಲಪಡಿಸುತ್ತವೆ ಎಂದು ಹೇಳಿದರು. ಯುವ ಸಂಗಮ ಕಾರ್ಯಕ್ರಮವು ವಿದ್ಯಾರ್ಥಿಗಳಿಗೆ ಭಾರತದ ವೈವಿಧ್ಯತೆಯನ್ನು ಅರ್ಥಮಾಡಿ ಕೊಳ್ಳಲು ಮತ್ತು ವಿವಿಧ ರಾಜ್ಯಗಳ ಅಭಿವೃದ್ಧಿ ಹಾಗೂ ಅನುಭವಗಳಿಂದ ಕಲಿಯಲು ಉತ್ತಮ ವೇದಿಕೆಯಾಗಿದ್ದು, ಈ ಅವಕಾಶವನ್ನು ಸದುಪಯೋಗಪಡಿಸಿಕೊಂಡು ದೇಶದ ಅಭಿವೃದ್ಧಿಗೆ ಕೊಡುಗೆ ನೀಡುವಂತೆ ಕರೆ ನೀಡಿದರು.ಭಾರತವು ವಿಶ್ವದ ನಾಲ್ಕನೇ ಅತಿದೊಡ್ಡ ಆರ್ಥಿಕ ಶಕ್ತಿಯಾಗಿ ಹೊರಹೊಮ್ಮಿದ್ದು, ದೇಶವನ್ನು ಇನ್ನಷ್ಟು ಉನ್ನತ ಮಟ್ಟಕ್ಕೆ ಕೊಂಡೊಯ್ಯಲು ಯುವಕರು ಶ್ರಮ ಮತ್ತು ಸಮರ್ಪಣೆಯಿಂದ ಕಾರ್ಯ ನಿರ್ವಹಿಸಬೇಕು ಎಂದು ಹೇಳಿದರು. ಸರ್ಕಾರದ ವಿವಿಧ ಯೋಜನೆಗಳ ಪ್ರಯೋಜನ ಪಡೆದು ರಾಷ್ಟ್ರ ನಿರ್ಮಾಣದಲ್ಲಿ ಪಾಲುದಾರರಾಗುವಂತೆ ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಐಐಐಟಿ ಧಾರವಾಡದ ಡಾ.ಎಸ್.ಆರ್. ಮಹದೇವ ಹಾಗೂ ಇತರ ಗಣ್ಯರು ಉಪಸ್ಥಿತರಿದ್ದರು.

# ಭಾರತೀಯ ವಿದ್ಯಾರ್ಥಿಗಳಿಗೆ ಜರ್ಮನಿ ಉನ್ನತ ಶಿಕ್ಷಣ, ವೃತ್ತಿ ಆದ್ಯತೆಯ ತಾಣ

**ಬೆಂಗಳೂರು, ಮೇ 11:** ಮಾರ್ಚ್ 2026ರಲ್ಲಿ ಟೆರಾಟೆರ್ನ್ ನಡೆಸಿದ ಸಮೀಕ್ಷೆಯ ಪ್ರಕಾರ, ಕರ್ನಾಟಕ ಮತ್ತು ಭಾರತದ ಇತರ ಭಾಗಗಳ ವಿದ್ಯಾರ್ಥಿಗಳಲ್ಲಿ ಉನ್ನತ ಶಿಕ್ಷಣ ಮತ್ತು ವೃತ್ತಿ ಅವಕಾಶಗಳಿಗೆ ಜರ್ಮನಿ ದೇಶವು ಆದ್ಯತೆಯ ತಾಣವಾಗಿ ಹೊರಹೊಮ್ಮುತ್ತಿದೆ. ಮೈಸೂರು ಹೊರತುಪಡಿಸಿ, ಬೆಂಗಳೂರು, ಮಂಗಳೂರು, ಕಲಬುರಗಿ, ಉಡುಪಿ, ಶಿವಮೊಗ್ಗ ಮತ್ತು ದಾವಣಗೆರೆಯ ವಿದ್ಯಾರ್ಥಿಗಳು ಜರ್ಮನಿಯಲ್ಲಿ ಉನ್ನತ ಅಧ್ಯಯನ ಮತ್ತು ಉದ್ಯೋಗವನ್ನು ಪಡೆಯುತ್ತಿದ್ದಾರೆ ಎಂದು ಸಮೀಕ್ಷೆಯಿಂದ ತಿಳಿದು ಬಂದಿದೆ.

600ಕ್ಕೂ ಹೆಚ್ಚು ಭಾರತೀಯ ವಿದ್ಯಾರ್ಥಿಗಳು ಈಗಾಗಲೇ ಜರ್ಮನಿಗೆ ತೆರಳಿದ್ದಾರೆ, ಕರ್ನಾಟಕ, ತಮಿಳುನಾಡು, ಮಹಾರಾಷ್ಟ್ರ, ಆಂಧ್ರಪ್ರದೇಶ ಮತ್ತು ಕೇರಳಗಳು ಹೆಚ್ಚಿನ ಕೊಡುಗೆ ನೀಡುವ ರಾಜ್ಯಗಳಾಗಿ ಹೊರಹೊಮ್ಮಿವೆ. ಎಂಜಿನಿಯರಿಂಗ್, ಕಂಪ್ಯೂಟರ್ ವಿಜ್ಞಾನ, ಕೃತಕ ಬುದ್ಧಿಮತ್ತೆ, ವ್ಯವಹಾರ ಆಡಳಿತ ಮತ್ತು ವೈದ್ಯಕೀಯವು ಹೆಚ್ಚು ಬೇಡಿಕೆಯಿರುವ ಕೋರ್ಸ್‌ಗಳಾಗಿ ಉಳಿದಿವೆ. ಅನೇಕ ಪದವೀಧರರು ಐಟಿ, ಆಟೋಮೋಟಿವ್ ಎಂಜಿನಿಯರಿಂಗ್, ಆರೋಗ್ಯ ರಕ್ಷಣೆ, ಹಣಕಾಸು ಮತ್ತು ನವೀಕರಿಸಬಹುದಾದ ಇಂಧನದಂತಹ ಕ್ಷೇತ್ರಗಳಲ್ಲಿ ಉದ್ಯೋಗವನ್ನು ಕಂಡುಕೊಳ್ಳುತ್ತಿದ್ದಾರೆ, ಅಲ್ಲಿ ಕೌಶಲ್ಯಪೂರ್ಣ ವೃತ್ತಿಪರರಿಗೆ ಬೇಡಿಕೆ ಹೆಚ್ಚಿದೆ.ಜರ್ಮನಿಯ ಬೋಧನಾ-ಮುಕ್ತ ಸಾರ್ವಜನಿಕ ವಿಶ್ವವಿದ್ಯಾಲಯಗಳು, ತುಲನಾತ್ಮಕವಾಗಿ ಕಡಿಮೆ ಜೀವನ ವೆಚ್ಚ ಹಾಗೂ ರಚನಾತ್ಮಕ 18 ತಿಂಗಳ ಅಧ್ಯಯನದ ನಂತರದ ಕೆಲಸದ ವೀಸಾ ವ್ಯವಸ್ಥೆಯು ಈ ಬದಲಾವಣೆಗೆ ಕಾರಣವಾಗುವ ಪ್ರಮುಖ ಅಂಶಗಳಲ್ಲಿ ಸೇರಿವೆ. ಹೀಗಾಗಿ ವಿದ್ಯಾರ್ಥಿಗಳು ಉದ್ಯೋಗಾವಕಾಶಗಳು ಮತ್ತು ದೀರ್ಘಾವಧಿಯ ವಲಸೆಗೆ ಹೆಚ್ಚು ಆದ್ಯತೆ ನೀಡುತ್ತಿದ್ದಾರೆ.

# ಮೀಸಲಾತಿ ಹೆಚ್ಚಳ ಶೆಡ್ಯೂಲ್ 9ಕ್ಕೆ ಸೇರಿಸದಿದ್ದರೆ ಉಗ್ರ ಹೋರಾಟ: ಉಗ್ರಪ್ಪ ಎಚ್ಚರಿಕೆ



**ಬೆಂಗಳೂರು, ಮೇ 11:** ಪರಿಶಿಷ್ಟ ಪಂಗಡ ಹಾಗೂ ಪರಿಶಿಷ್ಟ ಜಾತಿಯ ಮೀಸಲಾತಿ ಹೆಚ್ಚಳ ವಿಚಾರವನ್ನು ಶೆಡ್ಯೂಲ್ 9ಕ್ಕೆ ಸೇರಿಸದಿದ್ದರೆ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ವಿರುದ್ಧ ರಾಜ್ಯಾದ್ಯಂತ ಉಗ್ರ ಹೋರಾಟ ನಡೆಸಲಾಗುವುದು ಎಂದು ಮಾಜಿ ಸಂಸದ, ಕರ್ನಾಟಕ ರಾಜ್ಯ ವಾಲ್ಮೀಕಿ ಸಮಾಜದ ಸಮಾನ ಮನಸ್ಕರ ವೇದಿಕೆ ಅಧ್ಯಕ್ಷ ವಿ.ಎಸ್. ಉಗ್ರಪ್ಪ ಎಚ್ಚರಿಕೆ ನೀಡಿದ್ದಾರೆ.

ಶಾಸಕರ ಭವನದ ಆವರಣದಲ್ಲಿರುವ ವಾಲ್ಮೀಕಿ ಪ್ರತಿಮೆ ಎದುರು ಸಮಾಜದ ಮುಖಂಡರ ಸಭೆ ಬಳಿಕ ಮಾಧ್ಯಮಗಳ ಜೊತೆಗೆ ಮಾತನಾಡಿದ ಅವರು, ಇಂದು ಎಸ್ಟಿ, ಎಸ್ಸಿ, ಒಬಿಸಿ ಸಮುದಾಯದ ಸಂಘಟಕರ ತುರ್ತು ಸಭೆ ನಡೆಸಿದ್ದೇವೆ. ನಾವು ಈಗಾಗಲೇ 22 ಜಿಲ್ಲೆಗಳ ಪ್ರವಾಸ ಮಾಡಿ ಜನ ಜಾಗೃತಿ ನಡೆಸಲಾಗಿದೆ. ಉಳಿದ ಜಿಲ್ಲೆಗಳಲ್ಲಿ ಮುಂದೆ ಪ್ರವಾಸ ಮಾಡುತ್ತೇವೆ. ರಾಜ್ಯದಲ್ಲಿ 1.20 ಕೋಟಿ ಎಸ್ಸಿ, 50 ಲಕ್ಷ ಎಸ್ಟಿ, ಶೇ.32 ಒಬಿಸಿ ಜನರಿದ್ದಾರೆ. 243 ಕಲಂ ಪ್ರಕಾರ ಎಲ್ಲ ಕಡೆ ಮೀಸಲಾತಿ ಇದೆ. ಆದರೆ ಶಿಕ್ಷಣ ಮತ್ತು ಉದ್ಯೋಗದಲ್ಲಿ ಮೀಸಲಾತಿ ಇಲ್ಲವಾಗಿದೆ ಎಂದರು.

ಹೈಕೋರ್ಟ್ ನಿರ್ದೇಶನದ ಮೇಲೆ ನ್ಯಾ. ನಾಗಮೋಹನ್ ದಾಸ್ ಆಯೋಗ ರಚನೆಯಾಯಿತು. ನಂತರ ನ್ಯಾ. ಸುಭಾಷ್ ಅಡಿ ನೇತೃತ್ವದಲ್ಲಿ ಮತ್ತೊಂದು ಆಯೋಗವೂ ರಚನೆ ಮಾಡಲಾಯಿತು. ಅವುಗಳ ವರದಿ ಆಧಾರದ ಮೇಲೆ ಹಿಂದಿನ ಬಿಜೆಪಿ ಸರ್ಕಾರ ಮೀಸಲಾತಿ ಹೆಚ್ಚಳ ಮಾಡಲಾಯಿತು. ಆದರೆ ಇಲ್ಲಿವರೆಗೆ ಆ ಮೀಸಲಾತಿ ಕಾನೂನನ್ನು ಶೆಡ್ಯೂಲ್ 9ಗೆ ಸೇರಿಸಿಲ್ಲ. ಇದು ವಿಪರ್ಯಾಸ. ಆದರೆ ಈಗ ಹೈಕೋರ್ಟ್ ನಲ್ಲಿ ತಡೆಯಾಜ್ಞೆ ಬಂದಿದೆ. ಅದಾದ ಬಳಿಕ ಯಾವ ಪಕ್ಷದ ನಾಯಕರೂ ಮಾತಾಡುತ್ತಿಲ್ಲ. ನಿಮಗೆ ಬದ್ಧತೆ ಇದ್ದರೆ ದಯಮಾಡಿ ಬಾಯಿ ಬಿಡಿ, ಇದನ್ನು ಶೆಡ್ಯೂಲ್ 9ಗೆ ಸೇರಿಸಲು ಒತ್ತಾಯಿಸಬೇಕು ಎಂದು ಆಗ್ರಹಿಸಿದರು.

ಮಂಗಳವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿಮಾಡಿ ಮನವಿ ಮಾಡುತ್ತೇವೆ. ತಕ್ಷಣ ಸರ್ವ ಪಕ್ಷ ಸಭೆ ಕರೆದು, ಸರ್ವಪಕ್ಷದ ನಾಯಕರ ಜೊತೆ ಪ್ರಧಾನಿಯನ್ನು ಭೇಟಿ ಮಾಡಬೇಕು. ನಂತರ ಮೀಸಲಾತಿ ಬಗ್ಗೆ ಹೈಕೋರ್ಟ್ ನಲ್ಲಿರುವ ಪ್ರಕರಣವನ್ನು ಸರ್ಕಾರ ತೆರವು ಮಾಡಿಸಬೇಕು. ಇಲ್ಲದಿದ್ದರೆ ಉತ್ತಮ ನ್ಯಾಯವಾದಿಗಳನ್ನು ನಿಯೋಜಿಸಬೇಕು. ರಾಜ್ಯದಲ್ಲಿ ಈಗಾಗಲೇ ಸುಳ್ಳು ಜಾತಿ ಪ್ರಮಾಣ ಪತ್ರ ಹೆಚ್ಚಾಗುತ್ತಿದೆ. ಈ ಸುಳ್ಳು ಜಾತಿ ಪ್ರಮಾಣಪತ್ರ ನೀಡಬಾರದು ಎಂದು ಆದೇಶವಿದ್ದರೂ ಸುಳ್ಳು ಜಾತಿ ಪ್ರಮಾಣಪತ್ರ ವಿತರಣೆಯಾಗುತ್ತಿದೆ. ಹೀಗಾಗಿ ತಪ್ಪಿತಸ್ಥ ಅಧಿಕಾರಿಗಳು ಹಾಗೂ ಸುಳ್ಳು ಪ್ರಮಾಣಪತ್ರ ಪಡೆದವರ ಮೇಲೆ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಉಗ್ರಪ್ಪ ಒತ್ತಾಯಿಸಿದರು.

ಮೀಸಲಾತಿ ವಿಚಾರದಲ್ಲಿ ನಮ್ಮ ನಾಯಕರು ಮೌನಿಬಾಬಾಗಳಾಗದೇ, ಆತ್ಮವಂಚನೆ ಮಾಡಿಕೊಳ್ಳಬಾರದು. ಇದು ಕೇಂದ್ರ ಸರ್ಕಾರದ ಜವಾಬ್ದಾರಿ. ಆದರೆ ಜವಾಬ್ದಾರಿ ತೆಗೆದುಕೊಳುತ್ತಿಲ್ಲ. ಈ ಬಗ್ಗೆ ನೀವೆಲ್ಲ ತುಟಿ ಬಿಚ್ಚಬೇಕು. ಆರ್.ಎಸ್.ಎಸ್‌ನ ದತ್ತಾತ್ರೇಯ ಹೊಸಬಾಳೆ ಅವರು ನಾವೆಲ್ಲರೂ ಹಿಂದೂ ಎನ್ನುತ್ತಾರೆ. ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ತಕ್ಷಣ ಎಚ್ಚೆತ್ತುಕೊಂಡು ಮೀಸಲಾತಿಯನ್ನು ಶೆಡ್ಯೂಲ್ 9ಗೆ ಸೇರಿಸದಿದ್ದರೆ ರಾಜ್ಯಾದ್ಯಂತ ಹೋರಾಟ ಮಾಡುತ್ತೇವೆ. ಎಸ್ಸಿ, ಎಸ್ಟಿ, ಓಬಿಸಿ ಒಟ್ಟುಗೂಡಿ ಅಹಿಂಸಾತ್ಮಕ ಹೋರಾಟಕ್ಕೆ ಅಣಿಯಾಗುತ್ತೇವೆ. ಶೇ.56 ಮೀಸಲಾತಿ ಅಡಿಯಲ್ಲೇ ಸರ್ಕಾರಿ ನೌಕರರ ನೇಮಕಾತಿ ಆಗಬೇಕು. ಈ ಚೆಂಡು ಕೇಂದ್ರ ಸರ್ಕಾರದ ಅಂಗಳದಲ್ಲಿದೆ. ರಾಜ್ಯದ ಸಂಸದರಿಗೆ ಜವಾಬ್ದಾರಿ ಇಲ್ಲ. ಆರ್ಥಿಕ ಮೀಸಲಾತಿ ಜಾರಿಗೆ ತರುವಾಗ ಮೀಸಲಾತಿ ವಿಚಾರ ಗೊತ್ತಾಗಲಿಲ್ಲವೇ? ಆದರೆ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಮೀಸಲಾತಿ ವಿಚಾರ ಬಂದಾಗ ಮಾತ್ರ ಮೀಸಲಾತಿಯ ಗಡಿ ಅಡ್ಡಬರುತ್ತದೆಯೇ ಎಂದು ಪ್ರಶ್ನಿಸಿದರು.

# ವೀರಪ್ಪನ್ ಕಾರ್ಯಾಚರಣೆಯಲ್ಲಿ ಭಾಗಿಯಾಗಿದ್ದ 72 ಸಿಬ್ಬಂದಿಗೆ ಬಹುಮಾನದ ಮೊತ್ತ ಪಾವತಿಸಿ

### ಸರ್ಕಾರಕ್ಕೆ ಮೂರು ತಿಂಗಳ ಗಡುವು ನೀಡಿ ಹೈಕೋರ್ಟ್ ಆದೇಶ

**ಬೆಂಗಳೂರು, ಮೇ 11:** ಕಾಡುಗಳ್ಳ ವೀರಪ್ಪನ್ ಹಿಡಿಯಲು ನೇಮಕವಾಗಿದ್ದ ವಿಶೇಷ ಕಾರ್ಯಾಚರಣಾ ಪಡೆ (ಎಸ್‌ಟಿಎಫ್) ಭಾಗವಾಗಿದ್ದ 72 ಮಂದಿಗೆ ಬಹುಮಾನದ ಮೊತ್ತವನ್ನು ಮೂರು ತಿಂಗಳಲ್ಲಿ ಪಾವತಿಸುವಂತೆ ರಾಜ್ಯ ಸರ್ಕಾರ ಮತ್ತು ಅರಣ್ಯ ಇಲಾಖೆಗೆ ಹೈಕೋರ್ಟ್ ಈಚೆಗೆ ನಿರ್ದೇಶಿಸಿದೆ.

2005ರ ಜುಲೈ 8ರ ಸರ್ಕಾರಿ ಆದೇಶದ ಪ್ರಕಾರ ಫಲಾನುಭವಿಗಳಿಗೆ ಬಹುಮಾನ ವಿತರಿಸುವಂತೆ ನ್ಯಾಯಮೂರ್ತಿ ಸಚಿನ್ ಶಂಕರ್ ಮಗದುಮ್ ಅವರ ಏಕಸದಸ್ಯ ಪೀಠವು ಏಪ್ರಿಲ್ 21ರಂದು ಸರ್ಕಾರಕ್ಕೆ ಆದೇಶಿಸಿದೆ.

ನಿವೃತ್ತ ಅರಣ್ಯ ರಕ್ಷಕರು, ವಾಚರ್, ಡ್ರೈವರ್, ಉಪ ಅರಣ್ಯ ಸಂರಕ್ಷಕರು, ಸಹಾಯಕ ಅರಣ್ಯ ರಕ್ಷಕರು, ಕ್ಷೇತ್ರ ಅರಣ್ಯ ರಕ್ಷಕರು



ಎಸ್‌ಟಿಎಫ್ ಭಾಗವಾಗಿ ವೀರಪ್ಪನ್ ಸೆರೆ ಹಿಡಿಯುವ ಕಾರ್ಯಾಚರಣೆಯಲ್ಲಿ ಭಾಗಿಯಾಗಿದ್ದರು. 2004ರ ಅಕ್ಟೋಬರ್ 18ರಂದು ವೀರಪ್ಪನ್‌ನನ್ನು ಹತ್ಯೆ ಮಾಡಲಾಗಿತ್ತು.

ಈಗಾಗಲೇ ಪರಿಹಾರ ಪಡೆದಿರುವವರಂತೆಯೇ ಅರ್ಜಿದಾರರು ಬಹುಮಾನಕ್ಕೆ ಅರ್ಹರಾಗಿದ್ದಾರೆ. ಇವರಿಗೆ ಬಹುಮಾನದ ಮೊತ್ತ ನಿರಾಕರಿಸುವುದು ಈಗಾಗಲೇ ನ್ಯಾಯಾಂಗದ ಮಧ್ಯಸ್ಥಿಕೆಯಿಂದ ಸರಿಪಡಿಸಲ್ಪಟ್ಟಿರುವ ಅಕ್ರಮವನ್ನು ಶಾಶ್ವತಗೊಳಿಸಿದಂತಾಗಲಿದೆ ಎಂದು ನ್ಯಾಯಾಲಯ ಅಭಿಪ್ರಾಯಪಟ್ಟಿದೆ.

ನ್ಯಾಯಾಲಯವು ಈಗಾಗಲೇ ಪ್ರಕರಣವನ್ನು ನಿರ್ಧರಿಸಿ ಪರಿಹಾರ ದೊರಕಿಸಿರುವುದರಿಂದ ಸರ್ಕಾರ ಮತ್ತು ಅದರ ಸಕ್ಷಮ ಪ್ರಾಧಿಕಾರಗಳು ಇಂಥದ್ದೇ ಪರಿಸ್ಥಿತಿಯಲ್ಲಿರುವವರಿಗೆ ಮತ್ತೆ ಪ್ರತ್ಯೇಕವಾಗಿ ನ್ಯಾಯಾಲಯದ ಮೊರೆ ಹೋಗುವುದಕ್ಕೆ ಆಸ್ಪದ ನೀಡದೇ ಸೌಲಭ್ಯ ವಿಸ್ತರಿಸುವುದು ಸಾಂವಿಧಾನಿಕ ಹೊಣೆಗಾರಿಕೆಯಾಗಿದೆ ಎಂದು ಪೀಠ ಹೇಳಿದೆ.

2024ರ ಆಗಸ್ಟ್ 12ರ ಸಮನ್ವಯ ಪೀಠದ ತೀರ್ಪಿನ ಪ್ರಕಾರ ಪರಿಹಾರ ಪಡೆದಿರುವವರು ಮತ್ತು ಹಾಲಿ ಅರ್ಜಿದಾರರ ನಡುವೆ ತಾರತಮ್ಯ ಮಾಡಲಾಗದು. ಈ ಹಿಂದೆ ಸಮನ್ವಯ ಪೀಠವು 17 ಮಂದಿಗೆ ಪರಿಹಾರ ಬಿಡುಗಡೆ ಮಾಡಲು ಆದೇಶಿಸಿತ್ತು ಎಂದು ಹೈಕೋರ್ಟ್ ಹೇಳಿದೆ.

ಹಲವು ವರ್ಷಗಳ ಕಾಲ ವೀರಪ್ಪನ್ ಸದೆಬಡಿಯುವ ಕಾರ್ಯಾಚರಣೆಯಲ್ಲಿ ಪಾಲ್ಗೊಂಡಿದ್ದರೂ ಬಹುಮಾನದ ಮೊತ್ತವನ್ನು ಕೆಲವೇ ಸಿಬ್ಬಂದಿಗೆ ಸೀಮಿತಗೊಳಿಸಿದ್ದ ರಾಜ್ಯ ಸರ್ಕಾರದ ನಿಲುವನ್ನು ಈ ಹಿಂದೆ ನ್ಯಾಯಾಲಯವು ಕಟುವಾಗಿ ಟೀಕಿಸಿತ್ತು. ನೀಡಿರುವ ಮಾತನ್ನು ಉಳಿಸಿಕೊಳ್ಳಬೇಕೆ ವಿನಾ ಅದನ್ನು ಮುರಿಯಬಾರದು. ಅದರಲ್ಲೂ ಸಾರ್ವಭೌಮ ರಾಜ್ಯವು ನೀಡುವ ವಾಗ್ದಾನಕ್ಕೆ ತನ್ನದೇ ಆದ ಮಹತ್ವ ಇರುತ್ತದೆ ಎಂದು ಪೀಠ ಕಟುವಾಗಿ ಹೇಳಿತ್ತು.

ವೀರಪ್ಪನ್‌ನನ್ನು ಒಂದು ದಿನದಲ್ಲಿ ಕೆಲವೇ ಕೆಲವು ಸಿಬ್ಬಂದಿ ಹತ್ಯೆ ಮಾಡಿಲ್ಲ. ಇದಕ್ಕೂ ಮುನ್ನ ಹಲವು ಸಿಬ್ಬಂದಿ ತಮ್ಮ ಜೀವನವನ್ನು ಪಣಕ್ಕಿಟ್ಟು ಮಾಹಿತಿ ಸಂಗ್ರಹಿಸಿ, ಕಾರ್ಯಚಾರಣೆಯಲ್ಲಿ ಭಾಗಿಯಾಗಿದ್ದಾರೆ ಎಂದು ನ್ಯಾಯಾಲಯ ಅಭಿಪ್ರಾಯಪಟ್ಟಿತ್ತು.

2005ರ ಜನವರಿ 24ರಂದು ಪೊಲೀಸ್ ಮಹಾನಿರ್ದೇಶಕರು ವೀರಪ್ಪನ್ ಕಾರ್ಯಾಚರಣೆ ಯಲ್ಲಿ ಭಾಗಿಯಾಗಿದ್ದ ಸಿಬ್ಬಂದಿಗೆ ಬಹುಮಾನ ನೀಡುವಂತೆ ರಾಜ್ಯ ಸರ್ಕಾರಕ್ಕೆ ಶಿಫಾರಸ್ಸು ಮಾಡಿದ್ದರು. 2005ರ ಜುಲೈ 8ರಂದು ಇದನ್ನು ಸರ್ಕಾರ ಒಪ್ಪಿಕೊಂಡಿತ್ತು.

ಇದರ ಭಾಗವಾಗಿ ರೂಪಿಸಿದ ಯೋಜನೆಯ ಪ್ರಕಾರ ಎಸ್‌ಟಿಎಫ್‌ನಲ್ಲಿ ಮೂರು ವರ್ಷಕ್ಕೂ ಅಧಿಕ ಕಾಲ ಕೆಲಸ ಮಾಡಿದವರಿಗೆ 3 ಲಕ್ಷ; ಎರಡು ಅಥವಾ ಮೂರು ವರ್ಷದೊಳಗೆ ಕೆಲಸ ಮಾಡಿದವರಿಗೆ 2 ಲಕ್ಷ ಮತ್ತು ಒಂದು ಅಥವಾ ಎರಡು ವರ್ಷದಲ್ಲಿ ಕೆಲಸ ಮಾಡಿದ ಸಿಬ್ಬಂದಿಗೆ ಹಾಗೂ ಒಂದು ವರ್ಷದ ಕೆಳಗೆ ಕೆಲಸ ಮಾಡಿದ ಸಿಬ್ಬಂದಿಗೆ 50,000 ನೀಡಲಾಗುವುದು ಎಂದು ಘೋಷಿಸಲಾಗಿತ್ತು.

ಅಲ್ಲದೇ ಇನ್‌ಸ್ಪೆಕ್ಟರ್ ಶ್ರೇಣಿಗಿಂತ ಕೆಳಗಿನವರಿಗೆ 30X40 ನಿವೇಶನ, ಡಿವೈಎಸ್‌ಪಿ ಶ್ರೇಣಿಯ ಅಧಿಕಾರಿಗಳಿಗೆ 40ಥ60 ನಿವೇಶನಕ್ಕೆ ಶಿಫಾರಸ್ಸು ಮಾಡಲಾಗಿತ್ತು. ಇದೆಲ್ಲದರ ನಡುವೆ ಪ್ರಧಾನ ಮುಖ್ಯಅರಣ್ಯ ರಕ್ಷಣಾಧಿ ಕಾರಿಯು 259 ಅರ್ಹ ಅರಣ್ಯ ಸಿಬ್ಬಂದಿ, ಅವರ ಪದನಾಮ, ಸೇವಾ ಸ್ಥಳ ಮತ್ತು ಎಸ್‌ಟಿಎಫ್‌ನಲ್ಲಿ ಅವರ ಸೇವೆಯ ಮಾಹಿತಿಯನ್ನು ಒದಗಿಸಿದ್ದರು.

ಇದೆಲ್ಲದರ ಮಧ್ಯೆ, ಬಹುಮಾನದ ಮೊತ್ತ ಖಾಲಿಯಾಗಿರುವುದರಿಂದ ರಾಜ್ಯ ಸರ್ಕಾರವು ವೀರಪ್ಪನ್ ಕೊಲೆಯಾದ ದಿನ ಸ್ಥಳದಲ್ಲಿದ್ದ ಆರು ಮಂದಿ ಎಸ್‌ಟಿಎಫ್ ಸಿಬ್ಬಂದಿ ಮಾತ್ರ ಬಹುಮಾನದ ಮೊತ್ತವನ್ನು ನೀಡಲಾಗುವುದು ಎಂದು ಹೇಳಿತ್ತು. ಈ ವಾದವನ್ನು ತಿರಸ್ಕರಿಸಿದ್ದ ಹೈಕೋರ್ಟ್, ಸರ್ಕಾರದ ವಾದವು ತಾರತಮ್ಯದಿಂದ ಕೂಡಿದ ಅಸೂಕ್ಷ್ಮ ನಿರ್ಧಾರ ಎಂದು ಜರೆದಿತ್ತು.

# ಆರೋಪಪಟ್ಟಿ ಸಲ್ಲಿಸುವವರೆಗೂ ಎಸ್‌ಐಟಿ ತನಿಖಾಧಿಕಾರಿ ವರ್ಗಾವಣೆಗೆ ತಡೆ

### ಸರ್ಕಾರಕ್ಕೆ ಹೈಕೋರ್ಟ್ ಕಟ್ಟುನಿಟ್ಟಿನ ನಿರ್ದೇಶನ

### ತನಿಖೆ ವಿಳಂಬವಾಗಲಿದೆ ಎಂದು ಅಭಿಮತ

**ಬೆಂಗಳೂರು, ಮೇ 11:** ಯಾವುದೇ ಒಂದು ಪ್ರಕರಣದ ತನಿಖೆಗೆ ವಿಶೇಷ ತನಿಖಾ ತಂಡ ರಚನೆ ಮಾಡಿ ತನಿಖಾಧಿಕಾರಿ ನೇಮಕವಾದಲ್ಲಿ, ಆ ಪ್ರಕರಣದ ತನಿಖೆ ಪೂರ್ಣಗೊಂಡು ಆರೋಪಪಟ್ಟಿ ಸಲ್ಲಿಕೆಯಾಗುವ ವರೆಗೂ ತನಿಖಾಧಿಕಾರಿಯನ್ನು ವರ್ಗಾವಣೆ ಮಾಡುವಂತಿಲ್ಲ ಎಂದು ಸರ್ಕಾರಕ್ಕೆ ಹೈಕೋರ್ಟ್ ಕಟ್ಟುನಿಟ್ಟಿನ ನಿರ್ದೇಶನ ನೀಡಿದೆ.

ಗಂಭೀರ ಪ್ರಕರಣಗಳ ತನಿಖೆಗಾಗಿ ಎಸ್‌ಐಟಿ ರಚನೆ ಮಾಡಲಾಗುತ್ತಿದೆ. ತನಿಖೆ ಪ್ರಕ್ರಿಯೆಯಲ್ಲಿರುವಾಗಲೇ ತನಿಖಾಧಿಕಾರಿಯನ್ನು ವರ್ಗಾವಣೆ ಮಾಡಿದರೆ ತನಿಖೆ ವಿಳಂಬವಾಗಲಿದ್ದು, ವಿಶೇಷ ತನಿಖಾ ತಂಡ ರಚನೆ ಮಾಡಿ ಪ್ರಯೋಜನವೇನು. ಶೀಘ್ರದಲ್ಲಿ ತನಿಖೆ ಪೂರ್ಣಗೊಳಿಸಲು ಸಾಧ್ಯವೇ ಎಂದು ಕೋರ್ಟ್ ಮೌಖಿಕವಾಗಿ ಪ್ರಶ್ನಿಸಿದೆ.

ಡ್ರೋನ್ ತಂತ್ರಜ್ಞಾನ ದತ್ತಾಂಶ ಕಳವು ಪ್ರಕರಣದ ಕುರಿತಂತೆ ಮರು ತನಿಖೆ ನಡೆಸಬೇಕು ಎಂದು ಹೈಕೋರ್ಟ್, ಡಿಜಿಪಿ ಪ್ರಣಬ್ ಮೊಹಂತಿ ನೇತೃತ್ವದಲ್ಲಿ ವಿಶೇಷ ತನಿಖಾ ದಳ ರಚನೆಗೆ ಆದೇಶಿಸಿತ್ತು. ಇದೇ ಪ್ರಕರಣದ ಆರೋಪಿಗೆ ವಿಚಾರಣಾ ನ್ಯಾಯಾಲಯ ನಿರೀಕ್ಷಣಾ ಜಾಮೀನು ಮಂಜೂರು ಮಾಡಿತ್ತು. ಈ ನಿರೀಕ್ಷಣಾ ಜಾಮೀನು ರದ್ದುಕೋರಿ ನ್ಯೂಸ್ಪೇಸ್ ರಿಸರ್ಚ್ ಆಂಡ್ ಟೆಕ್ನಾಲಜೀಸ್ ಕಂಪನಿಯು ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿತ್ತು. ಈ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ವಿ.ಶ್ರೀಶಾನಂದ ಅವರಿದ್ದ ಈ ಸೂಚನೆ ನೀಡಿದೆ.

ವಿಚಾರಣೆ ವೇಳೆ ನ್ಯಾಯಪೀಠ, ಎಸ್‌ಐಟಿ ರಚನೆ ಮಾಡಿ ಒಂದು ವರ್ಷ ಕಳೆದಿದೆ, ಆದರೂ ವಿಚಾರಣೆ ಏಕೆ ಪೂರ್ಣಗೊಳಿಸಿಲ್ಲ ಎಂದು ಪ್ರಶ್ನಿಸಿತು. ಇದಕ್ಕೆ ಉತ್ತರಿಸಿದ ಸರ್ಕಾರದ ಪರ ವಕೀಲರು, ತನಿಖಾಧಿಕಾರಿಯನ್ನು ಮತ್ತೊಂದು ಎಸ್‌ಐಟಿ ಮುಖ್ಯಸ್ಥರನ್ನಾಗಿ ನೇಮಿಸಲಾಗಿತ್ತು. ಆದ್ದರಿಂದ ವಿಳಂಬಕ್ಕೆ ಕಾರಣವಾಗಿದೆ ಎಂದು ಪೀಠಕ್ಕೆ ತಿಳಿಸಿದ್ದರು. ಇದಕ್ಕೆ ತೀವ್ರ ಅಸಮಾಧಾನಗೊಂಡ ನ್ಯಾಯಪೀಠ, ಎಸ್‌ಐಟಿ ರಚನೆ ಮಾಡಿ ತನಿಖಾಧಿಕಾರಿ ನೇಮಕ ಬಳಿಕ ಆಡಳಿತಾತ್ಮಕ ಕಾರಣಗಳಿದ್ದರೂ ಸಹ, ದೋಷಾರೋಪ ಪಟ್ಟಿ ಸಲ್ಲಿಸುವ ಮುನ್ನ ತನಿಖಾಧಿಕಾರಿಯನ್ನು ಬದಲಾಯಿಸಬಾರದು. ಒಂದು ವೇಳೆ ವರ್ಗಾವಣೆ ಅನಿವಾರ್ಯವಾದರೆ, ತನಿಖಾಧಿಕಾರಿಯು ದೋಷಾರೋಪ ಪಟ್ಟಿ ಸಲ್ಲಿಸಿದ ನಂತರವೇ ಹೊಸ ಜವಾಬ್ದಾರಿ ವಹಿಸಿಕೊಳ್ಳಬೇಕು ಎಂದು ಕೋರ್ಟ್ ತಿಳಿಸಿದೆ.

# ಮಕ್ಕಳ ಜೀವನದ ಶೈಕ್ಷಣಿಕ ಅಡಿಪಾಯ ಅಂಗನವಾಡಿ: ಪ್ರಿಯಾಂಕ್ ಖರ್ಗೆ





**ಕಲಬುರಗಿ ನಗರದ ಡಾ.ಎಸ್.ಎಂ. ಪಂಡಿತ ರಂಗಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಜಿಲ್ಲಾ ಮಹಿಳಾ ಸಬಲೀಕರಣ ಘಟಕದ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮವನ್ನು ಜಿಲ್ಲಾ ಉಸ್ತುವರಿ ಸಚಿವ ಪ್ರಿಯಾಂಕ್ ಖರ್ಗೆ ಅವರು ಉದ್ಘಾಟಿಸಿದರು. ಶಾಸಕ ಅಲ್ಲಮಪ್ರಭು ಪಾಟೀಲ್, ತಿಪ್ಪಣಪ್ಪ ಕಮಕನೂರ, ಜಗದೇವ ಗುತ್ತೇದಾರ, ಹುಕ್ಕಾಧಿಕಾರಿ ಬಿ.ಫೌಜಿಯಾ ತರನ್ನುಮ್, ಜಿಪಂ ಸಿಇಓ ಭಂವರ್ ಸಿಂಗ್ ಮೀನಾ ಮತ್ತಿತರರಿದ್ದರು.**

**ಕಲಬುರಗಿ, ಮೇ. 11:** ಅಂಗನವಾಡಿ ಕಾರ್ಯಕರ್ತೆಯರ ಮೇಲೆ ಸಮಾಜ ಕಟ್ಟುವ ಮಹತ್ತರ ಜವಾಬ್ದಾರಿ ಇದೆ. ಅಂಗನವಾಡಿಗಳು ನಮ್ಮ ಮಕ್ಕಳ ಶೈಕ್ಷಣಿಕ ಜೀವನದ ಅಡಿಪಾಯ ಇದ್ದಂತೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು.

ನಗರದ ಡಾ.ಎಸ್.ಎಂ. ಪಂಡಿತ ರಂಗಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಜಿಲ್ಲಾ ಮಹಿಳಾ ಸಬಲೀಕರಣ ಘಟಕದ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ, ಜಿಲ್ಲೆಯಲ್ಲಿ 313 ಬಾಲ್ಯವಿವಾಹವನ್ನು ತಡೆಯಲಾಗಿದೆ. ಅಂಗನವಾಡಿ ಕಾರ್ಯಕರ್ತೆಯರ ಕೆಲಸ ಹೊರಗಿನಿಂದ ಬಹಳ ಸಲೀಸು ಎಂದು ಕಾಣುತ್ತದೆ. ಆದರೆ, ಸಮಾಜದಲ್ಲಿ ಆರೋಗ್ಯವಂತ ಮಕ್ಕಳು, ಮಹಿಳೆಯರು ಇರಲು ಮತ್ತು ಸರ್ಕಾರದ ಯೋಜನೆಗಳು ಬೇರುಮಟ್ಟದಲ್ಲಿ ಅನುಷ್ಠಾನವಾಗಲು ಅಂಗನವಾಡಿ ಕಾರ್ಯಕರ್ತರು ಕಾರಣ. ನಿಮ್ಮ ಬೇಡಿಕೆಗಳ ಈಡೇರಿಕೆಗೆ ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದರು.

ಹಿಂದೆ ಮಹಿಳೆಯರಿಗೆ ಯಾವುದೇ ಹಕ್ಕು ಇರಲಿಲ್ಲ. ಮನುಸ್ಮೃತಿಯ ಚೌಕಟ್ಟಿನಲ್ಲಿಯೇ ಜೀವನ ಇರುತ್ತಿತ್ತು. ಬಾಬಾಸಾಹೇಬ ಅಂಬೇಡ್ಕರ್ ಅವರು ಮಹಿಳೆಯರಿಗೆ ಸಮಾನವಾದ ಸ್ಥಾನಮಾನ ಕೊಡಲು 'ಹಿಂದೂ ಕೋಡ್ ಬಿಲ್' ತರಲು ಪ್ರಯತ್ನಪಟ್ಟರು. ಮಹಿಳೆಯರ ಹಕ್ಕಿಗಾಗಿ ರಾಜೀನಾಮೆ ಕೊಟ್ಟ ಏಕೈಕ ಜನಪ್ರತಿನಿಧಿ ಅವರು. ಬಾಬಾಸಾಹೇಬರು, ಜವಾಹರಲಾಲ್ ನೆಹರೂ ಅವರು ಇರದಿದ್ದರೆ ಇಂದು 1,036 ಮಹಿಳೆಯರಿಗೆ ಆದೇಶ ಪತ್ರ ಕೊಡಲು ಸಾಧ್ಯವಾಗುತ್ತಿರಲಿಲ್ಲ ಎಂದರು.

ಈಚೆಗೆ ಪ್ರಧಾನಿ ನರೇಂದ್ರ ಮೋದಿ ಅವರು ಕಾಂಗ್ರೆಸ್‌ನವರು ಮಹಿಳಾ ವಿರೋಧಿ, ಮಹಿಳಾ ಮೀಸಲಾತಿ ಬಿಲ್‌ನ್ನು ಸದನದಲ್ಲಿ ಪಾಸಾಗಲು ಬಿಟ್ಟಿಲ್ಲ ಎಂದಿದ್ದಾರೆ.

ಆದರೆ, ನಮ್ಮ ಪಕ್ಷ ಕೊಟ್ಟ ಮೀಸಲಾತಿ ಕೊಡುಗೆಯಿಂದಲೇ ವರ್ಷಾ, ತೃಪ್ತಿ ಅವರು ಮೇಯರ್–ಉಪಮೇಯರ್ ಆಗಿದ್ದಾರೆ. ಜಿಲ್ಲಾಧಿಕಾರಿ ಫೌಜಿಯಾ, ಚಂದ್ರಿಕಾ ಪರಮೇಶ್ವರ, ಡಿಸಿಪಿ ಶಾಲೂ ಅವರು ವೇದಿಕೆ ಮೇಲೆ ಕುಳಿತಿದ್ದಾರೆ ಅಂದರೆ ಅದು ಡಾ.ಅಂಬೇಡ್ಕರ್ ಅವರ ಪುಣ್ಯ ಎಂದು ಹೇಳಿದರು.

ದೇಶದ ಮೊದಲ ಮಹಿಳಾ ಪ್ರಧಾನಿ, ಮಹಿಳಾ ರಾಷ್ಟ್ರಪತಿ, ಮಹಿಳಾ ಲೋಕಸಭಾ ಸ್ಪೀಕರ್ ಕೊಟ್ಟಿದ್ದೆಲ್ಲವು ನಾವು. ಆದರೆ, ಇವರೆಲ್ಲ (ಬಿಜೆಪಿ) ಸುಳ್ಳು ಹೇಳಿಕೊಂಡು ಹೋದರೆ ಕೇಳಿಕೊಂಡಿರಬೇಕಾ? 2010ರಲ್ಲಿ ನಾವು ಅಧಿಕಾರದಲ್ಲಿದ್ದಾಗ ಎಂಎಲ್ಎ, ಎಂಪಿ ಚುನಾವಣೆಯಲ್ಲಿ 1/3 ಮಹಿಳಾ ಮೀಸಲಾತಿ ಜಾರಿಗೆ ತರಲು ಹೋದರೆ ಇದೇ ಬಿಜೆಪಿಯವರು ಮಸೂದೆ ಬೀಳಿಸಿದರು. ಆದರೆ, 2023ರಲ್ಲಿ ಮೋದಿ ಅವರು ಮಹಿಳಾ ಮೀಸಲಾತಿ ಬಿಲ್ ತಂದಾಗ ನಾವು ವಿರೋಧ ಪಕ್ಷದಲ್ಲಿದ್ದರೂ ಪಾಸ್ ಮಾಡಿಕೊಟ್ಟಿದ್ದೇವೆ. ನಮಗೆ ಬದ್ಧತೆ ಇದೆಯಾ? ಅವರಿಗೆ ಬದ್ಧತೆ ಇದೆಯಾ ಎಂದು ಕೇಳಿದರು.

ಎಂಎಲ್‌ಸಿ ತಿಪ್ಪಣ್ಣಪ್ಪ ಕಮಕನೂರ ಮಾತನಾಡಿ, ಕಾಂಗ್ರೆಸ್ ನಾಯಕ ಮಲ್ಲಿಕಾರ್ಜುನ ಖರ್ಗೆ ಅವರು ಸಂವಿಧಾನದ ಕಲಂ 371(ಜೆ) ಜಾರಿಗೆ ತಂದಿದ್ದರಿಂದ ಈ ಭಾಗಕ್ಕೆ ಸ್ವಾತಂತ್ರ್ಯ ಸಿಕ್ಕಂತಾಗಿದೆ. ಬಡವರ ಮಕ್ಕಳು ವೈದ್ಯರಾಗುತ್ತಿದ್ದಾರೆ. ಖರ್ಗೆ ಅವರಿಗೆ ಭಾರತ ರತ್ನ ಕೊಡಬೇಕು. ಖರ್ಗೆ ಮನೆತನದಲ್ಲಿ ಯಾರಾದರೊಬ್ಬರು ಮುಖ್ಯಮಂತ್ರಿ ಆಗಬೇಕು ಎಂದು ಆಶಿಸಿದರು.

ಜಿಲ್ಲಾಧಿಕಾರಿ ಅವರು ಜಿಲ್ಲೆಯ ಗ್ರೇಡ್–2 ತಹಶೀಲ್ದಾರರಿಗೆ ಆದೇಶ ಮಾಡುವ ಮೂಲಕ ಎಸ್‌ಟಿ ಮತ್ತು ಸಿಂಧುತ್ವ ಪ್ರಮಾಣಪತ್ರದ ಸಮಸ್ಯೆ ಬಗೆಹರಿಸಿದ್ದಾರೆ. ಈಗ ಸಚಿವರು ಕೋಲಿ, ಕಬ್ಬಲಿಗ, ಬೆಸ್ತ, ಅಂಬಿಗ ಮತ್ತು ಬಾರ್ಕಿ ಪದಗಳನ್ನು ಎಸ್‌ಟಿ ಪಟ್ಟಿಗೆ ಸೇರಿಸಲು ಕೇಂದ್ರಕ್ಕೆ ಪ್ರಸ್ತಾವ ಸಲ್ಲಿಸಬೇಕು' ಎಂದು ಮನವಿ ಮಾಡಿದರು.

ಶಾಸಕ ಅಲ್ಲಮಪ್ರಭು ಪಾಟೀಲ ಅಧ್ಯಕ್ಷತೆ ವಹಿಸಿದ್ದರು. ಎಂಎಲ್‌ಸಿ ಜಗದೇವ ಗುತ್ತೇದಾರ, ಮೇಯರ್ ವರ್ಷಾ ಜಾನೆ, ಜೆಸ್ಕಾಂ ಅಧ್ಯಕ್ಷ ಪ್ರವೀಣ ಪಾಟೀಲ ಹರವಾಳ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಜಿಲ್ಲಾಧ್ಯಕ್ಷೆ ಚಂದ್ರಿಕಾ ಪರಮೇಶ್ವರ, ಕುಡಾ ಅಧ್ಯಕ್ಷ ಮಜಹರ್ ಆಲಂ ಖಾನ್, ಸೈಯ್ಯದ್ ಮಹೆಮೂದ್ ಚೆಸ್ತಿ ಸಾಹೇಬ್, ಜಿಲ್ಲಾಧಿಕಾರಿ ಫೌಜಿಯಾ ತರನ್ನುಮ್, ಸಿಇಒ ಭಂವರ್ ಸಿಂಗ್ ಮೀನಾ, ಪಾಲಿಕೆ ಆಯುಕ್ತ ಅವಿನಾಶ ಶಿಂಧೆ, ಪೊಲೀಸ್ ಕಮಿಷನರ್ ಶರಣಪ್ಪ ಎಸ್.ಡಿ., ಎಸ್‌ಪಿ ಅಡ್ಡೂರು ಶ್ರೀನಿವಾಸಲು, ಅರಣ್ಯ ಉಪ ಸಂರಕ್ಷಣಾಧಿಕಾರಿ ಸುಮೀತ್ ಪಾಟೀಲ, ಡಿಸಿಪಿ ಶಾಲೂ, ಎಸಿ ಸಾಹಿತ್ಯ ಆಲದಕಟ್ಟಿ ಉಪಸ್ಥಿತರಿದ್ದರು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ರಾಜಕುಮಾರ ರಾಠೋಡ ಅವರು ಸ್ವಾಗತಿಸಿದರು.

# ಸುಧಾಕರ್ ನಿಧನ ಅಪಾರ ದುಃಖ ತಂದಿದೆ ಸಚಿವ ಸಂತೋಷ್ ಲಾಡ್ ಸಂತಾಪ



**ಚಳ್ಳಕೆರೆ, ಮೇ 11:** ಸಚಿವ ಡಿ.ಸುಧಾಕರ್ ನಿಧನಕ್ಕೆ ಸಂತಾಪ ಸೂಚಿಸಿರುವ ಸಚಿವ ಸಂತೋಷ್ ಲಾಡ್, ಅವರೊಬ್ಬ ಹೃದಯವಂತ ನಾಯಕ, ಜನಪ್ರತಿನಿಧಿಯಾಗಿದ್ದರು. ಅವರ ನಿಧನದಿಂದ ಅಪಾರ ನಷ್ಟವಾಗಿದೆ ಎಂದಿದ್ದಾರೆ. ಮೃತರ ಪಾರ್ಥಿವ ಶರೀರಕ್ಕೆ ಅಂತಿಮ ನಮನ ಸಲ್ಲಿಸಿ ಮಾತನಾಡಿದ ಅವರು, ಸುಧಾಕರ್ ಅವರು ಸುಮಾರು ಇಪ್ಪತ್ತು ವರ್ಷಗಳಿಂದ ಪರಿಚಯ. ಮೊದಲ ಬಾರಿಗೆ ಅವರು ಶಾಸಕರಾದಾಗಿನಿಂದ ಪರಿಚಿತರು. ಹುಟ್ಟು ಅನಿರೀಕ್ಷಿತ ಸಾವು ಖಚಿತ ಎಂದು ನಾವೆಲ್ಲ ತಿಳಿದಿದ್ದೇವೆ. ಯಾವೂದೂ ಶಾಶ್ವತ ಅಲ್ಲ. ಸುಧಾಕರ್ ಅವರ ನಿಧನ ಅಪಾರ ದುಃಖ ತಂದಿದೆ ಎಂದಿದ್ದಾರೆ.

ಸುಧಾಕರ್ ಅವರು ಸಣ್ಣ ಸಮುದಾಯದಿಂದದ ಬಂದವರು. ನಾಲ್ಕು ಬಾರಿ ಶಾಸಕಾರಾಗಿ ಆಯ್ಕೆಯಾಗಿದ್ದರು. ಸಚಿವರಾಗಿಯೂ ಅವರು ಹಲವಾರು ಜನಪರ ಕೆಲಸ ಮಾಡಿದ್ದರು. ಒಂದು ರೀತಿ ಎಲ್ಲರೊಂದಿಗೆ ಆಪ್ತತೆ ಹೊಂದಿದ್ದ ಅವರು ಅಜಾತಶತ್ರುವಿನಂತಿದ್ದರು. ರೈತರು, ಕೂಲಿ ಕಾರ್ಮಿಕರು, ಬಡವರು, ಶೋಷಿತ ವರ್ಗಗಳ ಬಗ್ಗೆ ಅಪಾರ ಕಾಳಜಿ ಹೊಂದಿದ್ದರು ಎಂದು ಅಗಲಿದ ಸ್ನೇಹಿತನನ್ನು ಸ್ಮರಿಸಿದ್ದಾರೆ. ಸುಧಾಕರ್ ಕುಟುಂಬಕ್ಕೆ ನೋವನ್ನು ಭರಿಸುವ ಶಕ್ತಿಯನ್ನು ಭಗವಂತ ನೀಡಲಿ. ಭದ್ರಾ ಮೇಲ್ದಂಡೆ ಯೋಜನೆಗೆ ಸುಧಾಕರ್ ಅವರು ಸಾಕಷ್ಟು ಹೋರಾಟ ಮಾಡಿದ್ದರು. ಅವರ ಹೆಸರು ಯೋಜನೆಗೆ ಇಡುವುದು ಜನರ ಅಭಿಪ್ರಾಯ. ಇದನ್ನು ಸರ್ಕಾರಕ್ಕೆ ಮುಟ್ಟಿಸಲಾಗುವುದು ಎಂದು ತಿಳಿಸಿದ್ದಾರೆ.

# ಚಿರತೆ ದಾಳಿಯಲ್ಲಿ ಮೃತಪಟ್ಟ ಬಾಲಕನ ಕುಟುಂಬಕ್ಕೆ 20 ಲಕ್ಷ ರೂ. ಪರಿಹಾರ



**ಚಾಮರಾಜನಗರ, ಮೇ 11:** ಮಲೆ ಮಹದೇಶ್ವರ ಬೆಟ್ಟದ ನಾಗಮಲೆ ಹಾದಿಯಲ್ಲಿ ಚಿರತೆ ದಾಳಿಗೆ ಬಲಿಯಾದ ಬೆಂಗಳೂರು ಮೂಲದ ಬಾಲಕನ ಕುಟುಂಬಕ್ಕೆ ಅರಣ್ಯ ಇಲಾಖೆ 20 ಲಕ್ಷ ರೂಪಾಯಿ ಪರಿಹಾರ ಘೋಷಿಸಿದೆ. ಸದ್ಯ ಚಿರತೆ ಹಿಡಿಯಲು ಅರಣ್ಯ ಪ್ರದೇಶದಲ್ಲಿ ಹೈಟೆಕ್ ಕಾರ್ಯಾಚರಣೆ ತೀವ್ರಗೊಂಡಿದೆ.ಪರಿಹಾರ ವಿತರಣೆ ಮತ್ತು ಅರಣ್ಯ ಇಲಾಖೆ ಕ್ರಮ–ಘಟನೆ ನಡೆದ ಬೆನ್ನಲ್ಲೇ ಎಚ್ಚೆತ್ತುಕೊಂಡಿರುವ ಅರಣ್ಯ ಇಲಾಖೆ, ಬಾಲಕ ಹರ್ಷಿತ್ ಗೌಡನ ಕುಟುಂಬಕ್ಕೆ ಆರ್ಥಿಕ ನೆರವು ನೀಡಲು ಮುಂದಾಗಿದೆ.ಒಟ್ಟು ಘೋಷಿತ 20 ಲಕ್ಷ ರೂ. ಪರಿಹಾರದ ಪೈಕಿ, ಈಗಾಗಲೇ 5 ಲಕ್ಷದ ಚೆಕ್ ಕುಟುಂಬಸ್ಥರಿಗೆ ಹಸ್ತಾಂತರಿಸಲಾಗಿದೆ.ಬಾಕಿ ಮೊತ್ತವನ್ನು ಬ್ಯಾಂಕ್ ಖಾತೆ ಮಾಹಿತಿ ಪಡೆದ ನಂತರ ಶೀಘ್ರದಲ್ಲೇ ಜಮಾ ಮಾಡುವುದಾಗಿ ಅಧಿಕಾರಿಗಳು ಭರವಸೆ ನೀಡಿದ್ದಾರೆ.ಮುನ್ನೆಚ್ಚರಿಕಾ ಕ್ರಮವಾಗಿ ಭಕ್ತರಿಗೆ ನಾಗಮಲೆ ಪಾದಯಾತ್ರೆಯನ್ನು ತಾತ್ಕಾಲಿಕವಾಗಿ ನಿರ್ಬಂಧಿಸಲಾಗಿದೆ.

ಬಾಲಕನನ್ನು ಕೊಂದ ಚಿರತೆಯ ಚಲನವಲನಗಳು ಥರ್ಮಲ್‌ಡ್ರೋನ್ ಕ್ಯಾಮರಾದಲ್ಲಿ ಸೆರೆಯಾಗಿದ್ದು, ಕಾರ್ಯಾಚರಣೆ ಚುರುಕುಗೊಂಡಿದೆ.ಚಿರತೆಯನ್ನು ಸೆರೆಹಿಡಿಯಲು ಈಗಾಗಲೇ ಆಯಕಟ್ಟಿನ ಸ್ಥಳಗಳಲ್ಲಿ ನಾಲ್ಕು ಬೋನುಗಳನ್ನು ಇರಿಸಲಾಗಿದೆ. 30ಕ್ಕೂ ಹೆಚ್ಚು ಅರಣ್ಯ ಸಿಬ್ಬಂದಿ ಸ್ಥಳದಲ್ಲಿ ಬೀಡುಬಿಟ್ಟಿದ್ದು, ರಾತ್ರಿಯಿಡೀ ಥರ್ಮಲ್ ಡ್ರೋನ್ ಮೂಲಕ ನಿಗಾ ವಹಿಸಲಾಗಿದೆ.

ಭಾನುವಾರ (ಮೇ 10) ಬೆಂಗಳೂರಿನ ಕಾಮಾಕ್ಷಿಪಾಳ್ಯದ ಹರ್ಷಿತ್ ಗೌಡ ತನ್ನ ಕುಟುಂಬದ 10 ಮಂದಿ ಸದಸ್ಯರೊಂದಿಗೆ ನಾಗಮಲೆಗೆ ಪಾದಯಾತ್ರೆ ಹೊರಟಿದ್ದಾಗ ಈ ದುರಂತ ಸಂಭವಿಸಿದೆ. ಇಂಡಿಗನತ್ತ ಗ್ರಾಮದ ಬಳಿ ಪೊದೆಯಲ್ಲಿದ್ದ ಚಿರತೆ, ಪೋಷಕರ ಕಣ್ಣೆದುರೇ ಹರ್ಷಿತ್‌ನನ್ನು ಎಳೆದೊಯ್ದು ಕಾಡಿನೊಳಗೆ ಕೊಂದು ಹಾಕಿತ್ತು. ಅರಣ್ಯಾಧಿಕಾರಿಗಳ ಶೋಧದ ನಂತರ ಬಾಲಕನ ಶವ ಪತ್ತೆಯಾಗಿತ್ತು.ಘಟನೆಯ ಕುರಿತು ಮೃತ ಬಾಲಕನ ಪೋಷಕರು ಅರಣ್ಯ ಇಲಾಖೆಯ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ:

**ಲಂಚದ ಆರೋಪ:** ಕಾಡಿನೊಳಗೆ ಹೋಗಲು ಅರಣ್ಯ ಸಿಬ್ಬಂದಿ 200 ರೂ. ಹೆಚ್ಚಿನ ಹಣ ಪಡೆದು ಒಳಗೆ ಬಿಟ್ಟಿದ್ದಾರೆ ಎಂದು ಆರೋಪಿಸಲಾಗಿದೆ. ಮಗುವಿನ ಮೇಲೆ ದಾಳಿಯಾದ ಅರ್ಧಗಂಟೆಯವರೆಗೆ ಯಾವೊಬ್ಬ ಅಧಿಕಾರಿಯೂ ಸ್ಥಳಕ್ಕೆ ಬಂದಿರಲಿಲ್ಲ. ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದ ನಂತರವಷ್ಟೇ ಹುಡುಕಾಟ ನಡೆಸಲಾಗಿದೆ ಎಂದು ದೂರಿದ್ದಾರೆ. "ನಮ್ಮ ಮಗುವಿಗೆ ಆದ ಪರಿಸ್ಥಿತಿ ಯಾರಿಗೂ ಆಗಬಾರದು, ಅರಣ್ಯ ಇಲಾಖೆಯ ನಿರ್ಲಕ್ಷ್ಯವೇ ನನ್ನ ಮಗನ ಸಾವಿಗೆ ಕಾರಣ" ಎಂದು ಪೋಷಕರು ಕಣ್ಣೀರಿಟ್ಟಿದ್ದಾರೆ.ಪರಿಹಾರ ಧನವು ಕುಟುಂಬದ ನಷ್ಟವನ್ನು ತುಂಬಲಾರದಿದ್ದರೂ, ಇಂತಹ ದುರಂತಗಳು ಮರುಕಳಿಸದಂತೆ ಅರಣ್ಯ ಇಲಾಖೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕಿದೆ ಎಂಬುದು ಸಾರ್ವಜನಿಕರ ಒತ್ತಾಯವಾಗಿದೆ.

# ಮಿತಿಮೀರಿದ ಬಿಸಿಲ ಪ್ರತಾಪ: ಜಿಲ್ಲೆಯ ಪ್ರವಾಸೋದ್ಯಮಕ್ಕೆ ಭಾರೀ ಹಿನ್ನಡೆ



**ಬೀದರ್, ಮೇ. 11:** ಬೀದರ್ ಜಿಲ್ಲೆಯಾದ್ಯಂತ ಬಿಸಿಲಿನ ಪ್ರತಾಪ ಮಿತಿಮೀರಿ ಮುಂದುವರೆದಿದ್ದು, ಜಿಲ್ಲೆಯ ಪ್ರವಾಸೋದ್ಯಮದ ಮೇಲೆ ಪ್ರತಿಕೂಲ ಪರಿಣಾಮ ಬೀರಿದ್ದು, ಕಳೆದ ವರ್ಷಕ್ಕೆ ಹೋಲಿಸಿದಗ ಈ ವರ್ಷದ ಪ್ರವಾಸೋದ್ಯಮಕ್ಕೆ ಭಾರೀ ಹಿನ್ನಡೆ ಉಂಟಾಗಿದೆ.

ಜಿಲ್ಲೆಯಾದ್ಯಂತ ಗರಿಷ್ಠ 40 ಡಿಗ್ರಿ ಆಸುಪಾಸಿನ ಉಷ್ಣಾಂಶ ಸಾಮಾನ್ಯವಾಗಿದೆ. ಹಿಂದೆಂದೂ ಇಷ್ಟೊಂದು ಬಿಸಿಲು ಇರುತ್ತಿರಲಿಲ್ಲ. ಇಡೀ ಕಲ್ಯಾಣ ಕರ್ನಾಟಕದಲ್ಲಿ ಬೀದರ ಜಿಲ್ಲೆ ಅಧಿಕ ಅರಣ್ಯ ಪ್ರದೇಶ ಹೊಂದಿರುವುದರಿಂದ ಬಿಸಿಲಿನ ಪ್ರಖರತೆ ಕಡಿಮೆಯಿದ್ದು, ಮಳೆಗಾಲದಲ್ಲಿ ಹೆಚ್ಚು ಮಳೆಯಗುವ ಪ್ರದೇಶ ಇದಾಗಿತ್ತು. ಅದ್ಯಾಕೋ ಈ ವರ್ಷ ಬಿಸಿಲು ಬೆಂಬಿಡದೇ ಕಾಡುತ್ತಿದೆ. ಬೆಳಿಗ್ಗೆ 9ರಿಂದ ಸಂಜೆ 5ರ ವರೆಗೆ ಕೆಂಡದಂಥ ಬಿಸಿಲು ಇರುತ್ತಿದೆ. ಹೀಗಾಗಿ ಜನರು ಮನೆಯಿಂದ ಹೊರಬರುವುದೇ ಕಷ್ಟವಗಿ ಪರಿಣಿಮಿಸಿದೆ.

ನೆಲ ಕಾದ ಕಾವಲಿಯಾಗುತ್ತಿದೆ. ಬಿಸಿಲ ಝಳಕ್ಕೆ ಮನೆಯಲ್ಲಿ ಕುಳಿತವರು ಬೆವರುತ್ತಿದ್ದಾರೆ. ಬಿಸಿಲ ಭಯಕ್ಕೆ ಜನ ಹೊರಗೆ ಹೋಗುವುದು ಕಡಿಮೆ ಮಾಡಿದ್ದಾರೆ. ಅನ್ಯ ಭಾಗದವರು ಬರುತ್ತಿಲ್ಲ. ಬಿಸಿಲಿನ ನೇರ ಬಿಸಿ ಪ್ರವಾಸೋದ್ಯಮಕ್ಕೂ ತಟ್ಟಿದೆ. ನಗರದ ಬಹಮನಿ ಕೋಟೆ, ಅಷ್ಟೂರಿನ ಗುಂಬಜ್‌ಗಳು, ಮಹಮೂದ್ ಗಾವಾನ್ ಮದರಸಾ, ಗುರುದ್ವಾರ, ಪಾಪನಾಶ ಹಾಗೂ ಬಸವಕಲ್ಯಾಣದ ಶರಣರ ಸ್ಮಾರಕಗಳನ್ನು ನೋಡಲು ಈ ಬೇಸಿಗೆಯಲ್ಲಿ ಜನರು ಹಿಂಡು ಹಿಂಡಾಗಿ ಬರುತ್ತಿದ್ದರು.

ಈ ವರ್ಷದ ಬಿಸಲಿನ ಪ್ರಖರತೆಗೆ ಪ್ರವಾಸೋದ್ಯಮವೇ ಕುಂದಿದದೆ. ಪ್ರವಾಸಿ ತಾಣಗಳಲ್ಲಿ ದಿನವಿಡೀ ಹೆಚ್ಚಿನ ಜನ ಕಾಣಿಸಿಕೊಳ್ಳುತ್ತಿದ್ದರು. ಆದರೆ, ಈಗ ಜನರಿಲ್ಲದೇ ಈ ತಾಣಗಳು ಬಿಕೋ ಎನ್ನುತ್ತಿವೆ. ಬಸವಕಲ್ಯಾಣದ 108 ಅಡಿ ಎತ್ತರದ ಬಸವೇಶ್ವರರ ಪುತ್ಥಳಿ, ಅನುಭವ ಮಂಟಪ, ಬಸವೇಶ್ವರ ದೇವಸ್ಥಾನ ಸೇರಿದಂತೆ ಜಿಲ್ಲೆಯ ಇತರೆ ಪ್ರವಾಸಿ ತಾಣಗಳಲ್ಲೂ ಇದೇ ಪರಿಸ್ಥಿತಿ ಇದೆ.

ಸಾಮಾನ್ಯ ದಿನಗಳಲ್ಲಿ ಬೀದರ್ ಕೋಟೆ ವೀಕ್ಷಣೆಗೆ ಏಳೆಂಟು ಸಾವಿರ ಮಂದಿ ಬಂದು ಹೋಗುತ್ತಿದ್ದರು. ಈಗ ವಾರಾಂತ್ಯಕ್ಕೆ ಎರಡು ಸಾವಿರ ಜನ ಬಂದರೆ ಹೆಚ್ಚು ಎನ್ನುವಂಥ ಪರಿಸ್ಥಿತಿ ಇದೆ. ವಾರಾಂತ್ಯದಲ್ಲೂ ಹೇಳಿಕೊಳ್ಳುವಂಥ ಸಂಖ್ಯೆಯಲ್ಲಿ ಜನ ಬರುತ್ತಿಲ್ಲ. ಬಂದರೂ ಬೆಳಿಗ್ಗೆ 9ಗಂಟೆಯೊಳಗೆ ಬಂದು ವಾಪಸಾಗುತ್ತಿದ್ದಾರೆ. ಮಧ್ಯಾಹ್ನದ ನಂತರ ಯಾರೊಬ್ಬರೂ ಸುಳಿಯುತ್ತಿಲ್ಲ ಎನ್ನುತ್ತಾರೆ ಕೋಟೆಯ ಭದ್ರತಾ ಸಿಬ್ಬಂದಿ.

ಪ್ರವಾಸಿಗರ ಸಂಖ್ಯೆ ಇಳಿಮುಖಗೊಂಡಿದ್ದರಿಂದ ಇದನ್ನೇ ನೆಚ್ಚಿಕೊಂಡಿದ್ದವರಿಗೂ ಸಮಸ್ಯೆ ಉಂಟಾಗಿದೆ. ಪ್ರವಾಸಿಗರು ಭೇಟಿ ಕೊಟ್ಟರೆ ಹೋಟೆಲ್, ಕ್ಯಾಬ್, ಆಟೋ, ಕ್ಯಾಂಟೀನ್‌ಗಳಿಗೆ ಬೇಡಿಕೆ ಇರುತ್ತಿತ್ತು. ಈಗ ಯಾರೊಬ್ಬರೂ ಕೇಳಲಾರದಂಥ ಪರಿಸ್ಥಿತಿ ಇದೆ.

'ಹೊರಗಿನಿಂದ ಜನ ಬಂದರೆ ಬೀದರ್ ಕೋಟೆ ಜೊತೆಗೆ ಇತರೆ ಸ್ಥಳಗಳಿಗೂ ಭೇಟಿ ಕೊಡುತ್ತಿದ್ದರು. ಒಂದು ದಿನದ ಬಾಡಿಗೆ ಮೇಲೆ ಹೋಗುತ್ತಿದ್ದೆ. ಒಳ್ಳೆ ಆದಾಯ ಬರುತ್ತಿತ್ತು. ಬಿಸಿಲಿನಿಂದ ಜನ ಬರುವುದು ಬಹಳ ಕಡಿಮೆಯಾಗಿರುವುದರಿಂದ ಸಮಸ್ಯೆಯಾಗುತ್ತಿದೆ' ಎಂದು ಆಟೋ ಚಾಲಕ ಫಿರೋಜ್ ಹೇಳಿದರು.

ಬೀದರ್ ಜಿಲ್ಲೆಗೆ ಹೆಚ್ಚಾಗಿ ನೆರೆಯ ತೆಲಂಗಾಣದ ಹೈದರಾಬಾದ್, ಸಂಗಾರೆಡ್ಡಿ, ಸದಾಶಿವಪೇಟ್, ಜಹೀರಾಬಾದ್, ಮಹಾರಾಷ್ಟ್ರದ ಲಾತೂರ್, ಪುಣೆ, ನಾಂದೇಡ್, ಸೊಲ್ಲಾಪೂರ ಸೇರಿದಂತೆ ಇತರೆ ಭಾಗಗಳಿಂದ ಹೆಚ್ಚಿನ ಜನ ಬರುತ್ತಾರೆ. ಆದರೆ, ಬಿಸಿಲು ಹೆಚ್ಚಿರುವುದರಿಂದ ಹೆಚ್ಚಿನವರು ಈ ಕಡೆಗೆ ಬರಲು ಒಲವು ತೋರುತ್ತಿಲ್ಲ. ಮಳೆಗಾಲ ಆರಂಭಗೊಂಡ ನಂತರವಷ್ಟೇ ಪರಿಸ್ಥಿತಿ ಬದಲಾಗುವ ಸಾಧ್ಯತೆ ಇದೆ.

# ಆಗಸ್ಟ್‌ನಲ್ಲಿ ಮೂರು ದಿನ ಸಮಾಧಾನ ಕಾರ್ಯಕ್ರಮ

## ಸುಪ್ರೀಂಕೋರ್ಟ್‌ನಲ್ಲಿ ಬಾಕಿಯಿರುವ ಪ್ರಕರಣ ಇತ್ಯರ್ಥಕ್ಕೆ ವಿಶೇಷ ಲೋಕ ಅದಾಲತ್

**ಶಿವಮೊಗ್ಗ, ಮೇ 11:** ಸುಪ್ರೀಂ ಕೋರ್ಟ್‌ನಲ್ಲಿ ಬಾಕಿ ಇರುವ ಪ್ರಕರಣಗಳ ಶೀಘ್ರ ವಿಲೇವಾರಿಗಾಗಿ ಆಗಸ್ಟ್ 21, 22 ಮತ್ತು 23ರಂದು "ಸಮಾಧಾನ ಕಾರ್ಯಕ್ರಮ" ಎಂಬ ವಿಶೇಷ ಲೋಕ್ ಅದಾಲತ್ ಹಮ್ಮಿಕೊಂಡಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡೆಯಬೇಕೆಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಸಂತೋಷ್ ಎಂ ಎಸ್ ತಿಳಿಸಿದರು.

ಸಮಾಧಾನ ಸಮಾರೋಹ, ರಾಷ್ಟ್ರೀಯ ಮತ್ತು ವಿಶೇಷ ಲೋಕ್ ಅದಾಲತ್ ಹಾಗೂ ಬಂಜಾರ ಸಮುದಾಯಕ್ಕೆ ವಿಶೇಷ ಕಾನೂನು ಅರಿವು ಮತ್ತು ಆರೋಗ್ಯ ತಪಾಸಣಾ ಶಿಬಿರದ ಕುರಿತು ಮಾಹಿತಿ ನೀಡಲು ಸೋಮವಾರ ನ್ಯಾಯಾಲಯ ಆವರಣದ ವಿಸಿ ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಅವರು ಮಾತನಾಡಿ, ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದಂತೆ, ಶಿವಮೊಗ್ಗ ಜಿಲ್ಲೆಯಲ್ಲಿ ಮುಂಬರುವ ತಿಂಗಳುಗಳಲ್ಲಿ ಸರಣಿ ಲೋಕ್ ಅದಾಲತ್ ಹಾಗೂ ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

ಸುಪ್ರೀಂ ಕೋರ್ಟ್‌ನಲ್ಲಿ ಸಮಾಧಾನ ಸಮಾರೋಹ: ಸುಪ್ರೀಂ ಕೋರ್ಟ್ನಲ್ಲಿ ಬಾಕಿ ಇರುವ ಪ್ರಕರಣಗಳ ಶೀಘ್ರ ವಿಲೇವಾರಿಗಾಗಿ ಆ.21, 22 ಮತ್ತು 23 ರಂದು ಸಮಾಧಾನ ಸಮಾರೋಹ ಎಂಬ ವಿಶೇಷ ಲೋಕ್ ಅದಾಲತ್ ನಡೆಯಲಿದೆ. ಜಿಲ್ಲೆಯಿಂದ ಸುಪ್ರೀಂ ಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿ, ಬಹುಕಾಲದಿಂದ ಬಾಕಿ ಇರುವ 47 ಪ್ರಕರಣಗಳನ್ನು ರಾಜೀ ಸಂಧಾನದ ಮೂಲಕ ಇತ್ಯರ್ಥಪಡಿಸಲು ಗುರುತಿಸಲಾಗಿದೆ. ಹೀಗೆ ಸುಪ್ರೀಂ ಕೋರ್ಟ್‌ನಲ್ಲಿ ಬಹುಕಾಲದಿಂದ ಬಾಕಿ ಇದ್ದು, ರಾಜೀ ಸಂಧಾನಕ್ಕೆ ಸಿದ್ಧವಿರುವವರು ಈಗಲೂ ಸಹ ಕಾನೂನು ಸೇವಾ ಪ್ರಾಧಿಕಾರವನ್ನು ಸಂಪರ್ಕಿಸಿ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಬಹುದು. ಸಮಾಧಾನ ಸಮಾರೋಹಕ್ಕೆ ಗುರುತಿಸಲಾದ ಪ್ರಕರಣಗಳಲ್ಲಿ ಪಕ್ಷಗಾರರಿಗೆ ನೋಟಿಸ್ ಹೊರಡಿಸಲಾಗುತ್ತದೆ. ನಿಗದಿತ ದಿನಾಂಕದಂದು ನುರಿತ ಮಧ್ಯಸ್ಥಗಾರರ ವಿಚಾರಣೆ ನಡೆದು, ಸುಪ್ರೀಂ ಕೋರ್ಟ್‌ನಿಂದ ವಿಡಿಯೋ ಕಾನ್ಫರೆನ್ಸ್ ಮೂಲಕ ಪ್ರಕರಣವನ್ನು ಇತ್ಯರ್ಥಪಡಿಸಲಾಗುವುದು.

ಈ ರೀತಿಯ ವಿಲೇವಾರಿಯಿಂದ ಪಕ್ಷಗಾರರಿಗೆ ಯಾವುದೇ ಹಣ ವ್ಯಯ ಆಗುವುದಿಲ್ಲ. ಹಾಗೂ ಸಮಾಧಾನದ ನ್ಯಾಯ ಒದಗುತ್ತದೆ ಆದ್ದರಿಂದ ಸಾರ್ವಜನಿಕರು ಇದರ ಸದುಪಯೋಗ ಪಡೆಯಬೇಕು. ಸಾರ್ವಜನಿಕರು ತಮ್ಮ ಪ್ರಕರಣಗಳ ಸುಲಭ ವಿಲೇವಾರಿಗಾಗಿ samadhansamaroh@gmail.comಗೆ ಇಮೇಲ್ ಮಾಡುವ ಮೂಲಕ ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರವನ್ನು ಸಂಪರ್ಕಿಸುವ ಮೂಲಕ ಈ ಅವಕಾಶವನ್ನು ಬಳಸಿಕೊಳ್ಳಬಹುದು ಎಂದರು.

ರಾಷ್ಟ್ರೀಯ ಲೋಕ್ ಅದಾಲತ್ : ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ಜುಲೈ 11 ರಂದು ಶಿವಮೊಗ್ಗ ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ಈ ವರ್ಷದ ಎರಡನೇ ರಾಷ್ಟ್ರೀಯ ಲೋಕ್ ಅದಾಲತ್ ನಡೆಯಲಿದೆ. ವೈವಾಹಿಕ ವಿವಾದಗಳು ಹಾಗೂ ಕೌಟುಂಬಿಕ ದೌರ್ಜನ್ಯ ಪ್ರಕರಣಗಳು, ಚೆಕ್ ಅಮಾನ್ಯ ಪ್ರಕರಣ, ಅಪಘಾತ ಪರಿಹಾರ ಹಾಗೂ ವಿಮಾ ಪ್ರಕರಣ , ಸಿವಿಲ್ ವ್ಯಾಜ್ಯಗಳು, ಆಸ್ತಿ ವಿಭಾಗ ಹಾಗೂ ಭೂಸ್ವಾಧೀನ ಪ್ರಕರಣ, ರಾಜಿ ಮಾಡಿಕೊಳ್ಳಬಹುದಾದ ಕ್ರಿಮಿನಲ್ ಪ್ರಕರಣ, ಬ್ಯಾಂಕ್ ಸಾಲ ವಸೂಲಾತಿ ಹಾಗೂ ಗ್ರಾಹಕ ವೇದಿಕೆಯ ಪ್ರಕರಣಗಳನ್ನು ರಾಜೀ ಸಂಧಾನದ ಮೂಲಕ ಇತ್ಯರ್ಥಪಡಿಸಿಕೊಳ್ಳಬಹುದು ಎಂದರು. ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ದಿನಾಂಕ 30–04–2026 ರವರೆಗೆ ಒಟ್ಟು 7427 ಪ್ರಕರಣಗಳು ವಿಚಾರಣೆಗೆ ಬಾಕಿ ಇವೆ ಎಂದರು.

# ಅಭಿರುಚಿಗೆ ತಕ್ಕಂತೆ ಕಲೆಗೆ ಪ್ರೋತ್ಸಾಹ ಅಗತ್ಯ: ಡಾ.ಶರಣಪ್ರಕಾಶ ಪಾಟೀಲ್



**ಕಲಬುರಗಿ ನಗರದ ಡಾ.ಎಸ್.ಎಂ. ಪಂಡಿತ ಜಿಲ್ಲಾ ರಂಗಮಂದಿರದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕರ್ನಾಟಕ ರಂಗಾಯಣ ಕಲಬುರಗಿ ಆಶ್ರಯದಲ್ಲಿ ನಡೆದ 'ಮಕ್ಕಳ ಹಬ್ಬ–2026' ಬೇಸಿಗೆ ರಂಗ ತರಬೇತಿ ಶಿಬಿರದ ಸಮಾರೋಪ ಹಾಗೂ ಮಕ್ಕಳ ರಂಗೋತ್ಸವ ಮೂರು ದಿನಗಳ ಕಾರ್ಯಕ್ರಮ ಜರುಗಿತು.**

ಕಲಬುರಗಿ, ಮೇ. 11: ಸಾಮಾಜಿಕ, ಜಾಗತಿಕ ಬೆಳವಣಿಗೆಯಿಂದ, ಮಾಹಿತಿ ತಂತ್ರಜ್ಞಾನ ಬಳಕೆಯಿಂದ ಮಕ್ಕಳ ಮನಸ್ಥಿತಿ, ಜನರ ಅಭಿರುಚಿ ಬದಲಾಗಿದೆ. ಕಾರಣ, ಜನರ ಅಭಿರುಚಿಗೆ ಅನುಗುಣವಾಗಿ ಕಲೆಗೆ ಪ್ರೋತ್ಸಾಹ ನೀಡಿದರೆ ಮಾತ್ರ ಕಲೆ ಬೆಳೆಯಲು ಮತ್ತು ಉಳಿಯಲು ಸಾಧ್ಯವಿದೆ ಎಂದು ವೈದ್ಯಕೀಯ ಶಿಕ್ಷಣ ಸಚಿವ ಸಚಿವ ಡಾ.ಶರಣಪ್ರಕಾಶ ಪಾಟೀಲ ಹೇಳಿದರು.

ನಗರದ ಡಾ.ಎಸ್.ಎಂ. ಪಂಡಿತ್ ಜಿಲ್ಲಾ ರಂಗಮಂದಿರದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕರ್ನಾಟಕ ರಂಗಾಯಣ ಕಲಬುರಗಿ ಆಶ್ರಯದಲ್ಲಿ ನಡೆದ 'ಮಕ್ಕಳ ಹಬ್ಬ–2026' ಬೇಸಿಗೆ ರಂಗ ತರಬೇತಿ ಶಿಬಿರದ ಸಮಾರೋಪ ಹಾಗೂ ಮಕ್ಕಳ ರಂಗೋತ್ಸವ ಮೂರು ದಿನಗಳ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಮಕ್ಕಳಿಗೆ ಬೇಸಿಗೆ ಸಮಯದಲ್ಲಿ ಮನರಂಜನೆ ಜೊತೆಗೆ ಹೊಸ ಕಲೆಗಳನ್ನು ಪರಿಚಯಿಸಲು, ಅವರಲ್ಲಿರುವ ಪ್ರತಿಭೆಗೆ ಸ್ಫೂರ್ತಿ ನೀಡಲು ಶಿಬಿರ ಹಮ್ಮಿಕೊಂಡಿರುವುದು ಶ್ಲಾಘನೀಯ. ಇಂಥ ಕಾರ್ಯಕ್ರಮಗಳು ಮಕ್ಕಳಲ್ಲಿ ಸಂತೋಷ ತರುತ್ತವೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಶಾಸಕ ಅಲ್ಲಮಪ್ರಭು ಪಾಟೀಲ ಮಾತನಾಡಿ, ಹಿಂದೆ ನಮ್ಮ ಹಿರಿಯರು ಕಟ್ಟಿ ಬೆಳೆಸಿದ ಬಹಳಷ್ಟು ಕಲೆಗಳು ನಶಿಸಿಹೋಗುತ್ತಿವೆ. ಹಳ್ಳಿಗಳಲ್ಲಿ ಹಾಡುತ್ತಿದ್ದ ಸೋಬಾನ ಪದ, ಹಂತಿಪದ, ಮೊಹರಂ ಪದ ಮಾಯವಾಗುತ್ತಿವೆ. ಮೊಬೈಲ್, ಟಿ.ವಿ ಬಂದಿರುವುದರಿಂದ ನಾಟ್ಯ, ಬಯಲಾಟ ಕಣ್ಮರೆಯಾಗುತ್ತಿವೆ ಎಂದು ವಿಷಾದಿಸಿದರು.

ನಾಟ್ಯರಂಗದಿಂದ ಡಾ.ರಾಜ್ ಕುಮಾರ್ ಅವರು ರಾಜ್ಯದಲ್ಲಿ ಇತಿಹಾಸವನ್ನು ಸೃಷ್ಟಿ ಮಾಡಿದರು. ಅವರ ಮಕ್ಕಳು ಕೂಡ ದೊಡ್ಡ ನಟರಾಗಿದ್ದಾರೆ. ಪಾಲಕರು ತಮ್ಮ ಮಕ್ಕಳಿಗೂ ಪ್ರೋತ್ಸಾಹ ಕೊಟ್ಟರೆ ದೊಡ್ಡ ಕಲಾವಿದರಾಗಿ ಹೊರಹೊಮ್ಮುತ್ತಾರೆ ಎಂದರು.

ರಂಗ ಸಮಾಜದ ಸದಸ್ಯ ಡಿಂಗ್ರಿ ನರೇಶ ಮಾತನಾಡಿ, ಕನಕದಾಸರಷ್ಟೇ ಶ್ರೇಷ್ಠ ತತ್ವಪದಕಾರ ಕಡಕೋಳ ಮಡಿವಾಳಪ್ಪ. ಅವರ ಹೆಸರಿನಲ್ಲಿ ಒಂದು ಅಭಿವೃದ್ಧಿ ಕ್ಷೇತ್ರ ಮಾಡಬೇಕು. ಕಲ್ಯಾಣ ಕರ್ನಾಟಕ ಭಾಗ ಸಾಂಸ್ಕೃತಿಕವಾಗಿ ಮುಂದುವರಿಯಲು ಜಿಲ್ಲೆಗೊಂದು ಉತ್ಸವ ಆಗಬೇಕು ಎಂದರು.

ರಂಗಾಯಣದ ನಿರ್ದೇಶಕಿ ಸುಜಾತಾ ಜಂಗಮಶೆಟ್ಟಿ ಪ್ರಾಸ್ತಾವಿಕವಾಗಿ ಮಾತನಾಡಿ, ಒಂದು ತಿಂಗಳ ಶಿಬಿರದಲ್ಲಿ ಮಕ್ಕಳು ನೃತ್ಯ, ನಾಟಕ, ಕೋಲಾಟ, ಹಾಡು ಕಲಿತಿದ್ದಾರೆ. ಬಣ್ಣದಾಟ, ಕೆಸರಾಟ ಆಡಿ ನಲಿದಿದ್ದಾರೆ. ಪಕ್ಷಿ ಪ್ರಪಂಚ ತಿಳಿದುಕೊಂಡಿದ್ದಾರೆ ಎಂದರು.

ಕನ್ನಡ ಪುಸ್ತಕ ಪ್ರಾಧಿಕಾರದ ಸದಸ್ಯ ಬಿ.ಎಚ್.ನಿರಗುಡಿ, ಶಿಬಿರದ ನಿರ್ದೇಶಕ ರಾಜಕುಮಾರ ಎಸ್. ಕೆ. ಉಪಸ್ಥಿತರಿದ್ದರು. ರಂಗಾಯಣದ ಆಡಳಿತಾಧಿಕಾರಿ ಸಿದ್ರಾಮ ಸಿಂಧೆ ಸ್ವಾಗತಿಸಿದರು. ಭಾನುವಾರ ಸಂಜೆ 4.30ಕ್ಕೆ ಬಯಲಾಟ ಪ್ರಾತ್ಯಕ್ಷಿಕೆ, ನಾಟಕ, ನೃತ್ಯ, ಗಾಯನ, ವಾದ್ಯ ಸಂಗೀತ ಪ್ರದರ್ಶನಗಳು ಜರುಗಿದವು.

# ಬಂಜಾರ ಸಮುದಾಯಕ್ಕಾಗಿ ಕಾನೂನು ಅರಿವು ಶಿಬಿರ

**ಶಿವಮೊಗ್ಗ, ಮೇ 11:** ಶಿವಮೊಗ್ಗ ನಗರದ ಬಂಜಾರ ಸಮುದಾಯ ಭವನದಲ್ಲಿ ಮೇ 30 ರಂದು ಬಂಜಾರ ಸಮುದಾಯದವರಿಗೆ ವಿಶೇಷ ಕಾನೂನು ಅರಿವು ಕಾರ್ಯಕ್ರಮ ಹಾಗೂ ಆರೋಗ್ಯ ತಪಾಸಣಾ ಶಿಬಿರವನ್ನು ಆಯೋಜಿಸಲಾಗಿದೆ. ಈ ಸಂದರ್ಭದಲ್ಲಿ ವಿವಿಧ ಸರ್ಕಾರಿ ಇಲಾಖೆಗಳ ಮಳಿಗೆಗಳನ್ನು ಸ್ಥಾಪಿಸಲಾಗುತ್ತಿದ್ದು, ಸಮುದಾಯಕ್ಕೆ ಲಭ್ಯವಿರುವ ಸೌಲಭ್ಯಗಳ ಕುರಿತು ಮಾಹಿತಿಯನ್ನು ಸ್ಥಳದಲ್ಲಿಯೇ ನೀಡಲಾಗುತ್ತಿದ್ದು ಸಮುದಾಯದವರು ಇದರ ಸದುಪಯೋಗ ಪಡೆಯಬೇಕೆಂದರು. ಚೆಕ್‌ಬೌನ್ಸ್ ಪ್ರಕರಣ(ಎನ್.ಐ.ಆಕ್ಟ್) ಇತ್ಯರ್ಥಕ್ಕೆ ವಿಶೇಷ ಲೋಕ್ ಅದಾಲತ್; ಚೆಕ್ ಅಮಾನ್ಯ ಪ್ರಕರಣಗಳ ಶೀಘ್ರ ವಿಲೇವಾರಿಗಾಗಿ ಜು.18 ಮತ್ತು ನ.21 ರಂದು ವಿಶೇಷ ಲೋಕ್ ಅದಾಲತ್ ಹಮ್ಮಿಕೊಳ್ಳಲಾಗಿದ್ದು ಉಭಯ ಪಕ್ಷಗಾರರ ಉಪಸ್ಥಿತಿಯಲ್ಲಿ ನ್ಯಾಯಾಧೀಶರು ಮತ್ತು ನ್ಯಾಯಿಕೇತರ ಸಂಧಾನಕಾರರು ರಾಜೀ ಸಂಧಾನದ ಪ್ರಕ್ರಿಯೆಯನ್ನು ಕೈಗೊಂಡು ಪಕ್ಷಗಾರರು ವಿವಾದವನ್ನು ಇತ್ಯರ್ಥಪಡಿಸಿಕೊಂಡರೆ ಅದರಂತೆ ಅಂತಿಮ ಆದೇಶವನ್ನು ಅದೇ ದಿನದಂದು ನೀಡುವ ಅವಕಾಶವನ್ನು ಸಾರ್ವಜನಿಕರು ಮತ್ತು ಪಕ್ಷಗಾರರು ಸದುಪಯೋಗ ಪಡೆಯಬೇಕೆಂದರು.

# ಔಚಿತ್ಯ ಅರಿತು ಕೃತಕ ಬುದ್ಧಿಮತ್ತೆ ಬಳಸಿ: ಪ್ರೊ.ಶಿವಾನಂದ ರುಮ್ಮಾ ಸಲಹೆ



ಕಲಬುರಗಿ ನಗರದ ನೂತನ ಪದವಿ ಮಹಾವಿದ್ಯಾಲಯದಲ್ಲಿ ಐಕ್ಯೂಎಸಿ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದ್ದ 'ಭೌತಿಕ ಮತ್ತು ಜೀವ ವಿಜ್ಞಾನಗಳಲ್ಲಿ ಕೃತಕ ಬುದ್ಧಿಮತ್ತೆ ಹಾಗೂ ಅದರ ಅನ್ವಯಗಳು' ವಿಷಯ ಕುರಿತ ಒಂದು ದಿನದ ರಾಜ್ಯಮಟ್ಟದ ವಿಚಾರ ಸಂಕಿರಣವನ್ನು ಕಲಬುರಗಿ ವಿ.ವಿ ಕಂಪ್ಯೂಟರ್ ಸೈನ್ಸ್ ವಿಭಾಗದ ಮುಖ್ಯಸ್ಥ ಪ್ರೊ.ಶಿವಾನಂದ ರುಮ್ಮಾ ಉದ್ಘಾಟಿಸಿದರು.

**ಕಲಬುರಗಿ, ಮೇ. 11:** ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಕೃತಕ ಬುದ್ಧಿಮತ್ತೆಯ ಬಳಕೆ ಅತ್ಯವಶ್ಯ. ಆದರೆ, ಅದನ್ನು ಹಂಸಪಕ್ಷಿ ನೀರು ಹಾಗೂ ಹಾಲನ್ನು ಬೇರ್ಪಡಿಸಿದಂತೆ ಔಚಿತ್ಯ ಅರಿತು ಬಳಸಬೇಕು ಎಂದು ಕಲಬುರಗಿ ವಿಶ್ವವಿದ್ಯಾಲಯದ ಕಂಪ್ಯೂಟರ್ ಸೈನ್ಸ್ ವಿಭಾಗದ ಮುಖ್ಯಸ್ಥ ಪ್ರೊ.ಶಿವಾನಂದ ಎಸ್.ರುಮ್ಮಾ ಹೇಳಿದರು.

ನಗರದ ನೂತನ ಪದವಿ ಮಹಾವಿದ್ಯಾಲಯದಲ್ಲಿ ಐಕ್ಯೂಎಸಿ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದ್ದ 'ಭೌತಿಕ ಮತ್ತು ಜೀವ ವಿಜ್ಞಾನಗಳಲ್ಲಿ ಕೃತಕ ಬುದ್ಧಿಮತ್ತೆ ಹಾಗೂ ಅದರ ಅನ್ವಯಗಳು' ವಿಷಯ ಕುರಿತ ಒಂದು ದಿನದ ರಾಜ್ಯಮಟ್ಟದ ವಿಚಾರ ಸಂಕಿರಣ ಉದ್ಘಾಟಿಸಿ ಮಾತನಾಡಿ, ಕೃತಕ ಬುದ್ಧಿಮತ್ತೆಯು ಇಂದಿನ ಅಗತ್ಯಗಳನ್ನು ಪೂರೈಸುವ ಸಾಧನವಾಗಿದೆ. ಇದನ್ನು ಬಹು ಜಾಗರೂಕತೆ ಹಾಗೂ ಎಚ್ಚರಿಕೆಯಿಂದ ಬಳಸಬೇಕು ಎಂದು ಸಲಹೆ ನೀಡಿದರು. ಅಧ್ಯಕ್ಷತೆ ವಹಿಸಿದ್ದ ನೂತನ ವಿದ್ಯಾಲಯ ಸಂಸ್ಥೆಯ ಶೈಕ್ಷಣಿಕ ಮಂಡಳಿ ಅಧ್ಯಕ್ಷೆ ಮೀನಾ ಪತ್ಕಿ ದೇಶಪಾಂಡೆ ಮಾತನಾಡಿ, ಕೃತಕ ಬುದ್ಧಿಮತ್ತೆಯ ಕುರಿತು ಸಮಾಜದಲ್ಲಿ ಎಷ್ಟೇ ಭಿನ್ನಾಭಿಪ್ರಾಯಗಳಿದ್ದರೂ ಅದು ಮನುಕುಲಕ್ಕೆ ಬಹುಪಯೋಗಿ ಯಾಗಿದೆ ಎಂದು ಹೇಳಿದರು.

'ಭೌತಿಕ ವಿಜ್ಞಾನಗಳಲ್ಲಿ ಕೃತಕ ಬುದ್ಧಿಮತ್ತೆ' ವಿಷಯದ ಕುರಿತು ನಿವೃತ್ತ ಪ್ರಾಚಾರ್ಯ ಮಲ್ಲಿಕಾರ್ಜುನ ಹಂಗಾರ್ಗೆ ಮಾತನಾಡಿ, ಕೃತಕ ಬುದ್ಧಿಮತ್ತೆಯ ತಯಾರಕರಾದ ನಾವು, ಅದನ್ನು ಹೇಗೆ ಬಳಸಿಕೊಳ್ಳುತ್ತೇವೆ ಎನ್ನುವುದರ ಮೇಲೆ ಅದರ ಉಪಯೋಗ ಅವಲಂಬಿಸಿದೆ. ಮುಂದಿನ ದಿನಗಳಲ್ಲಿ ಇದು ಉದ್ಯೋಗ ಸೃಷ್ಟಿಸುವ ಸಾಮರ್ಥ್ಯ ಹೊಂದಿದೆ ಎಂದು ಹೇಳಿದರು.

ಪ್ರಾಧ್ಯಾಪಕ ಶಿವಾನಂದ ಗೋರ್ನಾಳೆ, ಸಂಸ್ಥೆಯ ನಿರ್ದೇಶಕ ಪ್ರೊ.ಗೋವಿಂದ ಪೂಜಾರ್ ಮಾತನಾಡಿದರು. ವಿದ್ಯಾರ್ಥಿಗಳು, ಅಧ್ಯಾಪಕರು, ಸಂಶೋಧಕರು ಹಾಗೂ ವಿಜ್ಞಾನಾಸಕ್ತರು ಭಾಗವಹಿಸಿದ್ದರು. ಪ್ರಾಚಾರ್ಯ ದಯಾನಂದ ಎಂ.ಶಾಸ್ತ್ರಿ ಸ್ವಾಗತಿಸಿದರು. ವಿಷ್ಣು ಗುಂಡಗುರ್ತಿ ನಿರೂಪಿಸಿದರು.

### ಬೀದರ್‌ನಲ್ಲಿ ಬೀದಿನಾಯಿ ದಾಳಿ

# ಮನೆಯಲ್ಲಿದ್ದ 4 ತಿಂಗಳ ಹಸುಗೂಸು ಸಾವು



**ಬೀದರ್, ಮೇ. 11:** ನಗರದಲ್ಲಿ ಘೋರ ದುರಂತವೊಂದು ನಡೆದಿದ್ದು, ಬೀದಿನಾಯಿ ಮನೆಗೆ ನುಗ್ಗಿ ದಾಳಿ ನಡೆಸಿದ ಪರಿಣಾಮವಾಗಿ 4 ತಿಂಗಳ ಹೆಣ್ಣು ಮಗು ಸಾವನ್ನಪ್ಪಿರುವ ದಾರುಣ ಘಟನೆ ಜಿಲ್ಲೆಯ ಹುಮ್ನಾಬಾದ್ ತಾಲೂಕಿನ ಡಬಲಗುಂಡಿ ಗ್ರಾಮದಲ್ಲಿ ನಡೆದಿದೆ. ಸುಧಾ ಹಾಗು ಸಿದ್ದಪ್ಪ ದಂಪತಿಯ ನಾಲ್ಕು ತಿಂಗಳ ಹೆಣ್ಣುಮಗು ಸಾವನ್ನಪ್ಪಿದೆ.

**ಘಟನೆಯ ವಿವರ:** ಗ್ರಾಮದ ನಿವಾಸಿಗಳಾದ ಸುಧಾ ಮತ್ತು ಸಿದ್ದಪ್ಪ ದಂಪತಿಯ ನಾಲ್ಕು ತಿಂಗಳ ಹೆಣ್ಣುಮಗು ಈ ದುರಂತಕ್ಕೆ ಬಲಿಯಾದ ದುರ್ದೈವಿ. ಎಂದಿನಂತೆ ಪೋಷಕರು ಮಗುವನ್ನು ಮನೆಯಲ್ಲಿ ಮಲಗಿಸಿ ತಮ್ಮ ಕೆಲಸದಲ್ಲಿ ಮಗ್ನರಾಗಿದ್ದರು. ಈ ವೇಳೆ ಹೊಂಚು ಹಾಕಿ ಬಂದ ಬೀದಿ ನಾಯಿಗಳ ಗುಂಪು, ಮನೆಗೆ ನುಗ್ಗಿ ಮಗುವಿನ ಮೇಲೆ ಏಕಾಏಕಿ ದಾಳಿ ನಡೆಸಿ ದೇಹದ ಭಾಗಗಳನ್ನು ಕಚ್ಚಿ ಗಾಯಗೊಳಿಸಿವೆ. ಮಗುವಿನ ಚೀರಾಟ ಕೇಳಿ ಪೋಷಕರು ಓಡಿ ಬರುವಷ್ಟರಲ್ಲಿ ಘೋರ ಅನಾಹುತ ನಡೆದು ಹೋಗಿತ್ತು.

**ಕುಟುಂಬದ ಆಕ್ರಂದನ:** ಕಣ್ಣೆದುರೇ ಹಸುಗೂಸು ರಕ್ತದ ಮಡುವಿನಲ್ಲಿ ಬಿದ್ದಿರುವುದನ್ನು ಕಂಡ ಪೋಷಕರ ಆಕ್ರಂದನ ಮುಗಿಲು ಮುಟ್ಟಿತ್ತು. ಮಗುವನ್ನು ತಕ್ಷಣ ಆಸ್ಪತ್ರೆಗೆ ಕೊಂಡೊಯ್ಯುವ ಪ್ರಯತ್ನ ನಡೆಸಲಾಯಿತಾದರೂ, ಅಷ್ಟರಲ್ಲಾಗಲೇ ಮಗು ಮೃತಪಟ್ಟಿತ್ತು. ಅತೀ ಸಣ್ಣ ವಯಸ್ಸಿನಲ್ಲೇ ಮಗು ಈ ರೀತಿ ಸಾವನ್ನಪ್ಪಿರುವುದು ಇಡೀ ಗ್ರಾಮಸ್ಥರನ್ನು ಕಣ್ಣೀರಲ್ಲಿ ಮುಳುಗಿಸಿದೆ. ಈ ಸಂಬಂಧ ಸ್ಥಳೀಯ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

**ಹೆಚ್ಚಿದ ಆತಂಕ ಮತ್ತು ಆಕ್ರೋಶ:** ಈ ಘಟನೆಯಿಂದ ಡಬಲಗುಂಡಿ ಗ್ರಾಮಸ್ಥರು ತೀವ್ರ ಆತಂಕಕ್ಕೆ ಒಳಗಾಗಿದ್ದಾರೆ. ಗ್ರಾಮದಲ್ಲಿ ಬೀದಿನಾಯಿಗಳ ಸಂಖ್ಯೆ ಮಿತಿಮೀರಿದ್ದು, ಪಾದಚಾರಿಗಳು ಮತ್ತು ಪುಟ್ಟ ಮಕ್ಕಳ ಮೇಲೆ ದಾಳಿ ಮಾಡುತ್ತಿದ್ದರೂ ಅಧಿಕಾರಿಗಳು ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಜನರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಕೂಡಲೇ ಪಂಚಾಯತ್ ಮತ್ತು ಜಿಲ್ಲಾಡಳಿತ ಎಚ್ಚೆತ್ತುಕೊಂಡು ಬೀದಿನಾಯಿಗಳ ಹಾವಳಿಗೆ ಕಡಿವಾಣ ಹಾಕಬೇಕೆಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.

# ಬಳ್ಳಾರಿ ಜಿಲ್ಲೆಯಲ್ಲಿ ಗರ್ಭಕಂಠ ಕ್ಯಾನ್ಸರ್ ತಡೆಗೆ ಲಸಿಕಾ ಅಭಿಯಾನ: 14 ವರ್ಷದ 5,658 ಹೆಣ್ಣು ಮಕ್ಕಳಿಗೆ ಲಸಿಕೆ ವಿತರಣೆ-ಡಾ.ರಮೇಶ್ ಬಾಬು



**ಬಳ್ಳಾರಿ, ಮೇ 11:** ಹೆಣ್ಣು ಮಕ್ಕಳ ಆರೋಗ್ಯದ ದೃಷ್ಟಿಯಿಂದ ಅತ್ಯಂತ ಮಾರಕವಾಗಿರುವ ಗರ್ಭಕಂಠದ ಕ್ಯಾನ್ಸರ್ ತಡೆಗಟ್ಟಲು ಜಿಲ್ಲೆಯಾದ್ಯಂತ 14 ವರ್ಷದ ಹೆಣ್ಣುಮಕ್ಕಳಿಗೆ ಉಚಿತವಾಗಿ ಎಚ್.ಪಿ.ವಿ (ಹ್ಯೂಮನ್ ಪ್ಯಾಪಿಲೋಮ ವೈರಸ್) ಲಸಿಕೆಯನ್ನು ನೀಡಲಾಗುತ್ತಿದೆ. ಪೋಷಕರು ಯಾವುದೇ ವದಂತಿಗಳಿಗೆ ಕಿವಿಗೊಡದೆ ತಮ್ಮ ಮಕ್ಕಳಿಗೆ ಈ ಸುರಕ್ಷಿತ ಲಸಿಕೆಯನ್ನು ಹಾಕಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಮನವಿ ಮಾಡಿದ್ದಾರೆ.

ವೈಯಕ್ತಿಕ ಶುಚಿತ್ವದ ಕೊರತೆ ಹಾಗೂ ಅಸುರಕ್ಷಿತ ಲೈಂಗಿಕ ಸಂಪರ್ಕದಿಂದ ಹರಡುವ ಎಚ್.ಪಿ.ವಿ ಸೋಂಕು ಕಾಲಕ್ರಮೇಣ ಕ್ಯಾನ್ಸರ್ ಆಗಿ ಮಾರ್ಪಡುತ್ತದೆ. ಇದನ್ನು ತಡೆಯಲು 14 ವರ್ಷದ ಹರೆಯದಲ್ಲೇ ಲಸಿಕೆ ನೀಡುವುದು ಅತ್ಯಂತ ಪರಿಣಾಮಕಾರಿ ಕ್ರಮವಾಗಿದೆ. ಈ ಲಸಿಕೆಯನ್ನು ಪಡೆಯುವುದರಿಂದ ಗರ್ಭಕಂಠದ ಕ್ಯಾನ್ಸರ್ ಅನ್ನು ಶೇ.99 ರಷ್ಟು ತಡೆಯಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

ಈ ಅಭಿಯಾನವು ಮಾರ್ಚ್ 11 ರಿಂದ ಪ್ರಾರಂಭವಾಗಿದ್ದು, ಒಟ್ಟು 90 ದಿನಗಳ ಕಾಲ ನಡೆಯಲಿದೆ. 14 ವರ್ಷದ ಎಲ್ಲಾ ಹೆಣ್ಣುಮಕ್ಕಳು ಈ ಲಸಿಕೆಯನ್ನು ಪಡೆಯಲು ಅರ್ಹರಾಗಿದ್ದು, ಲಸಿಕೆ ಪಡೆಯಲು ಬರುವಾಗ ಪೋಷಕರು ಜೊತೆಯಲ್ಲಿರಬೇಕು ಮತ್ತು ಮಗುವಿನ ಜನನ ಪ್ರಮಾಣ ಪತ್ರವನ್ನು ತರುವುದು ಕಡ್ಡಾಯವಾಗಿದೆ. ಇದುವರೆಗೆ ಲಸಿಕೆ ಪಡೆದ ಮಕ್ಕಳಲ್ಲಿ ಯಾವುದೇ ದುಷ್ಪರಿಣಾಮ ಕಂಡುಬಂದಿಲ್ಲ ಎಂದು ಜಿಲ್ಲಾ ಆರ್.ಸಿ.ಎಚ್ ಅಧಿಕಾರಿ ಡಾ.ಹನುಮಂತಪ್ಪ ಸ್ಪಷ್ಟಪಡಿಸಿದ್ದಾರೆ.

**ಗುರಿ:** ಜಿಲ್ಲೆಯಲ್ಲಿ ಒಟ್ಟು 16,495 ಹೆಣ್ಣು ಮಕ್ಕಳಿಗೆ ಲಸಿಕೆ ನೀಡುವ ಗುರಿ ಹೊಂದಲಾಗಿದ್ದು, ಈವರೆಗೆ 5,658 ಮಕ್ಕಳಿಗೆ ಲಸಿಕೆ ನೀಡಲಾಗಿದೆ.

**ತಾಲ್ಲೂಕುವಾರು ಪ್ರಗತಿ ವಿವರ:** ಬಳ್ಳಾರಿ ತಾಲ್ಲೂಕಿನಲ್ಲಿ 7,578 ಹೆಣ್ಣು ಮಕ್ಕಳ ಗುರಿ ಹೊಂದಲಾಗಿದ್ದು, ಇದುವರೆಗೆ 2,324 ಮಕ್ಕಳಿಗೆ ಲಸಿಕೆ ನೀಡಲಾಗಿದೆ. ಅದರಂತೆ, ಸಂಡೂರು ತಾಲ್ಲೂಕಿನಲ್ಲಿ 2,840 ಮಕ್ಕಳಲ್ಲಿ 881 ಮಕ್ಕಳಿಗೆ ಹಾಕಲಾಗಿದೆ. ಸಿರುಗುಪ್ಪ ತಾಲ್ಲೂಕಿನಲ್ಲಿ 3,054 ಮಕ್ಕಳಲ್ಲಿ 1,453 ಹೆಣ್ಣು ಮಕ್ಕಳಿಗೆ ಲಸಿಕೆ ನೀಡಲಾಗಿದೆ. ಕುರುಗೋಡು ತಾಲ್ಲೂಕು ವ್ಯಾಪ್ತಿಯಲ್ಲಿ 1,543 ಮಕ್ಕಳಲ್ಲಿ 630 ಮಂದಿಗೆ ಲಸಿಕೆ ನೀಡಲಾಗಿದೆ ಹಾಗೂ ಕಂಪ್ಲಿ ತಾಲ್ಲೂಕಿನ 1,480 ಹೆಣ್ಣು ಮಕ್ಕಳಲ್ಲಿ 370 ಮಂದಿಗೆ ಲಸಿಕೆ ನೀಡಲಾಗಿದೆ.

ಸಾಮಾಜಿಕ ಜಾಲತಾಣಗಳಲ್ಲಿ ಲಸಿಕೆಯ ಬಗ್ಗೆ ಹರಡುತ್ತಿರುವ ತಪ್ಪು ಮಾಹಿತಿಯನ್ನು ನಂಬಬೇಡಿ. ಕ್ಯಾನ್ಸರ್ ಮುಕ್ತ ನಾಳೆಗಾಗಿ ಇಂದು ನಿಮ್ಮ ಮಕ್ಕಳಿಗೆ ಲಸಿಕೆಯ ಸುರಕ್ಷಾ ಕವಚವನ್ನು ನೀಡಿ.

ಹೆಚ್ಚಿನ ಮಾಹಿತಿ ಗಾಗಿ ಅಥವಾ ಲಸಿಕೆ ಪಡೆಯಲು ಪೋಷಕರು ತಮ್ಮ ಹತ್ತಿರದ ಸರ್ಕಾರಿ ಆಸ್ಪತ್ರೆ ಅಥವಾ ಆರೋಗ್ಯ ಕೇಂದ್ರಗಳನ್ನು ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ತಿಳಿಸಿದ್ದಾರೆ.

# ಮಹಿಳಾ ಸಂಘಗಳಿಗೆ 6 ಕೋಟಿ ಸಾಲ ವಿತರಣೆ: ಧೀರಕುಮಾರ ಸೋಲಾಕೆ




ರಾಯಚೂರು ನಗರದ ನಿವೃತ್ತ ನೌಕರರ ಸಂಘದ ಸಭಾಭವನದಲ್ಲಿ ಪಂಜಾಬ್ ನ್ಯಾಷನಲ್ ಬ್ಯಾಂಕ್ ಮತ್ತು ಜೀವನ ಮಿತ್ರ ಸಮಾಜ ಸೇವಾ ಸಂಸ್ಥೆಯ ಆಶ್ರಯದಲ್ಲಿ ಆಯೋಜಿಸಿದ್ದ ಕೃಷಿ ಜಾಗೃತಿ ಮತ್ತು ಸಾಲ ವಿತರಣೆ ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ದೆಹಲಿ ಪಂಜಾಬ್ ನ್ಯಾಷನಲ್ ಬ್ಯಾಂಕ್ ಎಜಿಎಂ ಧೀರಕುಮಾರ ಸೋಲಾಕೆ ಅವರಿ ಮಾತನಾಡಿದರು.

**ರಾಯಚೂರು, ಮೇ 11:** ನಗರದ ಪಂಜಾಬ್ ನ್ಯಾಷನಲ್ ಬ್ಯಾಂಕ್ ಮಹಿಳಾ ಸ್ವಸಹಾಯ ಗುಂಪುಗಳಿಗೆ ಹಾಗೂ ರೈತ ಚಟುವಟಿಕೆಗಳಿಗೆ ಸುಮಾರು 7 ಸಾವಿರ ಕೋಟಿ ಸಾಲ ಕೊಡಲು ಯೋಜನೆ ರೂಪಿಸಿದೆ. ಈಗಾಗಲೇ ರಾಯಚೂರು ಜಿಲ್ಲೆಯ ಜೆಎಂಎಸ್‌ಎಸ್‌ಎಸ್ ಮಹಿಳಾ ಸ್ವಸಹಾಯ ಗುಂಪುಗಳಿಗೆ ಸುಮಾರು 6 ಕೋಟಿ ನೀಡಲಾಗಿದೆ ಎಂದು ದೆಹಲಿಯ ಪಂಜಾಬ್ ನ್ಯಾಷನಲ್ ಬ್ಯಾಂಕ್‌ನ ಎಜಿಎಂ ದೀರಕುಮಾರ ಸೋಲಾಕೆ ಹೇಳಿದರು.

ನಗರದ ನಿವೃತ್ತ ನೌಕರರ ಸಂಘದ ಸಭಾಭವನದಲ್ಲಿ ಪಂಜಾಬ್ ನ್ಯಾಷನಲ್ ಬ್ಯಾಂಕ್ ಮತ್ತು ಜೀವನ ಮಿತ್ರ ಸಮಾಜ ಸೇವಾ ಸಂಸ್ಥೆಯ ಆಶ್ರಯದಲ್ಲಿ ಆಯೋಜಿಸಿದ್ದ ಕೃಷಿ ಜಾಗೃತಿ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡಿ, ರಾಯಚೂರು ಜಿಲ್ಲೆಯಲ್ಲಿ ಜೀವನ ಮಿತ್ರ ಸಮಾಜ ಸೇವ ಸಂಸ್ಥೆಯ 25 ಸ್ವಸಹಾಯ ಗುಂಪುಗಳಿಗೆ ಸುಮಾರು 4 ಕೋಟಿ ಸಾಲ ವಿತರಿಸಲಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮ ಉದ್ಘಾಟಿಸಿದ ಪಂಜಾಬ್ ನ್ಯಾಷನಲ್ ಬ್ಯಾಂಕಿನ ಹುಬ್ಬಳ್ಳಿಯ ವೃತ್ತದ ಆರ್‌ಎಂಒ ಸೂರ್ಯಮನಿ ಸಾಹೋ, ದೇಶದ 240 ಕಡೆ ಒಂದೇ ಸಮಯದಲ್ಲಿ ಈ ಕಾರ್ಯಕ್ರಮ ನಡೆಯುತ್ತಿದೆ. ರಾಯಚೂರಿನ ಎಲ್ಲ ಸ್ವಸಹಾಯ ಸಂಘಗಳು ಇದರ ಸದುಪಯೋಗ ಪಡೆಯಬೇಕು ಎಂದು ತಿಳಿಸಿದರು.

ಜೀವನಮಿತ್ರ ಸಮಾಜ ಸೇವಾ ಸಂಸ್ಥೆ ವ್ಯವಸ್ಥಾಪಕ ನಿರ್ದೇಶಕ ಅಶೋಕ ಕೆ. ಮಾತನಾಡಿ, ನಮ್ಮ ಸಂಸ್ಥೆಯು ಮಹಿಳಾ ಸ್ವಸಹಾಯ ಗುಂಪುಗಳಿಗೆ ಮಾಡಿದ ಸಹಾಯದಿಂದ ಮಹಿಳೆಯರು ಸ್ವತಂತ್ರವಾಗಿ ಕುಟುಂಬ ನಿರ್ವಹಣೆ ಮಾಡಲು ಸಾಧ್ಯವಾಗಿದೆ ಎಂದರು.

ಮುಖ್ಯ ಅತಿಥಿಯಾಗಿದ್ದ ನಿವೃತ್ತ ಸಿಡಿಪಿಒ ಸೈಕ್ ಅಸರರ, ನಿವೃತ್ತ ಯೋಧ ರವೀಂದ್ರನಾಥ್ ಸಿಂಗ್, ರಾಯಚೂರಿನ ಪಂಜಾಬ್ ನ್ಯಾಷನಲ್ ಬ್ಯಾಂಕ್‌ನ ವಿಶಾಲ ಹಡಸುಳ್, ಅಂಗನವಾಡಿ ನೌಕರರ ಸಂಘದ ಜಿಲ್ಲಾ ಘಟಕ ಅಧ್ಯಕ್ಷತೆ ಎಚ್.ಪದ್ಮಾ ಉಪಸ್ಥಿತರಿದ್ದರು. ಬಾಲಕೃಷ್ಣ ಸ್ವಾಗತಿಸಿದರು. ಶಂಕರ ವಾಲೆ ನಿರೂಪಿಸಿದರು, ಪಂಜಾಬ್ ನ್ಯಾಷನಲ್ ಬ್ಯಾಂಕ್ ಸಿಂಧನೂರು ವ್ಯವಸ್ಥಾಪಕ ಆನಂದ ವಂದಿಸಿದರು.

# ರೆಡ್‌ಕ್ರಾಸ್ ಮಾನವೀಯ ನಡೆ ಶ್ಲಾಘನೀಯ: ವಿಜಯಕುಮಾರ ಪಾಟೀಲ್ ಪ್ರಶಂಸೆ



ರಾಯಚೂರು ರೆಸ್ ಕ್ರಾಸ್ ಕಾರ್ಯಾಲಯದ ರಕ್ತನಿಧಿ ಕೇಂದ್ರದಲ್ಲಿ ವಿಶ್ವ ರೆಡ್ ಕ್ರಾಸ್ ದಿನಾಚರಣೆ ಆಚರಿಸಲಾಯಿತು.

**ರಾಯಚೂರು, ಮೇ. 11:** ಭಾರತೀಯ ರೆಡ್ ಕ್ರಾಸ್ ಜಿಲ್ಲಾ ಕಾರ್ಯಾಲಯದ ರಕ್ತನಿಧಿ ಕೇಂದ್ರದಲ್ಲಿ ವಿಶ್ವ ರೆಡ್ ಕ್ರಾಸ್ ದಿನ ಆಚರಿಸಲಾಯಿತು. ರೆಡ್ ಕ್ರಾಸ್ ರಾಜ್ಯಸಂಸ್ಥೆಯ ನಿರ್ದೇಶಕ ವಿಜಯಕುಮಾರ ಪಾಟೀಲ ಶಾವಂತಗೇರಾ ರೆಡ್‌ಕ್ರಾಸ್ ಸ್ಥಾಪಕ ಹೆನ್ರಿ ಡೂನಾಂಟ್ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿದರು.

ನಂತರ ಮಾತನಾಡಿದ ಅವರು, ವಿಶ್ವದಲ್ಲಿ ರೆಡ್ ಕ್ರಾಸ್ ಸಂಸ್ಥೆ ಮಾನವೀಯ ನಡೆ ಮೂಲಕ ತುರ್ತು ಸಂದರ್ಭದಲ್ಲಿ ಕಾರ್ಯನಿರ್ವಹಿಸುತ್ತಿದೆ ಮತ್ತು ಆರೋಗ್ಯದ ಅರಿವು ರಕ್ತದಾನದ ಅರಿವು ಪ್ರಥಮ ಚಿಕಿತ್ಸೆ ತರಬೇತಿ ಕಾರ್ಯಕ್ರಮಗಳನ್ನು ಜಿಲ್ಲಾ, ರಾಜ್ಯ ಮತ್ತು ರಾಷ್ಟ್ರಮಟ್ಟದಲ್ಲಿ ಹಮ್ಮಿಕೊಳ್ಳಲಾಗುತ್ತಿದೆ' ಎಂದು ಹೇಳಿದರು.

ಜಿಲ್ಲೆಯಲ್ಲಿ ಬೇಸಿಗೆ ಕಾಲದ ಸಮಯದಲ್ಲಿ ರಕ್ತದ ಕೊರತೆ ಇದ್ದು, ಯುವಕರು ರಕ್ತದಾನವನ್ನು ಮಾಡಬೇಕು ಎಂದು ಮನವಿ ಮಾಡಿದರು.

ಶೇಕ್ ಮೆಹಬೂಬ್ ಮಲಿಯಾಬಾದ್ ಮಾತನಾಡಿ, ಅಪಘಾತಗಳು ಸಂಭವಿಸಿದಾಗ ತುರ್ತು ಸಂದರ್ಭದಲ್ಲಿ ಪ್ರಥಮ ಚಿಕಿತ್ಸೆ ಅವಶ್ಯವಾಗಿದ್ದು, ಈ ನಿಟ್ಟಿನಲ್ಲಿ ಜಿಲ್ಲೆಯಲ್ಲಿ ಇನ್ನು ಹೆಚ್ಚಿನ ರೀತಿಯಲ್ಲಿ ತಮ್ಮ ಪ್ರಥಮಚಿಕಿತ್ಸೆ ತರಬೇತಿಯನ್ನು ಹಮ್ಮಿಕೊಳ್ಳಬೇಕು ಎಂದು ಹೇಳಿದರು.

ಶಿಕ್ಷಣ ವಿಭಾಗದ ಸಂಚಾಲಕ ದಂಡಪ್ಪ ಬಿರಾದಾರ ಮಾತನಾಡಿದರು. ಯುವ ರೆಡ್‌ಕ್ರಾಸ್ ಸಂಚಾಲಕ ವಿದ್ಯಾಸಾಗರ್ ಚಿಣಮಗೇರಿ ಸ್ವಾಗತಿಸಿದರು. ರಾವುತರಾವ್ ಬರೂರ ವಂದಿಸಿದರು.

# ಆರು ಗಣ್ಯರಿಗೆ ಲಿಂಗಾಯತ ರೆಡ್ಡಿ ಸಮಾಜದಿಂದ ಗೌರವ ಸನ್ಮಾನ




**ಬಳ್ಳಾರಿ ಮೇ 11:** ನಗರದ ಬಸವ ಭವನದಲ್ಲಿ ವೀರಶೈವ ಲಿಂಗಾಯತ ರೆಡ್ಡಿ ಸಮಾಜದಿಂದ ಹಮ್ಮಿಕೊಂಡಿದ್ದ ಮಹಾಸಾಧ್ವಿ ಹೇಮರೆಡ್ಡಿ ಮಲ್ಲಮ್ಮ 604 ನೇ ಜಯಂತಿ ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದ ಗಣ್ಯರನ್ನು ಸನ್ಮಾನಿಸಲಾಯ್ತು.

ಶೈಕ್ಷಣಿಕ ಕ್ಷೇತ್ರದ ಸೇವೆಗಾಗಿ ಕಿಷ್ಕಿಂದ ವಿಶ್ವ ವಿದ್ಯಾಲಯದ ಕಲಾಧಿಪತಿ ಡಾ.ಯಶವಂತ ಭೂಪಾಲ್. ಸಾಮಾಜಿಕ ಸೇವೆಗಾಗಿ ಸಂಗನಕಲ್ಲು ಬಸವರಾಜ್. ವೈದ್ಯಕೀಯ ಕ್ಷೇತ್ರದ ಸೇವೆಗಾಗಿ ಬಳ್ಳಾರಿ ಮೆಡಿಕಲ್ ಕಾಲೇಜಿನ ನಿವೃತ್ತ ಪ್ರಾಂಶುಪಾಲ ಡಾ. ಎನ್. ಮಂಜುನಾಥ. ನ್ಯಾಯಾಂಗ ಕ್ಷೇತ್ರದ ಸೇವೆಗಾಗಿ ಮಾಜಿ ಮೇಯರ್ ಪಾರ್ವತಿ ಇಂದುಶೇಖರ್. ಸಾವಯವ ಕೃಷಿಗಾಗಿ ಸಿಂದವಾಳ ಕೇಶವರಡ್ಡಿ ಮತ್ತು ಮಾಧ್ಯಮ ಕ್ಷೇತ್ರದ ಸೇವೆಗಾಗಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಅಧ್ಯಕ್ಷ ನಡವಿ ವೀರಭದ್ರಗೌಡ ಅವರನ್ನು, ಸಮಾಜದ ಅಧ್ಯಕ್ಷ ಡಾ.ಎಸ್. ಜೆ.ವಿ.ಮಹಿಪಾಲ್, ಮುಖಂಡರಾದ ಉಡೇದ ಬಸವರಾಜ್, ಸಂಗನಕಲ್ಲು ಹಿಂಮತ ರಾಜ್, ಜಾನೆಕುಂಟೆ ನೇಪಾಕ್ಷಪ್ಪ ನೆಲ್ಲುಡಿ ಅಯ್ಯಪ್ಪ ಸುರೇಖ ಮಲ್ಲನಗೌಡ, ಡಾ.ರೇಣುಕಾ ಮಂಜುನಾಥ, ಡಾ.ಭಾಗ್ಯಲಕ್ಷ್ಮಿ, ಸುಮಂಗಳಮ್ಮ ಬಸವರಾಜ್, ಸುಮಾರೆಡ್ಡಿ ಮೊದಲಾದವರು ಸನ್ಮಾನಿಸಿ ಗೌರವಿಸಿದರು. ಡಾ.ಬಸವರಾಜ್ ಗದಗಿನ, ಮಿಂಚೇರಿ ನರೇಂದ್ರಬಾಬು, ಸನ್ಮಾನಿತರನ್ನು ಪರಿಚಯಿಸಿದರು.

# ಮಾತಂಗ ಸೇವಾ ಟ್ರಸ್ಟ್ ವತಿಯಿಂದ ಸಾಮೂಹಿಕ ವಿವಾಹ ಕಾರ್ಯಕ್ರಮ



**ಬಳ್ಳಾರಿ, ಮೇ11.** ಮಾತಂಗ ಸೇವಾ ಟ್ರಸ್ಟ್ ನ ವತಿಯಿಂದ ನಡೆದ ಮೊದಲನೆ ವರ್ಷದ ಸಾಮೂಹಿಕ ವಿವಾಹಗಳು ಬಹಳ ಅದ್ದೂರಿಯಾಗಿ 0ನಡೆದವು.

ಈ ಸಾಮೂಹಿಕ ವಿವಾಹ ಕಾರ್ಯಕ್ರಮಕ್ಕೆ ಉದ್ಘಾಟಕರಾಗಿ ಕೆಪಿಸಿಸಿ ಮಾಧ್ಯಮ ವಕ್ತಾರರಾದ ವೆಂಕಟೇಶ್ ಹೆಗಡೆ ರವರು ಆಗಮಿಸಿ ನೂತನ ವಧು–ವರರಿಗೆ ಶುಭ ಹಾರೈಸಿ ನಿಮ್ಮ ಜೀವನ ಸುಖಕರವಾಗಿರಲೆಂದು ಹಾರೈಸಿದರು. ಮಾತಂಗ ಸೇವಾ ಟ್ರಸ್ಟ್‌ನ ಈ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು.

ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಹೆಚ್. ಮಾರೇಶ ವಹಿಸಿಕೊಂಡಿದ್ದರು. ಮುಖ್ಯ ಅತಿಥಿಯಾಗಿ ಯೂತ್ ಕಾಂಗ್ರೆಸ್‌ನ ತಾಲೂಕ್ ಅಧ್ಯಕ್ಷರಾದ ಬಸುರಾಜ್ ಬ್ರೂಸ್ಲಿ ಹಾಜರಿದ್ದು ಮಾತನಾಡಿ ಸಂಡೂರು ತಾಲೂಕಿನಲ್ಲಿ ಎಂದು ಈ ರೀತಿ ಅಚ್ಚುಕಟ್ಟಾಗಿ ಮಾಡಿರುವುದು ನಾನು ನೋಡಿಲ್ಲ ಎಂದರು ಟ್ರಸ್ಟಿನ ಎಲ್ಲಾ ಸದಸ್ಯರಿಗೆ ಅಭಿನಂದನೆಗಳು ಎಂದರು.

ಗೌರವನ್ವಿತ ಅತಿಥಿಗಳಾಗಿ ಪುರಸಭೆಯ ಅಧ್ಯಕ್ಷರಾದ ಸೂರಿನಾರಾಯಣ ಮುಖ್ಯ ಅಧಿಕಾರಿಗಳಿಗೆ ಅರುಣ್ ಕುಮಾರ್ ಎನ್ ಸೋಮಪ್ಪ ಜೆಡಿಎಸ್ ಸ್ಟೇಟ್ ಸೆಕರಿಟರಿ ,ಹೆಚ್.ನಾರಯಣರೆಡ್ಡಿ ಕುರೇಕುಪ್ಪ ಪುರಸಭೆಯ ಬಿಜೆಪಿ ಮಂಡಲ ಅಧ್ಯಕ್ಷರು ಇವರು ಬಂದು ನೂತನ ವಧು ವರರಿಗೆ ಶುಭ ಹಾರೈಸಿದರು ಎನ್ ಸೋಮಪ್ಪ ಮಾತನಾಡಿ ಇಂತಹ ಸಾಮೂಹಿಕ ವಿವಾಹ ಮಾಡಿ ನಮ್ಮ ಕುರಕುಪ್ಪಕ್ಕೆ ಮಾತಂಗ ಸೇವ ಟ್ರಸ್ಟನ ಎಲ್ಲಾ ಸದಸ್ಯರು ಹೆಮ್ಮೆ ತಂದಿದ್ದಾರೆ ಎಂದರು.

ಇವರು ಎಲ್ಲರೂ ಸಾಕಷ್ಟು ಶ್ರಮಪಟ್ಟು ಇಷ್ಟು ಅಚ್ಚುಕಟ್ಟಗಿ ಮಾಡಿರುವ ಉದಾಹರಣೆ ಇಲ್ಲ ಎಂದರು.

ಮುಖ್ಯ ಅಧಿಕಾರಿಗಳಾದ ಅರುಣ್ ಕುಮಾರ್ ಅವರು ಮಾತನಾಡಿ ಪರಿಶಿಷ್ಟರ ಯೋಜನೆ ಅಡಿಯಲ್ಲಿ ಬರುವ ಎಲ್ಲಾ ಯೋಜನೆಗಳು ಸಂಪೂರ್ಣವಾಗಿ ತಮ್ಮ ಕಾಲೋನಿಗೆ ಮಿಸಲಿಡಲಾಗುವುದು ಎಂದರು

ಈ ಸಂದರ್ಭದಲ್ಲಿ ಪುರಸಭೆ ಮಾಜಿ ಅಧ್ಯಕ್ಷ ಕಲ್ಗಡಪ್ಪ, ಸದಸ್ಯ ಕುಮಾರಪ್ಪ, ಊರಿನ ಮುಖಂಡ ಹೆಮ್ಮಿಗಿರಪ್ಪ, ಎಚ್.ಡಿ.ಹೊನ್ನೂರಪ್ಪ ಪುಂಡಿ ಮಲ್ಲಿಕಾರ್ಜುನ, ಓಬರೆಡ್ಡಿ ವೆಂಕ್ಟ ರಾಮರೆಡ್ಡಿ, ಎಸ್ 'ಬಿ ಬಸವರಾಜ್, ಗಿರಪ್ಪ, ದ್ಯಾವಣ, ಡಿ .ಮಂಜುನಾಥ್, ಎನ್ ಮಲ್ಲಿಕಾರ್ಜುನ, ಹುಲಗಪ್ಪ, ಹನುಮಂತಪ್ಪ ಈರಣ್ಣ, ವಿರೇಶ, ಆನಂದ ದೊಡ್ಡಮನಿ, ಸಣ್ಣ ಮಾರೆಪ್ಪ ಮಾಹರುದ್ರಪ್ಪ ಮದುಗಪ್ಪ ಹಾಜರಿದ್ದರು ಈ ಕಾರ್ಯಕ್ರಮವನ್ನು ಟ್ರಸ್ಟಿನ ಕಾರ್ಯದರ್ಶಿ ಎಚ್.ಪಂಪಾಪತಿಯವರು ನೆರವೇರಿಸಿಕೊಟ್ಟರು.

# ಪತ್ರಕರ್ತರ ಸಮ್ಮೇಳನ ಯಶಸ್ವಿ: ಶ್ರಮಿಸಿದ ಸಹಕರಿಸಿದವರಿಗೆ ಪತ್ರಕರ್ತರ ಸಂಘದಿಂದ ಸನ್ಮಾನ



ಬೀದರ ಅತಿಥಿಗೃಹ ಆವರಣದಲ್ಲಿ ಕರ್ನಾಟಕ ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ ಕಳೆದ ತಿಂಗಳು ಆಯೋಜಿಸಿದ್ದ ಎರಡು ದಿನಗಳ ರಾಜ್ಯ ಸಮ್ಮೇಳನ ಯಶಶ್ವಿಯಾಗಿ ನಡೆಸಿದ್ದು, ಸಮ್ಮೇಳನದ ಯಶಸ್ಸಿಗೆ ಶ್ರಮಿಸಿದ ಮತ್ತು ಸಹಕರಿಸಿದ ಮಹನೀಯರಿಗೆ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರು ಸನ್ಮಾನಿಸಿ ಗೌರವಿಸಿದರು.

**ಬೀದರ್, ಮೇ. 11:** ಕಳೆದ ಏ.11 ಹಾಗೂ 12 ರಂದು ಎರಡು ದಿನಗಳ ಕಾಲ ನಡೆದ 40ನೇ ರಾಜ್ಯ ಪತ್ರಕರ್ತರ ಸಮ್ಮೇಳನವನ್ನು ಅಚ್ಚುಕಟ್ಟಾಗಿ ಸಂಘಟಿಸಿ, ಸಮ್ಮೇಳನದ ಯಶಸ್ವಿಗಾಗಿ ಶ್ರಮಿಸಿದ ಮತ್ತು ಸಹಕರಿಸಿದವರನ್ನು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ (ಕೆಯುಡಬ್ಲ್ಯೂಜೆ) ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಸನ್ಮಾನಿಸಿ ಗೌರವಿಸಿದರು.

ಬೀದರ್ ಎಸ್‌ಪಿ ಗೆಸ್ಟ್‌ಹೌಸ್ ಆವರಣದಲ್ಲಿ ನಡೆದ ಸಮಾರಂಭದಲ್ಲಿ ವಸತಿ, ಆಹಾರ, ಸಾರಿಗೆ, ಪ್ರಚಾರ, ಮೆರವಣಿಗೆ, ನೋಂದಣಿ, ಅತಿಥಿ ಸತ್ಕಾರ, ಸಾಂಸ್ಕೃತಿಕ, ಸ್ಮರಣ ಸಂಚಿಕೆ, ಮಹಿಳಾ ಸಮಿತಿಯಿಂದ ಹಿಡಿದು ವಸ್ತು ಪ್ರದರ್ಶನ, ಛಾಯಾಚಿತ್ರ ಪ್ರದರ್ಶನ ಸಮಿತಿ ತನಕ ಎಲ್ಲಾ ಉಪ ಸಮಿತಿಗಳ ಪ್ರಧಾನ ಸಂಚಾಲಕರು, ಸಂಚಾಲಕರು, ಸಹ ಸಂಚಾಲಕರ ಸೇವೆಯನ್ನು ಸ್ಮರಿಸಿ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, 'ಕಡಿಮೆ ಅವಧಿಯಲ್ಲಿ ಸಮ್ಮೇಳನವನ್ನು ವ್ಯವಸ್ಥಿತವಾಗಿ ಸಂಘಟಿಸಿದ ಬೀದರ್ ಜಿಲ್ಲಾ ಘಟಕ, ಬೀದರ್ ಪತ್ರಕರ್ತರು, ಜಿಲ್ಲಾ ಉಸ್ತುವಾರಿ ಸಚಿವರು, ಜಿಲ್ಲಾಡಳಿತ ಮತ್ತು ನಾಗರೀಕರಿಗೆ ಧನ್ಯವಾದ ತಿಳಿಸಿದರು. ಸಮ್ಮೇಳನದ ಮೆರವಣಿಗೆಯಿಂದ ಹಿಡಿದು ಊಟೋಪಚಾರ ತನಕ, ಸಮ್ಮೇಳನದ ಉದ್ಘಾಟನೆಯಿಂದ ಹಿಡಿದು ಹಲವು ವಿಚಾರ ಗೋಷ್ಠಿಗಳು, ಪ್ರಶಸ್ತಿ ಪ್ರದಾನ ಸಮಾರಂಭ ಮತ್ತು ಸಮಾರೋಪ ತನಕ ಎಲ್ಲವೂ ವ್ಯವಸ್ಥಿತವಾಗಿ, ಅರ್ಥಪೂರ್ಣವಾಗಿ ನಡೆದಿವೆ ಎಂದು ತಿಳಿಸಿದರು.

ಸಮ್ಮೇಳನ ಎನ್ನುವುದು ಒಂದು ಮೆರುಗು. ಸಮ್ಮೇಳನದ ಆತಿಥ್ಯ ವಹಿಸಿಕೊಂಡಿದ್ದ ಬೀದರ್ ಘಟಕ ಸಮ್ಮೇಳನದ ದಿಬ್ಬಣವನ್ನು ಅಚ್ಚುಕಟ್ಟಾಗಿ, ಹಬ್ಬದ ರೂಪದಲ್ಲಿ ಸ್ವಾಗತಿಸಿ, ಸತ್ಕರಿಸಿ ಬೀಳ್ಕೊಟ್ಟಿರುವುದಕ್ಕೆ ಕೆಯುಡಬ್ಲ್ಯೂಜೆ ಆಭಾರಿಯಾಗಿದೆ ಎಂದು ಹೇಳಿದರು. ಬೀದರ್ ಜಿಲ್ಲಾ ಘಟಕದ ಅಧ್ಯಕ್ಷ ಆನಂದ ದೇವಪ್ಪ ಮಾತನಾಡಿ, ರಾಜ್ಯ ಸಂಘದ ಅಧ್ಯಕ್ಷರು ನಮ್ಮ ಮೇಲೆ ವಿಶ್ವಾಸವಿಟ್ಟು ಸಮ್ಮೇಳನವನ್ನು ನೀಡಿ, ಸಹಕಾರ ಮಾಡಿದ್ದನ್ನು ಎಂದೂ ಮರೆಯಲು ಸಾಧ್ಯವಿಲ್ಲ. ಹಾಗೆಯೇ ಸಮ್ಮೇಳನಕ್ಕಾಗಿ ದುಡಿದವರಿಗೆ ಹೃದಯಪೂರ್ವಕವಾದ ಧನ್ಯವಾದ ಎಂದು ತಿಳಿಸಿದರು

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ, ಕಲಬುರಗಿ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಬಾಬುರಾವ ಯಡ್ರಾಮಿ, ಕೆಯುಡಬ್ಲ್ಯೂಜೆ ರಾಜ್ಯ ಸಮಿತಿ ಸದಸ್ಯರಾದ ಭವಾನಿಸಿಂಗ್ ಠಾಕೂರ್ ಸೇರಿದಂತೆ ಇತರರು ಹಾಜರಿದ್ದರು.

# ಹೋರಾಟ ಪುನರಾರಂಭಿಸಲು ಇರಾನ್ ಸಿದ್ಧ

## ಆದರೆ ರಾಜತಾಂತ್ರಿಕತೆಯ ಬಾಗಿಲು ತೆರೆದಿದೆ; ಶರಣಾಗತಿ ಇಲ್ಲ ಎಂದು ಪ್ರತಿಜ್ಞೆ

**ಟೆಹ್ರಾನ್, ಮೇ 11:** ಇತ್ತೀಚಿನ ಶಾಂತಿ ಪ್ರಸ್ತಾವನೆ ಕುಸಿದ ನಂತರ ಅಮೆರಿಕ ಮತ್ತು ಇಸ್ರೇಲ್ ಜೊತೆಗಿನ ಉದ್ವಿಗ್ನತೆ ಬಗೆಹರಿಯದೆ ಮತ್ತು ಭಾರಿ ಮಟ್ಟದಲ್ಲಿರುವುದರಿಂದ, ರಾಜತಾಂತ್ರಿಕತೆಗೆ ಬಾಗಿಲು ತೆರೆದಿದ್ದರೂ, ಅಗತ್ಯವಿದ್ದರೆ ಹೋರಾಟವನ್ನು ಪುನರಾರಂಭಿಸಲು ಇರಾನ್ ಇಂದು ಹೇಳಿದೆ.

ಪತ್ರಕರ್ತರೊಂದಿಗೆ ಮಾತನಾಡಿದ ಇರಾನ್ ವಿದೇಶಾಂಗ ಸಚಿವಾಲಯದ ವಕ್ತಾರ ಎಸ್ಮಾಯಿಲ್ ಬಘೈ, ವಾಷಿಂಗ್ಟನ್‌ನ ಯಾವುದೇ ಹೊಸ ಮಿಲಿಟರಿ ಕ್ರಮಕ್ಕೆ ಟೆಹ್ರಾನ್ ದೃಢವಾಗಿ ಪ್ರತಿಕ್ರಿಯಿಸುತ್ತದೆ ಆದರೆ ಇರಾನ್ನ ಹಿತಾಸಕ್ತಿಗಳಿಗೆ ಸೂಕ್ತವಾದಾಗ ಮಾತುಕತೆಗಳನ್ನು ಮುಂದುವರಿಸುತ್ತದೆ ಎಂದು ಹೇಳಿದರು. "ಅಗತ್ಯವಿದ್ದಾಗಲೆಲ್ಲಾ ನಾವು ಹೋರಾಡುತ್ತೇವೆ" ಎಂದು ಬಘೈ ಹೇಳಿದರು. ನಾವು ಸೂಕ್ತವೆಂದು ಭಾವಿಸಿದಾಗಲೆಲ್ಲಾ, ಇರಾನ್ ರಾಷ್ಟ್ರದ ಹಿತಾಸಕ್ತಿಗಳನ್ನು ಭದ್ರಪಡಿಸಿಕೊಳ್ಳಲು ನಾವು ರಾಜತಾಂತ್ರಿಕತೆಯನ್ನು ಸಾಧನವಾಗಿ ಬಳಸುತ್ತೇವೆ." ಪ್ರಸ್ತಾವಿತ ಯುಎಸ್ ಶಾಂತಿ ಚೌಕಟ್ಟಿಗೆ ಇರಾನ್‌ನ ಇತ್ತೀಚಿನ ಪ್ರತಿಕ್ರಿಯೆಯನ್ನು ಅಧ್ಯಕ್ಷ ಡೊನಾಲ್ಡ್ ಟ್ರಂಪ್ ತಿರಸ್ಕರಿಸಿದ ಒಂದು ದಿನದ ನಂತರ ಅವರ ಹೇಳಿಕೆಗಳು ಬಂದವು, ಟೆಹ್ರಾನ್ನ ನಿಲುವನ್ನು "ಸಂಪೂರ್ಣವಾಗಿ ಸ್ವೀಕಾರಾರ್ಹವಲ್ಲ" ಎಂದು ಕರೆದರು. ಟೆಹ್ರಾನ್ನ ಮಾತುಕತೆಗಳ ವಿಧಾನವು



ಗಂಭೀರ ಮತ್ತು ಪ್ರಾಮಾಣಿಕವಾದದ್ದು ಎಂದು ಬಘೈ ಒತ್ತಾಯಿಸಿದರು ಮತ್ತು ರಾಜತಾಂತ್ರಿಕ ಪರಿಹಾರವನ್ನು ಬಯಸುವ ಬಗ್ಗೆ ವಾಗ್ಮಿಯಲ್ಲಿ ವಾಷಿಂಗ್ಟನ್ 'ನಿಷ್ಕಪಟವಾಗಿದೆ' ಎಂದು ಆರೋಪಿಸಿದರು. ರಾಜತಾಂತ್ರಿಕ ಪ್ರಕ್ರಿಯೆಗಳ ಮೂಲಕ ತನ್ನ ರಾಷ್ಟ್ರೀಯ ಹಿತಾಸಕ್ತಿಗಳು ಮತ್ತು ಕಾನೂನುಬದ್ಧ ಹಕ್ಕುಗಳನ್ನು ಉತ್ತಮ ನಂಬಿಕೆಯಿಂದ ಮತ್ತು ಸಮಂಜಸ ರೀತಿಯಲ್ಲಿ ಅನುಸರಿಸುವ ಬಗ್ಗೆ ಇರಾನ್ ಗಂಭೀರವಾಗಿದೆ ಎಂದು ತೋರಿಸಿದೆ" ಎಂದು ಅವರು ಹೇಳಿದರು. ಇನ್ನೊಂದು ಕಡೆಯವರು ತಮ್ಮನ್ನು ತಾವು ಸಾಬೀತುಪಡಿಸಬೇಕು. ಈ ವಿಷಯದಲ್ಲಿ ಅದು ಗಂಭೀರವಾಗಿದೆ ಎಂದು ಅದು ಪ್ರದರ್ಶಿಸಬೇಕು. ಇಲ್ಲಿಯವರೆಗೆ ಅದು ವಿಫಲವಾಗಿದೆ."

ಅಮೆರಿಕದ ಪ್ರಸ್ತಾವನೆಗೆ ಪ್ರತಿಕ್ರಿಯೆಯಾಗಿ ಇರಾನ್ ಪ್ರಮುಖ ರಿಯಾಯಿತಿಗಳನ್ನು ಕೋರಿದೆ ಎಂಬ ಸಲಹೆಗಳನ್ನು ಸಹ ಅವರು ತಿರಸ್ಕರಿಸಿದರು.

"ನಾವು ಬೇಡಿಕೆ ಇಟ್ಟಿರುವುದು ಇರಾನ್‌ನ ಕಾನೂನುಬದ್ಧ ಹಕ್ಕುಗಳು ಮಾತ್ರ" ಎಂದು ಅವರು ಹೇಳಿದರು. ತಿಂಗಳ ಯುದ್ಧ, ನಿರ್ಬಂಧಗಳು, ನೌಕಾ ದಿಗ್ಬಂಧನಗಳು ಮತ್ತು ನವೀಕರಿಸಿದ ಮಿಲಿಟರಿ ಉಲ್ಬಣದ ಪುನರಾವರ್ತಿತ ಬೆದರಿಕೆಗಳ ನಂತರ ಇತ್ತೀಚಿನ ವಿನಿಮಯವು ರಾಜತಾಂತ್ರಿಕತೆಯ ದುರ್ಬಲ ಸ್ಥಿತಿಯನ್ನು ಪ್ರತಿಬಿಂಬಿಸುತ್ತದೆ.

ಇರಾನ್ ಅಧ್ಯಕ್ಷ ಮಸೌದ್ ಪೆಜೆಶ್ಕಿಯನ್ ಭಾನುವಾರ ಇದೇ ರೀತಿಯ ನಿಲುವನ್ನು ಪ್ರತಿಧ್ವನಿಸಿದರು, ಟೆಹ್ರಾನ್ ಒತ್ತಡದಲ್ಲಿ ಶರಣಾಗುವುದಿಲ್ಲ ಎಂದು ಸ್ಪಷ್ಟಪಡಿಸಿದರು.

"ನಾವು ಎಂದಿಗೂ ಶತ್ರುಗಳಿಗೆ ತಲೆಬಾಗುವುದಿಲ್ಲ" ಎಂದು ಪೆಜೆಶ್ಕಿಯನ್ ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿದ ಸಂದೇಶದಲ್ಲಿ ಹೇಳಿದರು.

ಇರಾನ್ ತನ್ನ ರಾಷ್ಟ್ರೀಯ ಹಿತಾಸಕ್ತಿಗಳನ್ನು "ಶಕ್ತಿಯಿಂದ" ರಕ್ಷಿಸಲು ಬದ್ಧವಾಗಿದೆ ಎಂದು ಅವರು ಹೇಳಿದರು.

"ಸಂವಾದ ಅಥವಾ ಮಾತುಕತೆಯ ಚರ್ಚೆ ಉದ್ಭವಿಸಿದರೆ, ಅದು ಶರಣಾಗತಿ ಅಥವಾ ಹಿಮ್ಮೆಟ್ಟುವಿಕೆ ಎಂದರ್ಥವಲ್ಲ" ಎಂದು ಅವರು ಹೇಳಿದರು. ಇರಾನ್ ಹಕ್ಕುಗಳನ್ನು ಎತ್ತಿಹಿಡಿಯುವುದು ಮತ್ತು ದೃಢನಿಶ್ಚಯದಿಂದ ರಾಷ್ಟ್ರೀಯ ಹಿತಾಸಕ್ತಿಗಳನ್ನು ರಕ್ಷಿಸುವುದು ಗುರಿಯಾಗಿದೆ ಎಂದಿದ್ದಾರೆ."

# ಇರಾನ್ ಎಚ್ಚರಿಕೆ ನಡುವೆಯೂ ಹಾರ್ಮುಜ್ ಜಲಸಂಧಿಯ ಭದ್ರತೆ ಕುರಿತು ಬ್ರಿಟನ್, ಫ್ರಾನ್ಸ್ ರಕ್ಷಣಾ ಸಚಿವರ ಸಭೆ

**ಲಂಡನ್, ಮೇ 11:** ಹಾರ್ಮುಜ್ ಜಲಸಂಧಿಯ ಮೂಲಕ ವ್ಯಾಪಾರದ ಹರಿವನ್ನು ಪುನಃಸ್ಥಾಪಿಸುವ ಮತ್ತು ರಕ್ಷಿಸುವ ಗುರಿಯನ್ನು ಹೊಂದಿರುವ ಮಿಲಿಟರಿ ಯೋಜನೆ ಕುರಿತು ಚರ್ಚಿಸಲು ಬ್ರಿಟನ್ ಮತ್ತು ಫ್ರಾನ್ಸ್ ಮಂಗಳವಾರ 40 ಕ್ಕೂ ಹೆಚ್ಚು ರಾಷ್ಟ್ರಗಳ ರಕ್ಷಣಾ ಮಂತ್ರಿಗಳನ್ನು ಆತಿಥ್ಯ ವಹಿಸಲು ಸಜ್ಜಾಗಿರುವುದರಿಂದ, ಆಯಕಟ್ಟಿನ ಪ್ರಮುಖ ಜಲಮಾರ್ಗದಲ್ಲಿ ಯುದ್ಧನೌಕೆಗಳನ್ನು ನಿಯೋಜಿಸುವುದರ ವಿರುದ್ಧ ಇರಾನ್ ದೇಶಗಳಿಗೆ ಎಚ್ಚರಿಕೆ ನೀಡಿದೆ.

ಯುಕೆ ರಕ್ಷಣಾ ಸಚಿವಾಲಯದ ಹೇಳಿಕೆಯ ಪ್ರಕಾರ, ರಕ್ಷಣಾ ಕಾರ್ಯದರ್ಶಿ ಜಾನ್ ಹೀಲಿ ಫ್ರೆಂಚ್ ರಕ್ಷಣಾ ಸಚಿವೆ ಕ್ಯಾಥರೀನ್ ವೌಟ್ರಿನ್ ಅವರೊಂದಿಗೆ ಸಭೆಯ ಸಹ-ಅಧ್ಯಕ್ಷತೆ ವಹಿಸಲಿದ್ದಾರೆ, ಇದು ಪ್ರಸ್ತಾವಿತ ಬಹುರಾಷ್ಟ್ರೀಯ ಕಡಲ ಕಾರ್ಯಾಚರಣೆಯ ಮೊದಲ ರಕ್ಷಣಾ ಮಂತ್ರಿಗಳ ಅಧಿವೇಶನವನ್ನು ಗುರುತಿಸುತ್ತದೆ. ಇರಾನ್ನ ಉಪ ವಿದೇಶಾಂಗ ಸಚಿವ ಕಜೆಮ್ ಘರಿಬಬಾದಿ ಅವರು ಬ್ರಿಟನ್ ಮತ್ತು ಫ್ರಾನ್ಸ್‌ಗೆ ಈ ಉಪಕ್ರಮದ ಮೇಲೆ ರಾಜತಾಂತ್ರಿಕ ಉದ್ವಿಗ್ನತೆಯನ್ನು ಹೆಚ್ಚಿಸುವ ಸಾಮರ್ಥ್ಯವನ್ನು ಹೊಂದಿರುವ ಯುದ್ಧನೌಕೆಗಳನ್ನು ನಿಯೋಜಿಸುವುದರ ವಿರುದ್ಧ ಎಚ್ಚರಿಕೆ ನೀಡಿದ್ದಾರೆ.

ಕಳೆದ ವಾರ, ಬ್ರಿಟನ್ ಮಧ್ಯಪ್ರಾಚ್ಯಕ್ಕೆ "ಕಟ್ಟುನಿಟ್ಟಾಗಿ ರಕ್ಷಣಾತ್ಮಕ" ಕಾರ್ಯಾಚರಣೆಯಡಿಯಲ್ಲಿ ಊಂಖ ಡ್ರ್ಯಾಗನ್ ಅನ್ನು ನಿಯೋಜಿಸುವುದಾಗಿ ಘೋಷಿಸಿತು, ಇದು ಗಣಿ ತೆರವು ಕಾರ್ಯಾಚರಣೆಗಳನ್ನು ಬೆಂಬಲಿಸುವ ಮತ್ತು ಈ ಪ್ರದೇಶದಲ್ಲಿ ವಾಣಿಜ್ಯ ಸಾಗಣೆಯನ್ನು ರಕ್ಷಿಸುವ ಗುರಿಯನ್ನು ಹೊಂದಿದೆ.



ಏತನ್ಮಧ್ಯೆ, ಹಾರ್ಮುಜ್ ಜಲಸಂಧಿಗೆ ಸಂಬಂಧಿಸಿದ ವಿಶಾಲವಾದ ಕಡಲ ಭದ್ರತಾ ಕಾರ್ಯಾಚರಣೆಯ ಸಿದ್ಧತೆಗಳ ಭಾಗವಾಗಿ ಕೆಂಪು ಸಮುದ್ರಕ್ಕೆ ತನ್ನ ವಾಹಕ ಮುಷ್ಕರ ಗುಂಪನ್ನು ನಿಯೋಜಿಸಿರುವುದಾಗಿ ಫ್ರಾನ್ಸ್ ದೃಢಪಡಿಸಿದೆ ಎಂದು ಅದರ ಸಶಸ್ತ್ರ ಪಡೆಗಳ ಸಚಿವಾಲಯ ತಿಳಿಸಿದೆ.

ಜಲಮಾರ್ಗದ ಮೂಲಕ ವಾಣಿಜ್ಯ ಹಡಗುಗಳಿಗೆ ಸುರಕ್ಷಿತ ಮಾರ್ಗವನ್ನು ಖಚಿತಪಡಿಸಿಕೊಳ್ಳಲು ಅಂತರರಾಷ್ಟ್ರೀಯ ಒಕ್ಕೂಟವನ್ನು ಜೋಡಿಸಲು ಎರಡೂ ದೇಶಗಳು ಪ್ರಯತ್ನಗಳನ್ನು ಮುನ್ನಡೆಸುತ್ತಿವೆ ಮತ್ತು ಕಾರ್ಯಾಚರಣೆಯಲ್ಲಿ ವ್ಯಾಪಕ ಜಾಗತಿಕ ಭಾಗವಹಿಸುವಿಕೆಯನ್ನು ಪ್ರೋತ್ಸಾಹಿಸುತ್ತಿವೆ. ಹಾರ್ಮುಜ್ ಜಲಸಂಧಿಯಲ್ಲಿ ಭದ್ರತೆ ಮತ್ತು ಸಂಚರಣೆ ಸ್ವಾತಂತ್ರ್ಯವನ್ನು ಪರಿಹರಿಸಲು ಫ್ರಾನ್ಸ್ ಮತ್ತು ಯುನೈಟೆಡ್ ಕಿಂಗ್ಡಮ್ ಏಪ್ರಿಲ್‌ನಲ್ಲಿ ಅಂತರರಾಷ್ಟ್ರೀಯ ಶೃಂಗಸಭೆಯನ್ನು ಜಂಟಿಯಾಗಿ ಕರೆದವು, 51 ದೇಶಗಳನ್ನು ಒಟ್ಟುಗೂಡಿಸಿದವು. ನೌಕಾಯಾನ ಸ್ವಾತಂತ್ರ್ಯವನ್ನು ರಕ್ಷಿಸಲು, ಅಂತರರಾಷ್ಟ್ರೀಯ ಕಾನೂನನ್ನು ಎತ್ತಿಹಿಡಿಯಲು ಮತ್ತು ನಡೆಯುತ್ತಿರುವ ಪ್ರಾದೇಶಿಕ ಉದ್ವಿಗ್ನತೆಗಳ ನಡುವೆ ಜಾಗತಿಕ ಆರ್ಥಿಕ ಮತ್ತು ಇಂಧನ ಸ್ಥಿರತೆಯನ್ನು ಖಚಿತಪಡಿಸಿಕೊಳ್ಳಲು ಅಂತರರಾಷ್ಟ್ರೀಯ ಸಮುದಾಯದ ಬದ್ಧತೆಯನ್ನು ನಾಯಕರು ಪುನರುಚ್ಚರಿಸಿದರು. ಹಾರ್ಮುಜ್ ಜಲಸಂಧಿಯನ್ನು "ಬೇಷರತ್ತಾದ, ಅನಿಯಂತ್ರಿತ ಮತ್ತು ತಕ್ಷಣದ ಪುನರಾರಂಭ" ಕ್ಕೆ ಜಂಟಿ ಹೇಳಿಕೆ ಕರೆ ನೀಡಿತು, ಇದು ಅಂತರರಾಷ್ಟ್ರೀಯ ವ್ಯಾಪಾರಕ್ಕೆ ಮೂಲಭೂತವಾದ ಮುಕ್ತ ಸಾರಿಗೆ ಮಾರ್ಗವನ್ನು ವಿವರಿಸುತ್ತದೆ.

# ಇಂಧನ ಆಘಾತ ಇನ್ನಷ್ಟು ಹದಗೆಡುತ್ತವೆ: ಅರಾಮ್ಕೊ ಸಿಇಒ ಎಚ್ಚರಿಕೆ

**ರಿಯಾದ್, ಮೇ 11:** ಸೌದಿ ಅರೇಬಿಯಾದ ಸರ್ಕಾರಿ ಸ್ವಾಮ್ಯದ ಇಂಧನ ದೈತ್ಯ ಸೌದಿ ಅರಾಮ್ಕೊದ ಸಿಇಒ ಅಮೀನ್ ಅಲ್-ನಾಸರ್ ಇಂದು ಕಠಿಣ ಎಚ್ಚರಿಕೆ ನೀಡಿದ್ದು, ಇರಾನ್ ಜೊತೆಗಿನ ಅಮೆರಿಕ-ಇಸ್ರೇಲ್ ಯುದ್ಧದಿಂದಾಗಿ ಹಾರ್ಮುಜ್ ಜಲಸಂಧಿಯ ಮೂಲಕ ಸಾಗಣೆಯಲ್ಲಿ ನಡೆಯುತ್ತಿರುವ ಅಡಚಣೆಗಳು ಜಾಗತಿಕ ಇಂಧನ ಮಾರುಕಟ್ಟೆಗಳನ್ನು ಹೊಡೆಯಲು ಕೆಲವು ದೊಡ್ಡ ಮತ್ತು ಕೆಟ್ಟ ಆಘಾತಗಳನ್ನು ಉಂಟುಮಾಡಿವೆ ಮತ್ತು ಇಂಧನ ವಲಯದ ಮೇಲಿನ ಈ ಹೊಡೆತವು ಇನ್ನಷ್ಟು ಹದಗೆಡುವ ಸಾಧ್ಯತೆಯಿದೆ ಎಂದು ಎಚ್ಚರಿಸಿದ್ದಾರೆ.

"ಪ್ರಸ್ತುತ ಇಂಧನ ಪೂರೈಕೆ ಆಘಾತವು ಜಗತ್ತು ಇದುವರೆಗೆ ಕಂಡ ಅತಿದೊಡ್ಡದಾಗಿದೆ" ಎಂದು ಅಲ್-ನಾಸರ್ ಸೌದಿ ಅರೇಬಿಯಾದ



ಸರ್ಕಾರಿ ಸ್ವಾಮ್ಯದ ಅಲ್-ಅರೇಬಿಯಾ ನೆಟ್ವರ್ಕ್‌ಗೆ ತಿಳಿಸಿದರು.

ಯುದ್ಧದಿಂದಾಗಿ ಮಾರುಕಟ್ಟೆಗಳು ಈಗಾಗಲೇ "ಸುಮಾರು ಒಂದು ಶತಕೋಟಿ ಬ್ಯಾರೆಲ್ಗಳ ಅಭೂತಪೂರ್ವ ಪೂರೈಕೆ ನಷ್ಟ" ದಿಂದ ಬಳಲುತ್ತಿವೆ ಎಂದು ಅರಾಮ್ಕೊ ಸಿಇಒ ಹೇಳಿದರು, "ಪ್ರಸ್ತುತ ಅಡಚಣೆಗಳು ಇದೇ ದರದಲ್ಲಿ ಮುಂದುವರಿದರೆ, ಹಾರ್ಮುಜ್ ಜಲಸಂಧಿ ಮುಚ್ಚಲ್ಪಟ್ಟಿರುವ ಪ್ರತಿ ವಾರ ಮಾರುಕಟ್ಟೆಯು ಸುಮಾರು 100 ಮಿಲಿಯನ್ ಬ್ಯಾರೆಲ್ಗಳನ್ನು ಕಳೆದುಕೊಳ್ಳುತ್ತದೆ" ಎಂದು ಗಮನಿಸಿದರು.

ಅದು ಸಂಭವಿಸಿದಲ್ಲಿ, ಜಾಗತಿಕ ಇಂಧನ ಮಾರುಕಟ್ಟೆಗಳು ಯುದ್ಧಪೂರ್ವ ಮಟ್ಟಕ್ಕೆ ಮರಳಲು 2027 ರವರೆಗೆ ತೆಗೆದುಕೊಳ್ಳಬಹುದು ಎಂದು ಅಲ್-ನಾಸರ್ ಹೇಳಿದರು, ಜಲಸಂಧಿ ನಾಳೆ ಮತ್ತೆ ತೆರೆಯಲಾಗಿದ್ದರೂ ಸಹ, ಜಾಗತಿಕ ಇಂಧನ ಮಾರುಕಟ್ಟೆಗಳು ಸ್ಥಿರಗೊಳ್ಳಲು ಬಹಳ ಸಮಯ ತೆಗೆದುಕೊಳ್ಳುತ್ತದೆ ಮತ್ತು ಯುದ್ಧಪೂರ್ವ ಮಟ್ಟಕ್ಕೆ ಮರಳಲು ಇನ್ನೂ ಹೆಚ್ಚು ಸಮಯ ತೆಗೆದುಕೊಳ್ಳುತ್ತದೆ ಎಂದು ಇಂಧನ ವಿಶ್ಲೇಷಕರು ನೀಡಿದ ಹಿಂದಿನ ಎಚ್ಚರಿಕೆಗಳನ್ನು ಪುನರುಚ್ಚರಿಸಿದರು.

ಈಗ, ಪ್ರಮುಖ ಇಂಧನ ಕಾರಿಡಾರ್‌ನಲ್ಲಿ

■ ಬೆಲೆಗಳು ಯುದ್ಧಪೂರ್ವ ಮಟ್ಟಕ್ಕೆ ಮರಳಲು 2027 ರವರೆಗೆ ತೆಗೆದುಕೊಳ್ಳಬಹುದು

ಪ್ರಸ್ತುತ ಸಾಗಣೆಯ ಗ್ರಿಡ್ಲಾಕ್ ವಿಶ್ವ ಪೂರೈಕೆಗಳನ್ನು ಶೇಕಡಾ 20 ರಷ್ಟು ಅಡ್ಡಿಪಡಿಸಿದೆ, ಬ್ರೆಂಟ್ ಕಚ್ಚಾ ತೈಲವು 100 ಡಾಲರ್‌ಗಿಂತ ಹೆಚ್ಚಾಗಿದೆ; ಯೆಮನ್‌ನಲ್ಲಿರುವ ತನ್ನ ಹೌತಿ ಪ್ರಾಕ್ಸಿಗಳ ಮೂಲಕ ಬಾಬ್-ಎಲ್-ಮಂಡೇಬ್ ಜಲಸಂಧಿಯನ್ನು ನಿರ್ಬಂಧಿಸುವುದಾಗಿ ಇರಾನ್ ಬೆದರಿಕೆ ಹಾಕುತ್ತಿರುವುದು ಪರಿಸ್ಥಿತಿಯನ್ನು ಇನ್ನಷ್ಟು ಹದಗೆಡಿಸುತ್ತಿದೆ. ಇದು ಅಡ್ಡಿಗಳನ್ನು ಶೇಕಡಾ 30 ಕ್ಕೆ ಏರಿಸುವ ಸಾಧ್ಯತೆಯಿದೆ ಮತ್ತು ಈಗಾಗಲೇ ಸ್ಥಗಿತಗೊಂಡಿರುವ ಇಂಧನ ವ್ಯಾಪಾರವನ್ನು ಇನ್ನಷ್ಟು ಹದಗೆಡಿಸಿದೆ.

# 9 ವರ್ಷಗಳ ಬಳಿಕ ಚೀನಾಗೆ ಅಮೆರಿಕ ಅಧ್ಯಕ್ಷರ ಭೇಟಿ

**ಬೀಜಿಂಗ್, ಮೇ 11:** ಚೀನಾ ಅಧ್ಯಕ್ಷ ಕ್ಸಿ ಜಿನ್ಪಿಂಗ್ ಅವರ ಆಹ್ವಾನದ ಮೇರೆಗೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮೇ 13 ರಿಂದ 15 ರವರೆಗೆ ಚೀನಾಕ್ಕೆ ಅಧಿಕೃತ ಭೇಟಿ ನೀಡಲಿದ್ದಾರೆ ಎಂದು ಚೀನಾದ ವಿದೇಶಾಂಗ ಸಚಿವಾಲಯ ಸೋಮವಾರ ಪ್ರಕಟಿಸಿದೆ. ಕಳೆದ ಒಂಬತ್ತು ವರ್ಷಗಳಲ್ಲಿ ಅಮೆರಿಕ ಅಧ್ಯಕ್ಷರೊಬ್ಬರು ಚೀನಾಕ್ಕೆ ನೀಡುತ್ತಿರುವ ಮೊದಲ ಭೇಟಿ ಇದಾಗಿದೆ.



ಭೇಟಿಯು ಅತ್ಯಂತ ನಿರ್ಣಾಯಕ ಸಮಯದಲ್ಲಿ ನಡೆಯುತ್ತಿದೆ. ಪ್ರಸ್ತುತ ಅಮೆರಿಕ-ಇಸ್ರೇಲ್-ಇರಾನ್ ನಡುವೆ ಸುದೀರ್ಘ ಯುದ್ಧ ನಡೆಯುತ್ತಿದ್ದು, ಹಾರ್ಮುಜ್ ಜಲಸಂಧಿಯ ದಿಗ್ಬಂಧನದಿಂದಾಗಿ ಜಾಗತಿಕ ಇಂಧನ ಬಿಕ್ಕಟ್ಟು ಎದುರಾಗಿದೆ. ಇದರೊಂದಿಗೆ ತೈವಾನ್ ವಿಚಾರವಾಗಿ ಅಮೆರಿಕ ಮತ್ತು ಚೀನಾ ನಡುವೆ ಉದ್ವಿಗ್ನತೆ ಹೆಚ್ಚಿರುವ ಹಿನ್ನೆಲೆಯಲ್ಲಿ ಈ ಭೇಟಿ ಮಹತ್ವ ಪಡೆದಿದೆ. ಬುಧವಾರದಂದು ಟ್ರಂಪ್ ಬೀಜಿಂಗ್ ತಲುಪಲಿದ್ದಾರೆ. ಗುರುವಾರ ಅಧ್ಯಕ್ಷ ಕ್ಸಿ ಜಿನ್ಪಿಂಗ್ ಅವರೊಂದಿಗೆ ದ್ವಿಪಕ್ಷೀಯ ಸಭೆ, ಸ್ವಾಗತ ಸಮಾರಂಭ ಮತ್ತು ಟೆಂಪಲ್ ಆಫ್ ಹೆವನ್ ಭೇಟಿ ಇರಲಿದೆ. ನಂತರ ಸರ್ಕಾರಿ ಔತಣಕೂಟ ನಡೆಯಲಿದೆ. ಶುಕ್ರವಾರ ಉಭಯ ನಾಯಕರು ಕಾರ್ಯನಿರತ ಮಧ್ಯಾಹ್ನದ ಭೋಜನಾ ಮತ್ತು ಚಹಾಕೂಟದಲ್ಲಿ ಮತ್ತೊಮ್ಮೆ ಮಾತುಕತೆ ನಡೆಸಲಿದ್ದಾರೆ. ಟ್ರಂಪ್ ಭೇಟಿಗೂ ಮುನ್ನ, ಮೇ 12 ಮತ್ತು 13 ರಂದು ದಕ್ಷಿಣ ಕೊರಿಯಾದಲ್ಲಿ ಚೀನಾದ ಉಪ-ಪ್ರೀಮಿಯರ್ ಹೆ ಲಿಫೆಂಗ್ ಮತ್ತು ಅಮೆರಿಕದ ಖಜಾನೆ ಕಾರ್ಯದರ್ಶಿ ಸ್ಕಾಟ್ ಬೆಸೆಂಟ್ ನಡುವೆ ಅಂತಿಮ ಹಂತದ ವ್ಯಾಪಾರ ಮಾತುಕತೆ ನಡೆಯಲಿದೆ. ಅಮೆರಿಕ ವಿಧಿಸಿರುವ ಸುಂಕಗಳ ಕುರಿತು ಈ ಭೇಟಿಯಲ್ಲಿ ಒಂದು ಪ್ರಮುಖ ವ್ಯಾಪಾರ ಒಪ್ಪಂದವಾಗುವ ನಿರೀಕ್ಷೆಯಿದೆ

# ಭಾರತೀಯ ಕುಸ್ತಿ ಒಕ್ಕೂಟವು ಉದ್ದೇಶಪೂರ್ವಕವಾಗಿ ಸ್ಪರ್ಧೆಯಿಂದ ಹೊರಗಿಟ್ಟಿದೆ: ವಿನೇಶ್ ಫೋಗಟ್ ಆರೋಪ

**ಗೊಂಡಾ, ಮೇ 11 :** ಅಂತರರಾಷ್ಟ್ರೀಯ ಕುಸ್ತಿಪಟು ವಿನೇಶ್ ಫೋಗಟ್ ಅವರು ಭಾರತೀಯ ಕುಸ್ತಿ ಒಕ್ಕೂಟವು ಉದ್ದೇಶಪೂರ್ವಕವಾಗಿ ತನ್ನನ್ನು ಸ್ಪರ್ಧೆಯಿಂದ ಹೊರಗಿಟ್ಟಿದೆ ಎಂದು ಆರೋಪಿಸಿದ್ದಾರೆ. ಸೋಮವಾರ ನಂದಿನಿನಗರಕ್ಕೆ ಓಪನ್ ರ್‍ಯಾಂಕಿಂಗ್ ಟೂರ್ನಮೆಂಟ್‌ಗಾಗಿ ಬಂದ ನಂತರ, ಮಾಜಿ ಅಧ್ಯಕ್ಷ ಮತ್ತು ಮಾಜಿ ಸಂಸದ ಬ್ರಿಜ್‌ಭೂಷಣ್ ಶರಣ್ ಸಿಂಗ್ ಅವರ ಆದೇಶದ ಮೇರೆಗೆ ತನ್ನನ್ನು ಉದ್ದೇಶಪೂರ್ವಕವಾಗಿ ಸ್ಪರ್ಧೆಯಿಂದ ಹೊರಗಿಡುವ ಪ್ರಯತ್ನ ನಡೆಯುತ್ತಿದೆ ಎಂದು ಫೋಗಟ್ ವರದಿಗಾರರಿಗೆ ತಿಳಿಸಿದರು. ನಿವೃತ್ತಿಯಿಂದ ಮರಳಲು ಎಲ್ಲಾ ಅವಶ್ಯಕತೆಗಳನ್ನು ತಾನು ಪೂರೈಸಿದ್ದೇನೆ ಮತ್ತು ಘಈಖ ನ ಸೂಚನೆಗೆ ಸಹ ಪ್ರತಿಕ್ರಿಯಿಸಿದ್ದೇನೆ ಎಂದು ವಿನೇಶ್ ಹೇಳಿಕೊಂಡಿದ್ದಾರೆ. ಕುಸ್ತಿಪಟು



ತಾನು ಸಂಪೂರ್ಣವಾಗಿ ಸಿದ್ಧರಾಗಿ ಮತ್ತು ಎಲ್ಲಾ ನಿಯಮಗಳನ್ನು ಅನುಸರಿಸಿ ಪಂದ್ಯಾವಳಿಗೆ ಬಂದಿದ್ದೇನೆ ಎಂದು ಹೇಳಿದರು. ಘಈಖ ತನಗೆ "ಶೋಕಾಸ್" ನೋಟಿಸ್ ನೀಡಿತ್ತು, ಅದಕ್ಕೆ ತಾನು ಪ್ರತಿಕ್ರಿಯಿಸಿದ್ದೇನೆ ಎಂದು ಅವರು ಹೇಳಿದರು. ನಿವೃತ್ತಿಯಿಂದ ಮರಳಲು ಎಲ್ಲಾ ಔಪಚಾರಿಕತೆಗಳನ್ನು ಪೂರ್ಣಗೊಳಿಸಿದ್ದೇನೆ ಎಂದು ವಿನೇಶ್ ಹೇಳಿಕೊಂಡಿದ್ದಾರೆ. ಸ್ಪರ್ಧೆ ಪ್ರಾರಂಭವಾಗುವ ಕೇವಲ ಎರಡು ದಿನಗಳ ಮೊದಲು ಶುಕ್ರವಾರ ತನಗೆ ನೋಟಿಸ್ ನೀಡಲಾಗಿದೆ. ಡಿಸೆಂಬರ್ 2024 ರಲ್ಲಿ ಸ್ಪರ್ಧಿಸುವ ಇಚ್ಛೆ ವ್ಯಕ್ತಪಡಿಸಿದ್ದರೂ ಆರು ತಿಂಗಳ ಹಿಂದೆಯೇ ನೋಟಿಸ್ ಏಕೆ ಕಳುಹಿಸಲಾಗಿಲ್ಲ ಎಂದು ಅವರು ಪ್ರಶ್ನಿಸಿದರು. ಅವರ ಪ್ರಕಾರ, ಅವರು ತಮ್ಮ ವಾಪಸಾತಿಗೆ ಸಂಬಂಧಿಸಿದ ಎಲ್ಲಾ ಔಪಚಾರಿಕತೆಗಳನ್ನು ಪೂರ್ಣಗೊಳಿಸಿದ್ದಾರೆ. ಆದ್ದರಿಂದ, ಜೂನ್ 26, 2026 ರವರೆಗೆ ಅವರನ್ನು ಅನರ್ಹಗೊಳಿಸುವ ನಿರ್ಧಾರ ತಪ್ಪು ಎಂದು ಅವರು ಹೇಳಿದರು. ಫೋಗಟ್ ಡೋಪಿಂಗ್ ಪರೀಕ್ಷೆಯಲ್ಲಿ ಉತ್ತೀರ್ಣರಾದ ನಂತರ ಸಂಪೂರ್ಣವಾಗಿ ಕ್ಲೀನ್ ಆಗಿ ಸ್ಪರ್ಧೆಗೆ ಮರಳಿದ್ದಾರೆ ಎಂದು ಹೇಳಿದ್ದಾರೆ. ಏತನ್ಮಧ್ಯೆ, ಕುಸ್ತಿ ಒಕ್ಕೂಟದ ಅಧ್ಯಕ್ಷ ಸಂಜಯ್ ಸಿಂಗ್ ವಿನೇಶ್ ಅವರ ಆರೋಪಗಳನ್ನು ವಿರೋಧಿಸಿದರು, ನೋಂದಣಿ ನಂತರದ ತನಿಖಾ ಪ್ರಕ್ರಿಯೆಯಲ್ಲಿ ಅವರಿಗೆ ನೋಟಿಸ್ ನೀಡಲಾಗಿದೆ ಎಂದು ಹೇಳಿದರು. ನಿಯಮಗಳ ಪ್ರಕಾರ, ಪ್ರತಿಕ್ರಿಯೆ ಬರುವವರೆಗೆ ಮತ್ತು ಪ್ರಕ್ರಿಯೆ ಪೂರ್ಣಗೊಳ್ಳುವವರೆಗೆ ಅವರು ಪಂದ್ಯಾವಳಿಯಲ್ಲಿ ಭಾಗವಹಿಸಲು ಸಾಧ್ಯವಿಲ್ಲ. "ಅವರು ಆಡಲು ಅನುಮತಿ ಪಡೆಯಲು ನಂದಿನಿನಗರಕ್ಕೆ ಬಂದರು, ಆದರೆ ಘಈಖ ನಿಯಮಗಳನ್ನು ಉಲ್ಲಂಘಿಸುವ ಮೂಲಕ ಯಾರಿಗೂ ಅನುಮತಿ ನೀಡಲು ಸಾಧ್ಯವಿಲ್ಲ" ಎಂದು ಸಿಂಗ್ ಹೇಳಿದರು. ಕುಸ್ತಿ ಈಗ ಸರಿಯಾಗಿ ಕಾರ್ಯನಿರ್ವಹಿಸುತ್ತಿದೆ ಮತ್ತು ದೇಶಾದ್ಯಂತದ ಕುಸ್ತಿಪಟುಗಳು ಭಾಗವಹಿಸಲು ಸಂತೋಷಪಡುತ್ತಾರೆ ಎಂದು ಅವರು ಹೇಳಿದರು. ಅಂತಿಮವಾಗಿ, ವಿನೇಶ್ ಸ್ವಾಗತಾರ್ಹ, ಆದರೆ ಪ್ರಸ್ತುತ ಪಂದ್ಯಾವಳಿಯಲ್ಲಿ ಸ್ಪರ್ಧಿಸಲು ಅವರಿಗೆ ಅವಕಾಶ ನೀಡಲಾಗುವುದಿಲ್ಲ ಎಂದು ಅವರು ಸ್ಪಷ್ಟಪಡಿಸಿದರು.

# ಲ್ಯಾಂಡಿಂಗ್ ವೇಳೆ ಟರ್ಕಿ ಏರ್‌ಲೈನ್ಸ್ ವಿಮಾನಕ್ಕೆ ಬೆಂಕಿ

**ಕಠ್ಮಂಡು,ಮೇ 11:** ಇಲ್ಲಿನ ವಿಮಾನ ನಿಲ್ದಾಣದಲ್ಲಿ ಲ್ಯಾಂಡ್ ಆಗುತ್ತಿದ್ದ ಟರ್ಕಿ ಏರ್‌ಲೈನ್ಸ್ ವಿಮಾನದಲ್ಲಿ ಬೆಂಕಿ ಕಾಣಿಸಿಕೊಂಡಿದ್ದು, ಕೂದಲೆಳೆ ಅಂತರದಲ್ಲಿ ಭಾರೀ ದುರಂತವೊಂದು ತಪ್ಪಿದೆ.

ಸೋಮವಾರ ಮುಂಜಾನೆ ಇಸ್ತಾನ್ಬುಲ್‌ನಿಂದ ಕಠ್ಮಂಡುವಿನ ತ್ರಿಭುವನ್ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಬಂದಿಳಿಯುತ್ತಿದ್ದ ಟರ್ಕಿ ಏರ್‌ಲೈನ್ಸ್ ವಿಮಾನದಲ್ಲಿ ಬೆಂಕಿ ಕಾಣಿಸಿಕೊಂಡಿದೆ.

ವಿಮಾನದಲ್ಲಿ 11 ಜನ ಸಿಬ್ಬಂದಿ ಹಾಗೂ 278 ಪ್ರಯಾಣಿಕರಿದ್ದರು. ಭೂಸ್ಪರ್ಶದ ವೇಳೆ ಏಕಾಏಕಿ ಬೆಂಕಿ ಕಾಣಿಸಿಕೊಂಡಿದ್ದು, ಕೂಡಲೇ ನಿಯಂತ್ರಣಕ್ಕೆ ತರಲಾಗಿದೆ. ಘಟನೆಯಲ್ಲಿ ಯಾವುದೇ ಪ್ರಾಣಹಾನಿ ಸಂಭವಿಸಿಲ್ಲ. ಪ್ರಯಾಣಿಕರು ಹಾಗೂ ಸಿಬ್ಬಂದಿ ಸೇರಿದಂತೆ ಎಲ್ಲರೂ ಸುರಕ್ಷಿತವಾಗಿದ್ದಾರೆ ಎಂದು ತಿಳಿದುಬಂದಿದೆ. ವಿಮಾನದ ಲ್ಯಾಂಡ್ ಆಗುವಾಗ ಬಲಭಾಗದ ಟೈರ್‌ಗಳಲ್ಲಿ ಬೆಂಕಿ ಕಾಣಿಸಿಕೊಂಡಿದ್ದು, ಕೂಡಲೇ ಪ್ರಯಾಣಿಕರನ್ನು ಕೆಳಗಿಳಿಸಿದ್ದಾರೆ. ಅಷ್ಟರಲ್ಲೇ ಸ್ಥಳಕ್ಕೆ ಅಗ್ನಿಶಾಮಕ ದಳ ಆಗಮಿಸಿ, ಬೆಂಕಿ ನಂದಿಸುವಲ್ಲಿ ಯಶಸ್ವಿಯಾಗಿದೆ. ಘಟನೆಯ ಬಗ್ಗೆ ಟರ್ಕಿಶ್ ವಿಮಾನಯಾನ ಸಂಸ್ಥೆ ಹಾಗೂ ವಿಮಾನ ನಿಲ್ದಾಣ ಯಾವುದೇ ಅಧಿಕೃತ ಹೇಳಿಕೆ ಬಿಡುಗಡೆ ಮಾಡಿಲ್ಲ.

ಇದಕ್ಕೂ ಮುನ್ನ 2015ರಲ್ಲಿ, ಇದೇ ವಿಮಾನಯಾನ ಕಂಪನಿಯ ವಿಮಾನವು ಲ್ಯಾಂಡಿಂಗ್ ವೇಳೆ ನಿಯಂತ್ರಣ ಕಳೆದುಕೊಂಡು, ಉರುಳಿ ಬಿದ್ದಿತ್ತು. ಅದಾದ ಬಳಿಕ ವಿಮಾನ ನಿಲ್ದಾಣವು ನಾಲ್ಕು ದಿನಗಳವರೆಗೆ ಬಂದ್ ಆಗಿತ್ತು.

# ಮೇ 15ರಿಂದ 17ರವರೆಗೆ ರಾಜ್ಯಮಟ್ಟದ ಜನತಾ ಪ್ರೀಮಿಯರ್ ಲೀಗ್ ಕ್ರಿಕೆಟ್

**ಬೆಂಗಳೂರು, ಮೇ 11:** ಜೆಡಿಎಸ್ ಪಕ್ಷದ ಬೆಳ್ಳಿಹಬ್ಬ ಹಾಗೂ ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರವರ ಹುಟ್ಟುಹಬ್ಬದ ಅಂಗವಾಗಿ ಹಮ್ಮಿಕೊಂಡಿರುವ ರಾಜ್ಯಮಟ್ಟದ ಜನತಾ ಪ್ರೀಮಿಯರ್ ಲೀಗ್ ಪಂದ್ಯಾವಳಿಯ ಟ್ರೋಫಿ ಹಾಗೂ ವಿವಿಧ ತಂಡಗಳ ಲೋಗೋವನ್ನು ಬಿಡುಗಡೆ ಮಾಡಲಾಯಿತು.

ಜೆಡಿಎಸ್ ಕೇಂದ್ರ ಕಚೇರಿ ಜೆಪಿ ಭವನದಲ್ಲಿ ನಡೆದ ಕಾರ್ಯಕ್ರಮದಲ್ಲಿ ಪಕ್ಷದ ಕೋರ್ ಕಮಿಟಿ ಅಧ್ಯಕ್ಷ ಎಂ.ಕೃಷ್ಣಾರೆಡ್ಡಿ, ವಿಧಾನಪರಿಷತ್ ಸದಸ್ಯ ಟಿ.ಎ.ಶರವಣ, ವಿಧಾನಪರಿಷತ್ ಮಾಜಿ ಸದಸ್ಯರಾದ ತಿಪ್ಪೇಸ್ವಾಮಿ, ರಮೇಶ್‌ಗೌಡ ಹಾಗೂ ಸಾಮಾಜಿಕ ಜಾಲತಾಣ ವಿಭಾಗದ ರಾಜ್ಯಾಧ್ಯಕ್ಷ ಚಂದನ್ ಎಚ್.ಎಸ್. ಮೊದಲಾದವರು ಟ್ರೋಫಿ ಮತ್ತು ಲೋಗೊವನ್ನು ಬಿಡುಗಡೆ ಮಾಡಿದರು.

ನಂತರ ಮಾತನಾಡಿದ ಎಂ.ಕೃಷ್ಣಾರೆಡ್ಡಿ, ಮೇ 15ರಿಂದ 17ರವರೆಗೆ ಮಾದಾವರ ಬಳಿಯ ನೈಸ್ ಗ್ರೌಂಡ್‌ನಲ್ಲಿ ರಾಜ್ಯಮಟ್ಟದ ಜೆಪಿಎಲ್ ಕ್ರಿಕೆಟ್ ಪಂದ್ಯಾವಳಿಯನ್ನು ಆಯೋಜಿಸಲಾಗಿದ್ದು, ಬೆಳಿಗ್ಗೆ 8ರಿಂದ ರಾತ್ರಿ 10 ಗಂಟೆವರೆಗೆ ಪಂದ್ಯಾವಳಿ ನಡೆಯುತ್ತವೆ. ಬೆಂಗಳೂರು ಸೇರಿದಂತೆ 20 ಜಿಲ್ಲೆಗಳಿಂದ 24 ತಂಡಗಳು ಭಾಗವಹಿಸಲಿವೆ. ಮೇ 15ರಂದು ಸಂಜೆ 5 ಗಂಟೆಗೆ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಹಾಗೂ ಜೆಡಿಎಸ್ ಯುವಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಪಂದ್ಯಾವಳಿಗೆ ಚಾಲನೆ ನೀಡಲಿದ್ದಾರೆ. ಮೇ 15ರಂದು ಎಚ್.ಡಿ.ದೇವೇಗೌಡರು ಕೆಲಕಾಲ ಕ್ರಿಕೆಟ್ ಪಂದ್ಯಾವಳಿಯ ವೀಕ್ಷಣೆ ಮಾಡಲಿದ್ದಾರೆ. ಪಂದ್ಯಾವಳಿಯಲ್ಲಿ ಭಾಗವಹಿಸುವ ಎಲ್ಲಾ ಕ್ರೀಡಾಪಟುಗಳಿಗೆ ವಸತಿ, ಊಟ, ತಂಪು ಪಾನೀಯ ನೀಡಲಿದ್ದು, ಈಗಾಗಲೇ ಮೈದಾನದಲ್ಲಿ ಸಿದ್ಧತೆಗಳು ಶುರುವಾಗಿವೆ ಎಂದರು.

■ ಜೆಡಿಎಸ್ ಬೆಳ್ಳಿಹಬ್ಬ, ದೇವೇಗೌಡರ ಜನ್ಮದಿನದ ಅಂಗವಾಗಿ ರಾಜ್ಯಮಟ್ಟದ ಪಂದ್ಯಾವಳಿ

ಶರವಣ ಮಾತನಾಡಿ, ಜೆಡಿಎಸ್ ಬೆಳ್ಳಿಹಬ್ಬವಾಗಿರುವುದರಿಂದ ಇನ್ನೊಂದು ತಂಡ ಸೇರಿಸಿ 25 ತಂಡಗಳ ಪಂದ್ಯಾವಳಿ ಆಯೋಜಿಸಬೇಕು. ಈ ಪಂದ್ಯಾವಳಿ ವಿಜೇತ ತಂಡಕ್ಕೆ 5 ಲಕ್ಷ ರೂ. ಬಹುಮಾನ ನೀಡಲಾಗುವುದು. ಎಲ್ಲಾ ಆಟಗಾರರಿಗೆ ಸ್ಮರಣಿಕೆ ನೀಡಲಾಗುವುದು. ಕ್ರೀಡೆಗೆ ಉತ್ತೇಜನ ನೀಡಲು ಈ ಪಂದ್ಯಾವಳಿ ಆಯೋಜಿಸಲಾಗಿದೆ. ದೇವೇಗೌಡರ ಹುಟ್ಟುಹಬ್ಬದ ದಿನವಾದ ಮೇ 18ರಂದು ಒಂದು ರೂಪಾಯಿಗೆ ಅಪ್ಪಾಜಿ ಕ್ಯಾಂಟೀನ್‌ಲ್ಲಿ ಮುದ್ದೆ ಊಟ ನೀಡುವುದಾಗಿ ಪ್ರಕಟಿಸಿದರು.

ರಮೇಶ್‌ಗೌಡ ಮಾತನಾಡಿ, 2 ತಿಂಗಳಿನಿಂದ ಈ ಪಂದ್ಯಾವಳಿಗೆ ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ. ಯುವಕರಿಗೆ ಉತ್ತೇಜನ ನೀಡಲು ಪಂದ್ಯಾವಳಿ ಹಮಿಕೊಳ್ಳಲಾಗುತ್ತಿದೆ ಎಂದರು. ತಿಪ್ಪೇಸ್ವಾಮಿಯವರು ಮಾತನಾಡಿ, ಈ ಪಂದ್ಯಾವಳಿಗೆ ತುಮಕೂರಿನ ಜೇನಿ ಸಂಸ್ಥೆ ಸಹಕಾರ ನೀಡಿದ್ದು, ಮ್ಯಾನ್ ಆಫ್ ದ ಮ್ಯಾಚ್ ಪಡೆಯುವ ಆಟಗಾರರಿಗೆ ಜೇನಿ ಸಂಸ್ಥೆಯಿಂದ ಕಿಟ್ ನೀಡಲಾಗುವುದು. ಮಾಜಿ ಸಚಿವ ಎಚ್.ಡಿ.ರೇವಣ್ಣ ಅವರು ಕ್ರೀಡಾಪಟುಗಳಿಗೆ ಹಾಲು, ಮಜ್ಜಿಗೆ ನೀಡುವ ಭರವಸೆ ನೀಡಿದ್ದಾರೆ ಎಂದರು.ಚಂದನ್ ಮಾತನಾಡಿ, ಪಂದ್ಯಾವಳಿಯ 2, 3 ಮತ್ತು 4ನೇ ಬಹುಮಾನವನ್ನು ಶಾಸಕ ಸಮೃದ್ಧಿ ಮಂಜುನಾಥ್ ಪಕ್ಷದ ವತಿಯಿಂದ ನೀಡಲಿದ್ದಾರೆ. ಪಕ್ಷದ ಎಲ್ಲಾ ಶಾಸಕರು, ಜಿಲ್ಲಾಧ್ಯಕ್ಷರು ಪಂದ್ಯಾವಳಿಯಲ್ಲಿ ಭಾಗವಹಿಸಿ ಉತ್ತೇಜನ ನೀಡಲಿದ್ದಾರೆ. 5 ಸಾವಿರ ವೀಕ್ಷಕರು ಕೂರಲು ಅನುಕೂಲವಾಗುವಂತೆ ವ್ಯವಸ್ಥೆ ಮಾಡಲಾಗಿದೆ ಎಂದು ಮಾಹಿತಿ ನೀಡಿದರು.

# ಪ್ರಧಾನಿಮೋದಿಗೆ ಅಭಿನಂದನಾ ಸಮಾರಂಭ

## ಹೆಚ್. ರವೀಂದ್ರ ಮತ್ತು ಬಿಜೆಪಿ ಯುವ ನಾಯಕ ಅರುಣ್ ಸೋಮಣ್ಣ ನೇತೃತ್ವದಲ್ಲಿ ಸಾವಿರಾರು ಕಾರ್ಯಕರ್ತರು ಭಾಗಿ

**ಬೆಂಗಳೂರು:** ಇತ್ತೀಚೆಗೆ ಪಶ್ಚಿಮ ಬಂಗಾಳ, ಅಸ್ಸಾಂ ಹಾಗೂ ಪುದುಚೇರಿ ರಾಜ್ಯಗಳ ವಿಧಾನಸಭಾ ಚುನಾವಣೆಯಲ್ಲಿ ಭಾರತೀಯ ಜನತಾ ಪಕ್ಷ (ಬಿಜೆಪಿ) ಸಾಧಿಸಿದ ಗಮನಾರ್ಹ ಗೆಲುವಿನ ಹಿನ್ನೆಲೆ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಅಭಿನಂದನೆ ಸಲ್ಲಿಸಲು ಕರ್ನಾಟಕ ಬಿಜೆಪಿ ವತಿಯಿಂದ ಬೆಂಗಳೂರಿನ ಎಚ್‌ಎಎಲ್ ಏರ್ಪೋರ್ಟ್‌ನಲ್ಲಿ ಭವ್ಯ ಸಮಾರಂಭ ಆಯೋಜಿಸಲಾಯಿತು. ನಗರದಲ್ಲಿ ನಡೆದ ಈ ಕಾರ್ಯಕ್ರಮವು ಪಕ್ಷದ ಕಾರ್ಯಕರ್ತರಲ್ಲಿ ಉತ್ಸಾಹ ಮತ್ತು ಸಂಭ್ರಮವನ್ನು ಎಬ್ಬಿಸಿದ ಪ್ರಮುಖ ರಾಜಕೀಯ ಘಟನೆಗೆ ಪರಿಣಮಿಸಿತು.

ಸಮಾರಂಭದಲ್ಲಿ ಸಾವಿರಾರು ಬಿಜೆಪಿ ಕಾರ್ಯಕರ್ತರು ಪಾಲ್ಗೊಂಡು ಪಕ್ಷದ ಗೆಲುವನ್ನು ಹರ್ಷೋದ್ಗಾರಗಳೊಂದಿಗೆ ಆಚರಿಸಿದರು. ವಿಶೇಷವಾಗಿ ವಿಜಯನಗರ ವಿಧಾನ ಸಭಾ ಕ್ಷೇತ್ರದ ಬಿಜೆಪಿ ನಾಯಕ ಹೆಚ್. ರವೀಂದ್ರ ಹಾಗೂ ಗೋವಿಂದರಾಜನಗರ ವಿಧಾನಸಭಾ ಕ್ಷೇತ್ರದ ಯುವ ಬಿಜೆಪಿ ನಾಯಕ ಅರುಣ್ ಸೋಮಣ್ಣ ಅವರ ನೇತೃತ್ವದಲ್ಲಿ ಸಾವಿರ ಕಾರ್ಯಕರ್ತರು ಕಾರು, ಬೈಕ್ ಹಾಗೂ ಬಸ್‌ಗಳ ಮೂಲಕ ಸಂಘಟಿತವಾಗಿ ಆಗಮಿಸಿದರು. ಈ ಭಾರಿ ಸಮೂಹ ಕಾರ್ಯಕ್ರಮದ ವೈಭವವನ್ನು ಮತ್ತಷ್ಟು ಹೆಚ್ಚಿಸಿತು.

ಕಾರ್ಯಕ್ರಮದ ವೇಳೆ ಕಾರ್ಯಕರ್ತರು ಬಿಜೆಪಿ ಪರ ಘೋಷಣೆಗಳನ್ನು ಕೂಗಿ, ಪ್ರಧಾನಿ ನರೇಂದ್ರ ಮೋದಿ ಅವರ ನಾಯಕತ್ವವನ್ನು ಶ್ಲಾಘಿಸಿದರು. ದೇಶದ ವಿವಿಧ ಭಾಗಗಳಲ್ಲಿ ಬಿಜೆಪಿ ಬಲಿಷ್ಠವಾಗಿ ಬೆಳೆಯುತ್ತಿರುವುದಕ್ಕೆ ಈ ಚುನಾವಣಾ ಗೆಲುವು ಮತ್ತೊಂದು ಸಾಕ್ಷಿಯಾಗಿದೆ ಎಂದು ಅವರು ಅಭಿಪ್ರಾಯಪಟ್ಟರು. ಕಾರ್ಯಕ್ರಮ ಸ್ಥಳದಲ್ಲಿ ಕೇಸರಿ ಧ್ವಜಗಳು ಹಾರಾಡುತ್ತಿದ್ದು, ಪಕ್ಷದ ಚಿಹ್ನೆಗಳೊಂದಿಗೆ ಕಾರ್ಯಕರ್ತರು ಸಂಭ್ರಮಿಸಿದರು.

ವಿಜಯನಗರ ಕ್ಷೇತ್ರದ ಬಿಜೆಪಿ ನಾಯಕ



ಹೆಚ್. ರವೀಂದ್ರ ಅವರು ಹಲವು ವರ್ಷಗಳಿಂದ ಪಕ್ಷದ ಸಂಘಟನಾ ಕಾರ್ಯಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿದ್ದಾರೆ. ಸ್ಥಳೀಯ ಮಟ್ಟದಲ್ಲಿ ಕಾರ್ಯಕರ್ತರನ್ನು ಸಂಘಟಿಸುವಲ್ಲಿ ಹಾಗೂ ಪಕ್ಷದ ತತ್ವಗಳನ್ನು ಜನರಿಗೆ ತಲುಪಿಸುವಲ್ಲಿ ಅವರು ಪ್ರಮುಖ ಪಾತ್ರ ವಹಿಸಿದ್ದಾರೆ. ಚುನಾವಣಾ ಸಂದರ್ಭಗಳಲ್ಲಿ ಕಾರ್ಯಕರ್ತರನ್ನು ಒಗ್ಗೂಡಿಸುವಲ್ಲಿ ಅವರ ಸಂಘಟನೆ ಶಕ್ತಿ ಗಮನಾರ್ಹವಾಗಿದೆ.





ಇದೇ ವೇಳೆ ಗೋವಿಂದರಾಜನಗರ ಕ್ಷೇತ್ರದ ಯುವ ಬಿಜೆಪಿ ಮುಖಂಡ ಅರುಣ್ ಸೋಮಣ್ಣ ಅವರು ಯುವಕರಲ್ಲಿ ಪಕ್ಷದ ಚಿಂತನೆಗಳನ್ನು ಹರಡುವಲ್ಲಿ ಚುರುಕಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಸಾಮಾಜಿಕ ಕಾರ್ಯಗಳು, ಯುವಜನತೆಯೊಂದಿಗೆ ನಿಕಟ ಸಂಪರ್ಕ ಮತ್ತು ಕ್ಷೇತ್ರ ಮಟ್ಟದ ಚಟುವಟಿಕೆಗಳ ಮೂಲಕ ಅವರು ಪಕ್ಷದ ನೆಲೆಯನ್ನು ಬಲಪಡಿಸುವಲ್ಲಿ ತೊಡಗಿಸಿಕೊಂಡಿದ್ದಾರೆ. ಯುವ ನಾಯಕನಾಗಿ ಹೊರಹೊಮ್ಮುತ್ತಿರುವ ಅವರು ಕಾರ್ಯಕರ್ತರಲ್ಲಿ ಹೊಸ ಉತ್ಸಾಹ ತುಂಬುವಲ್ಲಿ ಯಶಸ್ವಿಯಾಗಿದ್ದಾರೆ.

ಈ ಇಬ್ಬರು ನಾಯಕರ ನೇತೃತ್ವದಲ್ಲಿ ನಡೆದ ಕಾರ್ಯಕರ್ತರ ಭಾರೀ ಭಾಗವಹಿಸುವಿಕೆ ಕಾರ್ಯಕ್ರಮದ ಪ್ರಮುಖ ವಿಶೇಷತೆಯಾಗಿ ಪರಿಣಮಿಸಿತು. ಕಾರ್ಯಕರ್ತರನ್ನು ಸಮನ್ವಯಗೊಳಿಸುವುದು, ವಾಹನ ವ್ಯವಸ್ಥೆ, ಸ್ಥಳ ನಿರ್ವಹಣೆ ಸೇರಿದಂತೆ ಎಲ್ಲಾ ಹಂತಗಳಲ್ಲೂ ಅವರ ತಂಡಗಳು ಸಮರ್ಥವಾಗಿ ಕೆಲಸ ನಿರ್ವಹಿಸಿದ್ದವು.

ಇದೇ ಸಂದರ್ಭದಲ್ಲಿ ಬಿಜೆಪಿ ಮಂಡಲ ಅಧ್ಯಕ್ಷ ವಿ. ರಾಮಾಂಜಿನಿ ಹಾಗೂ ಮಂಡಲ ಪದಾಧಿಕಾರಿಗಳು ,ವಿಜಯನಗರ, ಗೋವಿಂದರಾಜ ನಗರ ವಿಧಾನಸಭಾ ಕ್ಷೇತ್ರದ ಮಾಜಿ ಪಾಲಿಕೆ ಸದಸ್ಯರುಗಳು ಹಾಗೂ ವಾರ್ಡ್ ಅಧ್ಯಕ್ಷರುಗಳು ಕ್ಷೇತ್ರದ ಎಲ್ಲ ಮೋರ್ಚಾ ಅಧ್ಯಕ್ಷರು ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಸೇರಿದಂತೆ ಈ ಸಮಾರಂಭದಲ್ಲಿ ಭಾಗವಹಿಸಿ ಕಾರ್ಯಕ್ರಮದ ಯಶಸ್ಸಿಗೆ ಕೈಜೋಡಿಸಿದರು.

**ರಾಜಕೀಯ ಮಹತ್ವ**

ಈ ಅಭಿನಂದನಾ ಸಮಾರಂಭವು ಕೇವಲ ಗೆಲುವಿನ ಸಂಭ್ರಮಕ್ಕೆ ಸೀಮಿತವಾಗದೇ, ಮುಂದಿನ ದಿನಗಳಲ್ಲಿ ರಾಜ್ಯದಲ್ಲಿ ಬಿಜೆಪಿ ಸಂಘಟನೆಗೆ ಮತ್ತಷ್ಟು ಬಲ ತುಂಬುವ ಪ್ರಯತ್ನವಾಗಿಯೂ ಕಾಣಿಸಿಕೊಂಡಿತು. ದೊಡ್ಡ ಪ್ರಮಾಣದಲ್ಲಿ ಕಾರ್ಯಕರ್ತರು ಭಾಗವಹಿಸಿರುವುದು ಪಕ್ಷದ ನೆಲೆಯ ಬಲವನ್ನು ತೋರಿಸುತ್ತದೆ ಎಂದು ರಾಜಕೀಯ ವಲಯದಲ್ಲಿ ವಿಶ್ಲೇಷಣೆ ವ್ಯಕ್ತವಾಗಿದೆ.

ಒಟ್ಟಾರೆ, ಪ್ರಧಾನಿ ನರೇಂದ್ರ ಮೋದಿ ಅವರ ನಾಯಕತ್ವದಲ್ಲಿ ಬಿಜೆಪಿ ಸಾಧಿಸಿರುವ ಚುನಾವಣಾ ಯಶಸ್ಸನ್ನು ಸಂಭ್ರಮಿಸಿದ ಈ ಸಮಾರಂಭವು ಕಾರ್ಯಕರ್ತರಲ್ಲಿ ಹೊಸ ಚೈತನ್ಯ ಮೂಡಿಸಿದ್ದು, ರಾಜ್ಯ ರಾಜಕೀಯದಲ್ಲೂ ಗಮನ ಸೆಳೆಯಿತು.